ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 23 ಮಂಗಳವಾರ 2022

ಸಂಪುಟ: 43 | ಸಂಚಿಕೆ: 128 | ಪುಟಗಳು: 10

ದೂರವಾಣಿ: 2496520, 2496521, 2496526, 2496527, 2496528, ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

₹4

ಜಿಲ್ಲಾ, ತಾಲೂಕು ಆಸ್ಪತ್ರೆಗಳಲ್ಲಿ ತಿಂಗಳೊಳಗೆ
ಡಿಜಿಟಲ್ ನೋಂದಣಿ, ಪಾವತಿ ವ್ಯವಸ್ಥೆ




● ವೈದ್ಯಕೀಯ ಶಿಕ್ಷಣ ಸಚಿವ ಡಾ.ಸುಧಾಕರ್ ಘೋಷಣೆ ● ಇನ್ನು ಮುಂದೆ ಆಸ್ಪತ್ರೆಯಲ್ಲಿ ಕಾಯಬೇಕಿಲ್ಲ; ಆನ್‌ಲೈನ್‌ನಲ್ಲಿ ವೈದ್ಯರ ಭೇಟಿ ಸಮಯ ನಿಗದಿ

ಬೆಂಗಳೂರು, ಆ.22(ಕೆಎಂಶಿ)–ಎಲ್ಲಾ ಜಿಲ್ಲಾಸ್ಪತ್ರೆಗಳಲ್ಲಿ ಒಂದು ತಿಂಗಳೊಳಗೆ ಡಿಜಿಟಲ್ ಹೆಸರು ನೋಂದಣಿ ಹಾಗೂ ಡಿಜಿಟಲ್ ಪಾವತಿ ವ್ಯವಸ್ಥೆ ಜಾರಿಗೆ ತರಲಾಗುವುದು ಎಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ತಾಲೂಕು ಆಸ್ಪತ್ರೆಗಳಿಗೂ ಇದೇ ವ್ಯವಸ್ಥೆ ವಿಸ್ತರಿಸಿ ಜಾರಿ ಮಾಡಲಾಗುವುದು. ಜಯನಗರ ಸಾರ್ವಜನಿಕ ಆಸ್ಪತ್ರೆಯಲ್ಲಿ ಜನದಟ್ಟಣೆ ಕಡಿಮೆ ಮಾಡಲು, ವೈದ್ಯರ ಭೇಟಿಗೆ ಆನ್‌ಲೈನ್‌ನಲ್ಲಿ ಅಥವಾ ಮೊಬೈಲ್ ಸಂದೇಶದ ಮೂಲಕ ಸಮಯ ನಿಗದಿ ಮಾಡಿಕೊಳ್ಳುವ ವ್ಯವಸ್ಥೆ ತರಲು ಸೂಚಿಸಲಾಗಿದೆ. ಹಾಗೆಯೇ ರಾಜ್ಯದ ಎಲ್ಲಾ ಜಿಲ್ಲಾಸ್ಪತ್ರೆಗಳಲ್ಲಿ ಜನರು ಬರುವ ಮುನ್ನವೇ ಆನ್‌ಲೈನ್‌ನಲ್ಲಿ ಹೆಸರು ನೋಂದಾಯಿಸಿಕೊಳ್ಳುವ ಹಾಗೂ ಡಿಜಿಟಲ್ ಪಾವತಿ ಮಾಡುವ ವ್ಯವಸ್ಥೆ ತರಲಾಗುವುದು. ಆಸ್ಪತ್ರೆಯಲ್ಲಿ ಜನರ ಉದ್ದದ ಸಾಲು ಕಡಿಮೆ ಮಾಡಲು ಈ ಕ್ರಮ ವಹಿಸಲಾಗುತ್ತಿದೆ ಎಂದರು.





ವೈದ್ಯರ ಆಪಾಯಿಂಟ್‌ಮೆಂಟ್ ಸಮಯ, ಯಾವ ವೈದ್ಯರು ಎಂಬಿತ್ಯಾದಿ ಮಾಹಿತಿಗಳನ್ನು ಮೊಬೈಲ್‌ಗೆ ಸಂದೇಶ ಕಳುಹಿಸುವ ವ್ಯವಸ್ಥೆ ತರಲಾಗುತ್ತಿದೆ. ಆಸ್ಪತ್ರೆಗೆ ಯಾರೂ ಬಂದು ಕಾಯುವ ಅಗತ್ಯವಿಲ್ಲ.

ಜಯನಗರ ಸರ್ಕಾರಿ ಆಸ್ಪತ್ರೆ ಎನ್‌ಕ್ಯೂಎಸ್ ಗುಣಮಟ್ಟವನ್ನು ಹೊಂದುವಂತೆ ಕ್ರಮ ವಹಿಸಬೇಕು ಎಂದು ವೈದ್ಯಾಧಿಕಾರಿಗಳಿಗೆ ಸೂಚಿಸಲಾಗಿದೆ. ಈ ಮೂಲಕ ಸರ್ಕಾರಿ ಸೇವೆಯ ಗುಣಮಟ್ಟವನ್ನು ಹೆಚ್ಚಿಸಬೇಕಿದೆ. ಈಗ ಪರಿಶೀಲನೆ ನಡೆಸಿದ ಬಳಿಕವೂ ಮತ್ತೊಮ್ಮೆ ಬಂದು ಪರಿಶೀಲನೆ ನಡೆಸಿ ಗುರಿ ತಲುಪಲಾಗಿದೆಯೇ ಎಂದು ಗಮನಿಸಲಾಗುವುದು ಎಂದರು.

51 ಹಾಸಿಗೆಗಳ ಐಸಿಯು ಇಲ್ಲಿದೆ. ಕೋವಿಡ್ ಬಳಿಕ ಇಲ್ಲಿ ಹಾಸಿಗೆಗಳ ಸಂಖ್ಯೆ ಹೆಚ್ಚಿಸಲಾಗಿದೆ. ಇದಕ್ಕೆ ಪೂರಕವಾಗಿ ಅಗತ್ಯ ಸಿಬ್ಬಂದಿಯನ್ನು ನೀಡಲಾಗುವುದು. ಕಾಯಂ ಸಿಬ್ಬಂದಿ ನೇಮಕಕ್ಕಾಗಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗುವುದು. ನಾಲ್ಕು ಆರ್ಥೋಪೆಡಿಕ್ ತಜ್ಞರು ಈ ಆಸ್ಪತ್ರೆಯಲ್ಲಿದ್ದರೂ 40 ಪ್ರೊಸೀಜರ್ ಮಾತ್ರ ನಡೆಯುತ್ತಿದೆ. ಈ ಸಂಖ್ಯೆಯನ್ನು 100 ಕ್ಕೆ ಹೆಚ್ಚಿಸಿಕೊಳ್ಳಬೇಕು. ಹಾಗೆಯೇ ಸಭೆ ನಡೆಸಿ ವಿವಿಧ ವಿಭಾಗಗಳ ನಡುವೆ ಸಮನ್ವಯತೆ ತರಬೇಕು ಎಂದು ಸೂಚಿಸಲಾಗಿದೆ ಎಂದು ಹೇಳಿದರು.

ಜಯನಗರ ಆಸ್ಪತ್ರೆಯಲ್ಲಿ ಚಿಕಿತ್ಸೆಯ ಬಗ್ಗೆ ರೋಗಿಗಳನ್ನು ಮಾತನಾಡಿಸಿದ್ದು, ಒಬ್ಬರು ಕೂಡ ಗುಣಮಟ್ಟದಲ್ಲಿ ಲೋಪ ಆಗಿದೆ ಎಂದು ಹೇಳಿಲ್ಲ. ಐದು ವರ್ಷದಿಂದ ಡಯಾಲಿಸಿಸ್ ಮಾಡಿಸಿಕೊಳ್ಳುತ್ತಿರುವ ರೋಗಿಯೊಬ್ಬರು, ಯಾವುದೇ ಹಣ ನೀಡದೆ ಚಿಕಿತ್ಸೆ ಪಡೆಯುತ್ತಿದ್ದೇನೆ ಹಾಗೂ ಆರೋಗ್ಯವಾಗಿದ್ದೇನೆ ಎಂದು ತಿಳಿಸಿದ್ದಾರೆ. ಆಸ್ಪತ್ರೆಯಲ್ಲಿ ಚಾವಣಿ ಸೇರಿದಂತೆ ಕೆಲವೆಡೆ ದುರಸ್ತಿ ಕಾರ್ಯಗಳು ನಡೆಯಬೇಕಿದೆ. ಸುಮಾರು 5 ಕೋಟಿ ರೂ.ನಷ್ಟು ಅನುದಾನ ಬೇಕಿದ್ದು, ಅದನ್ನು ನೀಡಲಾಗುವುದು ಎಂದರು. ರೋಗಿಗಳಿಗೆ ಚಿಕಿತ್ಸೆ ವಿಚಾರದಲ್ಲಿ ಸಮಾಧಾನ ಇದೆ ಎಂದು ತಿಳಿದು ಬಂದಿದೆ. ಪ್ರಸೂತಿ ವಿಭಾಗದಲ್ಲಿ ಕೆಲ ದೂರುಗಳಿದ್ದು, ಅದಕ್ಕಾಗಿ ಸ್ಪಷ್ಟ ಸೂಚನೆ ▶ 8ನೇ ಪುಟಕ್ಕೆ

ಸಿದ್ದರಾಮಯ್ಯ ಕಾರಿನ ಮೇಲೆ ಮೊಟ್ಟೆ ಎಸೆದ ಪ್ರಕರಣ

ಉನ್ನತ ಮಟ್ಟದ ತನಿಖೆ ಆರಂಭ



ಮಡಿಕೇರಿ: ಕೊಡಗಿನಲ್ಲಿ ಇತ್ತೀಚೆಗೆ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರ ಕಾರಿನ ಮೇಲೆ ಮೊಟ್ಟೆ ಎಸೆದ ಘಟನೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ಆದೇಶದ ಮೇರೆಗೆ ಉನ್ನತ ಮಟ್ಟದ ತನಿಖೆ ನಡೆಸಲಾಗುತ್ತಿದೆ. ಮೊಟ್ಟೆ ಎಸೆದ ಕಿಡಿಗೇಡಿಗಳ ಪತ್ತೆಗೆ ವಿಶೇಷ ತಂಡವನ್ನು ನೇಮಿಸಲಾಗಿದ್ದು, ಸ್ಥಳ ಪರಿಶೀಲನೆ ನಡೆಸಲಾಗಿದೆ.

ವಿಶೇಷ ಪೊಲೀಸ್ ತಂಡವು ಗುಡ್ಡೆಹೊಸೂರಿಗೆ ಆಗಮಿಸಿದ್ದು, ಆಗಸ್ಟ್ 18 ರಂದು ವರದಿಯಾದ ಮೊಟ್ಟೆ ಎಸೆತ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಡಿಯೋ ದೃಶ್ಯಾವಳಿ, ಸಿಸಿಟಿವಿ ದೃಶ್ಯಗಳು, ಪತ್ರಿಕೆಗಳ ವರದಿಗಳು ಸೇರಿದಂತೆ ಪ್ರಾಥಮಿಕ ಮಾಹಿತಿಗಳನ್ನು ಸಂಗ್ರಹಿಸಲಾಗುತ್ತಿದೆ.

ಚಾಮರಾಜನಗರ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸುಂದರ್ ರಾಜ್ ಅವರನ್ನು ಉನ್ನತ ಮಟ್ಟದ ತನಿಖಾ ಅಧಿಕಾರಿಯಾಗಿ ರಾಜ್ಯ ಸರ್ಕಾರ ನೇಮಿಸಿದೆ ಎಂದು ಮೂಲಗಳು ಖಚಿತಪಡಿಸಿವೆ. ಏತನ್ಮಧ್ಯೆ, ಸಿದ್ದರಾಮಯ್ಯ ಅವರ ವಾಹನದ ಮೇಲೆ ಮೊಟ್ಟೆ ಎಸೆದ ಆರೋಪಿ ಸಂಪತ್ ವಿರುದ್ಧ ರಾಜಕೀಯ ಪಕ್ಷಗಳಲ್ಲಿ ಆರೋಪ ಮತ್ತು ಪ್ರತ್ಯಾರೋಪಗಳು ಮುಂದುವರೆದಿವೆ. ▶ 8ನೇ ಪುಟಕ್ಕೆ

ಕೊಡಗಲ್ಲಿ ನಾಳೆ ಬೆಳಗ್ಗೆಯಿಂದ ಆ.27ರವರೆಗೆ ನಿಷೇಧಾಜ್ಞೆ

ಮಡಿಕೇರಿ, ಆ. 22– ಕೊಡಗು ಜಿಲ್ಲೆಯಾದ್ಯಂತ ಆಗಸ್ಟ್ 24ರಂದು ಬೆಳಗ್ಗೆ 6 ಗಂಟೆಯಿಂದ 27ರಂದು ರಾತ್ರಿ 8 ಗಂಟೆವರೆಗೆ ನಿಷೇಧಾಜ್ಞೆ ವಿಧಿಸಿ, ಜಿಲ್ಲಾಧಿಕಾರಿ ಡಾ. ಬಿ.ಸಿ. ಸತೀಶ ಆದೇಶ ಹೊರಡಿಸಿದ್ದಾರೆ.

ಆಗಸ್ಟ್ 18ರಂದು ವಿಪಕ್ಷ ನಾಯಕ ಸಿದ್ದರಾಮಯ್ಯ ಕೊಡಗು ಭೇಟಿ ವೇಳೆ ಅವರ ಕಾರಿನ ಮೇಲೆ ಮೊಟ್ಟೆ ಎಸೆದ ಘಟನೆಯನ್ನು ಖಂಡಿಸಿ, ಕಾಂಗ್ರೆಸ್ ವತಿಯಿಂದ ಆಗಸ್ಟ್ 26 ರಂದು ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಈ ಕಾರ್ಯಕ್ರಮದಲ್ಲಿ ಹೊರ ಜಿಲ್ಲೆಯವರೂ ಸೇರಿ ಒಂದು ಲಕ್ಷ ಮಂದಿ ಜಮಾಯಿಸುವ ಸಾಧ್ಯತೆ ಇದೆ. ಅಲ್ಲದೆ, ಅದೇ ದಿನ ಬಿಜೆಪಿ ವತಿಯಿಂದ ಮಡಿಕೇರಿಯ ಗಾಂಧಿ ಮೈದಾನದಲ್ಲಿ ಜನಜಾಗೃತಿ ಸಮಾವೇಶ ನಡೆಸಲು ಕರೆ ನೀಡಿದ್ದು, ಈ ಸಮಾವೇಶದಲ್ಲಿ ಕೂಡ ಹೊರ ಜಿಲ್ಲೆಯವರು ▶ 8ನೇ ಪುಟಕ್ಕೆ


ಕೆಬಿಜೆಯವರ
ಛೂಮಂತ್ರ... ಛೂಮಂತ್ರ...



ಚಿತ್ರಕಲಾ ಶಿಕ್ಷಕ, ಛಾಯಾಚಿತ್ರ ಪತ್ರಕರ್ತ
ಎಸ್.ಎಂ.ಜಂಬುಕೇಶ್ವರ ಬರೆಯುತ್ತಾರೆ... ■ ಪುಟ–4

ಇಂದಿನಿಂದ ಆ.30ರವರೆಗೆ ಸಾವರ್ಕರ್ ರಥಯಾತ್ರೆ

● ಮೈಸೂರು, ಮಂಡ್ಯ, ಚಾಮರಾಜನಗರದಲ್ಲಿ ಸಂಚರಿಸಿ ಸಾವರ್ಕರ್ ಅವರ ಸ್ವಾತಂತ್ರ್ಯ ಹೋರಾಟ, ತ್ಯಾಗದ ಪ್ರಚಾರ ● ರಥಯಾತ್ರೆಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಂದ ಚಾಲನೆ



ಮೈಸೂರು, ಆ.22 (ಪಿಎಂ)– ಸಾವರ್ಕರ್ ಪ್ರತಿಷ್ಠಾನ ಮೈಸೂರು ವತಿಯಿಂದ ಸ್ವಾತಂತ್ರ್ಯ ಹೋರಾಟದಲ್ಲಿ ವೀರ ಸಾವರ್ಕರ್ ಅವರ ತ್ಯಾಗ, ಸಂದೇಶದ ಕುರಿತು ಜನಸಾಮಾನ್ಯರಿಗೆ ತಿಳಿಸುವ ಸಲುವಾಗಿ ಆ.23ರಿಂದ 30ರವರೆಗೆ ಮೈಸೂರು, ಮಂಡ್ಯ ಮತ್ತು ಚಾಮರಾಜನಗರ ಜಿಲ್ಲೆಗಳ ನಗರ, ಗ್ರಾಮಾಂತರ ಪ್ರದೇಶದಲ್ಲಿ 'ಸಾವರ್ಕರ್ ರಥಯಾತ್ರೆ' ಆಯೋಜಿಸಲಾಗಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷೆ ಯಶಸ್ವಿನಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾವರ್ಕರ್ ಅವರ ಜೀವನ, ಹೋರಾಟದ ಯಶೋಗಾಥೆಯನ್ನು ಸಾರ್ವಜನಿಕರಿಗೆ ತಿಳಿಸುವ ಉದ್ದೇಶದಿಂದ ಈ ರಥಯಾತ್ರೆ ಆಯೋಜಿಸಲಾಗಿದೆ. ಆ.23ರಂದು ಬೆಳಗ್ಗೆ 11ಕ್ಕೆ ಮೈಸೂರು ಅರಮನೆ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಎದುರು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ರಥಯಾತ್ರೆಗೆ ಚಾಲನೆ ನೀಡಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಸಾವಿರ ಮಂದಿ ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದರು.



ರಥವಾಗಿ ವಿನ್ಯಾಸಗೊಳಿಸಿರುವ ವಾಹನದಲ್ಲಿ ಎಲ್‌ಇಡಿ ಪರದೆಗಳ ಮೂಲಕ ಸಾವರ್ಕರ್ ಅವರ ಕಿರುಚಿತ್ರ ಪ್ರದರ್ಶನ ಬಿತ್ತರಗೊಳ್ಳಲಿದೆ. ನಾಳೆ ಮೈಸೂರು ನಗರದ ಆಯ್ದ ಪ್ರದೇಶಗಳಲ್ಲಿ ರಾತ್ರಿ 8ರವರೆಗೆ ಸಂಚರಿಸಿ ಸಾವರ್ಕರ್ ಅವರ ಯಶೋಗಾಥೆ ಪ್ರಸಾರ ಮಾಡಲಾಗುವುದು ಎಂದು ತಿಳಿಸಿದರು.

ಸಾವರ್ಕರ್ ವಿಚಾರವಾಗಿ ವಿವಾದಗಳು ಎದ್ದಿರುವ ಈ ಸಂದರ್ಭದಲ್ಲಿ ರಥಯಾತ್ರೆ ಹಮ್ಮಿಕೊಂಡಿರುವ ಉದ್ದೇಶದ ಬಗ್ಗೆ ಪ್ರತಿಕ್ರಿಯಿಸಿ, ಸಾವರ್ಕರ್ ಅವರ ಮೇರು ವ್ಯಕ್ತಿತ್ವದ ಬಗ್ಗೆ ಜನತೆಗೆ ಸರಿಯಾದ ಮಾಹಿತಿ ನೀಡಲು ಇದು ಸರಿಯಾದ ಸಂದರ್ಭವಾಗಿದೆ. ಹೀಗಾಗಿ ರಥಯಾತ್ರೆ ನಡೆಸಲಾಗುತ್ತಿದೆ ಎಂದು ಹೇಳಿದರು. ರಥಯಾತ್ರೆಗೆ ಅನುಮತಿ ನೀಡಿ ಸೂಕ್ತ ಭದ್ರತೆ ಒದಗಿಸಲು ಪೊಲೀಸ್ ಇಲಾಖೆಯಲ್ಲಿ ಮನವಿ ಮಾಡಲಾಗಿದೆ. ಪೊಲೀಸ್ ಅನುಮತಿ ದೊರೆಯುವ ವಿಶ್ವಾಸವಿದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಚಾಲನೆ ಬಳಿಕ ರಥಯಾತ್ರೆಯು ಮೈಸೂರು ನಗರದ ಟೆರಿಷಿಯನ್ ಕಾಲೇಜು ಮಾರ್ಗವಾಗಿ ಕ್ಯಾತಮಾರನಹಳ್ಳಿ, ತಿಲಕನಗರ, ▶ 8ನೇ ಪುಟಕ್ಕೆ

ಚಿನ್ನಾಭರಣಕ್ಕೆ ಮಹಿಳೆ ಕೊಲೆ; ಆದರೆ ಹಂತಕರಿಗೆ ಸಿಕ್ಕಿದ್ದು, ಕೇವಲ 10 ರೂ.

● ವರ್ಷದ ಹಿಂದೆ ಮಳವಳ್ಳಿ ಬಳಿ ನಡೆದ ಮಹಿಳೆ ಹತ್ಯೆ ಪ್ರಕರಣ ಬಯಲು ● ಸ್ನೇಹಿತೆ ಹಾಗೂ ಆಕೆಯ ಪ್ರಿಯಕರನ ಬಂಧನ



ಆರೋಪಿಗಳೊಂದಿಗೆ ಪೊಲೀಸರ ತಂಡ

ಮಂಡ್ಯ, ಆ.22– ವರ್ಷದ ಹಿಂದೆ ನಡೆದಿದ್ದ ಮಹಿಳೆ ಕೊಲೆ ಪ್ರಕರಣವನ್ನು ಭೇದಿಸಿರುವ ಹಲಗೂರು ಠಾಣೆಯ ಪೊಲೀಸರು ಬೆಂಗಳೂರಿನ ಮಹಿಳೆ ಹಾಗೂ ಆಕೆಯ ಪ್ರಿಯತಮನನ್ನು ಬಂಧಿಸಿದ್ದಾರೆ.

ಬೆಂಗಳೂರಿನ ಬನಶಂಕರಿ 3ನೇ ಹಂತದ ನಿವಾಸಿ ಜಿ.ನಾರಾಯಣ ಅಲಿಯಾಸ್ ನಾಣಿ ಮತ್ತು ಆತನ ಪ್ರಿಯತಮೆ ಮೂಲತಃ ಚನ್ನಪಟ್ಟಣ ತಾಲೂಕು ಹೊನ್ನಿಗನಹಳ್ಳಿ ಗ್ರಾಮದವಳಾಗಿದ್ದು, ಬೆಂಗಳೂರಿನ ಚಳ್ಳಘಟ್ಟದಲ್ಲಿ ವಾಸಿಸುತ್ತಿದ್ದ ಲಕ್ಷ್ಮೀ ಬಂಧಿತರಾಗಿದ್ದು, ಇವರು ಚಂದ್ರಕಲಾ ಅಲಿಯಾಸ್ ಶೋಭಾ (42) ಎಂಬಾಕೆಯನ್ನು 2021ರ ಜುಲೈ 28ರಂದು ಆಟೋದಲ್ಲಿ ಮಳವಳ್ಳಿ ತಾಲೂಕು ಹಲಗೂರು ಪೊಲೀಸ್ ಠಾಣೆ ವ್ಯಾಪ್ತಿಯ ಮುಳ್ಳಯ್ಯನಕಟ್ಟೆ ಗುಡ್ಡದ ಬಳಿ ಹತ್ಯೆ ಮಾಡಿದ್ದರು.

ವಿವರ: ಹಲಗೂರು ಪೊಲೀಸ್ ಠಾಣೆ ವ್ಯಾಪ್ತಿಯ ಮುಳ್ಳಯ್ಯನಕಟ್ಟೆ ಗುಡ್ಡದ ಬಳಿ 2021ರ ಜುಲೈ 29ರಂದು ಬೆಳಗ್ಗೆ ಮಹಿಳೆಯ ಶವ ಪತ್ತೆಯಾಗಿತ್ತು. ಈಕೆಯ ತಲೆ ಮೇಲೆ ಕಲ್ಲು ಎತ್ತಿಹಾಕಿ ಹತ್ಯೆ ಮಾಡಲಾಗಿತ್ತು. ಹತ್ಯೆಗೀಡಾದ ಮಹಿಳೆ ಯಾರು? ಎಂಬುದರ ಬಗ್ಗೆ ಯಾವುದೇ ರೀತಿಯ ಸುಳಿವು ದೊರೆತಿರಲಿಲ್ಲ. ಹೀಗಾಗಿ, ಅಪರಿಚಿತ ಮಹಿಳೆ ಕೊಲೆ ಪ್ರಕರಣವನ್ನು ಹಲಗೂರು ಠಾಣೆಯಲ್ಲಿ ದಾಖಲಿಸಲಾಗಿತ್ತು. ಹತ್ಯೆಗೀಡಾದ ಮಹಿಳೆ ಧರಿಸಿದ್ದ ಪ್ಯಾಂಟ್, ಟಾಪ್, ವೇಲ್ ಹಾಗೂ ಶೂ ಹೊರತುಪಡಿಸಿದರೆ ಬೇರೇನೂ ▶ 8ನೇ ಪುಟಕ್ಕೆ

ರಾಜ್ಯ ಸಫಾಯಿ ಕರ್ಮಚಾರಿ ಆಯೋಗದಿಂದ ಪೌರಕಾರ್ಮಿಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ

ಸ್ವಾತಂತ್ರ್ಯ ಬಂದು 75 ವರ್ಷ ಕಳೆದರೂ ಪೌರಕಾರ್ಮಿಕರ ಸಮಸ್ಯೆಗೆ ಇನ್ನೂ ಪರಿಹಾರ ಸಿಕ್ಕಿಲ್ಲ...

ರಾಜ್ಯದಲ್ಲಿ 5 ಸಾವಿರಕ್ಕೂ ಅಧಿಕ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿರುವುದು ನಾಗರಿಕ ಸಮಾಜ ತಲೆ ತಗ್ಗಿಸುವ ವಿಚಾರ: ಸಚಿವ ಗೋವಿಂದ ಕಾರಜೋಳ ವಿಷಾದ



ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗವು ಜಿಲ್ಲಾಡಳಿತದ ಸಹಯೋಗದಲ್ಲಿ ಮೈಸೂರಿನಲ್ಲಿ ಆಯೋಜಿಸಿದ್ದ ಪೌರಕಾರ್ಮಿಕರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಬಾಬು ಜಗಜೀವನರಾಂ ಅವರ ಭಾವಚಿತ್ರಕ್ಕೆ ಸಚಿವ ಗೋವಿಂದ ಕಾರಜೋಳ ಪುಷ್ಪನಮನ ಸಲ್ಲಿಸಿದರು. ಸಚಿವ ಎಸ್.ಟಿ.ಸೋಮಶೇಖರ್, ಶಾಸಕ ಎಲ್.ನಾಗೇಂದ್ರ, ಆಯೋಗದ ಅಧ್ಯಕ್ಷ ಕೋಟೆ ಎಂ.ಶಿವಣ್ಣ, ಪ್ರಭಾರ ಮೇಯರ್ ಸುನಂದಾ ಪಾಲನೇತ್ರ ಮತ್ತಿತರರಿದ್ದರು.

ಮೈಸೂರು, ಆ.22(ಆರ್‌ಕೆಬಿ)–ಸ್ವಾತಂತ್ರ್ಯ ಬಂದು 75 ವರ್ಷ ಕಳೆದರೂ ಪೌರಕಾರ್ಮಿಕರ ಸಮಸ್ಯೆಗಳಿಗೆ ಇನ್ನೂ ಪರಿಹಾರ ಸಿಕ್ಕಿಲ್ಲ ಎಂದು ಬೃಹತ್ ಮತ್ತು ಮಧ್ಯಮ ನೀರಾವರಿ ಸಚಿವ ಗೋವಿಂದ ಕಾರಜೋಳ ಬೇಸರ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗವು ಜಿಲ್ಲಾಡಳಿತದ ಸಹಯೋಗದಲ್ಲಿ ಮೈಸೂರಿನ ಮುಕ್ತ ಗಂಗೋತ್ರಿ ಆವರಣದಲ್ಲಿರುವ ಘಟಿಕೋತ್ಸವ ಭವನದಲ್ಲಿ ಸೋಮವಾರ ಆಯೋಜಿಸಿದ್ದ ಸಫಾಯಿ ಕರ್ಮಚಾರಿಗಳ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ರಾಜ್ಯದಲ್ಲಿ ಇನ್ನೂ 5,000 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿರುವುದು ನಾಚಿಕೆಗೇಡಿನ ಸಂಗತಿ ಎಂದ ಅವರು, ಈ ಅಮಾನವೀಯ ಪದ್ಧತಿಯನ್ನು ಕೊನೆಗೊಳಿಸಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗಿದ್ದರೂ, ಅದು ಇನ್ನೂ ಅಸ್ತಿತ್ವದಲ್ಲಿದೆ ಎಂದು ವಿಷಾದ ವ್ಯಕ್ತಪಡಿಸಿದರು. ಪೌರಕಾರ್ಮಿಕರ ಬೇಡಿಕೆಗಳಾದ ಉಚಿತ ಶಿಕ್ಷಣ, ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವುದು, ಪೌರಕಾರ್ಮಿಕರನ್ನು ಸರ್ಕಾರಿ ನೌಕರರೆಂದು ಪರಿಗಣಿಸುವುದು ನ್ಯಾಯಯುತವಾಗಿದೆ. ಇದು ಮೊದಲ ಬಿಜೆಪಿ ಸರ್ಕಾರದಲ್ಲಿ (2008 ರಿಂದ 2013) ಬಿ.ಎಸ್.ಯಡಿಯೂರಪ್ಪ ಅವರು ಪೌರಕಾರ್ಮಿಕರ ಉನ್ನತಿ ಮತ್ತು ಸಬಲೀಕರಣಕ್ಕಾಗಿ ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗವನ್ನು ಸ್ಥಾಪಿಸಿದ್ದರು ಎಂದರು. ಬಿಜೆಪಿ ಸರ್ಕಾರ ಪೌರಕಾರ್ಮಿಕರಿಗೆ ನೀಡಿರುವ ಸೌಲಭ್ಯಗಳು ಮತ್ತು ಸವಲತ್ತುಗಳನ್ನು ವಿವರಿಸಿದ ಅವರು, ಬೊಮ್ಮಾಯಿ ಸರ್ಕಾರ ಇತ್ತೀಚೆಗೆ ಸಂಕಷ್ಟ ಭತ್ಯೆಯಾಗಿ ಪೌರಕಾರ್ಮಿಕರಿಗೆ 2,000 ರೂ. ನೀಡುತ್ತಿದೆ. ಈ ಹಿಂದೆ ಯಾವುದೇ ಸರ್ಕಾರ ಇದನ್ನು ಮಾಡಿಲ್ಲ. ಪೌರಕಾರ್ಮಿಕರ ಕಲ್ಯಾಣಕ್ಕೆ ಬೊಮ್ಮಾಯಿ ಸರ್ಕಾರ ಬದ್ಧವಾಗಿದೆ ಎಂದು ಹೇಳಿದರು. 90 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳು ಕರ್ತವ್ಯದಲ್ಲಿರುವಾಗಲೇ ಮೃತಪಟ್ಟಿದ್ದಾರೆ. ಮ್ಯಾನ್ಯುಯಲ್ ಸ್ಕ್ಯಾವೆಂಜರ್ ನಿಷೇಧವಿದ್ದರೂ ಗ್ರಾಮೀಣ ಪ್ರದೇಶದಲ್ಲಿ ಅದು ಇನ್ನೂ ಜೀವಂತವಾಗಿದ್ದು, ಸಮಾಜವನ್ನು ಕಾಡುತ್ತಲೇ ಇದೆ ಎಂದು ಬೇಸರ ವ್ಯಕ್ತಪಡಿಸಿದ ಅವರು, ಗ್ರಾಮಾಂತರ ಪ್ರದೇಶದಲ್ಲಿ ಎಷ್ಟು ಮಂದಿ ಪೌರಕಾರ್ಮಿಕರಿದ್ದಾರೆ. ಅದರಲ್ಲೂ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳು ಎಷ್ಟಿದ್ದಾರೆ ಎಂಬ ಬಗ್ಗೆ ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಕಾರ್ಯದರ್ಶಿಗಳ ಸಭೆ ಕರೆದು ಚರ್ಚಿಸಿ, ವರದಿ ನೀಡುವಂತೆ ಆಯೋಗದ ಅಧ್ಯಕ್ಷರಿಗೆ ಸಲಹೆ ನೀಡಿದರು.

ಪೌರಕಾರ್ಮಿಕರಿಂದ ಮಲ ಹೊರುವುದಾಗಲೀ, ಮ್ಯಾನ್ ಹೋಲ್‌ಗಳಿಗೆ ಇಳಿಸಿ ಸ್ವಚ್ಛತೆಗೆ ಹಚ್ಚುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆಯೂ ತಿಳಿಸಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷ ಕೋಟೆ ಎಂ.ಶಿವಣ್ಣ, ಆಯೋಗದ ಕಾರ್ಯವೈಖರಿ ಮತ್ತು ಪೌರಕಾರ್ಮಿಕ ಸಮಸ್ಯೆಗಳ ಪರಿಹಾರಕ್ಕೆ ಕೈಗೊಂಡ ಕ್ರಮಗಳ ಕುರಿತು ವಿವರಿಸಿದರು. ರಾಜ್ಯದಲ್ಲಿ 53 ಸಾವಿರ ಹೊರಗುತ್ತಿಗೆ ಅಥವಾ ಗುತ್ತಿಗೆ ಪೌರಕಾರ್ಮಿಕರ ಪೈಕಿ 12 ಸಾವಿರ ಪೌರಕಾರ್ಮಿಕರನ್ನು ಸರ್ಕಾರ ಖಾಯಂಗೊಳಿಸಿದೆ. ಅವರನ್ನು ಖಾಯಂಗೊಳಿಸುವುದು ಸರ್ಕಾರದ ಗಂಭೀರ ▶ 2ನೇ ಪುಟಕ್ಕೆ

> “ ಕೋಟೆ ಶಿವಣ್ಣನವರಿಗೆ ಅಪಾರ ಜ್ಞಾನವಿದೆ. ಶ್ರೀನಿವಾಸಪ್ರಸಾದ್ ಅವರು ಶಿವಣ್ಣ ಅವರ ಪರ ಶಿಫಾರಸು ಮಾಡಿ, ಅವರು ಅಧ್ಯಕ್ಷರಾದರೆ ಪೌರಕಾರ್ಮಿಕರ ಸಮುದಾಯಕ್ಕೆ ಅನುಕೂಲವಾಗುತ್ತದೆ. ಅವರ ಮೇಲೆ ವಿಶ್ವಾಸವಿದೆ ಎಂದು ಹೇಳಿದ ತಕ್ಷಣ, ಬಿ.ಎಸ್.ಯಡಿಯೂರಪ್ಪನವರು ಮರು ಮಾತನಾಡದೆ ಶಿವಣ್ಣರನ್ನು ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷರನ್ನಾಗಿ ಮಾಡಿದರು. ತಕ್ಷಣ ಕಾರ್ಯಪ್ರವೃತ್ತರಾದ ಶಿವಣ್ಣ ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರವಾಸ ಮಾಡಿ, ಪೌರಕಾರ್ಮಿಕರ ಸಮಸ್ಯೆಗಳಿಗೆ ಸ್ಪಂದಿಸಿ, ಅವರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಸೌಲಭ್ಯಗಳನ್ನು ಕೊಡಿಸುವ ಕೆಲಸ ಮಾಡಿದ್ದಾರೆ.
> –ಎಸ್.ಟಿ.ಸೋಮಶೇಖರ್, ಜಿಲ್ಲಾ ಉಸ್ತುವಾರಿ ಸಚಿವ

> “ ನಿಷೇಧವಿದ್ದರೂ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಬಳಕೆ ನಡೆದಿದೆ. ರಾಜ್ಯದಲ್ಲಿ 12 ಸಾವಿರ ಪೌರಕಾರ್ಮಿಕರ ಖಾಯಂ ಮಾಡಲಾಗಿದೆ. ಉಳಿದವರನ್ನೂ ಶೀಘ್ರದಲ್ಲೇ ಖಾಯಂ ಮಾಡುವುದಾಗಿ ಮುಖ್ಯಮಂತ್ರಿ ಭರವಸೆ ನೀಡಿದ್ದಾರೆ. ಆ ಕೆಲಸ ಶೀಘ್ರದಲ್ಲಿ ಆಗಲಿದೆ.
> –ಕೋಟೆ ಎಂ.ಶಿವಣ್ಣ, ಅಧ್ಯಕ್ಷರು, ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ

ಇಂದು ಭೂಮಿ ದುರಸ್ತಿ ಪ್ರಕ್ರಿಯೆ ಕುರಿತು ವಿಚಾರಗೋಷ್ಠಿ



ಮೈಸೂರು,ಆ.22(ಪಿಎಂ)– ನರೆಡ್ಕೋ ಮೈಸೂರು ಘಟಕದ ವತಿಯಿಂದ ಭೂ ದಾಖಲೆಗಳ ಮಾಹಿತಿ (ಭೂಮಿ ದುರಸ್ತಿ ಪ್ರಕ್ರಿಯೆ) ಹಾಗೂ ಭಾರತೀಯ ಹಸಿರು ಕಟ್ಟಡ ಮಂಡಳಿಯ ನಿಯಮಗಳ ಕುರಿತು ಆ.23ರಂದು ವಿಚಾರಗೋಷ್ಠಿ ಮತ್ತು ಸಂವಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ನರೆಡ್ಕೋ ಮೈಸೂರು ಘಟಕದ ಅಧ್ಯಕ್ಷ ಟಿ.ಜಿ.ಅಧಿಶೇಷನ್‌ಗೌಡ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಸಂಜೆ 6.30ಕ್ಕೆ ಮೈಸೂರಿನ ವಿನೋಬಾ ರಸ್ತೆಯ ಸದರನ್ ಸ್ಟಾರ್ ಹೋಟೆಲ್‌ನಲ್ಲಿ ಕಾರ್ಯಕ್ರಮ ನಡೆಯಲಿದೆ. ಮೊದಲನೇ ಗೋಷ್ಠಿಯಲ್ಲಿ ಭೂ ದಾಖಲೆಗಳ ಮಾಹಿತಿ ಹಾಗೂ ದುರಸ್ತಿ ಪ್ರಕ್ರಿಯೆ ಕುರಿತು ನರೆಡ್ಕೋ ಮೈಸೂರು ಘಟಕದ ಕಾನೂನು ಸಮಿತಿ ಮುಖ್ಯಸ್ಥ ಧೀರೇಂದ್ರಕುಮಾರ್ ಮೆಹ್ತಾ ಮತ್ತು ಮೈಸೂರು ವಿಭಾಗದ ಸರ್ವೇ ಅಧೀಕ್ಷಕ ಟಿ.ಆರ್.ಪುಟ್ಟಣ್ಣ ಮಾತನಾಡಲಿದ್ದಾರೆ ಎಂದರು.

ಬಳಿಕ ಭಾರತೀಯ ಹಸಿರು ಕಟ್ಟಡ ಮಂಡಳಿ (ಐಜಿಬಿಸಿ) ನಿಯಮಗಳು ಹಾಗೂ ಉದ್ದೇಶ ಕುರಿತು ಮಂಡಳಿಯ ಮೈಸೂರು ವಿಭಾಗದ ಅಧ್ಯಕ್ಷ ಶ್ರೀರಾಮ್ ಮಾತನಾಡಲಿದ್ದಾರೆ. ಆಹ್ವಾನಿತ ಬಿಲ್ಡರ್ಸ್ ಮತ್ತು ಡೆವಲಪರ್ಸ್ ಸೇರಿದಂತೆ ಸುಮಾರು 100 ಮಂದಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ನರೆಡ್ಕೋ ಮೈಸೂರು ಘಟಕದ ಪದಾಧಿಕಾರಿಗಳು ಹಾಗೂ ಸದಸ್ಯರು ಹಾಜರಿರಲಿದ್ದಾರೆ ಎಂದು ತಿಳಿಸಿದರು.

ಮೈಸೂರು ಜಿಲ್ಲೆಯಲ್ಲಿ ಭೂ ದಾಖಲೆಗಳಿಗೆ ಸಂಬಂಧಿಸಿದಂತೆ ದುರಸ್ತಿ ಪ್ರಕ್ರಿಯೆ ಸಾಕಷ್ಟು ಹಿಂದುಳಿದಿದೆ. ಈ ಸಂಬಂಧ ಸರ್ಕಾರ ಗಮನಹರಿಸಬೇಕು. ಮೈಸೂರಿನ ಉಪ ನೋಂದಣಾಧಿಕಾರಿ ಕಚೇರಿಗಳಿಗೆ ಸಮರ್ಪಕ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಮೈಸೂರು ನಗರದ ಭವಿಷ್ಯದ ಅಭಿವೃದ್ಧಿ ದೃಷ್ಟಿಯಿಂದ ಈಗಲೇ ಮತ್ತೊಂದು ರಿಂಗ್ ರೋಡ್ ನಿರ್ಮಾಣಕ್ಕೆ ಯೋಜನೆ ರೂಪಿಸಬೇಕಿದೆ. ಅದೇ ರೀತಿ ಮೆಟ್ರೋ ರೈಲು ಯೋಜನೆಗೂ ರೂಪುರೇಷೆ ಸಿದ್ಧಪಡಿಸುವ ಅಗತ್ಯವಿದೆ. ಜೊತೆಗೆ ಮೈಸೂರಿನಲ್ಲಿ ಟೂರಿಸ್ಟ್ ಸರ್ಕ್ಯೂಟ್ ಕೂಡ ಕಾರ್ಯಗತವಾಗಬೇಕಿದೆ. ಈ ಎಲ್ಲದರ ಬಗ್ಗೆ ನರೆಡ್ಕೋ ಮೈಸೂರು, ಸರ್ಕಾರ ಮತ್ತು ಸಂಬಂಧಿಸಿದವರ ಗಮನ ಸೆಳೆಯಲಿದೆ ಎಂದು ಹೇಳಿದರು. ನರೆಡ್ಕೋ ಮೈಸೂರು ಘಟಕದ ಉಪಾಧ್ಯಕ್ಷ ವಿ.ಸಿ.ರವಿಕುಮಾರ್, ಕಾರ್ಯದರ್ಶಿ ಎಂ.ಎಲ್.ನಾಗೇಶ್, ಪದಾಧಿಕಾರಿಗಳಾದ ಉಲ್ಲಾಸ್ ಶಂಕರ್, ಜಗದೀಶ್, ಗಗನ್‌ದೀಪ್ ಗೋಷ್ಠಿಯಲ್ಲಿದ್ದರು.

ಪಿಎಚ್.ಡಿ ಪದವಿ



ಉಮ್ಮೇ ಹನಿ

ಮೈಸೂರು: ಡಾ. ಹೆಚ್.ಪಿ.ಜ್ಯೋತಿ ಅವರ ಮಾರ್ಗದರ್ಶನದಲ್ಲಿ ಉಮ್ಮೇ ಹನಿ ಅವರು ಸಮಾಜ ಕಾರ್ಯ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಸಾರ್ಥಕ ರೀತಿಯಲ್ಲಿ ಇನ್ಫೋಸಿಸ್ ಸುಧಾಮೂರ್ತಿ ಹುಟ್ಟುಹಬ್ಬ ಆಚರಣೆ

ಸರ್ಕಾರಿ ಶಾಲೆಗೆ ಪೀಠೋಪಕರಣ ನೆರವು



ಮೈಸೂರು, ಆ.22– ಸಮಾಜ ಸೇವಕಿ ಇನ್ಫೋಸಿಸ್ ಫೌಂಡೇಷನ್‌ನ ಸುಧಾಮೂರ್ತಿ ಅವರ ಹುಟ್ಟುಹಬ್ಬದ ಪ್ರಯುಕ್ತ ಮೈಸೂರಿನ ಜೀವಾಧಾರ ರಕ್ತನಿಧಿ ಕೇಂದ್ರದ ವತಿಯಿಂದ ಕೃಷ್ಣಮೂರ್ತಿಪುರಂನಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗೆ 30 ಕುರ್ಚಿ ಹಾಗೂ ಪಠ್ಯಸಾಮಗ್ರಿಗಳನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಮೇಯರ್ ಸುನಂದಾ ಪಾಲನೇತ್ರ ಮಾತನಾಡಿ, ಶ್ರೀಮಂತಿಕೆ, ಐಷಾರಾಮಿ ಜೀವನಕ್ಕಿಂತ ಸರಳ ಜೀವನದಲ್ಲಿ ಸಂತೋಷ ಅಡಗಿದೆ. ಕಷ್ಟದಲ್ಲಿದ್ದವರಿಗೆ ಸಾಧ್ಯವಾದ ರೀತಿಯಲ್ಲಿ ನೆರವಾದರೆ ಸಾರ್ಥಕತೆ ಸಿಗುತ್ತದೆ. ಸಮಾಜದಲ್ಲಿ ಸ್ತ್ರೀ–ಪುರುಷ ಸಮಾನರು ಎನ್ನುವುದನ್ನು ಸಾಧಿಸಿ ತೋರಿಸಿದ ಡಾ.ಸುಧಾಮೂರ್ತಿ ಅವರು ಕೊರೊನಾ ಕಾಲಘಟ್ಟದಲ್ಲಿ ಸಾವಿರಾರು ಜನರಿಗೆ ಸಹಾಯ ಮಾಡಿದರು. ಕೊಡಗಿನಲ್ಲಿ ನೆರೆ ಹಾವಳಿ ನಿರಾಶ್ರಿತರಿಗೆ ಸೂರು ಕಲ್ಪಿಸಲು ಸರ್ಕಾರದ ಜೊತೆ ಕೈ ಜೋಡಿಸಿದರು. ಸಮಾಜ ಸೇವೆಯಲ್ಲಿ ಸಾರ್ಥಕತೆ ಕಾಣುತ್ತಿರುವ ಇವರು ದೇಶಕ್ಕೆ ಮಾದರಿ ಎಂದು ಬಣ್ಣಿಸಿದರು.

ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್ ಮಾತನಾಡಿ, ಸುಧಾಮೂರ್ತಿರವರು ಉದ್ಯಮ ಹಾಗೂ ಸಾರ್ವಜನಿಕ ಸೇವಾ ಜೀವನದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಸ್ವಚ್ಛ ಭಾರತ ಅಭಿಯಾನ, ವಿಕಲಚೇತನ ಮಕ್ಕಳ ಕಲ್ಯಾಣ, ಅನಾಥಾಶ್ರಮಗಳಿಗೆ ದೇಣಿಗೆ, ಮಹಿಳೆಯರಿಗೆ ವೃತ್ತಿಪರ ಕೌಶಲ್ಯ ತರಬೇತಿ, ಯೋಧರ ನಿಧಿಗೆ ನೆರವು, ದೇವಸ್ಥಾನ ಹಾಗೂ ಕೆರೆಗಳ ಅಭಿವೃದ್ಧಿ, ನೆರೆ ಸಂತ್ರಸ್ತರಿಗೆ ಸಹಾಯ, ಹೀಗೆ ನಿರಂತರ ಸೇವೆಯಲ್ಲಿ ತೊಡಗಿರುವ ಸುಧಾಮೂರ್ತಿ ಅವರಿಗೆ ಕೃತಜ್ಞತೆ ಅರ್ಪಿಸುತ್ತೇನೆ ಎಂದರು. ಈ ವೇಳೆ ವಿಪ್ರ ಮುಖಂಡ ಅಪೂರ್ವ ಸುರೇಶ್, ಜೀವಧಾರ ಪದವೀಧರ ಘಟಕದ ಕಾರ್ಯದರ್ಶಿ ವರಲಕ್ಷ್ಮಿ ಅಜಯ್, ನಾಯಕ ಸಮಾಜದ ಮುಖಂಡ ಶಿವಪ್ರಕಾಶ್, ಸುಚೀಂದ್ರ, ಶಾಲೆಯ ಮುಖ್ಯೋಪಾಧ್ಯ ಮೋಹನ್ ಕುಮಾರ್, ಶಿಕ್ಷಕಿಯರಾದ ಚಂಪಶ್ರೀ, ದಿವ್ಯಾ ಮತ್ತಿತರರು ಉಪಸ್ಥಿತರಿದ್ದರು.

ಒಂದನೇ ಪುಟದಿಂದ

ಇನ್ನೂ ಪರಿಹಾರ ಸಿಕ್ಕಿಲ್ಲ...



ಪೌರ ಕಾರ್ಮಿಕರ ಪ್ರತಿಭಾವಂತ ಮಕ್ಕಳಿಗೆ ಗೋವಿಂದ ಕಾರಜೋಳ ಅಭಿನಂದಿಸಿದರು.

ಪರಿಗಣನೆಯಲ್ಲಿದ್ದು, ಶೀಘ್ರದಲ್ಲಿಯೇ ಈ ಕುರಿತು ಘೋಷಣೆ ಮಾಡುವುದಾಗಿ ಮುಖ್ಯಮಂತ್ರಿಗಳು ಭರವಸೆ ನೀಡಿದ್ದಾರೆ ಎಂದು ಹೇಳಿದರು. ಪ್ರತಿಭಾ ಪುರಸ್ಕಾರ ನೀಡಿದ ಅವರು, ಇಂತಹ ಕಾರ್ಯಕ್ರಮಗಳು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ನಡೆಯಲಿದೆ. ಮೊದಲನೆಯದು ಇಂದು ಮೈಸೂರಿನಲ್ಲಿ ನಡೆಯುತ್ತಿದೆ ಎಂದರು.

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ (2021–22)ಯಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ 81 ಪೌರಕಾರ್ಮಿಕ ಮಕ್ಕಳಿಗೆ 'ಪ್ರತಿಭಾ ಪುರಸ್ಕಾರ' ನೀಡಿ ಗೌರವಿಸಲಾಯಿತು. ಅಲ್ಲದೆ, ಅಗತ್ಯವಿರುವ ಕೆಲವು ಅರ್ಹ ಮಕ್ಕಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ಸಚಿವ ಗೋವಿಂದ ಕಾರಜೋಳ ವಿತರಿಸಿದರು.

ಶಾಸಕ ಎಲ್.ನಾಗೇಂದ್ರ ಅಧ್ಯಕ್ಷತೆ ವಹಿಸಿದ್ದರು. ಪ್ರಭಾರ ಮೇಯರ್ ಸುನಂದಾ ಪಾಲನೇತ್ರ, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ರಾಜ್ಯ ಕಾಂಪೋಸ್ಟ್ ನಿಗಮದ ಅಧ್ಯಕ್ಷ ಎಸ್.ಮಹದೇವಯ್ಯ, ರಾಜ್ಯ ಪ್ರವಾಸೋದ್ಯಮ ನಿಗಮದ ಅಧ್ಯಕ್ಷ ಕಾ.ಪು.ಸಿದ್ದಲಿಂಗಸ್ವಾಮಿ, ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಎಂ.ಶಿವಕುಮಾರ್, ರಾಜ್ಯ ಸಫಾಯಿ ಕರ್ಮಚಾರಿಗಳ ನಿಗಮದ ಅಧ್ಯಕ್ಷ ವೆಂಕಟೇಶ್, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಮಿರ್ಲೆ ಶ್ರೀನಿವಾಸಗೌಡ, ಮೈಸೂರು ಬಣ್ಣ ಮತ್ತು ಅರಗು ಕಾರ್ಖಾನೆ ಅಧ್ಯಕ್ಷ ರಘು ಕೌಟಿಲ್ಯ, ಜಿಲ್ಲಾಧಿಕಾರಿ ಡಾ.ಬಗಾದಿ ಗೌತಮ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ನಗರ ಪಾಲಿಕೆ ಆಯುಕ್ತ ಜಿ.ಲಕ್ಷ್ಮೀಕಾಂತ ರೆಡ್ಡಿ, ಸಫಾಯಿ ಕರ್ಮಚಾರಿ ಆಯೋಗದ ಕಾರ್ಯದರ್ಶಿ ಚಂದ್ರಕಲಾ ಇನ್ನಿತರರು ಉಪಸ್ಥಿತರಿದ್ದರು.

ಕೆಪಿಟಿಸಿಎಲ್ ಪರೀಕ್ಷಾ ಅಕ್ರಮ

9 ಮಂದಿ ಬಂಧನ

ಬೆಳಗಾವಿ: ಕೆಪಿಟಿಸಿಎಲ್ ಕಿರಿಯ ಸಹಾಯಕರ ನೇಮಕಾತಿ ಪರೀಕ್ಷೆಯಲ್ಲಿ ನಡೆದ ಅಕ್ರಮಕ್ಕೆ ಸಂಬಂಧಿಸಿದಂತೆ, ಪೊಲೀಸರು ಒಟ್ಟು 9 ಮುಖ್ಯ ಆರೋಪಿಗಳನ್ನು ಬಂಧಿಸಿದ್ದಾರೆ. ತಲೆಮರೆಸಿಕೊಂಡ ಇನ್ನೂ ನಾಲ್ವರ ಹುಡುಕಾಟ ನಡೆದಿದೆ. ಸದ್ಯಕ್ಕೆ ಎರಡು ಪರೀಕ್ಷಾ ಕೇಂದ್ರಗಳ ಅಕ್ರಮ ಬಯಲಿಗೆ ಬಂದಿದ್ದು, ಇನ್ನೂ ಹಲವು ಕಡೆ ನಡೆದಿರುವ ಸಾಧ್ಯತೆ ಇದೆ ಎಂದು ಪೊಲೀಸರು ಸಂದೇಹ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ನಗರದಲ್ಲಿ ಸೋಮವಾರ ಮಾಹಿತಿ ನೀಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಸಂಜೀವ ಪಾಟೀಲ, ಗೋಕಾಕ ನಗರದ ಜೆಎಸ್‌ಎಸ್ ಪದವಿ ಪೂರ್ವ ಕಾಲೇಜು ಹಾಗೂ ಗದಗ ನಗರದ ಮುನ್ಸಿಪಲ್ ಕಾಲೇಜಿನಲ್ಲಿ ನಡೆದ ಅಕ್ರಮಗಳು ಖಚಿತಪಟ್ಟಿವೆ. ಅಥಣಿಯೂ ಸೇರಿದಂತೆ ವಿವಿಧ ಕೇಂದ್ರಗಳಲ್ಲಿ ಅಕ್ರಮ ನಡೆದ ಅನುಮಾನಗಳಿವೆ ಎಂದರು.

ಬಂಧಿತರಲ್ಲಿ ಮೂವರು ಅಭ್ಯರ್ಥಿಗಳು, ಪ್ರಶ್ನೆ ಪತ್ರಿಕೆ ಬಹಿರಂಗ ಮಾಡಿದವರು, ಉತ್ತರ ಸಿದ್ಧಪಡಿಸಿ ಹೇಳಿದವರು, ಇದಕ್ಕೆ ಅನುಕೂಲ ಮಾಡಿಕೊಟ್ಟವರೂ ಸೇರಿದ್ದಾರೆ. ಇವರಲ್ಲಿ ಒಬ್ಬ ಸರ್ಕಾರಿಶಾಲೆ ಶಿಕ್ಷಕ ಹಾಗೂ ಕೆಲವರು ಸರ್ಕಾರಿ ನೌಕರಿಯಲ್ಲಿದ್ದಾರೆ. ಗೋಕಾಕ ನಗರದಲ್ಲಿ ವೃತ್ತಿಪರ ತರಬೇತಿ ನೀಡುವ ಕೇಂದ್ರದವರೂ ಸೇರಿದ್ದಾರೆ. ಆ.7ರಂದು ಗೋಕಾಕದಲ್ಲಿ ನಡೆದ ಪರೀಕ್ಷೆಯಲ್ಲಿ ಅಭ್ಯರ್ಥಿಯೊಬ್ಬ ಸ್ಮಾರ್ಟ್‌ವಾಚ್ ಬಳಸಿ ಪ್ರಶ್ನೆಪತ್ರಿಕೆ ಫೋಟೊ ತೆಗೆದು ಟೆಲಿಗ್ರಾಮ್ ಆ್ಯಪ್ ಮೂಲಕ ಹೊರಗೆ ಕಳುಹಿಸಿದ್ದಾನೆ ಎಂದು ಸಚಿನ್ ಎಂಬ ಇನ್ನೊಬ್ಬ ಅಭ್ಯರ್ಥಿ ದೂರು ನೀಡಿದ್ದರು. ಸಿಸಿಟಿವಿ ಕ್ಯಾಮೆರಾ ಪರಿಶೀಲಿಸಿದಾಗ ಇದು ಖಚಿತಪಟ್ಟಿತು.

ಆರೋಪಿಯು ಸೂಕ್ಷ್ಮವಾದ ಬ್ಲೂಟೂತ್ ಡಿವೈಸ್ ಅನ್ನು ಕಿವಿಯೊಳಗೆ, ಅದರ ಸಿಮ್ ಅನ್ನು ಬಾಯೊಳಗೆ ಇಟ್ಟುಕೊಂಡಿದ್ದ. ಸ್ಮಾರ್ಟ್‌ವಾಚ್ ಮೂಲಕ ಸ್ನೇಹಿತರಿಗೆ ಪ್ರಶ್ನೆಪತ್ರಿಕೆಯ ಫೋಟೊ ಕಳುಹಿಸಿದ್ದ. ಹುಕ್ಕೇರಿ ತಾಲ್ಲೂಕಿನ ಶಿರಹಟ್ಟಿ (ಬಿ.ಕೆ) ಗ್ರಾಮದ ತೋಟದ ಮನೆಯಲ್ಲಿ ಕುಳಿತ ಈತನ ಸ್ನೇಹಿತರು ಬ್ಲೂಟೂತ್ ಮೂಲಕ ಉತ್ತರ ನೀಡಿದ್ದರು. ಈ ಎಲ್ಲರನ್ನೂ ಬಂಧಿಸಲಾಗಿದೆ ಎಂದು ಎಸ್ಪಿ ತಿಳಿಸಿದರು.

ಶಿರಹಟ್ಟಿ ತೋಟದ ಮನೆಯನ್ನು ಜಾಲಾಡಿದಾಗ ಅಕ್ರಮಕ್ಕೆ ಬಳಸಿದ ಉಪಕರಣಗಳು ಸಿಕ್ಕವು. ಅವುಗಳೊಂದಿಗೆ ಒಂದು ಪ್ರಶ್ನೆ ಪತ್ರಿಕೆಯ ನಕಲು ಪ್ರತಿಯೂ ಸಿಕ್ಕಿತು. ಅದರ ಮೂಲೆಯಲ್ಲಿ ಒಂದು ಪರೀಕ್ಷಾ ಕೇಂದ್ರದ ನೋಂದಣಿ ಸಂಖ್ಯೆ ಇತ್ತು. ಅದರ ಜಾಲ ಹಿಡಿದು ಹೋದಾಗ; ಅದು ಗದಗ ನಗರದ ಮುನ್ಸಿಪಲ್ ಕಾಲೇಜಿನಲ್ಲಿ ನೀಡಿದ್ದ ಪ್ರಶ್ನೆ ಪತ್ರಿಕೆ ಎಂದು ಖಚಿತವಾಯಿತು. ತಕ್ಷಣ ಅಲ್ಲಿಗೆ ತೆರಳಿದ ಬೆಳಗಾವಿ ಸೈಬರ್ ಕ್ರೈಂ ಪೊಲೀಸರು ಅಕ್ರಮ ಎಸಗಿದ ಉಪಪ್ರಾಂಶುಪಾಲ ಹಾಗೂ ಅವರ ಮಗನನ್ನು ಭಾನುವಾರ ಬಂಧಿಸಿದ್ದರು. ಪರೀಕ್ಷಾ ಕೇಂದ್ರದ ಮೇಲ್ವಿಚಾರಣೆ ಹೊತ್ತಿದ್ದ ಉಪಪ್ರಾಂಶುಪಾಲ ಹಾಗೂ ಪತ್ರಕರ್ತನ ಸೋಗಿನಲ್ಲಿ ಕೇಂದ್ರದೊಳಗೆ ಹೋಗಿ ಪ್ರಶ್ನೆ ಪತ್ರಿಕೆಯ ಫೋಟೊ ಕ್ಲಿಕ್ಕಿಸಿಕೊಂಡು ಬಂದ ಅವರ ಮಗ ಸಿಕ್ಕಿಬಿದ್ದರು. ಇವರಿಂದ ಇನ್ನೂ ಎಲ್ಲೆಲ್ಲಿಗೆ ಈಗ ಪ್ರಶ್ನೆ ಪತ್ರಿಕೆ ರವಾನೆಯಾಗಿದೆ ಎಂಬ ಬಗ್ಗೆ ತನಿಖೆ ನಡೆದಿದೆ ಎಂದು ಎಸ್ಪಿ ತಿಳಿಸಿದರು.

ಬಂಧಿತ ಆರೋಪಿಗಳು: ಗೋಕಾಕ ತಾಲ್ಲೂಕಿನ ನಾಗನೂರು ಗ್ರಾಮದ ಸಿದ್ದಪ್ಪ ಕೆಂಪಣ್ಣ ಮದಿಹಳ್ಳಿ, ಮಾಲದಿನ್ನಿಯ ಸುನೀಲ ಅಜ್ಜಪ್ಪ ಭಂಗಿ, ಶಿರಹಟ್ಟಿ ಬಿ.ಕೆ. ಗ್ರಾಮದ ಬಸವಣ್ಣೆ ಶಿವಪ್ಪ ಡೋಣವಾಡ, ವೀರನಗಡ್ಡಿಯ ಸಂತೋಷ ಪ್ರಕಾಶ ಮಾಣಗಾವಿ, ಬೆಣಚಿನಮರಡಿಯ ಸಿದ್ಧಪ್ಪ ಕೆಂಚಪ್ಪ ಕೊತ್ತಲ, ಮಾಲದಿನ್ನಿಯ ರೇಣುಕಾ ವಿಠಲ ಜವಾರಿ, ಗದಗ ಬೆಟಗೇರಿಯ ಅಮರೇಶ ಚಂದ್ರಶೇಖರಯ್ಯ ರಾಜೂರ, ಮಾರುತಿ ಶಂಕರ ಸೋನವಣೆ (ಉಪಪ್ರಾಂಶುಪಾಲ), ಸಮಿತ್‌ಕುಮಾರ ಮಾರುತಿ ಸೋನವಣೆ (ಉಪಪ್ರಾಂಶುಪಾಲರ ಪುತ್ರ)

ಟೈಲರಿಂಗ್, ಬ್ಯೂಟಿ ಪಾರ್ಲರ್ ತರಬೇತಿ

ಮೈಸೂರು, ಆ.22– ಮೈಸೂರು ರುಡ್ ಸೆಟ್ ಸಂಸ್ಥೆಯಲ್ಲಿ ಗ್ರಾಮೀಣ ಪ್ರದೇಶದ ನಿರುದ್ಯೋಗಿ ಯುವತಿಯರಿಗಾಗಿ ಸ್ವ ಉದ್ಯೋಗ ಮಾಡಲು ಮಹಿಳೆಯರ ಟೈಲರಿಂಗ್ ಮತ್ತು ಬ್ಯೂಟಿ ಪಾರ್ಲರ್ ನಿರ್ವಹಣೆ ತರಬೇತಿಯನ್ನು ಮುಂದಿನ ತಿಂಗಳ ಮೊದಲ ವಾರದಲ್ಲಿ ಪ್ರಾರಂಭಿಸಲಾಗುತ್ತಿದ್ದು, ಆ.31ರೊಳಗೆ ಅರ್ಹ ಅಭ್ಯರ್ಥಿಗಳು ಹೆಸರು ನೊಂದಾಯಿಸಿಕೊಳ್ಳುವಂತೆ ರುಡ್‌ಸೆಟ್ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಿಳೆಯರಿಗೆ ಟೈಲರಿಂಗ್‌ನಲ್ಲಿ ಸೆ.1ರಿಂದ 30 ದಿನ ಬ್ಯೂಟಿಪಾರ್ಲರ್ ಸೆ.8 ರಿಂದ 30 ದಿನ ತರಬೇತಿ ನೀಡಲಾಗುತ್ತಿದೆ. ಮೊ. 0821–2519663, 9844013948, 9964096406, 9880196581, 9740430061, 8746803006 ಸಂಪರ್ಕಿಸಬಹುದು.

ವಸಂತ ಮಹಲ್‌ನಲ್ಲಿ ವಿಡಿಯೋ ಕ್ಯಾಮರಾ ಕದ್ದಿದ್ದ 'ಡಿ' ಗ್ರೂಪ್ ನೌಕರನ ಸೆರೆ

ಮೈಸೂರು, ಆ.22(ಆರ್‌ಕೆ)– ಮೈಸೂರಿನ ನಜರ್‌ಬಾದ್‌ನಲ್ಲಿರುವ ವಸಂತ ಮಹಲ್‌ನಲ್ಲಿ ವಿಡಿಯೋ ಕ್ಯಾಮರಾ ಕಳವು ಮಾಡಿದ್ದ ಸಂಸ್ಥೆಯ 'ಡಿ' ಗ್ರೂಪ್ ನೌಕರನನ್ನು ಪೊಲೀಸರು ಬಂಧಿಸಿದ್ದಾರೆ.

ಮೈಸೂರಿನ ಬೋಗಾದಿ ನಿವಾಸಿ ರವೀಶ್ (32) ಬಂಧಿತ ಆರೋಪಿ. ಸರ್ಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ, ವಸಂತ ಮಹಲ್‌ನಲ್ಲಿ ಗ್ರೂಪ್ 'ಡಿ' ನೌಕರನಾಗಿ ಕೆಲಸ ಮಾಡುತ್ತಿದ್ದ ಆತ, ಅದೇ ಸಂಸ್ಥೆಯಲ್ಲಿ 1,71,000 ರೂ. ಬೆಲೆ ಬಾಳುವ 2 ವಿಡಿಯೋ ಕ್ಯಾಮರಾಗಳನ್ನು ಕಳವು ಮಾಡಿದ್ದ. ಈ ಬಗ್ಗೆ ಕಾಲೇಜು ಪ್ರಾಂಶುಪಾಲರು ನೀಡಿದ್ದ ದೂರಿನನ್ವಯ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದ ನಜರ್‌ಬಾದ್ ಠಾಣೆ ಇನ್ಸ್‌ಪೆಕ್ಟರ್ ಕೆ. ಜೀವನ್ ಅವರಿಗೆ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದ ರವೀಶ್ ಆರೋಪಿ ಎಂಬುದು ತಿಳಿಯಿತು. ತಕ್ಷಣ ಆತನನ್ನು ಬಂಧಿಸಿರುವ ಪೊಲೀಸರು, ವಿಡಿಯೋ ಕ್ಯಾಮರಾಗಳನ್ನು ವಶಪಡಿಸಿಕೊಂಡಿದ್ದಾರೆ. ಡಿಸಿಪಿ ಎಂ.ಎಸ್. ಗೀತಾ ಪ್ರಸನ್ನ ಮಾರ್ಗದರ್ಶನದಲ್ಲಿ ದೇವರಾಜ ಉಪವಿಭಾಗದ ಎಸಿಪಿ ಎಂ.ಎನ್. ಶಶಿಧರ್ ಅವರ ಮೇಲುಸ್ತುವಾರಿಯಲ್ಲಿ ನಡೆದ ಪತ್ತೆ ಕಾರ್ಯದಲ್ಲಿ ಸಬ್‌ಇನ್ಸ್‌ಪೆಕ್ಟರ್‌ಗಳಾದ ವೈಶಾಲಿ, ರಘು, ಚಂದ್ರಶೇಖರ್ ಇಟಗಿ, ಮಾರುತಿ ಅಂತರಗಟ್ಟಿ, ಸಿಬ್ಬಂದಿಗಳಾದ ಸತೀಶ್‌ಕುಮಾರ್, ಕಿರಣ್ ರಾತೋಡ್, ಸಂತೋಷ್‌ಕುಮಾರ್, ಸವಿತಾ ಬಸವರಾಜ ಮಾನಪ್ಪ ಪಾಲ್ಗೊಂಡಿದ್ದರು.

ಗೋಕುಲಂ ಕೊಡವ ಸಂಘದ ನೂತನ ಪದಾಧಿಕಾರಿಗಳು



ಇತ್ತೀಚೆಗೆ ನಡೆದ ಗೋಕುಲಂ ಕೊಡವ ಸಂಘದ 16ನೇ ವಾರ್ಷಿಕ ಸರ್ವ ಸದಸ್ಯರ ಸಭೆಯಲ್ಲಿ 2022–24ನೇ ಸಾಲಿಗೆ ಸಂಘದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಕುಳಿತಿರುವವರು (ಎಡದಿಂದ): ಮುಕ್ಕಾಟೀರ ಪಿ. ಮಂದಣ್ಣ (ಜಂಟಿ ಕಾರ್ಯದರ್ಶಿ), ಡಾ.ಬೊಟ್ಟೋಂಗಡ ಜಿ. ಪೊನ್ನಪ್ಪ (ಉಪಾಧ್ಯಕ್ಷ), ವಿಂಗ್ ಕಮಾಂಡರ್ ಮುಂಡುಮಾಡ ಡಿ.ಅಯ್ಯಣ್ಣ (ವಿಶೇಷ ಆಹ್ವಾನಿತರು), ಅಮ್ಮಾಟಂಡ ಕೆ. ಚಿನ್ನಪ್ಪ (ಅಧ್ಯಕ್ಷ), ಚೇಂದಂಡ ನವೀನ್ ಅಯ್ಯಪ್ಪ (ಕಾರ್ಯದರ್ಶಿ) ಮತ್ತು ಚೇನಂಡ ಅಶ್ವಿನಿ (ನಾನ್ಸಿ) ಕುಟ್ಟಪ್ಪ (ಖಜಾಂಚಿ); ನಿಂತಿರುವವರು (ಎಡದಿಂದ) : ಸಮಿತಿ ಸದಸ್ಯರು ಬೊಟ್ಟೋಂಗಡ ಜಿ.ಬೆಳ್ಯಪ್ಪ, ಉಳ್ಳಿಯಾಡ ಚಿದಾನಂದ, ಪುಲಿಯಂಡ ಸುಜಾತ, ಕೋಡಂದೇರ ಎಸ್. ಪವಿತ್ರ, ಐಚೆಟ್ಟೀರಾ ಎಸ್.ಪ್ರೀತಿ, ಕುಟ್ಟಂಡ ಮೈನಾ ಮುದ್ದಪ್ಪ, ಕಾವಡಿಚಂಡ ದೇವಮ್ಮ, ಮುಕ್ಕಾಟೀರ ಸುಜಾತ, ಡಾ. ದೇವಣೀರ ಎಂ.ನಂದಕುಮಾರ್ ಮತ್ತು ಕೊಳ್ಳಿಮಾಡ ದಯಾ ಅಚ್ಚಯ್ಯ, ಮತ್ತೊಬ್ಬ ವಿಶೇಷ ಆಹ್ವಾನಿತರಾದ ನಾಯಕಂಡ ಯು.ಅಪ್ಪಯ್ಯ ಚಿತ್ರದಲ್ಲಿಲ್ಲ.

ಮೈಸೂರಲ್ಲಿ ಜಿ.ಟಿ.ದೇವೇಗೌಡರಿಂದ ಛಾಯಾಚಿತ್ರ ಪ್ರದರ್ಶನ ಉದ್ಘಾಟನೆ



ಮೈಸೂರು, ಆ. 22 (ಆರ್‌ಕೆ)– ಮೈಸೂರಿನ ಕಲಾಮಂದಿರದಲ್ಲಿರುವ ಸುಚಿತ್ರ ಕಲಾ ಗ್ಯಾಲರಿಯಲ್ಲಿ ಇಂದು ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ವತಿಯಿಂದ ಆಯೋಜಿಸಿದ್ದ ವಿಶ್ವ ಛಾಯಾಗ್ರಹಣ ದಿನಾಚರಣೆ ಹಾಗೂ ಪತ್ರಿಕಾ ಛಾಯಾಚಿತ್ರ ಪ್ರದರ್ಶನವನ್ನು ಶಾಸಕ ಜಿ.ಟಿ. ದೇವೇಗೌಡ ಉದ್ಘಾಟಿಸಿದರು.

ಮೈಸೂರು ನಗರ ಮತ್ತು ಜಿಲ್ಲೆಯ ಪತ್ರಿಕಾ ಛಾಯಾಗ್ರಾಹಕರ ಅಪರೂಪದ ಛಾಯಾಚಿತ್ರ ಪ್ರದರ್ಶನ ಏರ್ಪಡಿಸಲಾಗಿತ್ತು. ಇದೇ ವೇಳೆ ಹಂಪಿಯ ಖ್ಯಾತ ಪತ್ರಿಕಾ ಛಾಯಾಗ್ರಾಹಕ ಶಿವಶಂಕರ್ ಬಣಗಾರ್ ಅವರನ್ನು ಜಿಲ್ಲಾ ಪತ್ರಕರ್ತರ ಸಂಘದ ವತಿಯಿಂದ ಪತ್ರಿಕಾ ಛಾಯಾಗ್ರಾಹಕರು ಆತ್ಮೀಯವಾಗಿ ಅಭಿನಂದಿಸಿದರು.

ಸಂಘದ ಅಧ್ಯಕ್ಷ ಎಸ್.ಟಿ.ರವಿಕುಮಾರ್ ಅಧ್ಯಕ್ಷತೆ ವಹಿಸಿದ್ದ ಸಮಾರಂಭದಲ್ಲಿ ಶಾಸಕ ಎಲ್. ನಾಗೇಂದ್ರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು. ವನ್ಯಜೀವಿ ಸಂರಕ್ಷಣಾ ಪ್ರತಿಷ್ಠಾನದ ರಾಜಕುಮಾರ್ ದೇವರಾಜ್ ಅರಸು, ಫೋಟೋಗ್ರಫಿ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು. ಸಂಘದ ಪ್ರಧಾನ ಕಾರ್ಯದರ್ಶಿ ಎಂ. ಸುಬ್ರಹ್ಮಣ್ಯ, ಉಪಾಧ್ಯಕ್ಷ ಅನುರಾಗ್ ಬಸವರಾಜ್, ಖಜಾಂಚಿ ನಾಗೇಶ್ ಪಾಣತ್ತಲೆ, ಹಿರಿಯ ಪತ್ರಿಕಾ ಛಾಯಾಗ್ರಾಹಕ ಪ್ರಗತಿ ಗೋಪಾಲಕೃಷ್ಣ, ಶ್ರೀರಾಂ ಸೇರಿದಂತೆ ಸಂಘದ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು, ಎಲ್ಲಾ ಪತ್ರಿಕಾ ಛಾಯಾಗ್ರಾಹಕರು ಈ ಸಂದರ್ಭ ಭಾಗವಹಿಸಿದ್ದರು. ಮಧ್ಯಾಹ್ನ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್ ಸಹ ಭೇಟಿ ನೀಡಿ ಛಾಯಾಚಿತ್ರಗಳನ್ನು ವೀಕ್ಷಿಸಿದರು. ಮೈಸೂರು ವಿಶ್ವವಿದ್ಯಾನಿಲಯದ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ ವಿಭಾಗದ ಪ್ರೊ. ಸಪ್ನ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಸಂಜೆ 7 ಗಂಟೆವರೆಗೂ ತೆರೆದಿದ್ದ ಛಾಯಾಚಿತ್ರ ಪ್ರದರ್ಶನವನ್ನು ನೂರಾರು ಮಂದಿ ವೀಕ್ಷಿಸಿದರು.

'ಕಾಂಗ್ರೆಸ್ ಮಡಿಕೇರಿ ಚಲೋ'ಗೆ ಸಂಸದ ಪ್ರತಾಪ್‌ಸಿಂಹ ಪ್ರತಿಕ್ರಿಯೆ

ಟಿಪ್ಪುಗೆ ಹೆದರದ ಕೊಡವರು ಸಿದ್ದರಾಮಯ್ಯಗೆ ಹೆದರುತ್ತಾರಾ...!?



ಮೈಸೂರು, ಆ.22(ಆರ್‌ಕೆಬಿ)– ಟಿಪ್ಪು ಕೊಡಗಿಗೆ ಬಂದಾಗಲೇ ಹೆದರದ ಕೊಡಗಿನ ಜನರು, ಸಿದ್ದರಾಮಯ್ಯ ಬಂದರೆ ಹೆದರುತ್ತಾರಾ. ನೀವು ಮಡಿಕೇರಿ ಯಾತ್ರೆಗೆ ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ ಹಾಗೂ ಪಕ್ಕದ ಕೇರಳ ರಾಜ್ಯದ ಎಸ್‌ಡಿಪಿಐನವರನ್ನು ಕರೆ ತಂದರೂ ಕೊಡವರು ಹೆದರುವುದಿಲ್ಲ ಎಂದು ಮೈಸೂರು–ಕೊಡಗು ಸಂಸದ ಪ್ರತಾಪ್‌ಸಿಂಹ ಅವರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಆ.26 ರಂದು ಕಾಂಗ್ರೆಸ್ ಮಡಿಕೇರಿ ಚಲೋ ಯಾತ್ರೆ ಹಮ್ಮಿಕೊಂಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಸಿದ್ದರಾಮಯ್ಯ ಅವರಿಗೆ ತಿರುಗೇಟು ನೀಡಿದರು.

ಸಿದ್ದರಾಮಯ್ಯ ಬಳ್ಳಾರಿ ಪಾದಯಾತ್ರೆ ಮಾಡುವಾಗ ಕಾಂಗ್ರೆಸ್ಸಿನ ಅನೇಕ ಹಿರಿಯ ನಾಯಕರು ಪಾದಯಾತ್ರೆಯಲ್ಲಿ ಭಾಗವಹಿಸಿದ್ದರು. ಅಲ್ಲದೇ ಗಣಿ ವಿಚಾರದಲ್ಲಿ ರಾಜ್ಯದ ಜನರಿಗೆ ಆಕ್ರೋಶವಿತ್ತು. ಆ ಸಂದರ್ಭದಲ್ಲಿ ಬಿಜೆಪಿ ಕೆಜೆಪಿಯಾಗಿ ಒಡೆದಿತ್ತು. ಇದರ ಫಲವಾಗಿ ಸಿದ್ದರಾಮಯ್ಯ 119 ಸೀಟುಗಳನ್ನು ಗಳಿಸಿ ಮುಖ್ಯಮಂತ್ರಿಯಾಗಲು ಸಾಧ್ಯವಾಗಿತ್ತು ಎಂದು ತಿಳಿಸಿದರು. ಮಡಿಕೇರಿ ಚಲೋ ಪಾದಯಾತ್ರೆಗೆ ಅನುಮತಿ ಕೊಡುವ ವಿಚಾರ ಕುರಿತು ಪ್ರಸ್ತಾಪಿಸಿದ ಅವರು, ಗುಪ್ತಚರ ವರದಿ ಆಧಾರದ ಮೇಲೆ ಅದನ್ನು ಸರ್ಕಾರ ನಿರ್ಧಾರ ಮಾಡುತ್ತದೆ ಎಂದರು. 2017ರಲ್ಲಿ ನಾಟಿ ಕೋಳಿ ತಿಂದು ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಎದುರು ನಂದಿ ಧ್ವಜ ಪೂಜೆ ಮಾಡಿ, ನಂತರ ಚಾಮುಂಡೇಶ್ವರಿಗೆ ಪುಷ್ಪಾರ್ಚನೆ ಮಾಡಿ ದಸರಾ ಉದ್ಘಾಟನೆ ಮಾಡಿದ ಸಿದ್ದರಾಮಯ್ಯಗೆ ಮುಂದೆ ಚಾಮುಂಡೇಶ್ವರಿ ತಾಯಿ ಮತ್ತೆ ಪೂಜೆ ಸಲ್ಲಿಸುವ ಅವಕಾಶವನ್ನೇ ಕೊಡಲಿಲ್ಲ. ಅವರಿಗೆ ಹಿಂದೂ ಧರ್ಮದ ಆಚಾರಗಳ ಬಗ್ಗೆ ಎಷ್ಟು ವಿರೋಧಿ ಭಾವನೆ ಇದೆಯೆಂದರೆ, ಮಾಂಸ ತಿಂದು ನಾಡದೇವತೆ ಚಾಮುಂಡೇಶ್ವರಿಗೆ ಪುಷ್ಪಾರ್ಚನೆ ಮಾಡಿದರು. ಈಗ ಮಡಿಕೇರಿಯ ಬಸವೇಶ್ವರ ದೇವಾಲಯಕ್ಕೆ ಹೋಗಿ ಬಸವ ತತ್ವದ ಅನುಯಾಯಿಗಳಿಗೆ ಭಾರೀ ನೋವುಂಟು ಮಾಡಿದ್ದಾರೆ ಎಂದರು.

ಪ್ರೆಸ್ಟೀಜ್ ಕುಕ್ಕರ್ ನಕಲಿ ಬಿಡಿಭಾಗಗಳ ಮಾರಾಟ: ಪೊಲೀಸರಿಗೆ ದೂರು

ಮೈಸೂರು, ಆ.22– ಪ್ರೆಸ್ಟೀಜ್ ಕುಕ್ಕರ್‌ನ ನಕಲಿ ಬಿಡಿಭಾಗಗಳನ್ನು ಮಾರಾಟ ಮಾಡುತ್ತಿದ್ದ ಬಗ್ಗೆ ದೂರು ದಾಖಲಾಗಿದೆ.

ಮೈಸೂರಿನ ಸಂಗಂ ಟಾಕೀಸ್ ಹಿಂಭಾಗವಿರುವ ಶ್ರೀಲಕ್ಷ್ಮೀ ಹೋಂ ಅಪ್ಲೈಯನ್ಸ್ ಮತ್ತು ಹಳ್ಳದಕೇರಿಯಲ್ಲಿರುವ ರಾಜಾರಾಂ ಸ್ಪೇರ್‌ಪಾರ್ಟ್ಸ್ ಅಂಗಡಿಗಳಲ್ಲಿ ಪ್ರೆಸ್ಟೀಜ್ ಕುಕ್ಕರ್‌ನ ನಕಲಿ ಬಿಡಿ ಭಾಗಗಳನ್ನು ಮಾರಾಟ ಮಾಡಲಾಗುತ್ತಿದೆ ಎಂದು ಟಿಟಿಕೆ ಪ್ರೆಸ್ಟೀಜ್ ಲಿಮಿಟೆಡ್‌ನ ಅಧಿಕೃತ ಪ್ರತಿನಿಧಿ ಎಸ್.ಅರುಣ್ ನೀಡಿದ ದೂರನ್ನು ದಾಖಲಿಸಿಕೊಂಡಿರುವ ಲಷ್ಕರ್ ಠಾಣೆ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

23.08.2022 ಮಂಗಳವಾರ, ಮಳೆ ನಕ್ಷತ್ರ : ಮಖೆ, 17.08.2022 ರಿಂದ 30.08.2022
ಶ್ರೀ ಶುಭಕೃತುನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ
ತಿಥಿ: ದ್ವಾದಶಿ, ನಕ್ಷತ್ರ : ಆರಿದ್ರಾ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಪರಿವರ್ತನಾ ವಿವಿಧೋದ್ದೇಶ ಮಹಿಳಾ ಸೌಹಾರ್ದ ಸಹಕಾರ ಸಂಘ :** ಸರ್ವ ಸದಸ್ಯರ ವಾರ್ಷಿಕ ಮಹಾಸಭೆ, ಅಧ್ಯಕ್ಷತೆ : ಸಂಘದ ಅಧ್ಯಕ್ಷೆ ಕೆ.ಎಸ್. ಲಲಿತ, ಸ್ಥಳ: ಮೈಸೂರು ಜಿಲ್ಲಾ ಸಹಕಾರ ಯೂನಿಯನ್, ಚಾಮರಾಜ ಜೋಡಿ ರಸ್ತೆ, ಬೆಳಗ್ಗೆ 10ಕ್ಕೆ.

■ **ಪ್ರವಾಸಿ ವಾಹನ ಚಾಲಕರ ಸಹಕಾರ ಸಂಘ :** ಸರ್ವ ಸದಸ್ಯರ ವಾರ್ಷಿಕ ಮಹಾಸಭೆ, ಅಧ್ಯಕ್ಷತೆ : ಸಂಘದ ಅಧ್ಯಕ್ಷ ಎಸ್. ನಾಗರಾಜು, ಸ್ಥಳ: ಭಾರತ್ ಇಂಟರ್‌ನ್ಯಾಷನಲ್ ಟ್ರಾವೆಲ್ಸ್, ಕಾಂತರಾಜ ಅರಸ್ ರಸ್ತೆ, ಬೆಳಗ್ಗೆ 11ಕ್ಕೆ.

■ **ಕಾಲೇಜು ಶಿಕ್ಷಣ ಇಲಾಖೆ, ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು :** ಸಾಂಸ್ಕೃತಿಕ ಚಟುವಟಿಕೆಗಳ ಸಮಾರೋಪ ಸಮಾರಂಭ, ಸಮಾರೋಪ ನುಡಿ : ಶಾಸಕ ಜಿ.ಟಿ. ದೇವೇಗೌಡ, ಮುಖ್ಯ ಅತಿಥಿಗಳು : ವಿಧಾನಪರಿಷತ್ ಸದಸ್ಯ ಮರಿತಿಬ್ಬೇಗೌಡ, ಹೂಟಗಳ್ಳಿ ನಗರಸಭೆ ಪೌರಾಯುಕ್ತ ಟಿ.ಎನ್. ನರಸಿಂಹಮೂರ್ತಿ, ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಆರ್. ಅಶೋಕ್‌ಕುಮಾರ್, ಮೈಸೂರು ಕೃಷ್ಣಮೂರ್ತಿ, ಕ್ರೀಡಾಪಟು ಸಿ. ನವ್ಯಶ್ರೀ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಡಾ. ಜಿ.ಹೆಚ್. ಮಹದೇವಸ್ವಾಮಿ, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 11ಕ್ಕೆ.

■ **ಶ್ರೀ ದುರ್ಗಾ ಫೌಂಡೇಷನ್ :** ಹೆಮ್ಮೆಯ ಭಾರತೀಯ ಪ್ರಶಸ್ತಿ ಪ್ರದಾನ ಸಮಾರಂಭ, ಮುಖ್ಯ ಅತಿಥಿಗಳು : ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ, ಮಹಿಳಾ ಕಾಂಗ್ರೆಸ್ ರಾಜ್ಯಾಧ್ಯಕ್ಷೆ ಪುಷ್ಪಾ ಅಮರನಾಥ್, ಕರಾಮುವಿವಿ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಅಧ್ಯಕ್ಷ ಡಾ. ಆರ್.ಎಚ್. ಪವಿತ್ರ, ಬಸವರಾಜ ಪೂಜಾರ, ಬಿಜೆಪಿ ಮುಖಂಡರಾದ ಯಶಸ್ವಿನಿ ಸೋಮಶೇಖರ್, ಚಲನಚಿತ್ರ ನಟಿ ಮೇರಿ ಸುನಿತಾ ಸಿಂಗ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ರಾಜಾರಾಮ್, ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್, ಎನ್.ಎಂ. ನವೀನ್ ಕುಮಾರ್, ಒಕ್ಕಲಿಗರ ಸಂಘದ ನಿರ್ದೇಶಕ ಸಿ.ಜಿ. ಗಂಗಾಧರ್, ಸ್ಥಳ: ಸಿಪಾಯಿ ಗ್ರ್ಯಾಂಡ್ ಹೋಟೆಲ್, ಸಂಜೆ 5ಕ್ಕೆ.

■ **ಶ್ರೀ ಸುತ್ತೂರು ಮಠ (ಮೈಸೂರು ಶಾಖೆ), ಚಾಮುಂಡಿಬೆಟ್ಟದ ತಪ್ಪಲು:** ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಜೆಎಸ್‌ಎಸ್ ಮಹಾವಿದ್ಯಾಪೀಠದ ಪ್ರಕಟಣಾ ವಿಭಾಗದ ನಿರ್ದೇಶಕ ಪ್ರೊ. ಮೊರಬದ ಮಲ್ಲಿಕಾರ್ಜುನ ಅವರಿಂದ ಶರಣ ಸಂಸ್ಕೃತಿ ಕುರಿತು ಪ್ರವಚನ, ಸಾಮೂಹಿಕ ಪ್ರಾರ್ಥನೆ, ಸ್ಥಳ: ಮಠದ ಆವರಣ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.05 ಚಿಂತನ, 6.35 ಶ್ರದ್ಧೆಯ ಶಿಲ್ಪ–ಮೈಸೂರು ಸುತ್ತಲಿನ ದೇಗುಲಗಳ ಪರಿಚಯ, ಪ್ರಸ್ತುತಿ– ಡಾ. ಟಿ.ಎಸ್. ಗೋಪಾಲ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಕಾರ್ಯಕ್ರಮ ಸರಣಿ, ಗಾಯನ– ಸಿ.ವಿಶ್ವನಾಥ್, ವ್ಯಾಖ್ಯಾನ– ಡಾ.ಜಿ.ಆರ್. ತಿಪ್ಪೇಸ್ವಾಮಿ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ–ದೂರ ಸರಿದರು ಕಾದಂಬರಿಯ ಪ್ರಸ್ತುತಿ– ಉಮೇಶ್.ಎಸ್., 9.30 ವೃತ್ತಿ ಮಾರ್ಗದರ್ಶನ–ಸಮಾಜ ಕಾರ್ಯ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಡಾ. ಎಂ. ಭಾನುಮೂರ್ತಿ ಅವರೊಂದಿಗೆ ಮಾತುಕತೆ, 10.00 ಗಾನ ರಸೋತ್ತುಂಗ ಶ್ರೀ ಶ್ಯಾಮಕೃಷ್ಣ–ಶ್ರೀ ಶ್ಯಾಮಾಶಾಸ್ತ್ರಿಗಳ ಕೃತಿಗಳನ್ನಾಧರಿಸಿದ ಕಾರ್ಯಕ್ರಮ, 10.30 ನಮ್ಮ ಆರೋಗ್ಯ–ಕ್ಯಾನ್ಸರ್ ಜಾಗೃತಿ ಕುರಿತು ಪ್ರಾಯೋಜಿತ ನೇರ ಫೋನ್ ಇನ್ ಕಾರ್ಯಕ್ರಮ

ಮಧ್ಯಾಹ್ನ: 12.05ವನಿತಾ ವಿಹಾರ–ಸ್ತ್ರೀ ಚೇತನ–ವಿಶೇಷಚೇತನರಾದ ಡಾ. ಮಾಲಾಮಳವಳ್ಳಿ ಅವರೊಂದಿಗೆ ಮಾತುಕತೆ. ಪ್ರಸ್ತುತಿ– ಅಬ್ದುಲ್ ರಶೀದ್, 12.30 ದೇವರನಾಮ, 12.45 ಕಾದಂಬರಿಕಾರ ಡಾ. ಗಜಾನನ ಶರ್ಮ ಅವರೊಂದಿಗೆ ಸಂದರ್ಶನ, ಸಂದರ್ಶಕರು– ದಿವಾಕರ ಹೆಗಡೆ, 1.20 ಭಾವಗೀತೆ–ಕೆ.ಆರ್. ಹರ್ಷದೀಪ್, 3.00 ಎನ್.ರಮಣಿ ಮತ್ತು ತ್ಯಾಗರಾಜನ್– ಯುಗಳ ವೇಣುವಾದನ, 4.00 ಕಥಾ ಕಾಲಕ್ಷೇಪ "ಭಕ್ತ ಸುಧಾಮ", ಪ್ರಸ್ತುತಿ– ವಿದ್ವಾನ್ ಭದ್ರಗಿರಿ ಅಚ್ಯುತದಾಸರು, 6.50 ಕೃಷಿರಂಗ–ಕಿಸಾನ್‌ವಾಣಿ, ಕುಕ್ಕುಟ ಕೃಷಿ ಅಭಿವೃದ್ಧಿ ಯೋಜನೆಗಳು ಕುರಿತು ಡಾ.ಆನಂದಕುಮಾರ್ ಅವರೊಡನೆ ಸಂದರ್ಶನ, 9.30 ಓ.ಎಸ್. ತ್ಯಾಗರಾಜನ್–ಹಾಡುಗಾರಿಕೆ, 10.00 ಕಾವ್ಯವಾಚನ, ವಾಚನ– ಎಂ.ವಿ. ಶುಭ, ವ್ಯಾಖ್ಯಾನ– ದಿನಮಣಿ ಶ್ರೀನಿವಾಸಮೂರ್ತಿ

ಸುತ್ತೂರಿನಲ್ಲಿಂದು

■ **ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠ:** ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಪ್ರವಚನ: ಜೆಎಸ್‌ಎಸ್ ಕಾಲೇಜು ಪ್ರಾಧ್ಯಾಪಕ ಪ್ರೊ. ಹೆಚ್.ಟಿ. ದೇವಣ್ಣ, ವಾಚನ: ಜೆಎಸ್‌ಎಸ್ ಪ್ರೌಢಶಾಲೆ ದೈಹಿಕ ಶಿಕ್ಷಕ ಡಿ.ಎಂ. ಸಿದ್ದಲಿಂಗಸ್ವಾಮಿ, ಸಾಮೂಹಿಕ ಪ್ರಾರ್ಥನೆ, ಸ್ಥಳ: ಸುತ್ತೂರು ಮಠ, ಸಂಜೆ 6.30ರಿಂದ.

ರತ್ನಪುರಿಯಲ್ಲಿಂದು

■ **ಮಹಾಜನ ವಿದ್ಯಾಸಂಸ್ಥೆ, ರಾಜ್ಯ ಕಾನೂನು ವಿಶ್ವವಿದ್ಯಾಲಯ (ಹುಬ್ಬಳ್ಳಿ), ಎಸ್‌ಬಿಆರ್‌ಆರ್ ಮಹಾಜನ ಕಾಲೇಜು (ರಾಷ್ಟ್ರೀಯ ಸೇವಾ ಯೋಜನೆಯ ಘಟಕ):** ವಾರ್ಷಿಕ ವಿಶೇಷ ಶಿಬಿರ 2021–22, ಬೆಳಗ್ಗೆ 6.30ಕ್ಕೆ ಧ್ವಜಾರೋಹಣ, ಸಂಜೆ 5.30ಕ್ಕೆ ಪ್ರಾಧ್ಯಾಪಕ ಡಾ. ಹೆಚ್.ಆರ್. ತಿಮ್ಮೇಗೌಡ ಅವರಿಂದ ಪ್ರಸ್ತುತ ಸಮಾಜಕ್ಕೆ ಅಂಬೇಡ್ಕರ್‌ರವರ ಕೊಡುಗೆಗಳು ಕುರಿತು ಉಪನ್ಯಾಸ, ಸಂಜೆ 6.30 ರಿಂದ ಸಾಂಸ್ಕೃತಿಕ ಕಾರ್ಯಕ್ರಮ, ಸ್ಥಳ: ಸರ್ಕಾರಿ ಪ್ರೌಢಶಾಲೆ, ರತ್ನಪುರಿ, ಹುಣಸೂರು ತಾ.

ನಾಗವಾಲ ಗ್ರಾಮ ಪಂಚಾಯಿತಿಯಲ್ಲಿಂದು

■ **ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್ :** ಸ್ಯಾನಿಟರಿ ಪ್ಯಾಡ್ ಮುಕ್ತ ಗ್ರಾಮ ಪಂಚಾಯಿತಿ ನಾಗವಾಲ, ಉದ್ಘಾಟನೆ : ಶಾಸಕ ಜಿ.ಟಿ. ದೇವೇಗೌಡ, ಅಧ್ಯಕ್ಷತೆ : ನಾಗವಾಲ ಗ್ರಾಪಂ ಅಧ್ಯಕ್ಷ ಸಿ. ನರೇಂದ್ರ, ಮುಖ್ಯ ಅತಿಥಿಗಳು : ಸಂಸದ ಪ್ರತಾಪ್ ಸಿಂಹ, ಸ್ಥಳ: ನಾಗವಾಲ ಗ್ರಾಮ ಪಂಚಾಯಿತಿ, ಬೆಳಗ್ಗೆ 9.30ಕ್ಕೆ.

ಎಂಆರ್‌ಸಿ ಅಧ್ಯಕ್ಷರಾಗಿ ವೈ.ಬಿ.ಗಣೇಶ್ ಆಯ್ಕೆ


ಅನಂತರಾಜ ಅರಸ್, ಹೆಚ್.ಕೆ. ರಮೇಶ್ ನೂತನ ಸ್ಟೀವರ್ಡ್ಸ್



ವೈ.ಬಿ. ಗಣೇಶ್



ಅನಂತರಾಜ್ ಅರಸ್



ರಮೇಶ್



ಅಜಿತ್‌ಕುಮಾರ್



ಪರೀಕ್ಷಿತ್

ಮೈಸೂರು, ಆ.22– ಮೈಸೂರು ರೇಸ್ ಕ್ಲಬ್ (ಎಂಆರ್‌ಸಿ)ನ 2022–23ನೇ ಸಾಲಿನ ಅಧ್ಯಕ್ಷರಾಗಿ ವೈ.ಬಿ. ಗಣೇಶ್ ಆಯ್ಕೆಯಾಗಿದ್ದಾರೆ. ಇಂದು ನಡೆದ ಮ್ಯಾನೇಜಿಂಗ್ ಕಮಿಟಿ ಸಭೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ವೈ.ಬಿ. ಗಣೇಶ್ ಮತ್ತು ಕೆ.ಜಿ. ಬಾಲಕೃಷ್ಣ ಸ್ಪರ್ಧಿಸಿದ್ದರು. ಅಂತಿಮವಾಗಿ ವೈ.ಬಿ. ಗಣೇಶ್ ಅವರು ಅಧ್ಯಕ್ಷರಾಗಿ ಆಯ್ಕೆಯಾದರು. ಇದೇ ವೇಳೆ ಎರಡು ಸ್ಟೀವರ್ಡ್ಸ್ ಸ್ಥಾನಕ್ಕೆ ಕೆ.ಜಿ. ಅನಂತರಾಜ್ ಅರಸ್, ಹೆಚ್.ಕೆ. ರಮೇಶ್ ಹಾಗೂ ಕಮಿಟಿ ಸದಸ್ಯರಾಗಿ ಡಾ. ಎ.ಎಸ್. ಅಜಿತ್‌ಕುಮಾರ್ ಅರಸ್, ಕೆ.ವಿ. ಪರೀಕ್ಷಿತ್ ಆಯ್ಕೆಯಾಗಿದ್ದಾರೆ ಎಂದು ಎಂಆರ್‌ಸಿ ಕಾರ್ಯದರ್ಶಿ ಹಾಗೂ ಸಿಇಓ ಎನ್.ಹೆಚ್.ಎಸ್. ಮಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಇತ್ತೀಚೆಗೆ ನಿಧನರಾದ ಮೈಸೂರಿನ ಪ್ರಖ್ಯಾತ ವೈದ್ಯ, ಭಾರತ್ ಕ್ಯಾನ್ಸರ್ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾಗಿದ್ದ ಡಾ.ಎಂ.ಎಸ್.ವಿಶ್ವೇಶ್ವರ ಅವರ ಮನೆಗೆ ಶಾಸಕ ಜಿ.ಟಿ.ದೇವೇಗೌಡ ಸೋಮವಾರ ಭೇಟಿ ನೀಡಿ, ಡಾ.ವಿಶ್ವೇಶ್ವರ ಅವರ ಪತ್ನಿ ಮತ್ತು ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಜಿ.ಡಿ.ಹರೀಶ್‌ಗೌಡ, ಮುಖಂಡ ಬೆಳವಾಡಿ ಶಿವಮೂರ್ತಿ ಮತ್ತಿತರರು ಹಾಜರಿದ್ದರು.

ಟಿಪ್ಪರ್ ಹರಿದು 25ಕ್ಕೂ ಹೆಚ್ಚು ಕುರಿ ಸಾವು

ಮೈಸೂರು, ಆ.22(ಎಂಕೆ)– ಟಿಪ್ಪರ್ ಹರಿದು 25–30 ಕುರಿಗಳು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಮೈಸೂರಿನ ರಿಂಗ್ ರಸ್ತೆಯಲ್ಲಿ ಸೋಮವಾರ ಮಧ್ಯಾಹ್ನ ಸಂಭವಿಸಿದೆ.

ಮಂಡ್ಯ ಜಿಲ್ಲೆ ಬೆಟ್ಟಹಳ್ಳಿಯ ಕೆಂಪರಾಜು ಎಂಬುವರಿಗೆ ಸೇರಿದ ಕುರಿಗಳನ್ನು ಇಂದು ಮಧ್ಯಾಹ್ನ 2.30ರ ಸುಮಾರಿಗೆ ರಸ್ತೆ ದಾಟಿಸುವಾಗ ಮಹದೇವಪುರದ ಕಡೆಯಿಂದ ರಿಂಗ್ ರಸ್ತೆಯ ನಾರಾಯಣ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ಬಳಿ ವೇಗವಾಗಿ ಬಂದ ಟಿಪ್ಪರ್ ಕುರಿಮಂದೆ ಮೇಲೆ ಹರಿದಿದೆ. ಮಣ್ಣು ತುಂಬಿದ್ದ ಟಿಪ್ಪರ್ ಲಾರಿ ಹರಿದ ಪರಿಣಾಮ ಸ್ಥಳದಲ್ಲೇ 25–30 ಕುರಿಗಳು ಅಸುನೀಗಿದ್ದು, ಲಾರಿ ವಶಪಡಿಸಿಕೊಂಡು ಚಾಲಕನನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಉದಯಗಿರಿ ಠಾಣೆ ಪೊಲೀಸರು ತಿಳಿಸಿದ್ದಾರೆ.

ಆನ್‌ಲೈನ್‌ನಲ್ಲಿ ಹೆಡ್‌ಕಾನ್‌ಸ್ಟೇಬಲ್‌ಗೆ ವಂಚನೆ

● ಬ್ಯಾಂಕ್ ಖಾತೆ–ಕ್ರೆಡಿಟ್ ಕಾರ್ಡ್ ಅಪ್‌ಡೇಟ್ ನೆಪದಲ್ಲಿ 48 ಸಾವಿರ ರೂ. ಪಂಗನಾಮ ● ಮಹಿಳೆಗೆ ಬಹುಮಾನ ಆಸೆ ತೋರಿ 6.05 ಲಕ್ಷ ರೂ. ವಂಚನೆ ● ಪಾರ್ಟ್‌ಟೈಂ ಕೆಲಸದ ಆಮಿಷ ತೋರಿ ಸಾಫ್ಟ್‌ವೇರ್ ಇಂಜಿನಿಯರ್‌ಗೆ 1.37 ಲಕ್ಷ ಮೋಸ

ಮೈಸೂರು, ಆ.22– ಬ್ಯಾಂಕ್ ಖಾತೆ ಹಾಗೂ ಕ್ರೆಡಿಟ್ ಕಾರ್ಡ್ ಅಪ್‌ಡೇಟ್ ಮಾಡಬೇಕೆಂದು ಕರೆ ಮಾಡಿ ಪೊಲೀಸ್ ಹೆಡ್‌ಕಾನ್‌ಸ್ಟೇಬಲ್‌ವೊಬ್ಬರಿಗೆ ಆನ್‌ಲೈನ್ ಮೂಲಕ 48 ಸಾವಿರ ರೂ. ವಂಚಿಸಿರುವ ಬಗ್ಗೆ ವರದಿಯಾಗಿದೆ.

ಕ್ರೈಂ ಬಾಕ್ಸ್

ಸರಗೂರು ಸರ್ಕಲ್ ಇನ್ಸ್‌ಪೆಕ್ಟರ್ ಕಚೇರಿಯ ಹೆಡ್‌ಕಾನ್‌ಸ್ಟೇಬಲ್ ಮೊಹಮ್ಮದ್ ಅತ್ತಾಹರ್ (43) ವಂಚನೆಗೊಳಗಾದವರಾಗಿದ್ದು, ಇವರ ಮೊಬೈಲ್‌ಗೆ ಕರೆ ಮಾಡಿದ್ದ ವಂಚಕ ಅವರ ಬ್ಯಾಂಕ್ ಅಕೌಂಟ್ ಮತ್ತು ಕ್ರೆಡಿಟ್ ಕಾರ್ಡ್ ಅಪ್‌ಡೇಟ್ ಮಾಡಬೇಕೆಂದು ತಿಳಿಸಿ ಕ್ವಿಕ್ ಸಪೋರ್ಟ್ ಆ್ಯಪ್ ಅನ್ನು ಡೌನ್‌ಲೋಡ್ ಮಾಡಿಕೊಳ್ಳುವಂತೆ ತಿಳಿಸಿದ್ದಾನೆ. ಅವರು ಆ್ಯಪ್ ಡೌನ್‌ಲೋಡ್ ಮಾಡಿ ಓಟಿಪಿ ನಮೂದಿಸುತ್ತಿದ್ದಂತೆಯೇ ಅವರ ಖಾತೆಯಿಂದ 48 ಸಾವಿರ ರೂ. ಕಡಿತವಾಗಿದೆ. ಈ ಸಂಬಂಧ ಮೈಸೂರು ಜಿಲ್ಲಾ ಸೆನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಹುಮಾನದ ಆಸೆ ತೋರಿ ಮೋಸ: ಬಹುಮಾನ ಬಂದಿದೆ ಎಂದು ಕರೆ ಮಾಡಿ ಮಹಿಳೆಯೋರ್ವರಿಂದ 6.05 ಲಕ್ಷ ರೂ. ವರ್ಗಾವಣೆ ಮಾಡಿಸಿಕೊಂಡು ವಂಚನೆ ಎಸಗಲಾಗಿದೆ. ಸರಸ್ವತಿಪುರಂ ನಿವಾಸಿ ಅಪೂರ್ವ ಲಕ್ಷ್ಮಣ್ (27) ಎಂಬುವರ ಮೊಬೈಲ್‌ಗೆ ಡೆರ್ಮಾಕೊ ಎಂಬ ಕಂಪನಿ ಹೆಸರಿನಲ್ಲಿ ಕರೆ ಮಾಡಿದ ವ್ಯಕ್ತಿ, ಅವರಿಗೆ ಬಹುಮಾನ ಬಂದಿರುವುದಾಗಿಯೂ 5 ಸಾವಿರ ರೂ.ಗಳಿಗೆ ಶಾಪಿಂಗ್ ಮಾಡಿದರೆ ಬಹುಮಾನ ನೀಡುವುದಾಗಿಯೂ ತಿಳಿಸಿದ್ದಾನೆ. ನಂತರ ಅವರಿಂದ 6,05,618 ರೂ.ಗಳನ್ನು ಆನ್‌ಲೈನ್ ಮೂಲಕ ವರ್ಗಾವಣೆ ಮಾಡಿಸಿಕೊಂಡು ವಂಚನೆ ಎಸಗಲಾಗಿದೆ.

ಪಾರ್ಟ್‌ಟೈಂ ಕೆಲಸದ ಆಮಿಷ: ಮತ್ತೊಂದು ಪ್ರಕರಣದಲ್ಲಿ ಪಾರ್ಟ್‌ಟೈಂ ಜಾಬ್ ಕೊಡಿಸುವುದಾಗಿ ನಂಬಿಸಿ ಸಾಫ್ಟ್‌ವೇರ್ ಇಂಜಿನಿಯರ್‌ಗೆ 1.37 ಲಕ್ಷ ರೂ. ವಂಚಿಸಲಾಗಿದೆ. ಮಹದೇಶ್ವರ ಬಡಾವಣೆ ನಿವಾಸಿ ಎಸ್. ಸುಶ್ಮಿತಾ (27) ಅವರು ಆನ್‌ಲೈನ್‌ನಲ್ಲಿ ಪಾರ್ಟ್‌ಟೈಂ ಜಾಬ್ ಹುಡುಕುತ್ತಿದ್ದಾಗ ಕರೆ ಮಾಡಿದ ವ್ಯಕ್ತಿಯು ಜಾಬ್‌ಗೆ ನೋಂದಾಯಿಸಿಕೊಳ್ಳುವಂತೆ ತಿಳಿಸಿ, ಲಿಂಕ್‌ವೊಂದನ್ನು ಕಳುಹಿಸಿದ್ದಾನೆ. ನಂತರ ಅವರಿಂದ 1,37,602 ರೂ.ಗಳನ್ನು ಆನ್‌ಲೈನ್ ಮೂಲಕ ವರ್ಗಾವಣೆ ಮಾಡಿಸಿಕೊಂಡು, ಕೆಲವು ಟಾಸ್ಕ್‌ಗಳನ್ನು ನೀಡಿದ್ದಾನೆ. ಟಾಸ್ಕ್ ಪೂರ್ಣಗೊಳಿಸಿದ ನಂತರವೂ ಅವರು ಪಾವತಿಸಿದ್ದ ಹಣವಾಗಲಿ, ಟಾಸ್ಕ್‌ನ ವೇತನವಾಗಲೀ ನೀಡದೆ ವಂಚಿಸಲಾಗಿದೆ. ಪ್ರಕರಣಗಳು ಮೈಸೂರು ನಗರ ಸೆನ್ ಠಾಣೆಯಲ್ಲಿ ದಾಖಲಾಗಿದೆ.

ವಸತಿ ಬಡಾವಣೆಗೆ ವಿದ್ಯುತ್ ಸಂಪರ್ಕ ಶುಲ್ಕ ಪಾವತಿ ಸಂಬಂಧ ನಕಲಿ ರಶೀದಿ ಸೃಷ್ಟಿ

ಪೊಲೀಸರಲ್ಲಿ ದೂರು ದಾಖಲು

ಮೈಸೂರು, ಆ.22– ವಸತಿ ಬಡಾವಣೆಗೆ ಸಂಬಂಧಿಸಿದಂತೆ ವಿದ್ಯುತ್ ಸಂಪರ್ಕದ ಶುಲ್ಕ ಪಾವತಿಸಿದಂತೆ ಕೆಇಬಿಯ ನಕಲಿ ರಶೀದಿ ತಯಾರಿಸಿರುವ ಬಗ್ಗೆ ದೂರು ದಾಖಲಾಗಿದೆ.

ವರುಣಾ ಹೋಬಳಿ ವರಕೋಡು ಗ್ರಾಮದ ಸರ್ವೆ ನಂ.168/1, 168/2ರಲ್ಲಿ ಒಟ್ಟು2 ಎಕರೆ 27 ಗುಂಟೆ ವಿಸ್ತೀರ್ಣದ ಜಮೀನಿನಲ್ಲಿ ವಸತಿ ಬಡಾವಣೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ವಿದ್ಯುತ್ ಸಂಪರ್ಕಕ್ಕೆ ಕೆಇಬಿ ವರುಣಾ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಕಚೇರಿಯಿಂದ ಕಾಮಗಾರಿ ದೃಢೀಕರಣ ಪತ್ರವನ್ನು ಲೋಕೇಶ್ ಆರಾಧ್ಯ ಎಂಬುವರಿಗೆ ನೀಡಲಾಗಿದೆ. ಅದಕ್ಕೆ ಸಂಬಂಧಿಸಿದಂತೆ ಶುಲ್ಕ ಪಾವತಿಸಿದ ರಶೀದಿಯನ್ನು ಕೂಡ ಲಗತ್ತಿಸಲಾಗಿದೆ ಎಂದು ಕೂಡ ಪೊಲೀಸರಿಗೆ ನೀಡಿರುವ ದೂರಿನಲ್ಲಿ ತಿಳಿಸಲಾಗಿದೆ.

ಇದಕ್ಕೆ ಸಂಬಂಧಿಸಿದಂತೆ ತಳೂರು ಮಹದೇವಸ್ವಾಮಿ ಎಂಬುವರು ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿ ಸಲ್ಲಿಸಿದಾಗ ಸದರಿ ಕಾಮಗಾರಿಗೆ ಸಂಬಂಧಪಟ್ಟ ದಾಖಲೆಗಳು ಕೆಇಬಿ ಇಲಾಖೆಗೆ ಸಂಬಂಧಪಟ್ಟಿದ್ದಲ್ಲ ಎಂದು ಹಿಂಬರಹ ನೀಡಲಾಗಿದೆ. ಈ ಹಿನ್ನೆಲೆಯಲ್ಲಿ ಅವರು ನೀಡಿದ ದೂರಿನ ಮೇರೆಗೆ ಜಿಪಂ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ನಕಲಿ ರಶೀದಿ ಸೃಷ್ಟಿ ಮಾಡಿರುವವರ ವಿರುದ್ಧ ಪೊಲೀಸ್ ಠಾಣೆಗೆ ದೂರು ಸಲ್ಲಿಸುವಂತೆ ತಾಪಂ ಕಾರ್ಯನಿರ್ವಹಣಾಧಿಕಾರಿಗಳಿಗೆ ಅಧಿಕೃತವಾಗಿ ತಿಳಿಸಿದ್ದರೂ ಕೂಡ ಅವರು ಪೊಲೀಸರಿಗೆ ದೂರು ನೀಡಿಲ್ಲ ಎಂದು ಆರೋಪಿಸಲಾಗಿದೆ.

ಈ ಪ್ರಕರಣದಲ್ಲಿ ಭಾಗಿಯಾಗಿರುವ ವರಕೋಡು ಗ್ರಾಮದ ಎನ್. ಅಭಿಷೇಕ್, ಲೋಕೇಶ್ ಆರಾಧ್ಯ, ಕೆಇಬಿ ವರುಣಾ ವಿಭಾಗದ ಎಇಇ ಜಗದೀಶ್ ಮತ್ತು ತಾಪಂ ಕಾರ್ಯನಿರ್ವಹಣಾಧಿಕಾರಿ ರಮೇಶ್ ವಿರುದ್ಧ ಕ್ರಮ ಕೈಗೊಳ್ಳುವಂತೆ ಸ್ನೇಹಮಯಿ ಕೃಷ್ಣ ಮತ್ತು ತಳೂರು ಮಹದೇವಸ್ವಾಮಿ ಎಂಬುವರು ನೀಡಿದ ದೂರಿನ ಮೇರೆಗೆ ಈ ನಾಲ್ವರ ವಿರುದ್ಧ ಭಾರತೀಯ ದಂಡ ಸಂಹಿತೆ 34, 420, 465, 468ರಡಿ ಪ್ರಕರಣ ದಾಖಲಿಸಿಕೊಂಡಿರುವ ನಜರ್‌ಬಾದ್ ಠಾಣೆ ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

ಸಂಸದೀಯ ಸಮಿತಿ ಸದಸ್ಯರಿಂದ

ಮೈಸೂರಲ್ಲಿ ರೈಲ್ವೆ ವಿಸ್ತರಣಾ ಯೋಜನೆಗಳ ಪರಿಶೀಲನೆ

● ವಿಭಾಗೀಯ ರೈಲ್ವೆ ವ್ಯವಸ್ಥಾಪಕರೊಂದಿಗೆ ಸಮಾಲೋಚನೆ ● ಪ್ರಯಾಣಿಕರ ಸ್ನೇಹಿ ಸೌಕರ್ಯಕ್ಕೆ ಹಲವು ಸಲಹೆ, ಸೂಚನೆ

ಮೈಸೂರು, ಆ. 22 (ಆರ್‌ಕೆ)– ರೈಲ್ವೆ ಕುರಿತ ಸಂಸದೀಯ ಸ್ಥಾಯಿ ಸಮಿತಿ ಅಧ್ಯಕ್ಷ ರಾಧಾ ಮೋಹನ್ ಸಿಂಗ್ ನೇತೃತ್ವದ 13 ಸದಸ್ಯರು ಇಂದು ಮೈಸೂರು ರೈಲು ನಿಲ್ದಾಣಕ್ಕೆ ಭೇಟಿ ನೀಡಿ, ವಿಸ್ತರಣಾ ಮತ್ತು ಅಭಿವೃದ್ಧಿ ಯೋಜನೆಗಳ ಕುರಿತಂತೆ ಪರಿಶೀಲನೆ ನಡೆಸಿದರು.

ವಿವಿಧ ರಾಜ್ಯಗಳ 12 ಮಂದಿ ಸಂಸತ್ ಸದಸ್ಯರೊಂದಿಗೆ ಭಾನುವಾರ ಮಧ್ಯಾಹ್ನ ಮೈಸೂರಿಗೆ ಆಗಮಿಸಿದ್ದ ರಾಧಾ ಮೋಹನ್ ಸಿಂಗ್, ಇಂದು ಬೆಳಗ್ಗೆ ರೈಲ್ವೆ ಇಲಾಖೆಯಿಂದ ಕೈಗೊಂಡಿರುವ ಹಲವು ಅಭಿವೃದ್ಧಿ ಯೋಜನೆಗಳ ಪರಿಶೀಲನೆ ನಡೆಸಿದರಲ್ಲದೇ ನೈರುತ್ಯ ರೈಲ್ವೇ ಪ್ರಧಾನ ವ್ಯವಸ್ಥಾಪಕ ಸಂಜೀವ್ ಕಿಶೋರ್, ಮೈಸೂರು ವಿಭಾಗೀಯ ವ್ಯವಸ್ಥಾಪಕ ರಾಹುಲ್ ಅಗರವಾಲ್ ಹಾಗೂ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು.



ಸಂಸದೀಯ ಸ್ಥಾಯಿ ಸಮಿತಿ ಅಧ್ಯಕ್ಷ ಮೋಹನ್ ಸಿಂಗ್ ನೇತೃತ್ವದಲ್ಲಿ ಸದಸ್ಯರು ಸೋಮವಾರ ಮೈಸೂರು ರೈಲು ನಿಲ್ದಾಣದಲ್ಲಿ ಪರಿಶೀಲನೆ ನಡೆಸಿದರು.

ರೈಲುಗಳ ನಿಲುಗಡೆ, ಹೊಸ ಮಾರ್ಗಗಳು, ಆರ್‌ಓಬಿ, ಆರ್‌ಯುಬಿಗಳ ನಿರ್ಮಾಣ, ಸಂಚಾರಕ್ಕೆ ಅನುಕೂಲವಾಗುವಂತೆ ಮೈಸೂರು ರೈಲು ನಿಲ್ದಾಣ ವಿಸ್ತರಣೆ, ಪ್ರಯಾಣಿಕರಿಗೆ ಮತ್ತಷ್ಟು ಮೂಲ ಸೌಕರ್ಯ ಒದಗಿಸುವುದು, ನಾಗನಹಳ್ಳಿ ಬಳಿ ಕೋಚಿಂಗ್ ಟರ್ಮಿನಲ್ ನಿರ್ಮಾಣ ಸೇರಿದಂತೆ ಕೈಗೊಂಡಿರುವ ಹಲವು ಅಭಿವೃದ್ಧಿ ಯೋಜನೆಗಳ ಕಾಮಗಾರಿಯನ್ನು ತ್ವರಿತ ಗತಿಯಲ್ಲಿ ಪೂರ್ಣಗಳಿಸುವಂತೆಯೂ ಸಮಿತಿ ಸದಸ್ಯರು ಸಲಹೆ ನೀಡಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇತ್ತೀಚೆಗೆ ಮೈಸೂರಿನಲ್ಲಿ 480 ಕೋಟಿ ರೂ. ಅಂದಾಜು ವೆಚ್ಚದ ಈ ವಿಸ್ತರಣಾ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದ್ದು, ನಿಯಮಿತ ಅವಧಿಯೊಳಗೆ ಗುಣಮಟ್ಟದ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಸಮಿತಿ ಸದಸ್ಯರು ಇದೇ ವೇಳೆ ಸೂಚಿಸಿದ್ದಾರೆ. ರೈಲ್ವೆ ಅಧಿಕಾರಿಗಳಾದ ರಂಗೆಲಾಲ್ ಮೀನಾ, ಶ್ಯಾಂ ಸಿಂಗ್, ಹರಿಶಂಕರ್ ವರ್ಮಾ ಸೇರಿದಂತೆ ಹಲವರು ಸಭೆಯಲ್ಲಿ ಹಾಜರಿದ್ದರು.

ಸಂಸದೀಯ ಸ್ಥಾಯಿ ಸಮಿತಿ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಆಶಿಶ್ ರಂಜನ್, ಸದಸ್ಯರಾದ ಕುಶಲೇಂದ್ರ ಕುಮಾರ್, ಜಾಸ್ಕರ್ ಮೀನಾ, ಸತಾಬ್ಧಿ ರಾಯ್, ಚಂದ್ರಾಣಿ ಮುರ್ಮು, ಕೇಸರಿ ದೇವಿ ಪಟೇಲ್, ಮುಕೇಶ್ ರಾಜಪೂತ್, ಎನ್. ರೆಡ್ಡಿಯಪ್ಪ, ಸುಮೇದಾನಂದ್ ಸರಸ್ವತಿ, ಅರವಿಂದ ಗಣಪತಿ ಸಾವಂತ್, ಗೋಪಾಲ್‌ಜೀ ಠಾಕೂರ್, ಪುಲೋದೇವಿ ನೇತಮ್ ಹಾಗೂ ಡಾ. ಸುಮರ್ ಸಿಂಗ್ ಸೋಲಂಕಿ ತಂಡದಲ್ಲಿದ್ದಾರೆ.

ಕೆಲವರು ತಮ್ಮ ಕುಟುಂಬದ ಸದಸ್ಯರೊಂದಿಗೆ ಭಾನುವಾರ ಮಧ್ಯಾಹ್ನ 1 ಗಂಟೆಗೆ ಮೈಸೂರಿಗೆ ಆಗಮಿಸಿ, ರ್‍ಯಾಡಿಸನ್ ಬ್ಲ್ಯೂ ಪ್ಲಾಜಾ ಹೋಟೆಲ್‌ನಲ್ಲಿ ಊಟ ಮಾಡಿದ ನಂತರ ಚಾಮುಂಡಿಬೆಟ್ಟ ಮತ್ತು ಅರಮನೆಗೆ ಭೇಟಿ ನೀಡಿದ್ದರು. ಅದೇ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಿದ್ದ ಅವರು ಇಂದು ಬೆಳಗ್ಗೆ ಮೈಸೂರು ರೈಲು ನಿಲ್ದಾಣಕ್ಕೆ ಭೇಟಿ ನೀಡಿ ಪರಿವೀಕ್ಷಣೆ ನಡೆಸಿದ ನಂತರ, ಬೆಳಗ್ಗೆ 11 ಗಂಟೆಗೆ ರೈಲಿನಲ್ಲಿ ಬಿಡದಿಗೆ ತೆರಳಿ, ಅಲ್ಲಿನ ಈಗಲ್‌ಟನ್ ಗಾಲ್ಫ್ ರೆಸಾರ್ಟ್‌ನಲ್ಲಿ ಮಧ್ಯಾಹ್ನದ ಊಟದ ನಂತರ ಬೆಂಗಳೂರು ರೈಲು ನಿಲ್ದಾಣದ ಪರಿಶೀಲನೆ ನಡೆಸಿದ ಬಳಿಕ ರಾತ್ರಿ ಹೋಟೆಲ್ ತಾಜ್ ವೆಸ್ಟ್ ಎಂಡ್‌ನಲ್ಲಿ ವಾಸ್ತವ್ಯ ಹೂಡಿದ್ದಾರೆ.

ನಾಳೆ (ಆ. 23) ತಂಡದ ಸದಸ್ಯರು ವಿಮಾನದಲ್ಲಿ ನವದೆಹಲಿಗೆ ಹಿಂದಿರುಗುವರು ಎಂದು ರೈಲ್ವೆ ಮೂಲಗಳು ತಿಳಿಸಿವೆ. ರೈಲ್ವೆ ಬಜೆಟ್‌ನಲ್ಲಿ ಮಂಜೂರಾಗಿರುವ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಹಿನ್ನೆಲೆಯಲ್ಲಿ ಸಮಿತಿ ಸದಸ್ಯರು ದೇಶಾದ್ಯಂತ ವಿವಿಧ ರಾಜ್ಯಗಳಲ್ಲಿ ಪ್ರವಾಸ ಕೈಗೊಂಡು ಪರಿಶೀಲನೆ ನಡೆಸುತ್ತಿದ್ದಾರೆ ಎಂದು ಹೇಳಲಾಗಿದೆ.

ವಿಜಯನಗರ 3ನೇ ಹಂತದ ಅಭಿವೃದ್ಧಿಗೆ ಕ್ರಮ

ಇಲ್ಲಿನ ಉದ್ಯಾನವನದ ಕುಟೀರ ಉದ್ಘಾಟಿಸಿದ ಶಾಸಕ ಜಿಟಿಡಿ

ಮೈಸೂರು,ಆ.22(ಪಿಎಂ)– ಮೈಸೂರಿನ ವಿಜಯನಗರ 3ನೇ ಹಂತದ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಶಾಸಕ ಜಿ.ಟಿ.ದೇವೇಗೌಡ ತಿಳಿಸಿದರು.

ಮೈಸೂರಿನ ವಿಜಯನಗರ 3ನೇ ಹಂತದ ಸಿ ಬ್ಲಾಕ್‌ನಲ್ಲಿರುವ ಉದ್ಯಾನವನದಲ್ಲಿ ನೂತನವಾಗಿ ನಿರ್ಮಿಸಿರುವ ಕುಟೀರ ಹಾಗೂ ಉದ್ಯಾನವನ ನಿರ್ವಹಣಾ ಸಮಿತಿ ಉದ್ಘಾಟಿಸಿ ಮಾತನಾಡಿದ ಅವರು, ಪಾರ್ಕ್ ನಿರ್ವಹಣೆಗೆ ಸಮಿತಿ ರಚಿಸಿರುವುದು ಅತ್ಯಂತ ಒಳ್ಳೆಯ ಬೆಳವಣಿಗೆ. ಪಾರ್ಕ್‌ಗಳ ನಿರ್ವಹಣೆಗೆ ನನ್ನಿಂದಾಗುವ ಎಲ್ಲಾ ಸಹಕಾರ ನೀಡುತ್ತೇನೆ ಎಂದು ತಿಳಿಸಿದರು.

ವಿಜಯನಗರ 3ನೇ ಹಂತದಲ್ಲಿರುವ ಎಲ್ಲಾ ರಸ್ತೆಗಳ ಮರುಡಾಂಬರೀಕರಣ, ಮುಖ್ಯ ರಸ್ತೆಗಳ ಪುನರ್ ನಿರ್ಮಾಣಕ್ಕೆ ಚಾಲನೆ ನೀಡಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ. ಒಳಚರಂಡಿ ಸಮಸ್ಯೆಯನ್ನು ಬಗೆಹರಿಸುವ ಸಲುವಾಗಿ ಒಳಚರಂಡಿ ಪೈಪ್‌ಗಳ ಬದಲಾವಣೆಗೆ ಕ್ರಮ ಕೈಗೊಂಡಿದ್ದು, ಈ ಕಾಮಗಾರಿಯೂ ಪ್ರಗತಿಯಲ್ಲಿದೆ ಎಂದರು.



ಅಪೆಕ್ಸ್ ಬ್ಯಾಂಕ್ ಉಪಾಧ್ಯಕ್ಷರೂ ಆದ ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಜಿ.ಡಿ.ಹರೀಶ್ ಗೌಡ ಮಾತನಾಡಿ, ಪಾರ್ಕ್ ನಿರ್ವಹಣಾ ಸಮಿತಿ ಮತ್ತು ನಾಗರಿಕ ಕ್ಷೇಮಾಭಿವೃದ್ಧಿ ಸಂಘಗಳು ರಚನೆಗೊಂಡಿರುವುದು ಉತ್ತಮ ಬೆಳವಣಿಗೆ. ಇಂತಹ ಸಂಘಟನೆಗಳು ತಮ್ಮ ಬಡಾವಣೆಗಳಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯ ಪಡೆಯುವಲ್ಲಿ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಬೆನ್ನು ಹತ್ತಬೇಕು. ಕೆಲಸ ಆಗುವವರೆಗೂ ಬಿಡಬಾರದು ಎಂದು ಸಲಹೆ ನೀಡಿದರು.

ಇಲ್ಲಿನ ಕಾವೇರಿ ಬಡಾವಣೆ, ಗರುಡಚಾರ್ ಬಡಾವಣೆಗಳ ಅಭಿವೃದ್ಧಿ ಕಾಮಗಾರಿಗೆ ಈಗಾಗಲೇ ಟೆಂಡರ್ ಕರೆಯಲಾಗಿದ್ದು, ಶೀಘ್ರದಲ್ಲಿಯೇ ಕಾಮಗಾರಿಗಳು ಪ್ರಾರಂಭವಾಗಲಿವೆ ಎಂದು ತಿಳಿಸಿದರು.

ಇದೇ ವೇಳೆ ಪಾರ್ಕ್ ಅಭಿವೃದ್ಧಿ ಸಂಬಂಧ ಅಧಿಕಾರಿಗಳೊಡನೆ ಮಾತನಾಡಿದ ಶಾಸಕರು, ಕೂಡಲೇ ಪಾರ್ಕ್‌ನಲ್ಲಿ ಬಾಕಿಯಿರುವ ಕಾಮಗಾರಿಗಳನ್ನು ಕೈಗೊಳ್ಳಲು ಸೂಚನೆ ನೀಡಿದರು. ಸಮಿತಿಯ ಅಧ್ಯಕ್ಷ ಮಂಜಪ್ಪ, ಮುಖಂಡರಾದ ಬೆಳವಾಡಿ ಶಿವಮೂರ್ತಿ, ಮಂಜು, ಪುಟ್ಟೇಗೌಡ, ರವಿಕುಮಾರ್ ಮತ್ತಿತರರು ಹಾಜರಿದ್ದರು.

ಮುಖ್ಯಮಂತ್ರಿಗಳ ಮಾಧ್ಯಮ ಸಂಯೋಜಕ ಗುರುಲಿಂಗಸ್ವಾಮಿ ಹೊಳಿಮಠ ನಿಧನ

ಬೆಂಗಳೂರು, ಆ. 22(ಕೆಎಂಶಿ)– ಹಿರಿಯ ಪತ್ರಕರ್ತ ಮುಖ್ಯಮಂತ್ರಿಯವರ ಮಾಧ್ಯಮ ಸಂಯೋಜಕ ಹೆಚ್.ಬಿ. ಗುರುಲಿಂಗಸ್ವಾಮಿ ಹೊಳಿಮಠ ಹೃದಯಾಘಾತದಿಂದ ನಿಧನ ಹೊಂದಿದ್ದಾರೆ.



ಮುದ್ರಣ ಮಾಧ್ಯಮ ಹಾಗೂ ವಾಹಿನಿಗಳಲ್ಲಿ ಎರಡು ದಶಕಗಳ ಕಾಲ ಕಾರ್ಯನಿರ್ವಹಿಸಿದ್ದ ಗುರುಲಿಂಗಸ್ವಾಮಿ ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರರಾಗಿ ಕಾರ್ಯನಿರ್ವಹಿಸುತ್ತಿದ್ದರು.

ಅವರ ಅಕಾಲಿಕ ಮರಣಕ್ಕೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೇರಿದಂತೆ ಅವರ ಸಂಪುಟದ ಸಹೋದ್ಯೋಗಿಗಳು ಮತ್ತು ಪತ್ರಿಕಾ ಬಳಗ ಕಂಬನಿ ಮಿಡಿದಿದೆ. ಗುರುಲಿಂಗಸ್ವಾಮಿ ಅವರ ಅಕಾಲಿಕ ನಿಧನದಿಂದ ಪತ್ರಿಕೋದ್ಯಮಕ್ಕೆ ಹಾಗೂ ವೈಯಕ್ತಿಕವಾಗಿಯೂ ದೊಡ್ಡ ನಷ್ಟವಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ.

ಹೊಳಿಮಠ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಗುರುಲಿಂಗಸ್ವಾಮಿಯವರು ನನ್ನ ಯುವಸ್ನೇಹಿತ, ಅವರ ಅಕಾಲಿಕ ನಿಧನ ನನಗೆ ದಿಗ್ಭ್ರಮೆಯನ್ನುಂಟು ಮಾಡಿದೆ. ಅವರನ್ನು 20 ವರ್ಷದಿಂದ ಬಲ್ಲೆ. ರಾಮದುರ್ಗದ ಹಳ್ಳಿಯ ಶ್ರೇಷ್ಠ ಮನೆತನದವರಾಗಿದ್ದರು.

ಸ್ವಂತ ಪರಿಶ್ರಮದಿಂದ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಪತ್ರಿಕೋದ್ಯಮ ವ್ಯಾಸಂಗ ಮಾಡಿ ಪತ್ರಿಕಾ ಮಾಧ್ಯಮದಲ್ಲಿ ಕೆಲಸ ನಿರ್ವಹಿಸಿದ್ದರು. ಅವರು ಪತ್ರಿಕಾ ರಂಗದಲ್ಲಿದ್ದಾಗಲೇ ನನಗೆ ಪರಿಚಿತರಾಗಿದ್ದರು. ಮುದ್ರಣ ಹಾಗೂ ವಿದ್ಯುನ್ಮಾನದಲ್ಲಿ ಕೆಲಸ ನಿರ್ವಹಿಸಿದ್ದ ಅವರು ಅತ್ಯಂತ ಕ್ರಿಯಾಶೀಲ ಪತ್ರಕರ್ತರಾಗಿದ್ದರು, ತಮ್ಮ ವರದಿಯ ನಿಖರತೆಗೆ ಅತ್ಯಂತ ಮಹತ್ವ ನೀಡುತ್ತಿದ್ದ ಜವಾಬ್ದಾರಿಯುತ ಪತ್ರಕರ್ತರಾಗಿದ್ದರು. ಅವರ ಕ್ರಿಯಾಶೀಲತೆ ಇತರರಿಗೆ ಮಾದರಿಯಾಗಿದೆ ಎಂದು ತಿಳಿಸಿದರು.

ಅವರು ಸಮಾಜಕ್ಕೆ ಒಳಿತು ಮಾಡುವ ಸಾಮಾಜಿಕ ಜವಾಬ್ದಾರಿಯ ಪತ್ರಕರ್ತರಾಗಿದ್ದರು. ತಾನೊಬ್ಬನೇ ಬೆಳೆಯದೇ ತನ್ನ ಜೊತೆಗಿನ ಮಿತ್ರರನ್ನು ಬೆಳೆಸಿದ ಗುರುಲಿಂಗಸ್ವಾಮಿಯವರು ಸದಾಕಾಲ ಪರರಿಗೆ ಸಹಾಯ ಮಾಡುತ್ತಿದ್ದರು. ಪ್ರತಿದಿನ 2–3 ಜನರಿಗೆ ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ಸಹಾಯ ಒದಗಿಸುತ್ತಿದ್ದರು. ಮಾನವೀಯತೆಯಿಂದ ಪರರಿಗೆ ಸಹಾಯ ಮಾಡುವ ಗುಣವಿದ್ದವರು. ಶ್ರೀಯುತರ ನಿಧನದಿಂದ ಪತ್ರಿಕೋದ್ಯಮಕ್ಕೆ ಹಾಗೂ ವೈಯಕ್ತಿಕವಾಗಿ ತುಂಬಲಾರದ ನಷ್ಟವುಂಟಾಗಿದೆ ಎಂದು ತಿಳಿಸಿದರು.

ರಾಜಕಾರಣದಲ್ಲಿ ಸಕ್ರಿಯರಾಗಿರುವವರ ದಸರಾ ಉದ್ಘಾಟಕರನ್ನಾಗಿ ಆಯ್ಕೆ ಮಾಡಲ್ಲ

● ಮೈಸೂರು ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಸ್ಪಷ್ಟನೆ ● ದಸರಾ ಉದ್ಘಾಟಕರ ಆಯ್ಕೆ ಅಧಿಕಾರ ಮುಖ್ಯಮಂತ್ರಿಗಳದ್ದಾಗಿದೆ

ಮೈಸೂರು,ಆ.22(ಎಂಟಿವೈ)– ರಾಜಕಾರಣದಲ್ಲಿ ಸಕ್ರಿಯರಾಗಿರುವವರನ್ನು ದಸರಾ ಉದ್ಘಾಟನೆಗೆ ಆಹ್ವಾನ ನೀಡುವುದಿಲ್ಲ ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್ ತಿಳಿಸಿದ್ದಾರೆ.



ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಈ ಸಾಲಿನ ದಸರಾ ಉದ್ಘಾಟಕರ ಆಯ್ಕೆ ಪರಮಾಧಿಕಾರವನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ಹೈಪವರ್ ಕಮಿಟಿಯಲ್ಲಿ ನೀಡಲಾಗಿದೆ. ರಾಜಕಾರಣದಲ್ಲಿ ಸಕ್ರಿಯರಾಗಿರುವವರನ್ನು ದಸರಾ ಉದ್ಘಾಟಿಸಲು ಕರೆಯಲ್ಲ. ಈ ಸಂಬಂಧ ತೀರ್ಮಾನ ಕೈಗೊಳ್ಳಲು ಮುಖ್ಯಮಂತ್ರಿಗಳಿಗೆ ಪರಮಾಧಿಕಾರ ನೀಡಲಾಗಿದೆ. ಅವರು ಯಾರನ್ನೇ ಆಯ್ಕೆ ಮಾಡಿದರೂ ನಮ್ಮ ಸ್ವಾಗತವಿರುತ್ತದೆ. ಹೈಪವರ್ ಕಮಿಟಿ ಸಭೆಯಲ್ಲಿ ವಿಧಾನಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ಪಾಲ್ಗೊಂಡಿದ್ದರು. ಆ ಸಭೆಯಲ್ಲಿ ಅವರು ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರನ್ನು ಆಹ್ವಾನಿಸುವುದೂ ಸೇರಿದಂತೆ ಯಾವುದೇ ಸಲಹೆ ನೀಡಿಲ್ಲ ಎಂದು ಸ್ಪಷ್ಟಪಡಿಸಿದರು.


ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಸಕ್ರಿಯ ರಾಜಕಾರಣದಿಂದ ನಿವೃತ್ತರಾಗಿದ್ದಾರೆ. ಅವರು ಯಾವುದೇ ಹುದ್ದೆಯಲ್ಲಿಲ್ಲ. ಆದ ಕಾರಣ ಕಳೆದ ವರ್ಷ ಅವರಿಂದ ದಸರಾ ಮಹೋತ್ಸವವನ್ನು ಉದ್ಘಾಟಿಸಲಾಗಿದೆ. ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಸಕ್ರಿಯ ರಾಜಕಾರಣದಲ್ಲಿದ್ದಾರೆ. ಪ್ರಸ್ತುತ ರಾಜ್ಯಸಭಾ ಸದಸ್ಯರೂ ಆಗಿದ್ದಾರೆ. ಹಾಗಾಗಿ ಅವರನ್ನು ದಸರಾ ಉದ್ಘಾಟನೆಗೆ ಆಹ್ವಾನಿಸುವುದು ಅಸಾಧ್ಯ. ಆದರೂ ಈ ವಿಚಾರ ಮುಖ್ಯಮಂತ್ರಿಗಳ ವಿವೇಚನೆಗೆ ಬಿಟ್ಟದ್ದಾಗಿದೆ ಎಂದರು.

ರಸ್ತೆ ಅಭಿವೃದ್ಧಿ: ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಪಾಲ್ಗೊಳ್ಳಲು ಮೈಸೂರಿಗೆ ಪ್ರಧಾನಿ ಮೋದಿ ಆಗಮನದ ಹಿನ್ನೆಲೆಯಲ್ಲಿ ವಿವಿಧ ರಸ್ತೆ ಅಭಿವೃದ್ಧಿಪಡಿಸಲಾಗಿತ್ತು ಪ್ರಸ್ತುತ ಯಾವ ರಸ್ತೆ ಹಾಳಾಗಿದೆಯೋ ಅದನ್ನು ದುರಸ್ತಿ ಮಾಡಲು ಕ್ರಮ ಕೈಗೊಳ್ಳುವಂತೆ ಪಾಲಿಕೆ ಆಯುಕ್ತರಿಗೆ ಸೂಚಿಸುತ್ತೇನೆ

ಪರ್ಯಾಯವಲ್ಲ: ಮೈಸೂರಲ್ಲಿ ನಾಳೆ (ಆ.23) ನಡೆಯಲಿರುವ ಸಾವರ್ಕರ್ ರಥಯಾತ್ರೆಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಪಾಲ್ಗೊಳ್ಳಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವನಾಗಿ ನಾನು ಆ ಯಾತ್ರೆಯಲ್ಲಿ ಪಾಲ್ಗೊಳ್ಳುತ್ತೇನೆ. ಈ ಯಾತ್ರೆ ಕಾಂಗ್ರೆಸ್ ನಾಯಕರು ಮೈಸೂರಿಂದ ಕೊಡಗಿಗೆ ನಡೆಸಲು ಉದ್ದೇಶಿರುವ ಪಾದಯಾತ್ರೆಯ ಪರ್ಯಾಯವಲ್ಲ. ಪಕ್ಷದ ವತಿಯಿಂದ ಬಂದಿರುವ ಆದೇಶದ ಮೇರೆಗೆ ಸಾವರ್ಕರ್ ರಥಯಾತ್ರೆ ನಡೆಸಲಾಗುತ್ತಿದೆ ಎಂದರು.

ಸಿದ್ದರಾಮಯ್ಯ ಸೇರಿ ಎಲ್ಲಾ ಮಾಜಿ ಸಿಎಂಗಳಿಗೆ ಝಡ್ ಶ್ರೇಣಿಯ ಭದ್ರತೆ

ಬೆಂಗಳೂರು: ಮಾಜಿ ಸಿಎಂ ಸಿದ್ದರಾಮಯ್ಯನವರಿಗೆ ಬೆಂಗಳೂರಿನಲ್ಲಿ ಝಡ್ ಶ್ರೇಣಿಯ ಭದ್ರತೆಯನ್ನು ನೀಡಲಾಗಿದೆ. ಕೊಡಗಿನಲ್ಲಿ ಮೊಟ್ಟೆ ಎಸೆತ ಪ್ರಕರಣದ ಬಳಿಕ ಈಗ ಸಿದ್ದರಾಮಯ್ಯಗೆ ಎಸ್ಕಾರ್ಟ್ ಹೆಚ್ಚಿಸಲಾಗಿದೆ. ಅಧಿಕಾರಿಗಳು, ಸಿಬ್ಬಂದಿ ಸೇರಿ 21 ಮಂದಿಯನ್ನು ನಿಯೋಜನೆ ಮಾಡಲಾಗಿದೆ. ಮೂರು ಪಾಳಿಯಲ್ಲಿ ನಿರಂತರವಾಗಿ ಕರ್ತವ್ಯ ನಿರ್ವಹಿಸಬೇಕು. ಎಲ್ಲೇ ಹೋದರೂ ಮುಂಜಾಗ್ರತೆ ವಹಿಸುವಂತೆ ಪ್ರತಿ ಸಿಬ್ಬಂದಿಗೆ ಸೂಚಿಸಲಾಗಿದೆ. ಬೆಂಗಳೂರಿ ನಿಂದ ಹೊರ ಹೋಗುವ ವೇಳೆ ಹೈವೇ ಪ್ಯಾಟ್ರೋಲಿಂಗ್, ಸ್ಥಳೀಯ ಪೊಲೀಸರು ಹೆಚ್ಚಿನ ಜವಾಬ್ದಾರಿ ತೆಗೆದುಕೊಳ್ಳಬೇಕು ಎಂದು ಗೃಹ ಇಲಾಖೆ ಸೂಚಿಸಿದೆ. ಸಿದ್ದರಾಮಯ್ಯ ಅಲ್ಲದೇ ಮಾಜಿ ಮುಖ್ಯಮಂತ್ರಿಗಳಾದ ಯಡಿಯೂರಪ್ಪ ಮತ್ತು ಕುಮಾರ ಸ್ವಾಮಿಗೂ ಝಡ್ ಶ್ರೇಣಿಯ ಭದ್ರತೆ ನೀಡಲಾಗಿದೆ. ಸಿಎಂ ಬಸವರಾಜ ಬೊಮ್ಮಾಯಿಗೆ ಝಡ್ ಪ್ಲಸ್ ಶ್ರೇಣಿಯ ಭದ್ರತೆ ನೀಡಲಾಗಿದೆ. ಜಿಲ್ಲಾ ಪ್ರವಾಸದ ವೇಳೆ ಸಂದರ್ಭಾನುಸಾರ ಸಿಬ್ಬಂದಿ ಹೆಚ್ಚಿಸಲು ಎಲ್ಲ ಹಿರಿಯ ಅಧಿಕಾರಿಗಳಿಗೆ ಸೂಚಿಸಲಾಗಿದೆ.



ಭಾರ ಹೊರುವುದರಲ್ಲಿ ಭಲೇ ಧನಂಜಯ!

ಮೈಸೂರು, ಆ.22(ಎಸ್‌ಬಿಡಿ)– ದಸರಾ ಗಜಪಡೆಯ 'ಧನಂಜಯ' ಇಂದು ಯಶಸ್ವಿಯಾಗಿ ಭಾರ ಹೊರುವ ತಾಲೀಮು ನಡೆಸಿದ.

ಅರಮನೆಯ ಅಂಗಳದಲ್ಲಿ ಬೆಳಗ್ಗೆ 7.45ಕ್ಕೆ ಗಾದಿ, ನಮ್ದಾ, ಮರಳಿನ ಮೂಟೆ ಸೇರಿದಂತೆ ಒಟ್ಟು 300 ಕೆಜಿ ಭಾರವನ್ನು 'ಧನಂಜಯ'ನ ಹೆಗಲಿಗೇರಿಸಲಾಯಿತು. ಅಲ್ಲಿಂದ ಗಾಂಭೀರ್ಯದ ಹೆಜ್ಜೆಗಳೊಂದಿಗೆ ಚಾಮರಾಜ ವೃತ್ತ, ಕೆ.ಆರ್.ವೃತ್ತ, ಸಯ್ಯಾಜಿ ರಾವ್ ರಸ್ತೆ, ಬಂಬೂಬಜಾರ್, ಹೈವೇ ವೃತ್ತದ ಮೂಲಕ ಬನ್ನಿಮಂಟಪ ತಲುಪಿದ. 5 ಕಿ.ಮೀ. ದಾರಿಯನ್ನು 1 ಗಂಟೆ 15 ನಿಮಿಷ ಅವಧಿಯಲ್ಲಿ ನಿರಾಯಾಸವಾಗಿ ಪೂರೈಸಿದ. 'ಧನಂಜಯ'ನ ರಾಜ ಮಾರ್ಗದ ನಡಿಗೆಗೆ ಗೋಪಾಲಸ್ವಾಮಿ, ಕಾವೇರಿ, ಚೈತ್ರ ಇನ್ನಿತರ ಆನೆಗಳು ಸಾಥ್ ನೀಡಿದವು.

ದಸರಾ ಮಹೋತ್ಸವದ ಅತ್ಯಾಕರ್ಷಕ ಜಂಬೂಸವಾರಿಗೆ ಗಜಪಡೆಯನ್ನು ಸಿದ್ಧಗೊಳಿಸಲಾಗುತ್ತಿದೆ. ಕೊರೊನಾ ಪರಿಣಾಮ ಕಳೆದೆರಡು ವರ್ಷ ಅರಮನೆ ಅಂಗಳಕ್ಕಷ್ಟೇ ಮೆರವಣಿಗೆ ಸೀಮಿತವಾಗಿತ್ತು. ಆದರೆ ಈ ಬಾರಿ ಸಂಪ್ರದಾಯದಂತೆ ಅರಮನೆ ಅಂಗಳದಿಂದ ಬನ್ನಿಮಂಟಪದವರೆಗೆ ವೈಭವದ ಮೆರವಣಿಗೆ ನೆರವೇರಲಿದೆ. ಈ ಹಿನ್ನೆಲೆಯಲ್ಲಿ ಗಜಪಡೆಗೆ ಹೆಚ್ಚಿನ ತಾಲೀಮು ನೀಡಿ, ಪಕ್ವಗೊಳಿಸುವ ಕಾರ್ಯ ನಡೆದಿದೆ. ಈ ನಿಟ್ಟಿನಲ್ಲಿ ಆ.18ರಿಂದ ಆನೆಗಳಿಗೆ ಭಾರ ಹೊರಿಸಿ ತಾಲೀಮು ನಡೆಸಲಾಗುತ್ತಿದೆ.

ಯೋಜನೆಯಂತೆ ಈಗಾಗಲೇ ಅಭಿಮನ್ಯು, ಗೋಪಾಲಸ್ವಾಮಿ, ಮಹೇಂದ್ರ, ಭೀಮ ಹಾಗೂ ಧನಂಜಯ ಮೊದಲ ಹಂತದ ಭಾರ ಹೊರುವ ತಾಲೀಮನ್ನು ಯಶಸ್ವಿಯಾಗಿ ನಡೆಸಿದ್ದಾರೆ. ಇದರಲ್ಲಿ ಭೀಮನಿಗೆ ಮಾತ್ರ 450 ಕೆಜಿ ಹೊರಿಸಲಾಗಿದ್ದು, ಉಳಿದವರು 300 ಕೆಜಿ ಭಾರ ಹೊತ್ತು ನಡೆದಿದ್ದಾರೆ. ಹಂತಹಂತವಾಗಿ 800 ಕೆಜಿವರೆಗೆ ಭಾರ ಹೊರಿಸುವ ಯೋಜನೆಯಿದ್ದು, ನಾಳೆ(ಆ.23) ಅಭಿಮನ್ಯು ಹೆಚ್ಚಿನ ಭಾರ ಹೊತ್ತು ರಾಜಮಾರ್ಗದಲ್ಲಿ ಸಾಗಲಿದ್ದಾನೆ. ಇಂದು ಧನಂಜಯ ತಾಲೀಮು ನಡೆಸುವ ವೇಳೆ ಡಿಸಿಎಫ್ ಡಾ.ವಿ.ಕರಿಕಾಳನ್, ಆರ್‌ಎಫ್‌ಓ ಸಂತೋಷ್ ಹೂಗಾರ್, ಪಶುವೈದ್ಯ ಡಾ.ಮುಜೀಬ್, ಸಹಾಯಕ ರಾದ ರಂಗರಾಜು ಹಾಗೂ ಅಕ್ರಮ್ ಇದ್ದರು.



ದಸರಾ ಗೋಲ್ಡ್ ಕಾರ್ಡ್, ಹೊರ ರಾಜ್ಯ ಪ್ರವಾಸಿ ವಾಹನಗಳಿಗೆ ತೆರಿಗೆ ವಿನಾಯ್ತಿಗೆ ಮುಖ್ಯಮಂತ್ರಿಗೆ ಕೆಟಿಎಸ್ ಮನವಿ

ಮೈಸೂರು, ಆ.22(ಎಸ್‌ಬಿಡಿ)– ದಸರಾ ಗೋಲ್ಡ್ ಕಾರ್ಡ್ ಹಾಗೂ ಹೊರರಾಜ್ಯ ಪ್ರವಾಸಿ ವಾಹನಗಳಿಗೆ ತೆರಿಗೆ ವಿನಾಯ್ತಿ ನೀಡುವಂತೆ ಕರ್ನಾಟಕ ಟೂರಿಸಂ ಸೊಸೈಟಿ(ಕೆಟಿಎಸ್) ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ಮನವಿ ಸಲ್ಲಿಸಿದೆ. ಎರಡು ದಶಕಗಳಿಂದ ಮೈಸೂರು ದಸರಾ ಮಹೋತ್ಸವದಲ್ಲಿ ಗೋಲ್ಡ್ ಕಾರ್ಡ್ ಮಾರಾಟ ಮಾಡುವ ಮೂಲಕ ಪ್ರವಾಸಿಗರನ್ನು ಆಕರ್ಷಿಸುವ ಪದ್ಧತಿ ನಡೆದುಬಂದಿದೆ. ಆದರೆ ಈ ಬಾರಿ ಗೋಲ್ಡ್ ಕಾರ್ಡ್ ಇರುವುದಿಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿದ್ದಾರೆ. ಹೀಗಾದರೆ ಪ್ರವಾಸೋದ್ಯಮದ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುತ್ತದೆ. ಅಲ್ಲದೆ ಜಂಬೂಸವಾರಿ ವೀಕ್ಷಣೆಗೆಂದೇ ಬರುವ ಪ್ರವಾಸಿಗರಿಗೆ ತೀವ್ರ ನಿರಾಸೆಯಾಗುವ ಸಾಧ್ಯತೆ ಇದೆ. ಈಗಾಗಲೇ ನೂರಾರು ಮಂದಿ ದಸರಾ ಮಹೋತ್ಸವಕ್ಕೆ ಸಾಕ್ಷಿಯಾಗಲೆಂದು ತಮ್ಮ ಪ್ರವಾಸವನ್ನು ಕಾಯ್ದಿರಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಸೂಕ್ತ ನಿರ್ದೇಶನ ನೀಡುವಂತೆ ಮುಖ್ಯಮಂತ್ರಿಗಳನ್ನು ಮನವಿ ಮಾಡಲಾಗಿದೆ ಎಂದು ಕೆಟಿಎಸ್ ಸಂಸ್ಥಾಪಕ ನಿರ್ದೇಶಕ ಬಿ.ಎಸ್.ಪ್ರಶಾಂತ್ ತಿಳಿಸಿದ್ದಾರೆ.

ಸಾವಿರ ಕಾರ್ಡ್‌ಗೆ ಆಗ್ರಹ: ಗೋಲ್ಡ್ ಕಾರ್ಡ್ ಪದ್ಧತಿ ಆದಾಯದಾಯಕವಾಗಿದೆ. ಸರ್ಕಾರಕ್ಕೆ 50 ಲಕ್ಷ ರೂ. ಹೆಚ್ಚುವರಿ ಆದಾಯವಾದರೆ ಟ್ರಾವೆಲ್ಸ್, ಪ್ರವಾಸೋದ್ಯಮ ಹಾಗೂ ಆತಿಥ್ಯ ಕ್ಷೇತ್ರಗಳಲ್ಲಿ 100 ಕೋಟಿ ರೂ. ವಹಿವಾಟು ನಡೆಯುವ ಸಾಧ್ಯತೆ ಇದೆ. ಹಾಗಾಗಿ ಈ ಬಾರಿ ದಸರಾ ಮಹೋತ್ಸವಕ್ಕೂ ಕನಿಷ್ಟ ಸಾವಿರ ಗೋಲ್ಡ್ ಕಾರ್ಡ್ ಅನ್ನು ಶೀಘ್ರವೇ ಮುದ್ರಿಸಲು ಸೂಚನೆ ನೀಡಬೇಕು. ಇದರಲ್ಲಿ 500 ಕಾರ್ಡ್‌ಗಳನ್ನು ಕೆಟಿಎಸ್ ಸದಸ್ಯರಿಗೆ ಮೀಸಲಿಡಬೇಕು. ಇದರಿಂದ ಈಗಾಗಲೇ ದಸರಾ ಟೂರ್ ಪ್ಯಾಕೇಜ್ ಪಡೆದಿರುವ ಪ್ರವಾಸಿಗರಿಗೆ ಅನುಕೂಲವಾಗಲಿದೆ ಎಂದು ಮುಖ್ಯಮಂತ್ರಿಗಳಿಗೆ ತಿಳಿಸಲಾಗಿದೆ ಎಂದಿದ್ದಾರೆ.

ತೆರಿಗೆ ವಿನಾಯ್ತಿ: ದಸರಾ ಮಹೋತ್ಸವದ ಸಂದರ್ಭದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ದೃಷ್ಟಿಯಿಂದ ಸೆ.1ರಿಂದ ಅ.31ರವರೆಗೆ ಹೊರರಾಜ್ಯಗಳ ಪ್ರವಾಸಿ ವಾಹನಗಳ ಮೇಲಿನ ನಿರ್ಬಂಧ ಸಡಿಲಿಸಬೇಕು. ಆ ದಿನಗಳಲ್ಲಿ ಅಂತರರಾಜ್ಯ ಪರವಾನಗಿ ಶುಲ್ಕ ವಿನಾಯ್ತಿ ನೀಡಬೇಕು. ಉತ್ತರ ಪ್ರದೇಶ, ದೆಹಲಿ, ರಾಜಸ್ತಾನ, ಹರಿಯಾಣ ರಾಜ್ಯಗಳಲ್ಲಿ ಪ್ರವಾಸಿ ವಾಹನಗಳಿಗೆ ಈ ರೀತಿ ವಿನಾಯ್ತಿ ನೀಡಲಾಗಿದೆ. ಹಾಗಾಗಿ ದಸರಾ ಸಂದರ್ಭದಲ್ಲಾದರೂ ಮೈಸೂರಿಗೆ ಬರುವ ಪ್ರವಾಸಿ ವಾಹನಗಳಿಂದ ಪ್ರವೇಶ ಶುಲ್ಕ ಸಂಗ್ರಹಿಸಬಾರದು ಎಂದು ಕೆಟಿಎಸ್ ಮುಖ್ಯಮಂತ್ರಿಗಳನ್ನು ಒತ್ತಾಯಿಸಿದೆ ಎಂದು ಬಿ.ಎಸ್.ಪ್ರಶಾಂತ್ ತಿಳಿಸಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಆತ : ನನ್ನ ಮದುವೆಗೆ ಬಾ ಅಂತ ಪತ್ರ ಬರೆದಿದ್ದೆನಲ್ಲಾ?
ಈತ : ನಿನ್ನ ಪತ್ರ ನನಗೆ ಸಿಗಲೇ ಇಲ್ಲ...!
ಆತ : ಪತ್ರ ಸಿಗದೇ ಇದ್ರೂ ಬಾ ಅಂತ ಬರೆದಿದ್ದೆನಲ್ಲಾ!

ಮೈಸೂರು ಮಿತ್ರ

ಮಂಗಳವಾರ, 23 ಆಗಸ್ಟ್ 2022

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ. ಗೋವಿಂದೇಗೌಡ M.A.

ಅಮೃತವಾಹಿನಿ

ದೈನ್ಯತೆ ದೌರ್ಬಲ್ಯವಲ್ಲ. ಅದು ಗಟ್ಟಿತನದ ಇನ್ನೊಂದು ಮುಖ.

– ಕೃಷ್ಣಮೂರ್ತಿ ಪುರಾಣಿಕ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು

ಮಾತು ಮೊಳದುದ್ದ, ಕೆಲಸ ಕಿರು ಬೆರಳುದ್ದ

ನಿಮ್ಮ ಪತ್ರಗಳು

ನೆಹರೂರನ್ನು ಮೂಲೆಗುಂಪು ಮಾಡುವ ಪ್ರವೃತ್ತಿ ಅಪಾಯಕಾರಿ

ಮಾನ್ಯರೆ,

ಸುವರ್ಣ ಸ್ವಾತಂತ್ರ್ಯ ಮಹೋತ್ಸವದ ಸಂದರ್ಭದಲ್ಲಿ ರಾಜ್ಯ ಸರ್ಕಾರ ಲಕ್ಷಾಂತರ ರೂಪಾಯಿಗಳ ವೆಚ್ಚದಲ್ಲಿ ಪತ್ರಿಕೆಗಳಿಗೆ ನೀಡಿರುವ ಜಾಹೀರಾತುಗಳಲ್ಲಿ ಈ ದೇಶದ ಪ್ರಥಮ ಪ್ರಧಾನಿ, ಹಿರಿಯ ರಾಜಕೀಯ ಮುತ್ಸದ್ದಿ, ಆಧುನಿಕ ಭಾರತದ ಶಿಲ್ಪಿ ದಿವಂಗತ ಪಂಡಿತ್ ಜವಾಹರಲಾಲ್ ನೆಹರು ಅವರ ಹೆಸರನ್ನು ಸ್ವಾತಂತ್ರ್ಯ ಹೋರಾಟಗಾರರ ಪಟ್ಟಿಯಿಂದ ಕೈಬಿಟ್ಟ ಬಗ್ಗೆ ಮಾಧ್ಯಮಗಳಲ್ಲಿ ಸಾಕಷ್ಟು ಟೀಕೆ ಟಿಪ್ಪಣಿಗಳು ವ್ಯಕ್ತವಾಗುತ್ತಿವೆ. ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಬೇಕಂತಲೇ ನೆಹರೂ ಅವರ ಹೆಸರನ್ನು ಕೈಬಿಟ್ಟಿದ್ದಾಗಿ ಹೇಳಿದ್ದಾರೆ. ಒಂದು ರಾಜ್ಯದ ಮುಖ್ಯಮಂತ್ರಿಯಾಗಿರುವ ಬಸವರಾಜ ಬೊಮ್ಮಾಯಿಗೆ ಸ್ವಾತಂತ್ರ್ಯ ಹೋರಾಟದಲ್ಲಿ ನೆಹರೂ ಅವರ ಕೊಡುಗೆಗಳ ಬಗ್ಗೆ ಅರಿವಿಲ್ಲವೇ ಎಂದು ಪ್ರಶ್ನಿಸಬೇಕಾಗುತ್ತದೆ. ಪಂಡಿತ್ ನೆಹರು ದೇಶಕ್ಕೆ ಅಧಿಕೃತವಾಗಿ ಸ್ವಾತಂತ್ರ್ಯ ಲಭಿಸುವುದಕ್ಕೆ ಮುಂಚೆಯೇ ಅಂದರೆ, 1946ರ ಸೆಪ್ಟೆಂಬರ್ 2 ರಂದು ತಾತ್ಕಾಲಿಕ ಸರ್ಕಾರದಲ್ಲಿ ಪ್ರಧಾನ ಮಂತ್ರಿಗಳಾಗಿ, ದೇಶಕ್ಕೆ 1947ರ ಆಗಸ್ಟ್ 15 ರಂದು ಅಧಿಕೃತವಾಗಿ ಸ್ವಾತಂತ್ರ್ಯ ಲಭಿಸಿದಾಗ ಪೂರ್ಣ ಪ್ರಮಾಣದ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡು 1964ರ ಮೇ 27ರ ತನಕ ಅಂದರೆ ಅವರು ನಿಧನರಾಗುವವರೆಗೂ, ಈ ದೇಶಕ್ಕೆ ಸಮರ್ಥವಾದ ನಾಯಕತ್ವ ನೀಡಿ ಜಾಗತಿಕ ಮಟ್ಟದಲ್ಲಿ ಭಾರತದ ಹಿರಿಮೆ ಹೆಚ್ಚಾಗುವಂತೆ ನೋಡಿಕೊಂಡರು. ಇವರ ಅಧಿಕಾರಾವಧಿಯಲ್ಲಿ ದೇಶ ಯೋಜನಾಬದ್ಧವಾಗಿ ಬೆಳೆಯಿತು. ದೇಶದಲ್ಲಿ ಸಾರ್ವಜನಿಕ ಹಾಗೂ ಖಾಸಗಿ ವಲಯದಲ್ಲಿ ದೊಡ್ಡ ದೊಡ್ಡ ಕೈಗಾರಿಕೆಗಳು ಪ್ರಾರಂಭವಾದವು.

ಪಂಚವಾರ್ಷಿಕ ಯೋಜನೆಗಳ ಮೂಲಕ ಭಾರತದ ಅರ್ಥ ವ್ಯವಸ್ಥೆಗೆ ಭದ್ರ ಬುನಾದಿ ಹಾಕಿದರು. ಇವರ ಅಧಿಕಾರಾವಧಿಯಲ್ಲಿ ದೇಶ ಹಲವಾರು ರಂಗಗಳಲ್ಲಿ ಅಭಿವೃದ್ಧಿ ಸಾಧಿಸಿತು. ಆದರೆ ರಾಜಕೀಯ ಕಾರಣಗಳಿಗೋಸ್ಕರವಾಗಿ, ನೆಹರೂರವರ ಕೆಲವು ವೈಯಕ್ತಿಕ ವಿಚಾರಗಳನ್ನು ಮುಂದೆ ಇಟ್ಟುಕೊಂಡು, ಅವರನ್ನು ಮೂಲೆ ಗುಂಪು ಮಾಡುವ ಪ್ರವೃತ್ತಿ ತೀರಾ ಅಪಾಯಕಾರಿಯಾಗಿದೆ. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಗಾಂಧಿಯವರ ನಂತರದ ಸ್ಥಾನ ನೆಹರೂ ಅವರಿಗೆ ಸಲ್ಲುತ್ತದೆ. ನೆಹರೂ ನಿಧನದ ಸಂದರ್ಭದಲ್ಲಿ ಅಂದಿನ ಜನಸಂಘದ ನಾಯಕ ಹಾಗೂ ಮತ್ತೊಬ್ಬ ಹಿರಿಯ ರಾಜಕೀಯ ಮುತ್ಸದ್ದಿ ದಿವಂಗತ ಅಟಲ ಬಿಹಾರಿ ವಾಜಪೇಯಿಯವರು ರಾಜ್ಯಸಭೆಯಲ್ಲಿ ನೆಹರು ಅವರ ಗುಣಗಾನ ಮಾಡಿ ಅವರ ಸೇವೆಯನ್ನು ಅತ್ಯಂತ ಆತ್ಮೀಯತೆಯಿಂದ ಸ್ಮರಿಸಿರುವುದನ್ನು ದಾಖಲೆಗಳಲ್ಲಿ ನೋಡಬಹುದು. ಆದ್ದರಿಂದ ನೆಹರೂ ಅವರನ್ನು ವಿಕೃತ ದೃಷ್ಟಿಯಿಂದ ನೋಡುತ್ತಿರುವ ಕೆಲವು ಆಯ್ದ ರಾಜಕಾರಣಿಗಳು ಹಾಗೂ ಅವರ ಹಿಂಬಾಲಕರು ಇತಿಹಾಸದ ಸತ್ಯಗಳನ್ನು ಮನದಟ್ಟುಮಾಡಿಕೊಳ್ಳಬೇಕಿದೆ.

– ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ಹುಳುವ್ರೋ, ಅಕ್ಕಿಯೋ....


ಮಾನ್ಯರೆ,

ಸರ್ಕಾರ ಬಡತನ ರೇಖೆಗಿಂತ ಕೆಳಗಿರುವ ಲಕ್ಷಾಂತರ ಕುಟುಂಬಗಳನ್ನು ಗುರುತಿಸಿ 'ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ'ಯ ಮುಖಾಂತರ ನ್ಯಾಯಬೆಲೆ ಅಂಗಡಿಗಳಲ್ಲಿ ಉಚಿತವಾಗಿ ಅಕ್ಕಿಯನ್ನು ನೀಡುತ್ತಿರುವುದು ಮೆಚ್ಚುವ ಕಾರ್ಯವೇ. ಆದರೆ ಗುಣಮಟ್ಟವೇ ಇಲ್ಲದ ಹಾಗೂ ಅಕ್ಕಿಯಲ್ಲಿ ಲೆಕ್ಕವಿಲ್ಲದಷ್ಟು ತೊಗಟೆ ಹುಳುಗಳನ್ನು ಬಡವರಿಗೆ ಕೊಡಲಾಗುತ್ತಿದೆ. ಧೂಳು, ಕಸ ತುಂಬಿದ ಅಕ್ಕಿಯಲ್ಲಿ ಅಕ್ಕಿಗಿಂತಲೂ ಹೆಚ್ಚಿಗೆ ಇರುವ ಹುಳುಗಳನ್ನು ಬೇರ್ಪಡಿಸಿ ನಂತರ ಅನ್ನ ಬೇಯಿಸಿ, ಹಸಿವಿನಿಂದ ಊಟಕ್ಕೆ ಕುಳಿತಾಗ ಅಕ್ಕಿಯಲ್ಲಿರುವ ಹುಳುಗಳು ಪದೇ ಪದೆ ಕಣ್ಣಿಗೆ ರಾಚುತ್ತವೆ. ಹಸಿವು ಇದ್ದರೂ ಊಟ ಮಾಡಲು ಮನಸು ಒಪ್ಪುವುದೇ ಇಲ್ಲ. ಜೊತೆಯಲ್ಲಿ ವಯಸ್ಸಾದ ಹಿರಿಯರಿಗೆ 'ಊಟ ಮಾಡಿ' ಎಂದು ಹೇಳುವುದಾದರೂ ಹೇಗೆ? ಚಿಕ್ಕ ಮಕ್ಕಳಿಗೆ ಕೈತುತ್ತು ತಿನ್ನಿಸುವುದಾದರೂ ಹೇಗೆ? ಜಿಲ್ಲಾಧಿಕಾರಿಗಳೇ ನಿಮ್ಮ ಅಧಿಕಾರಿಗಳು ಏನು ಮಾಡುತ್ತಿದ್ದಾರೆ? ಬಡವರು ಕಣ್ಮುಚ್ಚಿಕೊಂಡು ನೆಮ್ಮದಿಯಿಂದ ಊಟ ಮಾಡುವ ದಿನ ಬರುವಂತೆ ಮಾಡಬೇಕೆಂದು ಈ ಮೂಲಕ ಮನವಿ.

– ಕಾಳಿಂಗಚಾರ್, ಕುಂಬಾರಕೊಪ್ಪಲು, ಮೈಸೂರು.

ಡಾ. ಎಂ.ಎಸ್. ವಿಶ್ವೇಶ್ವರ ನಿಧನದಿಂದ ಸಮಾಜಕ್ಕೆ ಅಪಾರ ನಷ್ಟ

ಮಾನ್ಯರೆ,



ಇತ್ತೀಚೆಗೆ ಮೈಸೂರಿನಲ್ಲಿ ಡಾ. ಎಂ.ಎಸ್. ವಿಶ್ವೇಶ್ವರ ಅವರ ನಿಧನದ ಸುದ್ದಿ ಸಾರ್ವಜನಿಕರಿಗೆ, ಅದರಲ್ಲೂ ಕ್ಯಾನ್ಸರ್ ಮಹಾಮಾರಿಯಿಂದ ನರಳುತ್ತಿದ್ದವರಿಗೆ ತಡೆಯಲಾರದ ನೋವುಂಟು ಮಾಡಿದೆ. ಅವರದ್ದು ಕರ್ತವ್ಯ ನಿಷ್ಠೆ. ರೋಗಿಗಳು, ಅವರ ಜತೆ ಬಂದವರನ್ನು ಅತ್ಯಂತ ತಾಳ್ಮೆಯಿಂದ ವಿಚಾರಿಸುತ್ತಿದ್ದರು. ಒಮ್ಮೆ ನನಗೆ ಅತೀ ನಿಕಟವರ್ತಿಯೊಬ್ಬರು ಸಮಸ್ಯೆಯಿಂದ ಅವರನ್ನು ಭೇಟಿ ಮಾಡಿದಾಗ ಬೆಂಗಳೂರಿನಲ್ಲಿ HCG ಆಸ್ಪತ್ರೆಯಲ್ಲಿ ಒಬ್ಬರು ಪರಿಚಯದ ಆಂಕಲಾಜಿಸ್ಟ್ ಇದ್ದಾರೆ. ಅವರನ್ನು ಭೇಟಿ ಮಾಡಿ ಎಂದು ಅವರ ಹೆಸರು ಹೇಳಿದರು. ಅಲ್ಲಿ ಅವರನ್ನು ಭೇಟಿ ಮಾಡಿ, ಚಿಕಿತ್ಸೆ ಪಡೆದರು. ಈಗ ಅವರು ಪೂರ್ಣ ರೋಗಮುಕ್ತರಾಗಿದ್ದಾರೆ. ಹೀಗೇ ಕಾಯಕವೇ ಶಿವಪೂಜೆ ಎಂದು ತಿಳಿದು, ಅದರಂತೆಯೇ ನಡೆಯುತ್ತಿದ್ದ ಮಹಾನುಭಾವ. ನಿಜಕ್ಕೂ ವೈದ್ಯಕೀಯ ಜಗತ್ತಿಗೆ ಅದರಲ್ಲೂ ಕ್ಯಾನ್ಸರ್ ರೋಗಿಗಳಿಗೆ ಅತ್ಯಂತ ಒಳ್ಳೆಯ ಡಾಕ್ಟರ್. ಜೀವ ಕೊಟ್ಟ ಬ್ರಹ್ಮನೇ ಸರಿ. ಅವರು ಮತ್ತೊಮ್ಮೆ ಮೈಸೂರಲ್ಲೇ ಹುಟ್ಟಿ ಬರಲಿ ಎಂದು ನಮ್ಮ ಬಯಕೆ. ಅವರ ಆತ್ಮಕ್ಕೆ ಶಾಂತಿ ದೊರೆಯಲಿ


– ಅಕ್ಕಿಹೆಬ್ಬಾಳು ವೆಂಕಟೇಶ್, ಕುವೆಂಪುನಗರ.

ನಾವು ಕುಡಿಯುತ್ತಿರುವುದು ನೀರಲ್ಲ, ವಿಷಜಲ!

ಮಾನ್ಯರೆ,

ದೇಶದ ಬಹುತೇಕ ಜನ ಕಲುಷಿತ ನೀರನ್ನೇ ಕುಡಿಯುತ್ತಿದ್ದಾರೆ ಎಂಬ ಆಘಾತಕಾರಿ ವಿಚಾರವನ್ನು ಕೇಂದ್ರ ಜಲಶಕ್ತಿ ಇಲಾಖೆ ರಾಜ್ಯಸಭೆಗೆ ತಿಳಿಸಿದೆ. ನದಿ, ಕೆರೆ, ಕೊಳವೆ ಬಾವಿಯಲ್ಲಿ ಯುರೇನಿಯಂ, ಕಬ್ಬಿಣ, ನೈಟ್ರೇಟ್ ಸುರಕ್ಷಿತ ಪ್ರಮಾಣಕ್ಕಿಂತ ಹೆಚ್ಚಿದ್ದು, ಶೇ.80ರಷ್ಟು ಜನ ಈ ವಿಷಯುಕ್ತ ಜಲ ಸೇವಿಸುತ್ತಿದ್ದಾರೆ. ಪರಿಣಾಮ, ಜನರಿಗೆ ಕ್ಯಾನ್ಸರ್, ಚರ್ಮ ಕಾಯಿಲೆ, ಲಿವರ್, ಕಿಡ್ನಿ ತೊಂದರೆಯ ಅಪಾಯವಿದೆ. ಹೀಗಾಗಿ, 2026ರೊಳಗೆ ಶುದ್ಧ ನೀರು ಪೂರೈಕೆ ಕೇಂದ್ರ ಸರ್ಕಾರದ ಗುರಿ ಎಂದು ಹೇಳಿದೆ. ಇದನ್ನು ಆದಷ್ಟು ಬೇಗ ಕಾರ್ಯಗತಗೊಳಿಸಬೇಕು. ಜನಸಂಕುಲವನ್ನು ಉಳಿಸಬೇಕು.

– ಪವನ್ ಕಲ್ಯಾಣ್, ಮಹಾರಾಜ ಕಾಲೇಜು, ಮೈಸೂರು



ಕೆಬಿಜಿಯವರ


ಘೂಮಂತ್ರ... ಘೂಮಂತ್ರ... ಘೂಮಂತ್ರ...

ಚಿತ್ರಕಲಾ ಶಿಕ್ಷಕ, ಛಾಯಾಚಿತ್ರ ಪತ್ರಕರ್ತ ಎಸ್.ಎಂ.ಜಂಬುಕೇಶ್ವರ ಬರೆಯುತ್ತಾರೆ...

ಕಳೆದ ವಾರ ನನ್ನ ಕಚೇರಿಯಲ್ಲಿ ನನಗೆ ಒಂದು ಆಶ್ಚರ್ಯ ಕಾದಿತ್ತು. ಸುಮಾರು ನಾಲ್ಕು ವರ್ಷಗಳಿಂದ ಭೇಟಿಯಾಗದೇ ಇದ್ದ, ಪತ್ರಿಕೋದ್ಯಮದಲ್ಲಿ ಛಾಯಾಚಿತ್ರಕಾರನಾಗಿ, ಅಂಕಣಕಾರನಾಗಿ ಕೆಲಸ ಮಾಡಿದ್ದ, ಮಿಗಿಲಾಗಿ ನನಗೆ ತುಂಬಾ ಆತ್ಮೀಯರಾಗಿದ್ದ ಎಸ್.ಎಂ. ಜಂಬುಕೇಶ್ವರರು ನನ್ನ ಕಚೇರಿಯಲ್ಲಿ ಪ್ರತ್ಯಕ್ಷರಾದರು. ಇದೊಂದು ಅತ್ಯಂತ ಸೌಜನ್ಯದ ಭೇಟಿಯಾಗಿತ್ತು. ಇವರು ಮೂರು ದಶಕಗಳಿಗೂ ಹೆಚ್ಚು ಕಾಲ ಚಿತ್ರ ಕಲಾ ಶಿಕ್ಷಕರಾಗಿ ಜೆಎಸ್ಎಸ್ ಸಂಸ್ಥೆಯಲ್ಲಿ ಕೆಲಸ ಮಾಡಿದ್ದರು. ಒಬ್ಬ ಪ್ರತಿಭಾನ್ವಿತ ವ್ಯಕ್ತಿ ಎನ್ನುವುದರಲ್ಲಿ ಎರಡು ಮಾತಿಲ್ಲ. ವನ್ಯಜೀವಿ ಛಾಯಾಗ್ರಾಹಕರಾಗಿ ಕೂಡ ಹೆಸರು ಮಾಡಿದವರು. ಲಂಡನ್‌ನ ರಾಯಲ್ ಫೋಟೋಗ್ರಾಫಿಕ್ ಸಂಸ್ಥೆಯಿಂದ ಸೈ ಎನಿಸಿಕೊಂಡು, ಪ್ರಶಸ್ತಿ ಕೂಡ ಪಡೆದವರು. ಇದರ ಜೊತೆಗೆ ಲಲಿತ ಕಲಾ ಅಕಾಡೆಮಿ ಪ್ರಶಸ್ತಿಯೂ ಸೇರಿದಂತೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಕೂಡ ಅವರ ವೃತ್ತಿ ಜೀವನದ ಸಾರ್ಥಕತೆಗೆ ಸಂದ ಗೌರವಗಳಾಗಿವೆ.



ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ



ಎಸ್.ಎಂ. ಜಂಬುಕೇಶ್ವರ ಭಾವಚಿತ್ರವುಳ್ಳ ಪುಸ್ತಕದ ಮುಖಪುಟ

ಈ ರೀತಿ ಕಾಯಕದಲ್ಲಿ ಕೈಲಾಸವನ್ನು ಕಂಡ ವ್ಯಕ್ತಿ ಅಪರೂಪಕ್ಕೆ ಬಂದಾಗ ಕಾರಣವಿರಲೇಬೇಕಲ್ಲವೇ? ಹೌದು, ಅವರ ಕೈಯ್ಯಲ್ಲಿದ್ದ ಒಂದು ಪುಸ್ತಕವನ್ನು ನನಗೆ ವಿಶ್ವಾಸಪೂರ್ವಕವಾಗಿ ನೀಡಿ, ಇದು ನನ್ನ ಇತ್ತೀಚಿನ ಪುಸ್ತಕ ಎಂದರು. ಹೌದು, ಅದರ ಲೋಕಾರ್ಪಣಾ ಕಾರ್ಯಕ್ರಮದ ಬಗ್ಗೆ ಪತ್ರಿಕೆಗಳಲ್ಲಿ ಓದಿದೆ ಎಂದೆ. ಆ ಪುಸ್ತಕದ ಹೆಸರು: **ವರ್ಣದಿಂದ ವಿಶ್ವದೆಡೆಗೆ (ಸಮಕಾಲೀನ ಐತಿಹ್ಯ)**

ಸ್ವಲ್ಪ ಹೊತ್ತು ನಮ್ಮ ಹಳೆಯ ದಿನಗಳನ್ನು ಮೆಲುಕು ಹಾಕಿದಾಗ ಅನೇಕ ನೆನಪುಗಳು ಒಂದೊಂದಾಗಿ ಹೊರ ಬಂದವು. ನನ್ನ ಮಿತ್ರ ಹೆಸರಾಂತ ಅಂತಾರಾಷ್ಟ್ರೀಯ ಛಾಯಾಚಿತ್ರ ಪತ್ರಕರ್ತ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರೂ, ಮೈಸೂರಿನವರೇ ಆದ **ಟಿ.ಎಸ್. ಸತ್ಯನ್** ಅವರನ್ನು ನೆನಪಿಸಿಕೊಂಡೆವು. ಅವರಿಂದಲೇ ಜಂಬುಕೇಶ್ವರರು ಛಾಯಾಚಿತ್ರ ತೆಗೆಯುವುದರೊಂದಿಗೆ ಲೇಖನಗಳನ್ನು ಬರೆಯಲು ಸ್ಫೂರ್ತಿಯನ್ನು ಪಡೆದರಂತೆ. ಅನೇಕ ಸಲ ನಾನು ಅವರಿಂದ ನಮ್ಮ ಪತ್ರಿಕೆಗಳಲ್ಲಿ ಉಪಯೋಗಿಸಲು, ವಿಶೇಷವಾಗಿ ಸುತ್ತೂರು ಮಠಕ್ಕೆ ಸಂಬಂಧಿಸಿದ, ಛಾಯಾಚಿತ್ರಗಳನ್ನು ಪಡೆದಿದ್ದೇನೆ. ಅವರು ತುಂಬಾ ಸಹಕರಿಸುತ್ತಿದ್ದರು.

ನೀಲಗಿರಿಯಲ್ಲಿರುವ ಸುತ್ತೂರು ಮಠದ ಹೊಸ ಪಬ್ಲಿಕ್ ಸ್ಕೂಲ್ ಕಾರ್ಯಕ್ರಮಕ್ಕೆ, ಮೈಸೂರಿನ ಪತ್ರಕರ್ತರನ್ನು ಕರೆದುಕೊಂಡು ಹೋದಾಗ, ಇವರು ಸಂಪರ್ಕ ಅಧಿಕಾರಿಯಾಗಿ (ಪಿಆರ್) ನಮ್ಮ ಪ್ರಯಾಣ, ಉಳಿಯಲು ವ್ಯವಸ್ಥೆ, ಊಟೋಪಚಾರವನ್ನು ಅಚ್ಚುಕಟ್ಟಾಗಿ ಮಾಡಿದ್ದನ್ನು ನಾನು ನೆನಪಿಸಿಕೊಂಡೆ.

ಮಾತು ಸುತ್ತೂರು ಮಠದ ಹಿಂದಿನ ಸ್ವಾಮಿಗಳಾದ **ಶ್ರೀ ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿ**ಯವರ ಬಗ್ಗೆ ಮುಂದುವರಿಯಿತು. ಜಂಬುಕೇಶ್ವರರು ಒಮ್ಮೆಲೆ ಭಾವುಕರಾದರು. "ನಾನು ಇವತ್ತು ಏನೆಲ್ಲ ಆಗಿದ್ದರೂ ಅದಕ್ಕೆ ಕಾರಣ ಆ ಮಹಾಸ್ವಾಮಿಗಳು" ಎಂದು ಮಾತು ಮುಂದುವರೆಸಿದರು. ಅವರದು ಬಳ್ಳಾರಿ ಜಿಲ್ಲೆ. ಅಲ್ಲಿ ಚಿತ್ರಕಲೆಯನ್ನು ಅಭ್ಯಾಸ ಮಾಡುತ್ತಿದ್ದ ಅವರನ್ನು ಅವರ ತಂದೆ ಮೈಸೂರಿನ ಹೆಸರಾಂತ ಚಾಮರಾಜೇಂದ್ರ ವೃತ್ತಿ ಶಿಕ್ಷಣ ಶಾಲೆಯಲ್ಲಿ (ಸಿಟಿಐ) ಅಭ್ಯಾಸ ಮುಂದುವರಿಸಲು ಇಲ್ಲಿಗೆ ಕಳುಹಿಸಿದ್ದರು. ಇಲ್ಲಿಗೆ ಬಂದವರೇ ಊಟ ವಸತಿಗೆ ಸುತ್ತೂರು ಮಠಕ್ಕೆ ಹೋಗಿದ್ದಾರೆ ಅಲ್ಲಿ ಶ್ರೀ ರಾಜೇಂದ್ರ ಸ್ವಾಮೀಜಿಯವರು ಅವರಿಗೆ "ಚೆನ್ನಾಗಿ ಓದಿ ಒಳ್ಳೆಯ ಹೆಸರು ತೆಗೆದುಕೊಳ್ಳಬೇಕು" ಎಂದು ಆಶೀರ್ವಾದ ಮಾಡಿದ್ದರಂತೆ. ಆ ವಿಷಯವನ್ನು ವಿವರವಾಗಿ ಈ ಪುಸ್ತಕದಲ್ಲಿ ಬರೆದಿದ್ದೇನೆ. ನೀವು ಅದನ್ನು ಓದಿ ಎಂದವರೇ ನನ್ನ ಮೇಜಿನ ಮೇಲಿದ್ದ ಪುಸ್ತಕವನ್ನು ತೆಗೆದು ಹಾಳೆ ತಿರುಗಿಸಿ ನೋಡಿ "ಇಲ್ಲಿದೆ, ಪುಟ 238" ಎಂದರು. ಆ ಲೇಖನದ ಶೀರ್ಷಿಕೆ "ರಾಜೇಂದ್ರ ಶ್ರೀಗಳಿಂದ ವಿಶೇಷ 'ಸೈಕಲ್' ಯಾತ್ರೆಗೆ ಪೂಜೆ."

ಸ್ವಾಮೀಜಿಯವರು ಸೈಕಲ್ ಖರೀದಿಗೆ ಹಣ ಕೊಟ್ಟಿದ್ದಲ್ಲದೆ ತಾವೇ ಮುಂದೆ ನಿಂತು, ಜಂಬುಕೇಶ್ವರರ ಕೋರಿಕೆ ಮೇರೆಗೆ ಸೈಕಲ್‌ಗೆ ಪೂಜೆ ಮಾಡಿದರಂತೆ. 'ಈ ಸಂದರ್ಭವನ್ನು ಜೀವನದಲ್ಲಿ ನಾನು ಮರೆಯುವುದುಂಟೆ?' ಎನ್ನುತ್ತಾರೆ ಜಂಬುಕೇಶ್ವರ್ ಅವರು. ಶ್ರೀ ರಾಜೇಂದ್ರ ಸ್ವಾಮೀಜಿಯವರ ಹೃದಯವಂತಿಕೆ ಬಗ್ಗೆ ಒಂದು ಬಾರಿ ನನಗಾದ ಅನುಭವವನ್ನು ನಾನೂ ಕೂಡ ಹಂಚಿಕೊಂಡೆ. ಒಮ್ಮೆ ನಾನು ಸ್ವಾಮೀಜಿಯವರ ಮುಂದೆ ಕುಳಿತಿದ್ದಾಗ ಮಠದ ಸನ್ಯಾಸಿ ಒಬ್ಬರು ಅವರ ಪಕ್ಕ ಬಂದು ಮೆಲು ಧ್ವನಿಯಲ್ಲಿ ಏನೋ ಸಮಸ್ಯೆ ಹೇಳಿದರು. ಶ್ರೀಗಳು ಮುಗುಳ್ನಗುತ್ತಾ "ಹೌದಾ, ಶಿವ ಕೊಡುತ್ತಾನೆ. ಕೆಲಸ ಮುಂದುವರಿಸಿ. ಎಲ್ಲಾ ಶಿವನಿಗೆ ಬಿಟ್ಟಿದ್ದು" ಎಂದರು. ಇಂದು ಈ ಸುತ್ತೂರು ಮಠ ಮನು ಕುಲಕ್ಕೆ ಅನ್ನಭಾಗ್ಯ, ಅಕ್ಷರಭಾಗ್ಯ, ಆರೋಗ್ಯ ಭಾಗ್ಯ ಹಾಗೂ ವಿವಿಧ ರೀತಿಯ ವಿದ್ಯಾಭ್ಯಾಸ ಜೊತೆಗೆ ಉದ್ಯೋಗ ಭಾಗ್ಯಗಳನ್ನು ಈ ಮಟ್ಟದಲ್ಲಿ ಕೊಡಬೇಕಾದರೆ ರಾಜೇಂದ್ರ ಮಹಾಸ್ವಾಮಿಗಳು ನಂಬಿರುವ ಆ ಶಿವನೇ ಅವರಿಗೆ ಪ್ರೇರಕನಾಗಿರಬೇಕು ಎಂದೆನಿಸುತ್ತಿದೆ ನನಗೆ.

ಅಂದ ಹಾಗೆ ಜಂಬುಕೇಶ್ವರ್ ಅವರು ಜಿಲ್ಲಾ ಪತ್ರಕರ್ತರ ಸಂಘಕ್ಕೆ ಮಾಡಿರುವ ಸೇವೆ ಮರೆಯುವಂತಿಲ್ಲ. ಅದರ ಬಗ್ಗೆ ಅವರು ಸವಿವರವಾಗಿ ಈ ಪುಸ್ತಕದಲ್ಲಿ ಸತ್ಯ ನಿಷ್ಠೆಯಿಂದ ಬರೆದಿದ್ದಾರೆ (ಪುಟ 231). ಇಂದಿನ ನಗರದ ಪತ್ರಕರ್ತರು ಹಾಗೂ ಪದಾಧಿಕಾರಿಗಳು ಇದನ್ನು ಓದಲೇಬೇಕು. ಚಿಕ್ಕದಾಗಿದ್ದ ಪತ್ರಕರ್ತರ ಭವನ, ಅದರ ಚಟುವಟಿಕೆಗಳಿಗೆ ಸಾಲದ್ದಾಗಿತ್ತು. ಹಿಂದೂ ಪತ್ರಿಕೆಯ ವರದಿಗಾರ (1999) ಎಸ್. ಭರತ್‌ಕುಮಾರ್ ಅದರ ಅಧ್ಯಕ್ಷರಾಗಿದ್ದರು. ಹಾಗೂ ಎಸ್.ಎಂ. ಜಂಬುಕೇಶ್ವರ್ ಕಾರ್ಯದರ್ಶಿಯಾಗಿದ್ದರು. ಶ್ರೀ ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಅವರು ತಮ್ಮ ಸಂಸತ್ ಸದಸ್ಯರ ಪ್ರದೇಶಾಭಿವೃದ್ಧಿ ನಿಧಿಯಿಂದ ಸಂಘದ ವಿಸ್ತರಣಾ ಕಟ್ಟಡಕ್ಕಾಗಿ 10 ಲಕ್ಷ ರೂ.ಗಳನ್ನು ಮಂಜೂರು ಮಾಡಿದರು. ಆದರೆ ಭರತ್‌ಕುಮಾರ್ ಅವರ ಆಕಸ್ಮಿಕ ನಿಧನದಿಂದಾಗಿ ಕೆಲವು ಸದಸ್ಯರು ಸಂಘಕ್ಕೆ ಬೀಗ ಹಾಕಿ ಅಲ್ಲಿ ಸಾಮಾನ್ಯ ಕೆಲಸ ಕಾರ್ಯಗಳು ನಡೆಯದ ಹಾಗೆ ಮಾಡಿಬಿಟ್ಟಿದ್ದರು. ಈ ಕೆಲವು ಸದಸ್ಯರಿಂದಾಗಿ ಕೊನೆಗೆ ಸಂಘದ ಚಟುವಟಿಕೆಗಳು ಸ್ಥಗಿತಗೊಂಡವು. ಈ ಸಂದರ್ಭದಲ್ಲಿ ಜಂಬುಕೇಶ್ವರ್ ಅವರ ದೂರದೃಷ್ಟಿ ಹಾಗೂ ತೆಗೆದುಕೊಂಡ ನಿರ್ಣಯ ಮೆಚ್ಚುವಂತಹದ್ದು. ನನ್ನನ್ನು, ಆಂದೋಲನ ಪತ್ರಿಕೆಯ ರಾಜಶೇಖರ ಕೋಟಿಯವರು ಹಾಗೂ ಇತರ ಸಮಾನ ಮನಸ್ಕ ಸದಸ್ಯರನ್ನು ತಾವೇ ಖುದ್ದಾಗಿ ಭೇಟಿಯಾಗಿ ನಾವೆಲ್ಲ ಸಂಘದ ಕಚೇರಿ ಮುಂದೇ ಸೇರಿ ಚರ್ಚಿಸಿದೆವು. ನಂತರ 2001ರಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಬಿ.ವಿ. ಮಲ್ಲಿಕಾರ್ಜುನಯ್ಯನವರನ್ನು ಕರೆಸಿ, ಕಚೇರಿಯ ಬೀಗವನ್ನು ತೆರವು ಮಾಡಿ, ಅವರ ಅಧ್ಯಕ್ಷತೆಯಲ್ಲಿ ಸಭೆ ಮಾಡಿ, ಎಲ್ಲರೂ ಒಮ್ಮತದಿಂದ ರಾಜಶೇಖರ ಕೋಟಿಯವರನ್ನು ಅಧ್ಯಕ್ಷರನ್ನಾಗಿಯೂ, ನನ್ನನ್ನು ಉಪಾಧ್ಯಕ್ಷರನ್ನಾಗಿಯೂ, ಜಂಬುಕೇಶ್ವರ ಅವರನ್ನು ಕಾರ್ಯದರ್ಶಿಯಾಗಿ ಚುನಾಯಿಸಿದರು.

ರಾಜಶೇಖರ ಕೋಟಿ, ಜಂಬುಕೇಶ್ವರ್ ಮೊದಲಾಗಿ ಎಲ್ಲಾ ಸದಸ್ಯರು ನನ್ನನ್ನು ಅಧ್ಯಕ್ಷರಾಗಲು ಒತ್ತಾಯಿಸಿದರು. ಆದರೆ ನಾನು ರಾಜಶೇಖರ ಕೋಟಿಯವರನ್ನು 'ಈ ಬಾರಿ ಒಪ್ಪಿಕೊಳ್ಳಿ, ಮುಂದೆ ನೋಡೋಣ' ಎಂದೆ. ಕೋಟಿಯವರು ಒಪ್ಪಿದರು. ಅಂದು ಜಂಬುಕೇಶ್ವರ್ ಅವರು ಮುಂಚೂಣಿಯಲ್ಲಿದ್ದು ಈ ಕೆಲಸವನ್ನು ಮಾಡದೇ ಇದ್ದಿದ್ದರೆ, ಆ ಸಂಘ ಅಂದೇ ಶಾಶ್ವತವಾಗಿ ಮುಚ್ಚಿ ಹೋಗುತ್ತಿತ್ತು. ಇಲ್ಲವೇ ಒಡೆದು ಎರಡು ಹೋಳಾಗುತ್ತಿತ್ತೇನೋ.

ಅದೇನೇ ಇರಲಿ, ಅನೇಕ ವಿಷಯಗಳನ್ನೊಳಗೊಂಡ, ಐದು ಭಾಗಗಳಿರುವ 402 ಪುಟಗಳ ಈ ಪುಸ್ತಕಕ್ಕೆ ಇಟ್ಟ ಹೆಸರು ಒಂದು ವಿಸ್ಮಯ, **'ವರ್ಣದಿಂದ ವಿಶ್ವದೆಡೆಗೆ'**. ಬಹುಶಃ ಇದಕ್ಕೆ ಕಾರಣ ತಾನೊಬ್ಬ ಚಿತ್ರ ಕಲಾವಿದನಾಗಿರುವುದರಿಂದ 'ವರ್ಣದಿಂದ' ಹಾಗೂ ವಿಶ್ವ ಪರ್ಯಟನೆ ಮಾಡುತ್ತಿರುವುದರಿಂದ 'ವಿಶ್ವದೆಡೆಗೆ' ಎಂದಾಗಿರಬಹುದೇನೋ. ಇರಲಿ, ಐದು ಭಾಗಗಳೆಂದರೆ: 1. ಪತ್ರಿಕೆಗಳಿಗೆ ಬರೆದ ಲೇಖನಗಳು, 2. ವ್ಯಕ್ತಿಚಿತ್ರಗಳು, 3. ಉಪನ್ಯಾಸಗಳು, 4. ಸಂದರ್ಶನಗಳು, 5. ಚಿತ್ರ ಸಂಪುಟಗಳು.

ಸರಳ, ಸಹಜವಾದ ಭಾಷೆಯಲ್ಲಿ ಸಂಶೋಧನೆ ಮಾಡಿದ ರೀತಿಯಲ್ಲಿ ಈ ಪುಸ್ತಕ ಓದಿಸಿಕೊಂಡು ಹೋಗುತ್ತದೆ. ಅದರಲ್ಲಿ ಬರುವ ವಿಷಯಗಳ ಬಗ್ಗೆ, ವ್ಯಕ್ತಿಗಳ ಬಗ್ಗೆ ನೋಡಿ, ಕೇಳಿ ಓದಿ ಸ್ವಲ್ಪ ತಿಳಿದಿದ್ದರೆ, ಈ ಪುಸ್ತಕವನ್ನು ಓದಿ ತುಂಬಾ ಖುಷಿ ಪಡಬಹುದು.

ಪುಸ್ತಕದ ಕಡೇ ಭಾಗ 5ರ ಚಿತ್ರ ಸಂಪುಟದಲ್ಲಿ ಮೈಸೂರಿನ ಪತ್ರಕರ್ತರು 2002ರಲ್ಲಿ ಶ್ರೀಲಂಕಾಕ್ಕೆ ಹೋದಾಗ ತೆಗೆದ ಒಂದು ಚಿತ್ರದಲ್ಲಿ ನಾನು ಇರುವುದನ್ನು ಗಮನಿಸಿದೆ. ಶ್ರೀಲಂಕಾದ ನಮ್ಮ ಆ ಪ್ರವಾಸಕ್ಕೂ ಜಂಬುಕೇಶ್ವರ್ ಅವರೇ ಕಾರಣ.

ಧನ್ಯವಾದಗಳು.

ಪುಸ್ತಕ ಪ್ರಕಟಿಸಿದವರು 'ತಾರಾ ಪುಸ್ತಕ'; ಮೊಬೈಲ್ ಸಂಖ್ಯೆ: 98866–23490.

email : voice@starofmysore.com

'ನವ ಭಾರತಕ್ಕಾಗಿ ಹೊಸ ಯೋಜನೆಗಳು' ಪ್ರಧಾನಿ ಮೋದಿ ಜನಪರ ಯೋಜನೆಗಳ ಪುಸ್ತಕ ಬಿಡುಗಡೆ

ಬೆಂಗಳೂರು, ಆ. 22(ಕೆಎಂಶಿ)– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಜಾರಿಗೊಳಿಸಿರುವ ಜನಪರ ಯೋಜನೆಗಳ ವಿವರ ಒಳಗೊಂಡಿರುವ "ನವ ಭಾರತಕ್ಕಾಗಿ ಹೊಸ ಯೋಜನೆಗಳು" (ನ್ಯೂ ಸ್ಕೀಮ್ಸ್ ಫಾರ್ ನ್ಯೂ ಇಂಡಿಯಾ) ಪುಸ್ತಕಗಳನ್ನು, ರಾಜ್ಯ ಬಿಜೆಪಿ ಇಂದಿಲ್ಲಿ ಬಿಡುಗಡೆ ಮಾಡಿದೆ.



ಮುಂಬರುವ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ಕೇಂದ್ರ ಸರ್ಕಾರದ ಸಾಧನೆಗಳನ್ನು ಮನೆ ಮನೆಗೆ ತಲುಪಿಸಲು ಇಂಗ್ಲೀಷ್ ಮತ್ತು ಕನ್ನಡದಲ್ಲಿ ಮುದ್ರಿಸಲಾಗಿದೆ.

ಈ ಪುಸ್ತಕಗಳನ್ನು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಇಂದಿಲ್ಲಿ ಬಿಡುಗಡೆ ಮಾಡಿ, ಕೇಂದ್ರದ ಜನಪರ ಯೋಜನೆಗಳ ಮಾಹಿತಿಯುಳ್ಳ ಈ ಪುಸ್ತಕದ ಮೂಲಕ ಜನರನ್ನು ಮತ್ತು ಇನ್ನಷ್ಟು ಫಲಾನುಭವಿಗಳನ್ನು ತಲುಪುವಂತಾಗಲಿ ಎಂದರು. ಕೇಂದ್ರ ಸರಕಾರದ ಜನಪರ ಯೋಜನೆಗಳು ಪ್ರತಿ ಮನೆಗೂ ತಲುಪಲು ಇದು ಪೂರಕ. ಪ್ರಧಾನಿಯವರ ಪ್ರತಿಯೊಬ್ಬರ ಸಶಕ್ತೀಕರಣದ ಕನಸು ನನಸಾಗಲು ಇದು ಸಹಾಯಕ ಎಂದರು.

ರಾಜ್ಯದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮತ್ತು ಇತರರಿಂದ ಮಾಹಿತಿ ಪಡೆದು ಈ ಪುಸ್ತಕವನ್ನು ಕನ್ನಡ ಮತ್ತು ಇಂಗ್ಲಿಷ್ ಭಾಷೆಗಳಲ್ಲಿ ಹೊರತರಲಾಗಿದೆ. ಈ ಪುಸ್ತಕವು ವಿವಿಧ ಯೋಜನೆಗಳ ಅರ್ಹತಾ ಮಾನದಂಡಗಳು ಮತ್ತು ಅರ್ಜಿಯ ಕಾರ್ಯವಿಧಾನವನ್ನು ಒಳಗೊಂಡಂತೆ ಎಲ್ಲ ಯೋಜನೆಗಳ ವಿವರಗಳನ್ನು ಒಳಗೊಂಡಿದೆ.

ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆ, ಉಜ್ವಲಾ, ಉಜಾಲಾ, ಮುದ್ರಾ, ಸ್ಕಿಲ್ ಇಂಡಿಯಾ, ಜನ ಔಷಧಿ, ಪ್ರಧಾನಮಂತ್ರಿ ಗರೀಬ್ ಕಲ್ಯಾಣ್ ಯೋಜನೆ, ಸ್ವಚ್ಛ ಭಾರತ್, ಮೇಕ್ ಇನ್ ಇಂಡಿಯಾ, ಸುರಕ್ಷಿತ ಮಾತೃತ್ವ, ಬೇಟಿ–ಬಚಾವೋ ಬೇಟಿ–ಪಡಾವೋ, ಡಿಜಿಟಲ್ ಇಂಡಿಯಾ, ಖೇಲೋ ಸೇರಿದಂತೆ ಕೆಲವು ಪ್ರಮುಖ ಯೋಜನೆಗಳ ಮಾಹಿತಿ ಇದರಲ್ಲಿದೆ. ಸುಕನ್ಯಾ ಸಮೃದ್ಧಿ ಯೋಜನೆ, ಪ್ರಧಾನಮಂತ್ರಿ ಕಿಸಾನ್ ಮಾನ್ ಧನ ಯೋಜನೆ, ಸಮರ್ಥ ಯೋಜನೆ, ರಾಷ್ಟ್ರೀಯ ವಯೋಶ್ರೀ ಯೋಜನೆ, ಪ್ರಧಾನಮಂತ್ರಿ ಕೌಶಲ್ಯ ಕೇಂದ್ರ, ಪ್ರಧಾನ ಮಂತ್ರಿ ಕೃಷಿ ಕಲ್ಯಾಣ ಅಭಿಯಾನ, ಮಣ್ಣಿನ ಆರೋಗ್ಯ ಕಾರ್ಡ್ ಯೋಜನೆ ಸೇರಿದಂತೆ 100ಕ್ಕೂ ಹೆಚ್ಚು ಯೋಜನೆಗಳ ವಿವರವಿದ್ದು, ಸಮಾಜದ ಪ್ರತಿಯೊಂದು ವರ್ಗಕ್ಕೆ ತಲುಪಲು ಇದು ನೆರವಾಗಲಿದೆ ಎಂದು ವಿವರಿಸಿದರು. ಸ್ಕೀಮ್ ವೆಬ್ ಪುಟಗಳಿಗಾಗಿ ನಾವು ಕ್ಯೂಆರ್ ಕೋಡ್‌ಗಳನ್ನು ನೀಡಲಾಗಿದೆ. ಸ್ಕ್ಯಾನ್ ಮಾಡುವ ಮೂಲಕ ನೇರವಾಗಿ ಆಯಾ ವೆಬ್ ಪುಟಕ್ಕೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು ಅಥವಾ ಸ್ಕೀಮ್ ಮಾಹಿತಿಯನ್ನು ಪಡೆಯಬಹುದು ಎಂದು ಪ್ರಕಾಶಕರು ತಿಳಿಸಿದ್ದಾರೆ.

ಅರ್ಜಿ ಆಹ್ವಾನ

ಮೈಸೂರು,ಆ.22–ತೋಟಗಾರಿಕೆ ಇಲಾಖೆ ಮತ್ತು ಜಿಲ್ಲಾ ತೋಟಗಾರಿಕೆ ಸಂಘ ಕರ್ಜನ್ ಪಾರ್ಕ್ ಸಂಯುಕ್ತಾಶ್ರಯದಲ್ಲಿ 2022–23ನೇ ಸಾಲಿನ ದಸರಾ ಫಲಪುಷ್ಪ ಪ್ರದರ್ಶನದ ಅಂಗವಾಗಿ ತರಬೇತಿಯನ್ನು ಏರ್ಪಡಿಸಲಾಗಿದೆ. ಡಾ.ಎಂ.ಎಚ್ ಮರಿಗೌಡ ಕರ್ಜನ್ ಪಾರ್ಕ್ ಮೈಸೂರು ಸಭಾಂಗಣದಲ್ಲಿ ಸೆ.5ರಂದು ಬೆಳಗ್ಗೆ 11 ಗಂಟೆಯಿಂದ 1.30ರವರೆಗೆ ikebana flower arrangement ಮತ್ತು 2.30 ರಿಂದ 5 ಗಂಟೆಯವರೆಗೆ janoor art, ಸೆಪ್ಟೆಂಬರ್ 6ರಂದು ಬೆಳಗ್ಗೆ 11 ಗಂಟೆಯಿಂದ 1.30 ರವರೆಗೆ vertical garden ಮತ್ತು 2.30 ರಿಂದ 5 ಗಂಟೆಯವರೆಗೆ western art flower arrangement ತರಬೇತಿಯನ್ನು ನೀಡುತ್ತಿದ್ದು ಸಾರ್ವಜನಿಕರು ಪ್ರವೇಶ ಶುಲ್ಕ ರೂ 100 ಗಳನ್ನು ಪಾವತಿಸಿ ಹೆಸರು ನೋಂದಾಯಿಸಿಕೊಳ್ಳಬೇಕು ಎಂದು ರಾಜ್ಯವಲಯ ಕರ್ಜನ್ ಪಾರ್ಕ್‌ನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಹಾಗೂ ಜಿಲ್ಲಾ ತೋಟಗಾರಿಕೆ ಸಂಘದ ಪದನಿಮಿತ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಎಚ್.ಡಿ ಪದವಿ



ಮೈಸೂರು, ಆ. 22– ಡಾ. ಮಿಡತಲಾ ರಾಣಿ ಅವರ ಮಾರ್ಗದರ್ಶನದಲ್ಲಿ ಹೆಚ್. ಸುರೇಂದ್ರ ಅವರು ರಾಜ್ಯಶಾಸ್ತ್ರ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿವಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ತಿ.ನರಸೀಪುರದಲ್ಲಿ ಉದ್ಯಮಿ ಮನೆಗೆ ಕನ್ನ

1.67 ಕೋಟಿ ಮೌಲ್ಯದ ನಗದು, ಅಪಾರ ಚಿನ್ನಾಭರಣ ಕಳವು

ತಿ.ನರಸೀಪುರ, ಆ.22– ಉದ್ಯಮಿಯೊಬ್ಬರ ಮನೆಯ ಹಿಂಬಾಗಿಲ ಬೀಗ ಮುರಿದು 30 ಲಕ್ಷ ರೂ. ನಗದು ಹಾಗೂ 1.67 ಕೋಟಿ ರೂ. ಮೌಲ್ಯದ ಚಿನ್ನಾಭರಣ ಕಳವು ಮಾಡಿರುವ ಘಟನೆ ತಿ.ನರಸೀಪುರ ಟೌನ್‌ನ ಪಿಎಲ್‌ಡಿ ಬ್ಯಾಂಕ್ ರಸ್ತೆಯಲ್ಲಿ ಭಾನುವಾರ ನಡೆದಿದೆ.

ಇಲ್ಲಿನ ಉದ್ಯಮಿ ಶ್ರೀನಿಧಿ ಡಿಸ್ಟ್ರಿಬ್ಯೂಟರ್ಸ್ ಮಾಲೀಕ ಓ.ಜಿ. ಶ್ರೀನಿವಾಸ್ ಅವರ ಮನೆಯಲ್ಲಿ ಭಾರೀ ಕಳವು ನಡೆದಿದ್ದು, ಗಿರವಿ ಅಂಗಡಿ ಮಾಲೀಕ ಮಹಾವೀರ್ ಜೈನ್ ಎಂಬುವರು ಇವರ ಮನೆಯಲ್ಲಿಟ್ಟಿದ್ದ ಚಿನ್ನಾಭರಣ ಹಾಗೂ ಬೆಳ್ಳಿ ಪದಾರ್ಥಗಳನ್ನು ಖದೀಮರು ಕದ್ದೊಯ್ದಿದ್ದಾರೆ.

ಶ್ರೀನಿವಾಸ್ ಅವರು ಭಾನುವಾರ ಬೆಳಗ್ಗೆ 9 ಗಂಟೆ ಸುಮಾರಿನಲ್ಲಿ ಕುಟುಂಬ ಸಮೇತರಾಗಿ ಮೈಸೂರಿಗೆ ತೆರಳಿದ್ದು, ರಾತ್ರಿ 9.30ರ ಸುಮಾರಿನಲ್ಲಿ ಹಿಂದಿರುಗಿ, ಮನೆ ಬಾಗಿಲು ತೆರೆದು ಒಳ ಪ್ರವೇಶಿಸಿದಾಗ ವಾರ್ಡ್‌ರೋಬ್ ಬಾಗಿಲುಗಳು ತೆರೆದಿದ್ದು, ಮಂಚ ಹಾಗೂ ನೆಲದ ಮೇಲೆ ವಸ್ತುಗಳು ಚೆಲ್ಲಾಪಿಲ್ಲಿಯಾಗಿ ಬಿದ್ದಿರುವುದು ಕಂಡು ಬಂದಿದೆ. ಅವರ ಮನೆಯಲ್ಲಿದ್ದ ಧನಲಕ್ಷ್ಮೀ ಲಾಕರ್‌ನ ಬೀಗ ಮುರಿದು ಡಿಜಿಟಲ್ ಲಾಕರ್ ಅನ್ನು ಒಡೆದು ಚಿನ್ನಾಭರಣ ಕಳವು ಮಾಡಿರುವುದು ಕಂಡುಬಂದಿದೆ. ಅಲ್ಲದೆ, ಇವರ ತಂದೆ–ತಾಯಿಯ ಬೆಡ್‌ರೂಂನ ಗಾಡ್ರೇಜ್ ಬೀರುಗಳ ಲಾಕರ್‌ಗಳನ್ನೂ ಕೂಡ ಒಡೆದು ಕಳವು ಮಾಡಲಾಗಿದೆ.

ಮನೆಯ ಹಿಂದೆ ಕಬ್ಬಿಣದಿಂದ ಅಳವಡಿಸಿದ್ದ ಬಾಗಿಲಿನ ಚಿಲಕವನ್ನು ಒಳಗಿನಿಂದ ಮುರಿದಿರುವ ಖದೀಮರು ನಂತರ ಮನೆ ಪ್ರವೇಶಿಸಿ ಕಳವು ಮಾಡಿದ್ದಾರೆ. ಮನೆ ಸಮೀಪ ಇದ್ದ ಗಿರಿವಿ ಅಂಗಡಿ ಮಾಲೀಕ ಮಹಾವೀರ್ ಜೈನ್ ಅವರು ತಾವು ಗಿರವಿ ಇಟ್ಟುಕೊಂಡಿದ್ದ ಚಿನ್ನಾಭರಣ ಗಳನ್ನು ಕೂಡ ಶ್ರೀನಿವಾಸ್ ಅವರ ಮನೆಯ ಧನಲಕ್ಷ್ಮೀ ಲಾಕರ್‌ನಲ್ಲೇ ಇಟ್ಟಿದ್ದರು ಎಂದು ಪೊಲೀಸರಿಗೆ ನೀಡಿರುವ ದೂರಿನಲ್ಲಿ ತಿಳಿಸಲಾಗಿದೆ. ಖದೀಮರು ಒಟ್ಟು 3500 ಗ್ರಾಂ ಚಿನ್ನಾಭರಣ, 12 ಕೆಜಿ ತೂಕದ ಬೆಳ್ಳಿ ಗಟ್ಟಿ ಮತ್ತು 30 ಲಕ್ಷ ರೂ. ನಗದು ದೋಚಿದ್ದಾರೆ.

ಈ ಸಂಬಂಧ ಭಾನುವಾರ ಮಧ್ಯರಾತ್ರಿ ಶ್ರೀನಿವಾಸ್ ಅವರು ಪೊಲೀಸರಿಗೆ ದೂರು ಸಲ್ಲಿಸಿದ್ದಾರೆ. ವಿಷಯ ತಿಳಿಯುತ್ತಿದ್ದಂತೆಯೇ ಜಿಲ್ಲಾ ಎಸ್ಪಿ ಚೇತನ್, ಅಡಿಷನಲ್ ಎಸ್ಪಿ ನಂದಿನಿ, ನಂಜನಗೂಡು ಉಪವಿಭಾಗದ ಡಿವೈಎಸ್ಪಿ ಗೋವಿಂದರಾಜು, ತಿ.ನರಸೀಪುರ ಠಾಣೆ ಸರ್ಕಲ್ ಇನ್ಸ್‌ಪೆಕ್ಟರ್ ಕೃಷ್ಣಪ್ಪ, ಸಬ್‌ಇನ್ಸ್‌ಪೆಕ್ಟರ್ ತಿರುಮಲೇಶ್ ಹಾಗೂ ಸಿಬ್ಬಂದಿ ಭೇಟಿ ನೀಡಿ, ಪರಿಶೀಲಿಸಿದರು. ಶ್ವಾನದಳ ಹಾಗೂ ಬೆರಳಚ್ಚು ವಿಭಾಗದ ಸಿಬ್ಬಂದಿ ಮನೆಗೆ ಭೇಟಿ ನೀಡಿ ಸಾಕ್ಷ್ಯಗಳನ್ನು ಕಲೆಹಾಕಿದರು. ಶ್ರೀನಿವಾಸ್ ಅವರ ಮನೆಗೆ ಸಿಸಿ ಕ್ಯಾಮರಾ ಅಳವಡಿಸ ಲಾಗಿದೆಯಾದರೂ ಅದು ದುರಸ್ತಿಗೊಳಗಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಭಾರತ್ ಜೋಡೋ ಪಾದಯಾತ್ರೆ ರಾಜ್ಯದಲ್ಲಿ 21 ದಿನ 510 ಕಿಲೋ ಮೀಟರ್ ಸಂಚಾರ

ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ವಿವರಣೆ

ಇದರಲ್ಲಿ ರಾಷ್ಟ್ರೀಯ ನಾಯಕರು ಭಾಗಿಯಾಗ್ತಾರೆ



ಬೆಂಗಳೂರು, ಆ.22(ಕೆಂಪಿ)– ರಾಹುಲ್ ಗಾಂಧಿ ಅವರ ಭಾರತ್ ಜೋಡೋ ಪಾದ ಯಾತ್ರೆ ರಾಜ್ಯದಲ್ಲಿ 510 ಕಿಲೋ ಮೀಟರ್ ದೂರ 21 ದಿನಗಳ ಕಾಲ ಸಾಗಲಿದೆ.

ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ, ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ. ಶಿವಕುಮಾರ್, ರಾಜ್ಯದಲ್ಲಿನ ಪಾದಯಾತ್ರೆಯ ಉಸ್ತುವಾರಿಯನ್ನು ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಬಿ.ಕೆ. ಹರಿಪ್ರಸಾದ್ ಅವರಿಗೆ ನೀಡಲಾಗಿದೆ. ಜಿಲ್ಲಾ ನಾಯಕರಿಗೆ ಕೆಲವು ಜವಾಬ್ದಾರಿ ನೀಡಲಾಗಿದೆ ಎಂದರು.

ಕೆಲವು ಕಡೆ ಅರಣ್ಯ ಪ್ರದೇಶವಿದ್ದು, ಅಲ್ಲಿ ನಡೆಯಬೇಕೆ ಬೇಡವೇ ಎಂಬ ವಿಚಾರವಾಗಿ ಸ್ಥಳೀಯ ಪೊಲೀಸರ ಜತೆ ಚರ್ಚಿಸಿ ದೆಹಲಿಯ ತಂಡ ತೀರ್ಮಾನಿಸಲಿದೆ. ನಮ್ಮ ರಾಷ್ಟ್ರೀಯ ನಾಯಕರು ಇದರಲ್ಲಿ ಭಾಗ ವಹಿಸ ಲಿದ್ದು, ರಾಜ್ಯದ ಮಾಹಿತಿಯನ್ನು ಶೀಘ್ರದಲ್ಲಿ ತಿಳಿಸುತ್ತೇವೆ. ರಾಜ್ಯದಲ್ಲಿ 8 ಜಿಲ್ಲೆಗಳ ಮೂಲಕ ಈ ಪಾದಯಾತ್ರೆ ಸಾಗಲಿದ್ದು, ಬಳ್ಳಾರಿ ಹೊರತಾಗಿ ಚಿತ್ರದುರ್ಗ, ತುಮಕೂರು, ಮಂಡ್ಯ, ಚಾಮರಾಜನಗರ, ಮೈಸೂರು ಜಿಲ್ಲೆಗಳ ಮಾರ್ಗವನ್ನು ಖುದ್ದಾಗಿ ನೋಡಿ ದ್ದೇನೆ. ಇಡೀ ರಾಜ್ಯದ ಕಾರ್ಯಕರ್ತರು ಹಾಗೂ ಮುಖಂಡರು ಹೆಜ್ಜೆ ಹಾಕಲಿದ್ದಾರೆ.

ಭಾರತವನ್ನು ಒಗ್ಗೂಡಿಸಲು, ಶಾಂತಿ, ಸೌಹಾರ್ದತೆ ಸ್ಥಾಪಿಸಿ, ಜನರ ಸಮಸ್ಯೆ ಯನ್ನು ಚರ್ಚೆ ಮಾಡಲು ದೇಶದಾದ್ಯಂತ ಸುಮಾರು 600ಕ್ಕೂ ಹೆಚ್ಚು ಕಾಂಗ್ರೆಸ್ ನಾಯಕರು ಸೇರಿ ಚರ್ಚೆ ಮಾಡಿದ್ದಾರೆ. ಅದರಂತೆ ಸ್ವಾತಂತ್ರ್ಯ ಅಮೃತ ಮಹೋ ತ್ಸವ ಆಚರಣೆಗಾಗಿ ಪ್ರತಿ ಜಿಲ್ಲೆಯಲ್ಲಿ 75 ಕಿ.ಮೀ. ಪಾದಯಾತ್ರೆ ಮಾಡಬೇಕು ಎಂಬ ಸೂಚನೆ ನೀಡಲಾಗಿತ್ತು. ಆದರೆ ನಮ್ಮ ನಾಯಕರು ಜಿಲ್ಲೆಯಲ್ಲಿ ಅಲ್ಲ, ಕ್ಷೇತ್ರದಲ್ಲೇ 200 ಕಿ.ಮೀ. ದೂರ ಪಾದಯಾತ್ರೆ ಮಾಡಿದ್ದಾರೆ. ಜಿಲ್ಲಾ ಮಟ್ಟದ ಪಾದಯಾತ್ರೆ ಅವಧಿಯನ್ನು ಆಗಸ್ಟ್ 30 ರವರೆಗೆ ವಿಸ್ತರಣೆ ಮಾಡಲಾಗಿದೆ. ಈ ಕುರಿತ ಎಲ್ಲ ವರದಿಯನ್ನು ಮಾಧ್ಯಮಗಳ ಮುಂದೆ ತಿಳಿಸುತ್ತೇನೆ. ಈ ಕಾರ್ಯಕ್ರಮಕ್ಕೆ ಜನರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದ್ದು, ನಾವು ಜನರ ಸಮಸ್ಯೆಯನ್ನು ಆಲಿಸುತ್ತಿದ್ದೇವೆ ಎಂದು ನಮ್ಮ ನಾಯಕರು ತಿಳಿಸಿದ್ದಾರೆ. ಉಳಿದಂತೆ 15 ರಂದು ರಾಜ್ಯಮಟ್ಟದಲ್ಲಿ ತಿರಂಗಾ ಯಾತ್ರೆ ಮಾಡಿದ್ದೇವೆ. ಆ ಮೂಲಕ ಉದಯಪುರದಲ್ಲಿ ಹಮ್ಮಿಕೊಂಡ ಕಾರ್ಯಕ್ರಮ ಯಶಸ್ವಿಯಾಗಿದೆ.

ನಾವು ಶೀಘ್ರದಲ್ಲೇ ರಾಜಕೀಯ ವ್ಯವ ಹಾರಗಳ ಸಮಿತಿ ಸಭೆ ಕರೆದು ಭಾರತ್ ಜೋಡೋ ಕಾರ್ಯಕ್ರಮದ ವಿಚಾರವಾಗಿ ಚರ್ಚೆ ಮಾಡುತ್ತೇವೆ. ಅದಕ್ಕೂ ಮೊದಲು ಇಂದು ಪ್ರಾಥಮಿಕವಾಗಿ ನಾನು, ಬಿ.ಕೆ. ಹರಿಪ್ರಸಾದ್ ದೆಹಲಿ ತಂಡದ ಜತೆ ಚರ್ಚೆ ಮಾಡುತ್ತಿದ್ದೇವೆ. ಪಾದಯಾತ್ರೆ ಹಾದು ಹೋಗುವ ಜಿಲ್ಲೆಗಳ ನಾಯಕರನ್ನು ಕರೆದು ಚರ್ಚೆ ಮಾಡುತ್ತೇವೆ. ಸ್ಥಳೀಯರು ಈ ಪಾದಯಾತ್ರೆಯಲ್ಲಿ ಯಾವ ರೀತಿ ಭಾಗವಹಿಸ ಬೇಕು ಎಂಬ ಬಗ್ಗೆ ಚರ್ಚೆ ಮಾಡುತ್ತೇವೆ.

ರಾಜ್ಯದಲ್ಲಿ ಶಾಂತಿ ಭಂಗ ಪ್ರಕರಣಗಳು ಹೆಚ್ಚಾಗುತ್ತಿದ್ದರೆ, ಕಾನೂನು ಸುವ್ಯವಸ್ಥೆ ಏನಾಗಬೇಕು ಎಂಬ ಪ್ರಶ್ನೆಗೆ, 'ನಮ್ಮ ನಾಯಕರಿಗೆ ಯಾರೋ ಕಪ್ಪು ಬಾವುಟ ಪ್ರದರ್ಶಿಸಿ, ಮೊಟ್ಟೆ ಹೊಡೆದು, ಧಿಕ್ಕಾರ ಕೂಗಿ ದರು ಎಂಬುದು ಮುಖ್ಯವಲ್ಲ. ಅಧಿಕಾರ ದಲ್ಲಿ ಇದ್ದಾಗ ನಾವು ಜನರಿಗೆ ಏನು ಕೊಡುಗೆ ನೀಡಿದ್ದೇವೆ ಎಂಬುದು ಮುಖ್ಯ. ಸಿದ್ದರಾಮಯ್ಯ ಅವರು ಕೇವಲ ಒಬ್ಬ ನಾಯಕರಲ್ಲ. ಅವರಿಗೆ ಸಂವಿಧಾನದ ಮೂಲಕ ವಿರೋಧ ಪಕ್ಷದ ನಾಯಕರ ಜವಾಬ್ದಾರಿ ನೀಡಲಾಗಿದೆ. ಹಳ್ಳಿಗಳಿಗೆ, ನೆರೆ ಪ್ರದೇಶಕ್ಕೆ ಹೋಗಿ ಜನರಿಗೆ ಧ್ವನಿಯಾಗುವುದು ಅವರ ಕರ್ತವ್ಯ. ಆ ಕರ್ತವ್ಯ ಮಾಡಬಾರದು, ಮಾಡಿ ದರೆ ಕಪ್ಪು ಬಾವುಟ ಪ್ರದರ್ಶಿಸುತ್ತೇನೆ, ಮೊಟ್ಟೆ ಹೊಡೆಯುತ್ತೇವೆ ಎನ್ನುವುದು ಸರಿಯಲ್ಲ. ನೀವು ಕೇವಲ ಮೊಟ್ಟೆಯಲ್ಲ, ಏನಾ ದರೂ ಹೊಡೆಯಿರಿ. ಆದರೆ ಅದೇ ಕೆಲಸವನ್ನು ಬೇರೆ ಪಕ್ಷದವರು ಮಾಡಿದರೆ ಪರಿಸ್ಥಿತಿ ಏನಾಗುತ್ತದೆ ಎಂಬುದನ್ನು ಯೋಚಿಸಿ.

ಆ. 26 ರಂದು ಕೊಡಗು ಎಸ್ಪಿ ಕಚೇರಿಗೆ ಮುತ್ತಿಗೆ ಹೋರಾಟ ಪಕ್ಷದ ವತಿಯಿಂದ ನಡೆಯುತ್ತ ದೆಯೇ ಎಂಬ ಪ್ರಶ್ನೆಗೆ, 'ನಮಗೆ ಎಸ್ಪಿ ಮುಖ್ಯ ವಲ್ಲ. ಸಂವಿಧಾನಬದ್ಧ ವಿಪಕ್ಷ ನಾಯಕರ ಕರ್ತ ವ್ಯಕ್ಕೆ ಸರ್ಕಾರ ಅಡ್ಡಿ ಮಾಡಲು ಮುಂದಾಗಿದೆ.

ಎಸ್ಪಿ ಕೇವಲ ನೆಪ ಮಾತ್ರ. ಈ ಕಪ್ಪು ಬಾವುಟ ಪ್ರತಿಭಟನೆ ಸರ್ಕಾರದ ಪ್ರಾಯೋಜಿ ತದಿಂದ ಆಗಿದೆ. ಹೀಗಾಗಿ ಈ ಹೋರಾಟ ಸರ್ಕಾರದ ವಿರುದ್ಧವೇ ಹೊರತು, ಅಧಿಕಾರಿ ವಿರುದ್ಧ ಅಲ್ಲ. ನಿಮ್ಮಂತೆ ಕಾಂಗ್ರೆಸ್ ಕಾರ್ಯಕರ್ತರು ಸರ್ಕಾರದ ಎಲ್ಲ ಕಾರ್ಯ ಕ್ರಮಗಳಿಗೆ ಅಡ್ಡಿಪಡಿಸಿದರೆ ಪರಿಸ್ಥಿತಿ ಏನು? ಮೊಟ್ಟೆ ಹೊಡೆದವನನ್ನು ಹೀರೋ ರೀತಿ ಬಿಂಬಿಸುವ ಬದಲು ಜನರ ಸಂಕಷ್ಟ ಗಳತ್ತ ಗಮನಹರಿಸಿ. ರಾಜಕೀಯದಲ್ಲಿ ಯಾರೂ ಶಾಶ್ವತವಲ್ಲ. ನಿಮಗೆ ರಾಜ್ಯದ ಜನರ ಸೇವೆಗೆ ಅವಕಾಶ ಸಿಕ್ಕಿದ್ದು ನೀವು ಏನು ನೀಡಿದ್ದೀರಿ ಎಂಬುದು ಮುಖ್ಯ ಎಂದು ತಿಳಿಸಿದರು.

ಆ. 26ರ ಹೋರಾಟದಲ್ಲಿ ಶಾಸಕರು ಭಾಗವಹಿಸಬೇಕು ಎಂಬ ಸಂದೇಶ ರವಾನೆ ಯಾಗಿರುವ ಬಗ್ಗೆ ಕೇಳಿದ ಪ್ರಶ್ನೆಗೆ, ಎಲ್ಲಿ ಅವರು ಪ್ರತಿಭಟನೆ ಮಾಡಿದರೋ, ಅಲ್ಲೇ ಅದಕ್ಕೆ ಧಿಕ್ಕಾರ ಕೂಗಬೇಕಾಗಿದೆ. ಮಹಾತ್ಮ ಗಾಂಧಿ, ನೆಹರೂ, ಸರ್ದಾರ್ ಪಟೇಲರು ನಮಗೆ ಕೊಟ್ಟಿರುವ ಮಾರ್ಗದರ್ಶನದಂತೆ ಹೋರಾಡುತ್ತೇವೆ ಎಂದು ತಿಳಿಸಿದರು.

ಮತದಾರರ ಗುರುತಿನ ಚೀಟಿಗೆ ಆಧಾರ್ ಕಾರ್ಡ್ ಜೋಡಣೆಗೆ ಸೂಚನೆ

ಮೈಸೂರು, ಆ.22(ಎಸ್‌ಪಿಎನ್)– ಭಾರತ ಚುನಾವಣಾ ಆಯೋಗವು ಮತದಾರರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಭಾರತದಾದ್ಯಂತ ಈಗಾಗಲೇ ಗುರುತಿನ ಚೀಟಿಗೆ ಆಧಾರ್ ಸಂಖ್ಯೆ ಜೋಡಣೆ ಪ್ರಕ್ರಿಯೆ ಜಾರಿಗೊಳಿಸಿದೆ. ಅದರಂತೆ ಸರ್ಕಾರಿ, ಅರೆ ಸರ್ಕಾರಿ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ, ಅಧಿಕಾರಿಗಳು ತಮ್ಮ ಮತದಾರರ ಗುರುತಿನ ಚೀಟಿಗೆ ಆಧಾರ್ ಲಿಂಕ್ ಮಾಡುವಂತೆ ಕರ್ನಾಟಕ ಚುನಾವಣಾ ಆಯೋಗದ ಮುಖ್ಯ ಚುನಾವಣಾಧಿಕಾರಿಗಳು ಸೂಚಿಸಿದ್ದಾರೆ ಎಂದು ಸಿಆಸುಇ(ರಾಜಕೀಯ) ಅಧೀನ ಕಾರ್ಯದರ್ಶಿ ಭಾರತಿ ಶಿವಕುಮಾರ್ ತಿಳಿಸಿದ್ದಾರೆ.

ಆಧಾರ್ ಜೋಡಣೆ ಹೇಗೆ: ವೋಟರ್ ಹೆಲ್ಪ್‌ಲೈನ್ ಆ್ಯಪ್ (ವಿಹೆಚ್‌ಎ–ಮೊಬೈಲ್ ಅಪ್ಲಿಕೇಷನ್) ಎನ್‌ವಿಎಸ್‌ಪಿ ವೆಬ್‌ಸೈಟ್ ಮೂಲಕ 6ಬಿ ನಮೂನೆ ಜೊತೆಗೆ ಆಧಾರ್ ಜೋಡಣೆ ಮಾಡಬಹುದು. ಗುರುತಿನ ಚೀಟಿಯಲ್ಲಿ ಮತದಾರರ ಹೆಸರು ಬಿಟ್ಟಿದ್ದಲ್ಲಿ, ತಪ್ಪಾಗಿದ್ದಲ್ಲಿ, ಯುವ ಮತದಾರರ ಹೆಸರು ಬಿಟ್ಟು ಹೋಗಿದ್ದಲ್ಲಿ ವೆಬ್‌ಸೈಟ್ ಮುಖೇನ ಸೂಕ್ತ ದಾಖಲೆಗಳನ್ನು ಸಲ್ಲಿಸಬಹುದಾಗಿದೆ. ಎಲ್ಲಾ ಇಲಾಖೆ ಮುಖ್ಯಸ್ಥರು, ತಮ್ಮ ವ್ಯಾಪ್ತಿಯಲ್ಲಿ ಬರುವ ಅಧಿಕಾರಿ/ಸಿಬ್ಬಂದಿ ಹಾಗೂ ಅವಲಂಬಿತ ಕುಟುಂಬ ಸದಸ್ಯರ ಮತದಾರರ ಗುರುತಿನ ಚೀಟಿಗೆ ಆಧಾರ್ ಲಿಂಕ್ ಮಾಡುವ ಮೇಲುಸ್ತುವಾರಿ ವಹಿಸಲು ನೋಡೆಲ್ ಅಧಿಕಾರಿಗಳ ನೇಮಿಸಬೇಕು ಎಂದು ತಿಳಿಸಿದ್ದಾರೆ.

ಈ ಕುರಿತು ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಧಾನ ಕಾರ್ಯದರ್ಶಿಗಳು, ಎಲ್ಲಾ ಮುಖ್ಯ ಇಲಾಖಾ ಮುಖ್ಯಸ್ಥರು, ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು, ಜಿಪಂ ಸಿಇಓಗಳು, ಸರ್ಕಾರದ ನಿರ್ದೇಶನ ಪಾಲಿಸುವಂತೆ ಸೂಚಿಸಿದ್ದಾರೆ.

ಮಹಿಳಾ ಸ್ವಸಹಾಯ ಸಂಘದ ಮುಖ್ಯಸ್ಥೆ ಗಮನ ಬೇರೆಡೆ ಸೆಳೆದು 1.79 ಲಕ್ಷ ಕಳವು

ಹೆಚ್.ಡಿ.ಕೋಟೆ, ಆ.22– ಮಹಿಳಾ ಸ್ವಸಹಾಯ ಸಂಘದ ಮುಖ್ಯಸ್ಥೆಯ ಗಮನ ಬೇರೆಡೆ ಸೆಳೆದು 1.79 ಲಕ್ಷ ರೂ. ದೋಚಿದ ಘಟನೆ ಹೆಚ್.ಡಿ.ಕೋಟೆ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಬಳಿ ನಡೆದಿದೆ. ಹೆಚ್.ಡಿ.ಕೋಟೆಯ ಪರಮೇಶ್ವರಿ ಸ್ವಸಹಾಯ ಸಂಘದ ಮುಖ್ಯಸ್ಥೆ ಮುತ್ತಮ್ಮ (45) ಹಣ ಕಳೆದುಕೊಂಡವರಾಗಿದ್ದು, ಇವರ ಸಂಘಕ್ಕೆ ಧರ್ಮಸ್ಥಳ ಸಂಘದಿಂದ ಮಂಜೂರಾಗಿದ್ದ ಸಾಲದ ಮೊತ್ತದ ಪೈಕಿ 1.79 ಲಕ್ಷ ರೂ.ಗಳನ್ನು ಮುತ್ತಮ್ಮ ಹೆಚ್.ಡಿ.ಕೋಟೆಯ ಬ್ಯಾಂಕ್ ಆಫ್ ಬರೋಡಾದಿಂದ ಡ್ರಾ ಮಾಡಿ, ಅದನ್ನು ತನ್ನ ವ್ಯಾನಿಟಿ ಬ್ಯಾಗ್‌ನಲ್ಲಿರಿಸಿಕೊಂಡು ಬಸ್‌ಸ್ಟ್ಯಾಂಡ್‌ಗೆ ತೆರಳುತ್ತಿದ್ದಾಗ ಇದಕ್ಕಿದ್ದಂತೆ ಅವರ ಕತ್ತು ಮತ್ತು ಬೆನ್ನು ಕಡಿತವಾಗಿದೆ. ಹಾಗೂ ಕಣ್ಣು ಮಂಜಾಗಿ, ವ್ಯಾನಿಟಿ ಬ್ಯಾಗ್ ಕೆಳಗೆ ಬಿದ್ದಿದೆ. ಅವರು ಅದನ್ನು ತೆಗೆದುಕೊಳ್ಳುವಷ್ಟರಲ್ಲಿ ಅಪರಿಚಿತ ವ್ಯಕ್ತಿಯೋರ್ವ ಹಣದ ಸಮೇತ ವ್ಯಾನಿಟಿ ಬ್ಯಾಗ್ ತೆಗೆದುಕೊಂಡು ಪರಾರಿಯಾಗಿದ್ದಾನೆ. ಈ ಸಂಬಂಧ ಹೆಚ್.ಡಿ.ಕೋಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸೆ.2ರಂದು ಪ್ರಧಾನಿ ನರೇಂದ್ರ ಮೋದಿ ಮಂಗಳೂರಿಗೆ ಭೇಟಿ



ಬೆಂಗಳೂರು/ಮಂಗಳೂರು: ಪ್ರಧಾನಿ ನರೇಂದ್ರ ಮೋದಿಯವರು ಸೆ2ರಂದು ಮಂಗಳೂರಿಗೆ ಭೇಟಿ ನೀಡಲಿದ್ದಾರೆ. ನವ ಮಂಗಳೂರು ಬಂದರು ಪ್ರಾಧಿಕಾರದ ಕಾರ್ಯಕ್ರಮಕ್ಕೆ ಮೋದಿಗೆ ಆಹ್ವಾನ ನೀಡಲಾಗಿದೆ. ಎನ್‌ಎಂಪಿಎದ ಹಲವು ಯೋಜನೆಗಳ ಉದ್ಘಾಟನೆಗಾಗಿ ಆಹ್ವಾನಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕಾರ್ಯಕ್ರಮಕ್ಕೆ ಬರುವುದಾಗಿ ಪ್ರಧಾನಿಯವರು ಒಪ್ಪಿಕೊಂಡಿ ದ್ದಾರೆ ಮಂಗಳೂರು ಭೇಟಿ ಕುರಿತು ಪ್ರಧಾನಿ ಕಚೇರಿಯಿಂದ ಅಧಿಕೃತವಾಗಿದ್ದು, ಮಂಗಳೂರು ಪ್ರವಾಸ ಕಾರ್ಯಕ್ರಮ ಪಟ್ಟಿ ಅಂತಿಮಗೊಳಿಸುವ ಸಾಧ್ಯತೆ ಇದೆ.

ಸಾಂಸ್ಕೃತಿಕ, ಕ್ರೀಡಾ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ



ಮೈಸೂರು, ಆ.22(ಎಸ್‌ಪಿಎನ್)– ಸುತ್ತೂರು ಮಠದ ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರ 107ನೇ ಜಯಂತಿ ಮತ್ತು ಸ್ನಾತಕೋತ್ತರ ವಿಭಾಗದ ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳ ಬಹುಮಾನ ವಿತರಣೆ ಕಾರ್ಯಕ್ರಮವನ್ನು ಮೈಸೂರು–ಊಟಿ ರಸ್ತೆಯ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾಲೇಜು ಪ್ರಾಂಶುಪಾಲ ಪ್ರೊಚಂದ್ರಶೇಖರ್ ಮಾತನಾಡಿ, ಕೇವಲ 12 ಮಕ್ಕಳಿಗೆ ಊಟದ ವ್ಯವಸ್ಥೆಯೊಂದಿಗೆ ಓದಲು ಅನುವು ಮಾಡಿಕೊಟ್ಟ ರಾಜೇಂದ್ರ ಶ್ರೀಗಳು, 1960ರ ಹೊತ್ತಿಗೆ ಸುತ್ತೂರು ಮಠದಲ್ಲಿ 4 ಸಾವಿರ ವಿದ್ಯಾರ್ಥಿಗಳಿಗೆ ಜ್ಞಾನ ದಾಸೋಹಕ್ಕೆ ಕಾರಣವಾಯಿತು. 1986ರ ಹೊತ್ತಿಗೆ 170ಕ್ಕೂ ಹೆಚ್ಚು ವಿದ್ಯಾಸಂಸ್ಥೆಗಳನ್ನು ನಿರ್ಮಾಣ ಮಾಡಿದರು ಎಂದರು.

ಇತರರ ಕಷ್ಟಕ್ಕೆ ತಮ್ಮ ಬದುಕನ್ನೇ ಮುಡುಪಾಗಿಟ್ಟಿದ್ದ ಶ್ರೀಗಳು, ಆದರ್ಶ ಪಥವೇ ನಮ್ಮ ಜ್ಯೋತಿ ಪಥವಾಗಬೇಕು ಎಂದು ಸದಾ ಬಯಸುತ್ತಿದ್ದರು. ಹಾಗಾಗಿ ಗ್ರಾಮೀಣ ಪ್ರದೇಶದಲ್ಲಿ ಅನೇಕ ವಿದ್ಯಾಸಂಸ್ಥೆಗಳನ್ನು ಕಟ್ಟಿ ರೈತರ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುವು ಮಾಡಿಕೊಟ್ಟಿದ್ದಾರೆ ಎಂದರು. ಈ ವೇಳೆ ವಾಟಾಳು ಮಠದ ಶ್ರೀಗಳು, ಕಾರ್ಯ ನಿರ್ವಾಹಕ ಪ್ರೊ.ಬಿ.ವಿ.ಸಾಂಬಶಿವಯ್ಯ, ಕಾಲೇಜು ಪ್ರಾಂಶುಪಾಲ ಪ್ರೊ.ಎಂ.ಪಿ.ವಿಜಯೇಂದ್ರ ಕುಮಾರ್, ಎಸ್.ಸೋಮಶೇಖರ್, ಡಾ.ಎನ್.ಮಹೇಶ್ವರಿ ಉಪಸ್ಥಿತರಿದ್ದರು.

ಶ್ರೀ ಯೋಗಿ ನಾರೇಯಣ ಬಣಜಿಗ ಸಂಘಕ್ಕೆ ನಿರ್ದೇಶಕರಾಗಿ 25 ಸದಸ್ಯರ ಆಯ್ಕೆ



ಮೈಸೂರು,ಆ.22(ಪಿಎಂ)– ಮೈಸೂರಿನ ಸರಸ್ವತಿಪುರಂನಲ್ಲಿರುವ ಶ್ರೀ ಯೋಗಿ ನಾರೇ ಯಣ ಬಣಜಿಗ (ಬಲಿಜ) ಸಂಘದ ಆಡಳಿತ ಮಂಡಳಿಗೆ 25 ಮಂದಿ ಸದಸ್ಯರು ನಿರ್ದೇ ಶಕರಾಗಿ ಅವಿರೋಧವಾಗಿ ಆಯ್ಕೆಯಾದರು.

ಅಲ್ಲದೆ, ಅರಗು ಮತ್ತು ಬಣ್ಣದ ಕಾರ್ಖಾನೆ ಮಾಜಿ ಅಧ್ಯಕ್ಷ ಹೆಚ್.ಎ. ವೆಂಕಟೇಶ್ ಸೇರಿದಂತೆ 6 ಮಂದಿ ಸದಸ್ಯರು ವಿಶೇಷ ಆಹ್ವಾನಿತರಾಗಿ ಆಯ್ಕೆಯಾದರು. ಸಂಘದ ಆವರಣದಲ್ಲಿ ನಡೆದ ವಾರ್ಷಿಕ ಮಹಾಸಭೆ ಯಲ್ಲಿ ಚುನಾವಣಾಧಿಕಾರಿ ಬಿ.ಎಲ್.ಪುಟ್ಟಸ್ವಾಮಿ ಆಯ್ಕೆಯನ್ನು ಘೋಷಣೆ ಮಾಡಿದರು.

ಎಂ.ನಾರಾಯಣ, ಹೆಚ್.ಆರ್. ಗೋಪಾಲ ಕೃಷ್ಣ, ಡಿ.ನಾಗರಾಜು, ಹೆಚ್.ಎಸ್.ಕೃಷ್ಣಪ್ಪ, ಕೆ.ಚಂದ್ರಶೇಖರ್, ಗೋವಿಂದರಾಜು, ಜಿ.ವೇಣು ಗೋಪಾಲ್, ಜಿ.ರಮೇಶ್, ಹೆಚ್.ವಿ.ನಾಗ ರಾಜ, ಹೆಚ್.ಕೆ.ಜಗನ್ನಾಥ, ಕೆ.ಎನ್.ವಿಜಯ ಕೊಪ್ಪ ಚೆಲುವರಾಜು, ಎನ್.ವಿಜಯಕುಮಾರ್, ಕೆ.ಸಿ.ಪ್ರಕಾಶ್, ಎನ್.ಹೇಮಂತ್ ಕುಮಾರ್, ಡಾ.ಟಿ. ರಮೇಶ್, ಡಾ.ಎಸ್.ಕೃಷ್ಣಪ್ಪ, ಗೋಪಾಲ ಕೃಷ್ಣ, ಕೆ.ಜನಾರ್ದನ, ಬಿ.ಎಸ್. ಗುರುಮೂರ್ತಿ, ಬಿ.ಕೆ.ಸುರೇಶ್, ಎಂ.ಆರ್. ಗಿರೀಶ್, ನಂಜಪ್ಪ, ಎ.ಚೆನ್ನಕೇಶವ, ಎಂ.ವಿ. ವೆಂಕಟೇಶ್ ನೂತನ ನಿರ್ದೇಶಕರಾಗಿ ಆಯ್ಕೆಯಾದರು. ಅಲ್ಲದೆ, ಹೆಚ್.ಎ.ವೆಂಕಟೇಶ್, ಪಾಂಡುರಂಗ, ಪಾರ್ಥಸಾರಥಿ, ಬಾಲ ರಾಜು, ಟಿ.ಎಸ್.ರಮೇಶ್, ಎಂ.ನಾಗರಾಜ ವಿಶೇಷ ಆಹ್ವಾನಿತರಾಗಿ ಆಯ್ಕೆಯಾದರು.

ಇದೇ ವೇಳೆ ಮಾತನಾಡಿದ ಹೆಚ್.ಎ. ವೆಂಕಟೇಶ್, ಈ ಸಂಘದ ವತಿಯಿಂದ ಇದೇ ಆವರಣದಲ್ಲಿ ನಡೆಯುತ್ತಿರುವ ಹಾಸ್ಟೆಲ್ ನಲ್ಲಿ ಆಶ್ರಯ ಪಡೆದು ವ್ಯಾಸಂಗ ಮಾಡಿದ ಅನೇಕ ಮಂದಿ ದೇಶ–ವಿದೇಶ ಗಳಲ್ಲಿ ಉನ್ನತ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. 1953ರಲ್ಲಿ ಮಂಡ್ಯದ ನಮ್ಮ ಸಮುದಾಯ ಪೂರ್ವಿಕರು ಪ್ರಾರಂಭ ಮಾಡಿದ ನಮ್ಮ ಸಂಘವು ಇಂದು 40ರಿಂದ 50 ಮಂದಿ ಸಮುದಾಯದ ವಿದ್ಯಾರ್ಥಿಗಳಿಗೆ ಆಶ್ರಯ ನೀಡುವ ಇಂತಹ ಹಾಸ್ಟೆಲ್ ಅನ್ನು ಹೊಂದಿದೆ ಎಂದರು.

ವಿದ್ಯಾರ್ಥಿನಿಲಯ ಒಂದು ದೇವಾ ಲಯವಿದ್ದಂತೆ. ಇಲ್ಲಿ ಆಶ್ರಯ ಪಡೆದಿರುವ ವಿದ್ಯಾರ್ಥಿಗಳು ಪರಿಶ್ರಮದಿಂದ ವ್ಯಾಸಂಗ ವನ್ನು ಮಾಡಿ ಉನ್ನತ ಹುದ್ದೆಗಳನ್ನು ಅಲಂಕರಿ ಸಬೇಕು. ಆ ಮೂಲಕ ತಮ್ಮ ಪೋಷಕರು ಹಾಗೂ ಸಮುದಾಯಕ್ಕೆ ಒಳ್ಳೆಯ ಹೆಸರು ತರುವಂತಾಗಬೇಕು ಎಂದು ಆಶಿಸಿದರು.

ಈವರೆಗೆ ಸಂಘವನ್ನು ನಡೆಸಿಕೊಂಡು ಬಂದಿರುವ ಅಧ್ಯಕ್ಷರು, ಕಾರ್ಯ ದರ್ಶಿಗಳು ಹಾಗೂ ಪದಾಧಿಕಾರಿಗಳು ಪ್ರಾಮಾಣಿಕತೆ, ನಿಷ್ಠೆಯಿಂದ ಯಾವುದೇ ಲೋಪವಿಲ್ಲದೆ ಆಡಳಿತ ನಡೆಸಿದ್ದಾರೆ. ಅದರಂತೆ ಈಗ ನೂತನವಾಗಿ ಆಯ್ಕೆಯಾದವರು ಪ್ರಾಮಾ ಣಿಕತೆಯಿಂದ ಕಾರ್ಯನಿರ್ವಹಿಸಲಿ ಎಂದು ಶುಭ ಕೋರಿದರು. ಸಂಘದ ಅಧ್ಯಕ್ಷ ಎಂ.ನಾರಾ ಯಣ್, ಕಾರ್ಯದರ್ಶಿ ಹೆಚ್.ಆರ್.ಗೋಪಾಲ ಕೃಷ್ಣ ಮತ್ತಿತರರು ಹಾಜರಿದ್ದರು.

ಮಕ್ಕಳ ದಸರಾಗೆ ಶಾಲಾ ಶಿಕ್ಷಣ, ಸಾಕ್ಷರತಾ ಇಲಾಖೆ ಸಿದ್ಧತೆ

ಮೈಸೂರು, ಆ.22(ಎಸ್‌ಪಿಎನ್)– ಈ ಬಾರಿ ದಸರಾ ಮಹೋತ್ಸವದಲ್ಲಿ ಮಕ್ಕಳ ದಸರಾ ಯಶಸ್ವಿಗೊಳಿಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಪೂರ್ವ ಸಿದ್ಧತೆ ನಡೆಸಿದೆ. ಈಗಾಗಲೇ ಜಿಲ್ಲಾ ದಸರಾ ವಿಶೇಷಾಧಿಕಾರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆ ಮೇರೆಗೆ ಇಲಾಖೆ ವತಿಯಿಂದ ಮಕ್ಕಳ ದಸರಾ ಸಿದ್ಧತೆ ಕುರಿತು ವರದಿ ತಯಾರಿಸಿ ಜಿಲ್ಲಾಡಳಿತಕ್ಕೆ ಸಲ್ಲಿಸಲಾಗಿದೆ. ಇದರಲ್ಲಿ ಎಲ್ಲಾ ತಾಲೂಕಿನಲ್ಲಿ ಸರ್ಕಾರಿ, ಅನುದಾನಿತ, ಅನುದಾನ ರಹಿತ ಶಾಲಾ ಮಕ್ಕಳು ದಸರಾ ಮಹೋತ್ಸವದಲ್ಲಿ ವಿದ್ಯಾರ್ಥಿಗಳು ಭಾಗಿಯಾಗಲು ಕಾರ್ಯಕ್ರಮ ರೂಪಿಸಲಾಗಿದ್ದು, ಇದಕ್ಕೆ 19 ಲಕ್ಷ ರೂ. ಅಂದಾಜು ವೆಚ್ಚ ಬೇಕಾಗಬಹುದು ಎಂದು ಶಾಲಾ ಶಿಕ್ಷಣ ಮತ್ತು ಸಾರಕ್ಷತಾ ಇಲಾಖೆ ಉಪ ನಿರ್ದೇಶಕ ರಾಮಚಂದ್ರರಾಜೇ ಅರಸ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು. ಈ ಬಾರಿಯ ದಸರಾ ಮಹೋತ್ಸವದಲ್ಲಿ ಮಕ್ಕಳ ದಸರಾ ಆಯೋಜಿಸಲು ಇಲಾಖಾ ವತಿಯಿಂದ ಅಧಿಕಾರಿಯೊಬ್ಬರನ್ನು ನಿಯೋಜಿಸಲಾಗಿತ್ತು ಈಗ ಸಲ್ಲಿಸುವ ವರದಿಗೆ ಜಿಲ್ಲಾಡಳಿತದ ವತಿಯಿಂದ ಒಪ್ಪಿಗೆ ನೀಡಿದರೆ, ಜಿಲ್ಲಾಡಳಿತ ಸೂಚನೆಯಂತೆ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ತಿಳಿಸಿದರು.

ಸಮಾನ ಮನಸ್ಕ ಬಳಗದಿಂದ ದೇವರಾಜ ಅರಸು ಜನ್ಮ ದಿನಾಚರಣೆ



ಮೈಸೂರು, ಆ.22– ಕರ್ನಾಟಕದಲ್ಲಿ ಹಿಂದುಳಿದ ವರ್ಗಗಳ ಏಳಿಗೆಗಾಗಿ ತಮ್ಮ ಅಧಿಕಾರವನ್ನು ಮೀಸಲಿಟ್ಟ ಡಿ.ದೇವರಾಜ ಅರಸು ಅವರು ಕನ್ನಡ ನಾಡಿನಲ್ಲಿ ನಿತ್ಯ ಸ್ಮರಣೀಯರಾಗಿದ್ದಾರೆ ಎಂದು ಮೈಸೂರು ಕೋ ಆಪರೇಟಿವ್ ಬ್ಯಾಂಕ್ ಮಾಜಿ ಉಪಾಧ್ಯಕ್ಷ ವಕೀಲ ಪಡುವಾರಹಳ್ಳಿ ಎಂ ರಾಮಕೃಷ್ಣ ಅಭಿಪ್ರಾಯಪಟ್ಟಿದ್ದಾರೆ.

ಸಮಾನಮನಸ್ಕ ಬಳಗದ ವತಿಯಿಂದ ಜಲದರ್ಶಿನಿ ಅತಿಥಿಗೃಹದಲ್ಲಿ ಹಮ್ಮಿಕೊಂಡಿದ್ದ ಹಿಂದುಳಿದ ವರ್ಗಗಳ ನೇತಾರ ಶ್ರೀ ಡಿ.ದೇವರಾಜ ಅರಸರ 107ನೇ ವರ್ಷದ ಜಯಂತಿ ಯಲ್ಲಿ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, ಅರಸು ಅವರು ಜೀತ ವಿಮುಕ್ತಿ, ಸಾಲ ವಿಮುಕ್ತಿ, ಉಳುವವನಿಗೆ ನೆಲದ ಒಡೆತನವನ್ನು ಕೊಟ್ಟು ಸಮಾಜದ ಮುಖ್ಯವಾಹಿನಿಗೆ ತರುವ ಮೂಲಕ ಅತ್ಯಂತ ಹಿಂದುಳಿದ ಶೋಷಿತರ ಮೂಕಧ್ವನಿಗೆ ಶಕ್ತಿಯನ್ನು ನೀಡಿ ಅತಿದೊಡ್ಡ ಕ್ರಾಂತಿಯನ್ನು ಮಾಡಿದರು. ಅವರು ಬಡವರ ಬಗ್ಗೆ ಅಪಾರ ಕಾಳಜಿಯನ್ನು ಸದಾ ಹೊಂದಿದ್ದ ಮುಖ್ಯಮಂತ್ರಿಗಳಾಗಿದ್ದರು. ನಮ್ಮ ರಾಜ್ಯಕ್ಕೆ 'ಕರ್ನಾಟಕ' ಎಂದು ನಾಮಕರಣ ಮಾಡಿ ಅಖಂಡ ಕನ್ನಡಿಗರ ಹೃದಯ ಗೆದ್ದವರು. ಹಿಂದುಳಿದ ವರ್ಗಗಳಿಗೆ ಮೀಸಲಾತಿ ಯನ್ನು ನೀಡಲು ಎಲ್.ಜಿ.ಹಾವನೂರ್‌ರವರ ಅಧ್ಯಕ್ಷತೆಯಲ್ಲಿ ಆಯೋಗ ರಚಿಸಿ ಹಿಂದುಳಿದ ವರ್ಗಗಳ ಅಭಿವೃದ್ಧಿಯ ಬೈಬಲ್ ಎಂಬುದು ಮನೆಮಾತಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡ ಎಲ್.ಚೌಡಪ್ಪ,ಮೈಸೂರು ಜಿಲ್ಲಾ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ ಕೆ ಉಮಾಶಂಕರ್, ಹೆಚ್.ಹರೀಶ್ ಕುಮಾರ್, ಆಟೋ ರಾ.ಸಿದ್ಧರಾಮು, ಜಯಣ್ಣ, ದಿನೇಶ್ ಗೌಡ,ಎಂ. ಚಿಕ್ಕವೆಂಕಟು, ದಿನೇಶ್ ಗೌಡ, ಯತೀಶ್, ಅವಿನಾಶ್, ಅವೀಶ್, ಎಂ.ಶಿವಪ್ರಕಾಶ್, ರವಿ ಚಾಮ, ಆಶ್ರಯ ಸಮಿತಿಯ ಸದಸ್ಯರಾದ ಮಹೇಶ್ ರಾಜೇ ಅರಸ್, ಎಂ. ಮಹೇಶ್, ಲಾಟರಿ ರಮೇಶ್, ಗಿರೀಶ್, ಪ್ರಕಾಶ್, ನಾಗನಾಯಕ, ಜವರಪ್ಪ, ಪ್ರವೀಣ್, ಜನಹಿತ ವಿವಿಧೋದ್ದೇಶ ಸಹಕಾರ ಸಂಘದ ನಿರ್ದೇಶಕರಾದ ಸಿ.ಡಿ.ಕುಮಾರ್, ಬಿ.ಕುಮಾರ್, ಸಂತೋಷ್, ವಕೀಲೆ ಯಶೋಧ, ವೇಣು, ಅಶೋಕ್, ಶಾಂತಿ, ಹನುಮಂತ, ಕೇಬಲ್ ಕಿಟ್ಟಿ ಇತರರಿದ್ದರು.



ಮೈಸೂರಿನ ಪುರಭವನದಲ್ಲಿ ಏರ್ಪಡಿಸಲಾಗಿದ್ದ ಕುರುಕ್ಷೇತ್ರ ಪೌರಾಣಿಕ ನಾಟಕದಲ್ಲಿ ಕಲಾವಿದರಾದ ಹುಯಿಲಾಳು ರಾಮಸ್ವಾಮಿ ಅವರನ್ನು ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಬೀರಿಹುಂಡಿ ಶಿವಬಾಲಾಜಿ, ಜಯರಾಮು, ಹುಯಿಲಾಳು ಮಂಜುನಾಥ್, ಪ್ರಸಾದ್, ಸತೀಶ್ ಇತರರು ಉಪಸ್ಥಿತರಿದ್ದರು.

'ಮಹಾರಾಜ ಟ್ರೋಫಿ' ಕೆಎಸ್‌ಸಿಎ ಟಿ20 ಪಂದ್ಯಾವಳಿ

ಶಿವಮೊಗ್ಗ ಸ್ಟ್ರೈಕರ್ಸ್, ಹುಬ್ಬಳ್ಳಿ ಟೈಗರ್ಸ್‌ಗೆ ಭರ್ಜರಿ ಜಯ





ಅಂಕಪಟ್ಟಿಯಲ್ಲಿ ಮೈಸೂರು ವಾರಿಯರ್ಸ್‌ಗೆ 3ನೇ ಸ್ಥಾನ...

'ಮಹಾರಾಜ ಟ್ರೋಫಿ' ಕೆಎಸ್‌ಸಿಎ ಟಿ20 ಪಂದ್ಯಾವಳಿಯ ಲೀಗ್ ಹಂತದ 10 ಪಂದ್ಯಗಳಲ್ಲಿ 5 ಪಂದ್ಯಗಳಲ್ಲಿ ಗೆಲುವು ಸಾಧಿಸಿರುವ ಮೈಸೂರು ವಾರಿಯರ್ಸ್ ಅಂಕಪಟ್ಟಿಯಲ್ಲಿ ಮೂರನೇ ಸ್ಥಾನ ಪಡೆದುಕೊಂಡಿದೆ. 7 ಪಂದ್ಯ ಗೆದ್ದಿರುವ ಬೆಂಗಳೂರು ಬ್ಲಾಸ್ಟರ್ಸ್ ಅಗ್ರಸ್ಥಾನದಲ್ಲಿದ್ದರೆ, 6 ಪಂದ್ಯ ಗೆದ್ದಿರುವ ಗುಲ್ಬರ್ಗಾ ಮೈಸ್ಟಿಕ್ಸ್ 2ನೇ ಸ್ಥಾನದಲ್ಲಿದೆ. ಇನ್ನೂ 5 ಪಂದ್ಯಗಳಲ್ಲಿ ಗೆಲುವು ಸಾಧಿಸಿರುವ ಹುಬ್ಬಳ್ಳಿ ಟೈಗರ್ಸ್ ರನ್‌ರೇಟ್ ಆಧಾರದ ಮೇಲೆ 4 ಸ್ಥಾನ ಪಡೆದುಕೊಂಡಿದ್ದರೆ, 4 ಪಂದ್ಯಗಳಲ್ಲಿ ಗೆದ್ದಿರುವ ಮಂಗಳೂರು ಯುನೈಟೆಡ್ 5 ಮತ್ತು 10 ಪಂದ್ಯಗಳಲ್ಲಿ ಕೇವಲ 3 ಪಂದ್ಯಗಳಲ್ಲಿ ಜಯ ಗಳಿಸಿದ ಶಿವಮೊಗ್ಗ ಸ್ಟ್ರೈಕರ್ಸ್ ಕಡೆಯ ಸ್ಥಾನದಲ್ಲಿದ್ದು, ಮಂಗಳೂರು ಯುನೈಟೆಡ್ ಹಾಗೂ ಶಿವಮೊಗ್ಗ ಸ್ಟ್ರೈಕರ್ಸ್ ಟೂರ್ನಿಯಿಂದ ಹೊರಬಿದ್ದಿವೆ.

ಬೆಂಗಳೂರು, ಆ.22– ಇಲ್ಲಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ 'ಮಹಾರಾಜ ಟ್ರೋಫಿ' ಕೆಎಸ್‌ಸಿಎ ಟಿ20 ಪಂದ್ಯಾವಳಿಯ ಲೀಗ್ ಹಂತದ ಕಡೆ ದಿನ ಗುಲ್ಬರ್ಗಾ ಮೈಸ್ಟಿಕ್ಸ್ ವಿರುದ್ಧ ಶಿವಮೊಗ್ಗ ಸ್ಟ್ರೈಕರ್ಸ್ ಹಾಗೂ ಮಂಗಳೂರು ಯುನೈಟೆಡ್ ವಿರುದ್ಧ ಹುಬ್ಬಳ್ಳಿ ಟೈಗರ್ಸ್ ಜಯ ಗಳಿಸಿವೆ.

ಜಯದೊಂದಿಗೆ ನಿರ್ಗಮಿಸಿದ ಶಿವಮೊಗ್ಗ: ಲೀಗ್ ಹಂತದ ಕಡೆಯ ದಿನದ ಮೊದಲ ಪಂದ್ಯದಲ್ಲಿ ಗುಲ್ಬರ್ಗಾ ಮೈಸ್ಟಿಕ್ಸ್ ವಿರುದ್ಧ ಶಿವ ಮೊಗ್ಗ ಸ್ಟ್ರೈಕರ್ಸ್ 6 ವಿಕೆಟ್‌ಗಳ ಭರ್ಜರಿ ಜಯ ಗಳಿಸಿದೆ. ಈ ಮೂಲಕ ಶಿವಮೊಗ್ಗ ಜಯ ದೊಂದಿಗೆ ಟೂರ್ನಿಯಿಂದ ನಿರ್ಗಮಿಸಿದೆ.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಗುಲ್ಬರ್ಗಾ ಮೈಸ್ಟಿಕ್ಸ್ ತಂಡದ

> **ಇಂದಿನ ಪಂದ್ಯಗಳು**
> ಎಲಿಮಿನೇಟರ್: ಮೈಸೂರು ವಾರಿಯರ್ಸ್ / ಹುಬ್ಬಳ್ಳಿ ಟೈಗರ್ಸ್
> ಕ್ವಾಲಿಫೈಯರ್1 : ಬೆಂಗಳೂರು ಬ್ಲಾಸ್ಟರ್ಸ್ / ಗುಲ್ಬರ್ಗಾ ಮೈಸ್ಟಿಕ್ಸ್

ರಿತೇಶ್ ಭಟ್ಕಳ್ 38, ಜಶ್ವತ್ ಆಚಾರ್ಯ 22 ರನ್ ಗಳಿಸಿದ್ದು ಬಿಟ್ಟರೆ ಉಳಿದವರು ಪೆವಿಲಿಯನ್ ಪರೇಡ್ ನಡೆಸಿದರು. ಅಂತಿಮವಾಗಿ ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 118 ರನ್‌ಗಳಷ್ಟೇ ಸಾಧ್ಯವಾಯಿತು. ಶಿವಮೊಗ್ಗ ಪರ ಡಿ.ಅವಿನಾಶ್ 3, ಉತ್ತಮ್ ಅಯ್ಯಪ್ಪ, ಕಾರಿಯಪ್ಪ ತಲಾ 2 ವಿಕೆಟ್ ಪಡೆದು ರನ್ ಗಳಿಕೆಗೆ ಕಡಿವಾಣ ಹಾಕಿದರು.

119ರನ್‌ಗಳ ಸಾಧಾರಣ ಗುರಿ ಬೆನ್ನತ್ತಿದ್ದ ಶಿವಮೊಗ್ಗ ಸ್ಟ್ರೈಕರ್ಸ್‌ಗೆ ಆರಂಭದಲ್ಲೇ ಮಳೆ ಎದುರಾಯಿತು. 2 ವಿಕೆಟ್ ಕಳೆದು ಕೊಂಡು 15 ರನ್ ಗಳಿಸಿದ್ದ ವೇಳೆ ಆರಂಭವಾದ ಮಳೆ ಅರ್ಧಗಂಟೆಗೂ ಹೆಚ್ಚು ಕಾಲ ಸುರಿಯಿತು. ನಂತರ ಯುಜಿಡಿ ನಿಯಮ ದನ್ವಯ ಹುಬ್ಬಳ್ಳಿ ಟೈಗರ್ಸ್‌ಗೆ ಕೇವಲ 54ರನ್‌ಗಳ ಗುರಿ ನಿಗದಿಪಡಿಸಲಾಯಿತು. ಅಂತಿಮವಾಗಿ ಶಿವಮೊಗ್ಗ ಸ್ಟ್ರೈಕರ್ಸ್ 6.3 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 54 ರನ್ ಗಳಿಸುವ ಮೂಲಕ 3ನೇ ಜಯದೊಂದಿಗೆ ಟೂರ್ನಿಯಿಂದ ನಿರ್ಗಮಿಸಿತು. 4 ಓವರ್‌ಗಳಲ್ಲಿ 24 ರನ್ ನೀಡಿ 3 ವಿಕೆಟ್ ಪಡೆದು ಗಮನ ಸೆಳೆದ ಹುಬ್ಬಳ್ಳಿ ಟೈಗರ್ಸ್‌ನ ಡಿ.ಅವಿನಾಶ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

ಹುಬ್ಬಳ್ಳಿ ಟೈಗರ್ಸ್‌ಗೆ ಜಯ: ನಾಯಕ ಲುವ್ನಿತ್ ಸಿಸೋಡಿಯಾ ಅಬ್ಬರದ ಬ್ಯಾಟಿಂಗ್ ನೆರವಿನಿಂದ ಮಂಗಳೂರು ಯುನೈಟೆಡ್ ವಿರುದ್ಧ ಹುಬ್ಬಳ್ಳಿ ಟೈಗರ್ಸ್ 6 ವಿಕೆಟ್‌ಗಳ ರೋಚಕ ಗೆಲುವು ಸಾಧಿಸಿದೆ.

ಸಂಜೆ ನಡೆದ ಪಂದ್ಯದಲ್ಲಿ 185ರನ್‌ಗಳ ಬೃಹತ್ ಗುರಿ ಪಡೆದ ಹುಬ್ಬಳ್ಳಿ ಟೈಗರ್ಸ್ ಪಡೆ, ನಿರಾಯಾಸವಾಗಿ 4 ವಿಕೆಟ್ ಕಳೆದುಕೊಂಡು ಇನ್ನೂ 13 ಎಸೆತಗಳು ಬಾಕಿ ಇರುವಂತೆ ಗೆಲುವಿನ ಗುರಿ ತಲುಪಿತು. ಅಬ್ಬರದ ಬ್ಯಾಟಿಂಗ್ ಪ್ರದರ್ಶನ ನೀಡಿದ ನಾಯಕ ಲುವ್ನಿತ್ ಸಿಸೋಡಿಯಾ ಕೇವಲ 40 ಎಸೆತಗಳಲ್ಲಿ 11 ಬೌಂಡರಿ, 2 ಸಿಕ್ಸರ್ ಸಹಿತ 80 ರನ್ ಚಚ್ಚಿದರು. ಮೊಹಮ್ಮದ್ ತಾಹಾ 34, ಬಿಯು ಶಿವಕುಮಾರ್ 34 ರನ್‌ಗಳ ಕೊಡುಗೆ ನೀಡಿದರು. ಮಂಗಳೂರು ಪರ ವಿಜಯ್‌ಕುಮಾರ್ ವೈಶಾಕ್ 2, ಎಸ್.ಅಮೋಘ್, ಕೆ.ಶಶಿಕುಮಾರ್ ತಲಾ ಒಂದೊಂದು ವಿಕೆಟ್ ಪಡೆದರು.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಮಂಗಳೂರು ಯುನೈಟೆಡ್ ತಂಡದ ಭರವಸೆಯ ಆಟಗಾರ ಅಭಿನವ್ ಮನೋಹರ್ 30 ಎಸೆತಗಳಲ್ಲಿ 5 ಬೌಂಡರಿ, 6 ಸಿಕ್ಸರ್ ಸಹಿತ 69 ರನ್ ಗಳಿಸಿ ಅಜೇಯ ರಾಗುಳಿದರೆ, ಅಮಿತ್ ವರ್ಮಾ 47, ನಾಯಕ ಆರ್.ಸಮರ್ಥ್ 31 ರನ್ ಬಾರಿಸಿದರು. ಅಂತಿಮವಾಗಿ ನಿಗದಿತ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 184ರನ್ ಗಳಿಸಿತು. ಹುಬ್ಬಳ್ಳಿ ಪರ ಎಂಜಿ ನವೀನ್ 2, ಮಿಥುನ್, ವಿ.ಕೌಶಿಕ್, ಬಿಯು ಶಿವಕುಮಾರ್ ತಲಾ ಒಂದೊಂದು ವಿಕೆಟ್ ಪಡೆದರು. ಭರ್ಜರಿ ಬ್ಯಾಟಿಂಗ್ ಪ್ರದರ್ಶನ ನೀಡಿದ ಲುವ್ನಿತ್ ಸಿಸೋಡಿಯಾ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಶ್ರೀಮತಿ ಅನ್ನಪೂರ್ಣಮ್ಮ ನಿಧನ



ಮೈಸೂರು, ಆ. 22– ಸಿವಿಲ್ ನ್ಯಾಯಾಧೀಶರಾದ ಎಂ. ರಘು ಅವರ ತಾಯಿ ಶ್ರೀಮತಿ ಅನ್ನಪೂರ್ಣಮ್ಮ(54) ಅವರು ಸೋಮವಾರ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ಪತಿ ಮಹದೇವಸ್ವಾಮಿ, ಇಬ್ಬರು ಪುತ್ರರು, ಪುತ್ರಿ ಹಾಗೂ ಅಪಾರ ಬಂಧು ವರ್ಗವನ್ನು ಅಗಲಿದ್ದು, ಅಂತ್ಯಕ್ರಿಯೆ ಸ್ವಗ್ರಾಮವಾದ ಮೈಸೂರು ತಾಲೂಕು ಜಯಪುರ ಹೋಬಳಿ ಸಿಂಧುವಳ್ಳಿಯಲ್ಲಿ ನೆರವೇರಿದೆ ಅಂತ್ಯಕ್ರಿಯೆಯಲ್ಲಿ ಅಪಾರ ಸಂಖ್ಯೆಯ ವಕೀಲರು ಭಾಗವಹಿಸಿದ್ದರು.

ಕೆ.ಬಿ.ಶ್ರೀಕಂಠ



ಮೈಸೂರು, ಆ.22– ವಿಕ್ರಾಂತ್ ಟೈರ್ಸ್ ಕಾರ್ಖಾನೆ ನಿವೃತ್ತ ಉದ್ಯೋಗಿ, ಪಾಂಡವಪುರ ತಾಲೂಕು ಕಟ್ಟೇರಿ ಗ್ರಾಮದ ಕೆ.ಬಿ.ಶ್ರೀಕಂಠ(65) ಅವರು ಭಾನುವಾರ ನಿಧನರಾದರು. ಮೃತರು ಪತ್ನಿ, ಪುತ್ರಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸ್ವಗ್ರಾಮದಲ್ಲಿರುವ ತೋಟದಲ್ಲಿ ಸೋಮವಾರ ಮಧ್ಯಾಹ್ನ ಮೃತರ ಅಂತ್ಯಕ್ರಿಯೆ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಎಸ್.ಎಂ.ಕೃಷ್ಣ ಅಭಿಮಾನಿ ಬಳಗದ ಅಧ್ಯಕ್ಷ ವಿಕ್ರಾಂತ್ ಪಿ.ದೇವೇಗೌಡ, ವಿಕ್ರಾಂತ್ ಟೈರ್ಸ್‌ನ ಎಸ್.ಲೋಕೇಶ್, ಎಸ್.ನಾಗೇಶ್, ಕೆ.ಶಿವಪ್ಪ, ಮಾಧವ ಕೃಷ್ಣ ಕೆ.ಎಂ.ನಾಗೇಗೌಡ, ಟಿ.ಪುಟ್ಟರಾಜು, ಪಾಲಹಳ್ಳಿ ಮಹೇಶ್, ಶ್ರೀಕಾಂತ್ ಮತ್ತಿತರರು ಸಂತಾಪ ಸೂಚಿಸಿದ್ದಾರೆ.

ಗ್ರಾಮೀಣ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಕಲ್ಪಿಸಿ

ಎನ್‌ಎಂಎಂಎಸ್ ಪರೀಕ್ಷೆ ತರಬೇತಿ ಕಾರ್ಯಾಗಾರದಲ್ಲಿ ಶಾಸಕ ಪುಟ್ಟರಾಜು ಸಲಹೆ

ಪಾಂಡವಪುರ, ಆ.22– ಪಟ್ಟಣದ ಟಿಎಪಿಸಿಎಂಎಸ್ ಸಭಾಂಗಣದಲ್ಲಿ ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆ ಮಂಡ್ಯ, ಕ್ಷೇತ್ರ ಶಿಕ್ಷಣಾಧಿಕಾರಿ ಕಾರ್ಯಾಲಯ ಮತ್ತು ಕ್ಷೇತ್ರ ಸಂಪನ್ಮೂಲ ಕೇಂದ್ರದಿಂದ 2022–23ನೇ ಸಾಲಿನ ಮೇಲುಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಎನ್‌ಎಂಎಂಎಸ್ ಪರೀಕ್ಷೆ ತರಬೇತಿ ಕಾರ್ಯಾಗಾರ ನಡೆಯಿತು.

ಈ ವೇಳೆ ಶಾಸಕ ಸಿ.ಎಸ್.ಪುಟ್ಟರಾಜು ಮಾತನಾಡಿ, ಶಿಕ್ಷಣ ವ್ಯವಸ್ಥೆಯಲ್ಲಿ ನಮ್ಮ ಸರ್ಕಾರಗಳ ಸ್ಥಿತಿ ಹೇಗಾಗಿದೆ ಎಂದರೆ ಎಮ್ಮೆ ತಂದು ಕಟ್ಟಿ ಹಾಲು ಕರೆಯಲು ಚೊಂಬು ಕೊಡದ ಸ್ಥಿತಿ ನಿರ್ಮಾಣವಾಗಿದೆ. ಸರ್ಕಾರಗಳು ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಮುಂದಾಗಬೇಕು ಎಂದು ತಿಳಿಸಿದರು.



ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆಯಿಂದ ನಡೆಸುವ ಎನ್‌ಎಂಎಂಎಸ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಅದರಿಂದ ದೊರೆಯುವ ಸೌಲಭ್ಯವನ್ನು ಪಡೆದುಕೊಳ್ಳಬೇಕು. ಈ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ದುದ್ದ ಹೋಬಳಿ ಸೇರಿದಂತೆ ಮೇಲುಕೋಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಎಲ್ಲಾ ಪ್ರೌಢಶಾಲಾ ಮಕ್ಕಳಿಗೆ ಎನ್‌ಎಂಎಂಎಸ್ ತರಬೇತಿ ಕೊಡಿಸಲಾಗುತ್ತಿದೆ. ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ಒಂದು ದಿನಕ್ಕೆ ಮಾತ್ರ ತರಬೇತಿ ಸೀಮಿತಗೊಳಿಸದೆ ಹೆಚ್ಚುವರಿಯಾಗಿ ಇನ್ನೂ ಎರಡು ದಿನ ಹಮ್ಮಿಕೊಂಡು ಮಕ್ಕಳಿಗೆ ತರಬೇತಿ ನೀಡಲಿ, ಅದಕ್ಕೆ ಅಗತ್ಯವಾದ ಎಲ್ಲಾ ವ್ಯವಸ್ಥೆಯನ್ನು ನಾನು ವೈಯುಕ್ತಿಕವಾಗಿ ಮಾಡಿಕೊಡುತ್ತೇನೆ ಎಂದು ಭರವಸೆ ನೀಡಿದರು.

ಡಯಟ್ ಪ್ರಾಂಶುಪಾಲ ಶಿವಮಾದಪ್ಪ ಮಾತನಾಡಿ, ಸರ್ಕಾರಿ ಹಾಗೂ ಅನುದಾನಿತ ಪ್ರೌಢಶಾಲೆಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗದ ವಿದ್ಯಾರ್ಥಿಗಳು ಹಾಗೂ ಒಂದುವರೆ ಲಕ್ಷ ರೂ. ಆದಾಯದ ಒಳಗಿರುವ ವಿದ್ಯಾರ್ಥಿಗಳು ಎನ್‌ಎಂಎಂಎಸ್ ಪರೀಕ್ಷೆಯನ್ನು ತೆಗೆದುಕೊಳ್ಳಲು ಅರ್ಹರಾಗಿದ್ದಾರೆ. ಪರೀಕ್ಷೆಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು 1 ಸಾವಿರದಂತೆ 4 ವರ್ಷಗಳ ಕಾಲ ಸಹಾಯಧನ ನೀಡಲಾಗುವುದು ಎಂದರು.

ಕಾರ್ಯಾಗಾರದಲ್ಲಿ ಮೇಲುಕೋಟೆ ವಿಧಾನಸಭಾ ವ್ಯಾಪ್ತಿಯ 39 ಪ್ರೌಢಶಾಲೆಯಿಂದ 700ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಡಿಡಿಪಿಐ ಜವರೇಗೌಡ, ಶಿಕ್ಷಣಾಧಿಕಾರಿ ಆರ್.ಪಿ.ಮಹೇಶ್, ಬಿಇಓ ಲೋಕೇಶ್, ಬಿಆರ್‌ಸಿ ಪ್ರಕಾಶ್, ಸಂಪನ್ಮೂಲ ವ್ಯಕ್ತಿ ಶಿವಕುಮಾರ್, ಆರ್.ಸಿ.ನಾಗೇಗೌಡ, ಕೇಶವಮೂರ್ತಿ ಹಾಜರಿದ್ದರು.

ವಿದ್ಯಾರ್ಥಿಗಳ ಪ್ರತಿಭೆ ಅನಾವರಣಕ್ಕೆ ಸೂಕ್ತ ವೇದಿಕೆ ಕಲ್ಪಿಸಲು ಸಲಹೆ



ಭಾರತೀನಗರ, ಆ.22– ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ಒಂದಲ್ಲ ಒಂದು ಪ್ರತಿಭೆ ಇರುತ್ತದೆ. ಇದನ್ನು ಪೋಷಕರು ಹಾಗೂ ಶಿಕ್ಷಕರು ಗುರುತಿಸಿ, ಅವರಿಗೆ ಸೂಕ್ತ ವೇದಿಕೆ ಕಲ್ಪಿಸುವ ಮೂಲಕ ಪ್ರತಿಭೆ ಅನಾವರಣಗೊಳಿಸಬೇಕು ಎಂದು ಚಂದೂಪುರ ರೇಣುಕಾ ಮಠದ ಶ್ರೀ ಶಿವಲಿಂಗ ಮಹಾಚಾರ್ಯಸ್ವಾಮಿ ಸಲಹೆ ನೀಡಿದರು.

ಇಲ್ಲಿಗೆ ಸಮೀಪದ ಚಂದೂಪುರ ಶಾಂತಿನಿಕೇತನ ಶಾಲೆಯಲ್ಲಿ ನಡೆದ ತೊರೆಬೊಮ್ಮನಹಳ್ಳಿ ಕ್ಲಸ್ಟರ್ ಮಟ್ಟದ ಪ್ರತಿಭಾಕಾರಂಜಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮಕ್ಕಳ ಪ್ರತಿಭೆಯನ್ನು ಹೊರತರಲು ಇದೊಂದು ಸೂಕ್ತವಾದ ವೇದಿಕೆಯಾಗಿದೆ. ಇಂತಹ ಕಾರ್ಯಕ್ರಮಗಳು ನಡೆದಾಗ ಮಾತ್ರ ಮಕ್ಕಳ ಪ್ರತಿಭೆಯನ್ನು ಗುರುತಿಸಲು ಸಾಧ್ಯ ಎಂದರು.

ಮಕ್ಕಳು ದೊಡ್ಡ ವ್ಯಕ್ತಿಗಳಾಗಬೇಕಾದರೆ ಮೊದಲು ಸಂಸ್ಕಾರ–ಸಂಸ್ಕೃತಿಯನ್ನು ಕಲಿಯಬೇಕು. ಗುರು–ಹಿರಿಯರಿಗೆ, ತಂದೆ–ತಾಯಿಯರನ್ನು ಗೌರವದಿಂದ ಕಾಣಬೇಕು. ಪೋಷಕರು ಮಕ್ಕಳಿಗೆ ಆಸ್ತಿ ಮಾಡುವ ಬದಲು ಶಿಕ್ಷಣ ನೀಡಿ ಎಂದು ಸಲಹೆ ನೀಡಿದರು.

ಶಾಲಾಭಿವೃದ್ಧಿ ಸಮಿತಿಯ ಅಧ್ಯಕ್ಷ ಮುತ್ತುರಾಜು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದರು. ಇದೇ ವೇಳೆ ಶಿಕ್ಷಣ ಸಮನ್ವಯಾಧಿಕಾರಿ ಸುಬ್ರಹ್ಮಣ್ಯ, ಗ್ರಾಪಂ ಅಧ್ಯಕ್ಷ ಹೆಚ್.ಪಿ.ರಾಜು, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಜ್ಯೋಗಿಗೌಡ, ಶಾಂತಿನಿಕೇತನ ಶಾಲೆಯ ಅಧ್ಯಕ್ಷ ಹೆಚ್.ಟಿ.ವಿಶ್ವನಾಥ್, ಕಾರ್ಯದರ್ಶಿ ಹಾಗಲಹಳ್ಳಿ ಉಮೇಶ್, ಸಿಆರ್‌ಪಿಗಳಾದ ಮಡೇನಹಳ್ಳಿ ಸತೀಶ್, ಬೋರಯ್ಯ, ಎಸ್‌ಡಿಎಂಸಿ ಉಪಾಧ್ಯಕ್ಷೆ ಧನಲಕ್ಷ್ಮಿ ಕೃಷ್ಣೇಗೌಡ, ಸದಸ್ಯರಾದ ಕೆಂಪೇಗೌಡ, ಶಿವಮೂರ್ತಿ ಇದ್ದರು.

4 ನೂತನ ಕಂದಾಯ ಗ್ರಾಮಗಳ ರಚನೆ

ಮಂಡ್ಯ, ಆ.22– ಕೆ.ಆರ್.ಪೇಟೆ ತಾಲೂಕಿನಲ್ಲಿ 4 ಹೊಸ ಕಂದಾಯ ಗ್ರಾಮಗಳನ್ನು ರಚಿಸಲಾಗಿದೆ ಎಂದು ರೇಷ್ಮೆ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವ ಡಾ.ನಾರಾಯಣಗೌಡ ತಿಳಿಸಿದರು. ಕೂಡಲಕುಪ್ಪೆ ಗ್ರಾಮದ ಸರಹದ್ದುಗಳು ಮಾರ್ಪಡಿಸಿ ಬಸವಪುರ, ಮಡುವಿನಕೋಡಿ ಗ್ರಾಮದ ಸರಹದ್ದು ಮಾರ್ಪಡಿಸಿ ಹೊಸ ಮಡುವಿನ ಕೋಡಿ(ಹೊಸ), ಯಲಾದಹಳ್ಳಿ ಗ್ರಾಮದ ಸರಹದ್ದು ಮಾರ್ಪಡಿಸಿ ಐನೂರಹಳ್ಳಿ ಹೊಸ ಕಂದಾಯ ಗ್ರಾಮ, ಕಾಮನಹಳ್ಳಿ ಗ್ರಾಮದ ಸರಹದ್ದು ಮಾರ್ಪಡಿಸಿ ಮೊಸಳೆಕೊಪ್ಪಲು ಎಂಬ ಹೊಸ ಕಂದಾಯ ಗ್ರಾಮಗಳನ್ನು ರಚಿಸಿ, ರಾಜ್ಯ ಸರ್ಕಾರದಿಂದ ಅಧಿಸೂಚನೆ ಹೊರಡಿಸಲಾಗಿದೆ. ಆಡಳಿತಾತ್ಮಕ ದೃಷ್ಟಿಯಿಂದ ಕೆ.ಆರ್.ಪೇಟೆಯ 4 ಹೊಸ ಕಂದಾಯ ಗ್ರಾಮಗಳನ್ನು ರಚಿಸಲಾಗಿದ್ದು, ಜನರಿಗೆ ಸರ್ಕಾರಿ ಸವಲತ್ತುಗಳನ್ನು ಒದಗಿಸಲು ಮತ್ತಷ್ಟು ಸುಲಭವಾಗಲಿದೆ ಎಂದು ಸಚಿವರು ತಿಳಿಸಿದ್ದಾರೆ.

ಶ್ರೀ ತಿರುಮಲೆ ವೆಂಕಟರಮಣಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ



ಶ್ರೀರಂಗಪಟ್ಟಣ, ಆ.22– ತಾಲೂಕಿನ ಪಾಲಹಳ್ಳಿ ಗ್ರಾಮದ ಶ್ರೀತಿರುಮಲೆ ವೆಂಕಟರಮಣಸ್ವಾಮಿ ದೇವಾಲಯದಲ್ಲಿ ಶ್ರಾವಣ ಶನಿವಾರದ ಅಂಗವಾಗಿ ವಿಶೇಷ ಪೂಜೆ ನಡೆಯಿತು. ಈ ವೇಳೆ ಗ್ರಾಮದ ನೂರಾರು ಮಹಿಳೆಯರಿಗೆ ಸೀರೆ ಮಡಿಲಕ್ಕಿ ವಿತರಿಸಲಾಯಿತು.

ಬೆಳಗ್ಗೆಯಿಂದಲೇ ದೇವಾಲಯದಲ್ಲಿ ಹೋಮ, ಹವನ, ಅಭಿಷೇಕ, ಮಹಾ ಮಂಗಳಾರತಿ ನಡೆಯಿತು. ಬಳಿಕ ಭಕ್ತರಿಗೆ ಪ್ರಸಾದ ವಿತರಿಸಲಾಯಿತು.

ಶ್ರೀಆದಿಚುಂಚನಗಿರಿ ಶಾಖಾ ಮಠದ ಕೊಮ್ಮೇರಹಳ್ಳಿಯ ಶ್ರೀ ಪುರುಷೋತ್ತಮನಂದ ನಾಥ ಸ್ವಾಮೀಜಿ ಅವರು ದಿವ್ಯ ಸಾನ್ನಿಧ್ಯ ವಹಿಸಿದ್ದರು. ದೇವಾಲಯದ ಟ್ರಸ್ಟ್‌ನ ಅಧ್ಯಕ್ಷ ಪಿ.ಹೆಚ್.ಚಂದ್ರಶೇಖರ್ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಿತು. ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪ್ರಕಾಶ್, ಜೆಡಿಎಸ್ ತಾಲೂಕು ಅಧ್ಯಕ್ಷ ಪೈಮುಕುಂದ, ಕೆಪಿಸಿಸಿ ಸದಸ್ಯ ಗಂಗಾಧರ್, ಮುಖಂಡರಾದ ಎಸ್.ಲಿಂಗಣ್ಣ, ಎಂ.ಪುಟ್ಟೇಗೌಡ, ಶ್ರೀಧರ್, ರಾಮಚಂದ್ರು, ಶಂಕರೇಗೌಡ, ಶ್ರೀನಿವಾಸ್, ವಿಷಕಂಠೇಗೌಡ, ತಿಮ್ಮಪ್ಪ ಸರಸ್ವತಿ, ಶೇಖರ್, ಗೋಪಾಲ್, ಕೃಷ್ಣಪ್ಪ, ಸಂಜು, ಪ್ರಕಾಶ್ ಇದ್ದರು.

ಜಾನಪದ ಕಲೆಯಲ್ಲಿ ಮಾನವೀಯ ಮೌಲ್ಯ



ಮದ್ದೂರು, ಆ.22– ಜಾನಪದ ಕಲೆಗೆ ತನ್ನದೇ ಆದ ಇತಿಹಾಸವಿದೆ. ಜಾನಪದ ಕಲೆಗಳಿಂದ ಸಂಸ್ಕೃತಿ, ಆಚಾರ, ವಿಚಾರ ಸೇರಿದಂತೆ ಮಾನವೀಯ ಮೌಲ್ಯಗಳು ತುಂಬಿದೆ ಎಂದು ಕರ್ನಾಟಕ ಜಾನಪದ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಡಿ.ಪಿ.ಸ್ವಾಮಿ ತಿಳಿಸಿದರು.

ಪಟ್ಟಣದ ಸರ್ಕಾರಿ ಮಹಿಳಾ ಕಾಲೇಜಿನಲ್ಲಿ ಕರ್ನಾಟಕ ಜಾನಪದ ಪರಿಷತ್‌ನಿಂದ ಸೋಮವಾರ ಆಯೋಜಿಸಿದ್ದ ವಿಶ್ವ ಜಾನಪದ ದಿನಾಚರಣೆ ಹಾಗೂ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಾನಪದ ಗೀತೆಗಳಲ್ಲಿ ಗ್ರಾಮೀಣ ಜನರ ಬದುಕನ್ನು ಕಟ್ಟಿಕೊಡುವ ಮೌಲ್ಯ ಅಡಗಿವೆ. ಜಾನಪದವಿಲ್ಲದಿದ್ದರೆ ಬದುಕಿಲ್ಲ. ಗ್ರಾಮೀಣ ಭಾಗದ ಜನರು ಜಾನಪದ ಕಲೆಗಳನ್ನು ಉಳಿಸಿ, ಬೆಳೆಸಬೇಕಾದ ಅಗತ್ಯತೆ ಇದೆ ಎಂದರು.

ಕೆ.ಹೊನ್ನಲಗೆರೆ ಆರ್.ಕೆ.ವಿದ್ಯಾ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕ ವಿನಯ್‌ರಾಮಕೃಷ್ಣ ಮಾತನಾಡಿ, ಯುವಜನರು ಪಾಶ್ಚಿಮಾತ್ಯ ಸಂಸ್ಕೃತಿಗೆ ಮಾರುಹೋಗಿ ಮೊಬೈಲ್ ದಾಸರಾಗುವ ಮೂಲಕ ಮಾನವೀಯ ಮೌಲ್ಯವನ್ನು ಮರೆಯುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು.

ಡೊಳ್ಳು ಕುಣಿತ, ವೀರಗಾಸೆ, ಪೂಜಾ ಕುಣಿತ, ಕೀಲುಕುದುರೆ, ಸೋಬಾನೆ ಪದ ಸೇರಿದಂತೆ ಇತರ ಜಾನಪದ ಕಲಾ ಪ್ರಕಾರಗಳನ್ನು ಇಂದಿನ ಯುವ ಜನತೆ ಮೈಗೂಡಿಸಿಕೊಳ್ಳಬೇಕು. ಜಾನಪದ ಕಲೆ ನಮ್ಮ ಬದುಕಿನ ಭಾಗವಾಗಿ ಬಳ್ಳಿಯಂತೆ ನಮ್ಮನ್ನು ಹಬ್ಬಿಕೊಳ್ಳಬೇಕು ಎಂದರು.

'ಮಹಿಳೆ ಮತ್ತು ಜಾನಪದ' ವಿಚಾರ ಕುರಿತು ಸಹಾಯಕ ಪ್ರಾಧ್ಯಾಪಕಿ ಡಾ.ಎಸ್.ಬಿ.ಜ್ಯೋತಿ ವಿಶೇಷ ಉಪನ್ಯಾಸ ನೀಡಿದರು.

ಅಧಿಕಾರ ಸ್ವೀಕಾರ: ಇದೇ ವೇಳೆ ಕರ್ನಾಟಕ ಜಾನಪದ ಪರಿಷತ್ ತಾಲೂಕು ಘಟಕದ ನೂತನ ಅಧ್ಯಕ್ಷರಾಗಿ ಚಾಮನಹಳ್ಳಿ ಮಂಜು, ಪ್ರಧಾನ ಕಾರ್ಯದರ್ಶಿಯಾಗಿ ಜಯಲಕ್ಷ್ಮೀ ಪುಟ್ಟಸ್ವಾಮಿ ಅಧಿಕಾರ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಪ್ರಗತಿಪರ ಸಂಘಟನೆಗಳ ಒಕ್ಕೂಟದ ಮಾರ್ಗದರ್ಶಕ ನ.ಲಿ.ಕೃಷ್ಣ, ರಂಗಭೂಮಿ ಕಲಾವಿದರ ಸಂಘದ ಅಧ್ಯಕ್ಷ ಚಾಮರಾಜು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಪುಟ್ಟಸ್ವಾಮಿ, ಕರ್ನಾಟಕ ಜಾನಪದ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಬಿ.ಎಲ್.ಮಧುಸೂದನ, ಜಾನಪದ ಕಲಾವಿದ ಹುರುಗಲವಾಡಿ ರಾಮಯ್ಯ, ಕಲಾವಿದ ಅಂಬರಹಳ್ಳಿಸ್ವಾಮಿ ಇದ್ದರು.

ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಪ್ರತಿಭಟನೆ



ಮದ್ದೂರು, ಆ.22– ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಪಟ್ಟಣದ ಕಾವೇರಿ ನೀರಾವರಿ ನಿಗಮದ ಕಚೇರಿ ಮುಂಭಾಗ ಸೋಮವಾರ ಟಾಸ್ಕ್ ವರ್ಕ್ ದಿನಗೂಲಿ ನೌಕರರ ಸಂಘದಿಂದ ಪ್ರತಿಭಟನೆ ನಡೆಯಿತು.

ಕಚೇರಿ ಮುಂದೆ ಜಮಾಯಿಸಿದ ನೌಕರರರು ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಸಂಘದ ಪ್ರಧಾನ ಉಪಾಧ್ಯಕ್ಷ ಕೆ.ಸುರೇಶ್ ಮಾತನಾಡಿ, ಗುತ್ತಿಗೆ ಆಧಾರ ಮೇಲೆ ಸವಡೆಗಳಾಗಿ ಕಾರ್ಯನಿರ್ವಹಿಸುತ್ತಿರುವ 45 ಜನರಿಗೆ ಪಿಎಫ್ ಹಾಗೂ ಇಎಸ್‌ಐ ಅನ್ನು ಸಮರ್ಪಕವಾಗಿ ಪಾವತಿಸಿಲ್ಲ ಹಾಗೂ 4 ತಿಂಗಳ ವೇತನ ನೀಡಿಲ್ಲ ಇದರಿಂದ ಜೀವನ ನಿರ್ವಹಣೆ ತುಂಬಾ ಸಮಸ್ಯೆಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೂಡಲೇ 4 ತಿಂಗಳ ವೇತನ ಪಾವತಿ ಮಾಡಬೇಕು. ಬಾಕಿ ಇರುವ ಪಿಎಫ್ ಹಾಗೂ ಇಎಸ್‌ಐ ಹಣವನ್ನು ಖಾತೆಗೆ ಜಮೆ ಮಾಡಬೇಕು. ಇಲ್ಲದಿದ್ದರೆ ಕಚೇರಿ ಮುಂದೆ ಅನಿರ್ದಿಷ್ಟಾವಧಿ ಮುಷ್ಕಾರ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಸಂಘದ ಗೌರವಾಧ್ಯಕ್ಷ ಎನ್.ಬಿ.ರವಿ, ಅಧ್ಯಕ್ಷ ಪಿ.ಜಗದೀಶ್, ಕಾರ್ಯದರ್ಶಿ ಎಸ್.ಎಸ್.ಶ್ರೀಧರ್, ಸಹ ಕಾರ್ಯದರ್ಶಿ ಪುಟ್ಟೇಗೌಡ, ಖಜಾಂಚಿ ಬಸವರಾಜು, ನಿರ್ದೇಶಕರಾದ ವಿ.ಎಸ್.ನರಸಿಂಹಯ್ಯ, ರಘು, ರಮೇಶ್, ಅಲಮೇಲಮ್ಮ, ನಾಗೇಶ ಇದ್ದರು.

ಇಂದು ವಿದ್ಯುತ್ ವ್ಯತ್ಯಯ

ಮಂಡ್ಯ, ಆ.22– ವಿ.ಸಿ ಫಾರಂ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಹಣೆ ಹಮ್ಮಿಕೊಂಡಿರುವುದರಿಂದ ಆ.23ರಂದು ಬೆಳಗ್ಗೆ 9ರಿಂದ ಸಂಜೆ 5 ಗಂಟೆಯವರೆಗೆ ವಿ.ಸಿ ಫಾರಂ, ಶಿವಳ್ಳಿ, ದುದ್ದ, ಬಿ.ಹಟ್ನ, ಬೇವಕಲ್ಲು, ಹುಲಿಕೆರೆ, ಚಂದಗಾಲು, ಹುಲ್ಲೇನಹಳ್ಳಿ, ಹೊಳಲು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಮಂಡ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ನೀರು ಸರಬರಾಜು ವ್ಯತ್ಯಯ

ಮಂಡ್ಯ, ಆ.22– ನಗರ ನೀರು ಸರಬರಾಜು ವ್ಯವಸ್ಥೆ ನಿರ್ವಹಣೆಯಡಿ ಶ್ರೀರಂಗಪಟ್ಟಣ ಸಮೀಪವಿರುವ ಮೂಲಸ್ಥಾವರದಲ್ಲಿ ಆ.24ರಂದು ಸೆಸ್ಕ್ ವತಿಯಿಂದ ನಿರ್ವಹಣಾ ಕಾಮಗಾರಿ ಕೈಗೊಳ್ಳಬೇಕಾಗಿರುವುದರಿಂದ ಸದರಿ ದಿನದಂದು ಬೆಳಗ್ಗೆ 10ರಿಂದ ಸಂಜೆ 5ಗಂಟೆವರೆಗೆ ವಿದ್ಯುತ್ ಸರಬರಾಜನ್ನು ಕಡಿತಗೊಳಿಸಲಾಗಿದ್ದು, ಮಂಡ್ಯ ನಗರದ ಸಾರ್ವಜನಿಕರಿಗೆ ಆ.24 ಮತ್ತು 25 ರಂದು ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಮಂಡ್ಯ ಉಪ ವಿಭಾಗ ನಿರ್ವಹಣಾ ಕನನೀಸ ಮತ್ತು ಒಚ ಮಂಡಳಿಯ ಸಹಾಯಕ ಕಾರ್ಯಪಾಲಕ ಅಭಿಯಂತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆಪ್ಟೆಂಬರ್ ಮೊದಲ ವಾರ ಶ್ರೀರಾಮ ಸಕ್ಕರೆ ಕಾರ್ಖಾನೆ ಆರಂಭ





ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆ ಮುಂದಿನ ತಿಂಗಳು ಆರಂಭವಾಗುವುದರಿಂದ ಈ ವ್ಯಾಪ್ತಿಯ ಸಾವಿರಾರು ರೈತರಿಗೆ ಅನುಕೂಲವಾಗಲಿದ್ದು, ಸಾಕಷ್ಟು ಉದ್ಯೋಗ ಸೃಷ್ಟಿಯಾಗಲಿದೆ. ಕಾರ್ಖಾನೆ ಆರಂಭಕ್ಕೆ ಸಹಕಾರ ನೀಡಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮತ್ತು ಕೈಗಾರಿಕಾ ಸಚಿವ ಮುರುಗೇಶ್ ನಿರಾಣಿ ಮತ್ತು ನನಗೆ ಸಹಕಾರ ನೀಡಿದ ಮಾಜಿ ಸಿಎಂ ಕುಮಾರಸ್ವಾಮಿ ಅವರಿಗೆ ಧನ್ಯವಾದ ಅರ್ಪಿಸುವೆ. ಈ ಕಾರ್ಖಾನೆ ಒಳಿತಿಗೆ ಸಂಪೂರ್ಣ ಸಹಕಾರ ನೀಡುವ ಜೊತೆಗೆ ಕಬ್ಬು ಬೆಳೆಗಾರ ರೈತರ ಹಿತ ಕಾಯಲು ನಾನು ಬದ್ಧ.

–ಸಾ.ರಾ.ಮಹೇಶ್, ಶಾಸಕರು.



ಶ್ರೀರಾಮ ಸಹಕಾರ ಸಕ್ಕರೆ ಕಾರ್ಖಾನೆ ಮತ್ತೆ ಆರಂಭವಾಗುತ್ತದೆ ಎಂಬ ನಂಬಿಕೆ ಇರಲಿಲ್ಲ. ಇದನ್ನು ಹುಸಿ ಮಾಡಿ ಸರ್ಕಾರದ ಮೇಲೆ ಒತ್ತಡ ತಂದು ಈ ಕಾರ್ಖಾನೆ ಮತ್ತೆ ಆರಂಭವಾಗಲು ಕಾರಣರಾದ ಶಾಸಕ ಸಾ.ರಾ.ಮಹೇಶ್ ಅವರನ್ನು 4 ತಾಲೂಕಿನ ಕಬ್ಬು ಬೆಳೆಗಾರರ ಪರವಾಗಿ ಅಭಿನಂದಿಸುತ್ತೇನೆ

–ಮಿರ್ಲೆ ಎಂ.ಎಸ್. ಕಿಶೋರ್, ಯುವ ಜೆಡಿಎಸ್ ಕಾರ್ಯಾಧ್ಯಕ್ಷರು, ಕೆ.ಆರ್.ನಗರ.

ಚುಂಚನಕಟ್ಟೆ, ಆ.22– ಶಾಸಕ ಸಾ.ರಾ.ಮಹೇಶ್ ಹೋರಾಟ ಮತ್ತು ಬಿಜೆಪಿ ಸರ್ಕಾರದ ಸ್ಪಂದನೆ ಫಲವಾಗಿ ಕಳೆದ 10 ವರ್ಷಗಳಿಂದ ಸ್ಥಗಿತಗೊಂಡಿದ್ದ ರೈತರ ಜೀವನಾಡಿ ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆ ಸೆಪ್ಟೆಂಬರ್ ಮೊದಲ ವಾರ ಆರಂಭವಾಗಲಿದೆ.

ಕಾರ್ಖಾನೆ ಸ್ಥಗಿತಗೊಂಡ ಹಿನ್ನೆಲೆಯಲ್ಲಿ ಶಾಸಕ ಸಾ.ರಾ.ಮಹೇಶ್ ಮತ್ತೆ ಕಾರ್ಖಾನೆ ಆರಂಭಿಸಲು ಸರ್ಕಾರದ ಮಟ್ಟದಲ್ಲಿ ಹೋರಾಟ ನಡೆಸಿದ್ದರು. ಆದರೆ ಯಾವುದೇ ಸಕ್ಕರೆ ಕಂಪನಿಗಳು ಈ ಕಾರ್ಖಾನೆಯನ್ನು ಗುತ್ತಿಗೆ ಪಡೆಯಲು ಮುಂದಾಗದ ಹಿನ್ನಲೆಯಲ್ಲಿ ಮತ್ತೆ ಸರ್ಕಾರದ ಮೇಲೆ ಒತ್ತಡ ತಂದು ಪುನರ್ ಟೆಂಡರ್ ನಡೆಸಿದ ಪರಿಣಾಮ ನಿರಾಣಿ ಶುಗರ್ಸ್ ಕಾರ್ಖಾನೆಯನ್ನು ಗುತ್ತಿಗೆ ಪಡೆದಿದೆ.

ಕಾರ್ಖಾನೆಯನ್ನು ಪ್ರಸಕ್ತ ಹಂಗಾಮಿನಿಂದ 40 ವರ್ಷಗಳ ಅವಧಿಗೆ ಬೃಹತ್ ಕೈಗಾರಿಕಾ ಸಚಿವ ಮುರುಗೇಶ್ ನಿರಾಣಿ ಒಡೆತನದ ಮುಧೋಳದ ನಿರಾಣಿ ಶುಗರ್ಸ್‌ನವರಿಗೆ ಒಟ್ಟಾರೆ 120 ಕೋಟಿಗೆ ಗುತ್ತಿಗೆಗೆ ನೀಡಲು ಷರತ್ತುಗಳಿಗೆ ಒಳಪಟ್ಟು ರಾಜ್ಯ ಸರ್ಕಾರ ಅನುಮೋದನೆ ನೀಡಿ ಕಾರ್ಖಾನೆ ಆರಂಭಕ್ಕೆ ಬೇಕಾದ ಸಿದ್ಧತೆಗೆ ಅವಕಾಶ ಕಲ್ಪಿಸಿಕೊಟ್ಟಿದೆ.

ಈಗಾಗಲೇ ಗುತ್ತಿಗೆ ಪಡೆದು ಕಾರ್ಖಾನೆ ಆರಂಭಿಸಲು ಬೇಕಾದ ಸಿದ್ಧತೆ ಮಾಡುತ್ತಿರುವ ನಿರಾಣಿ ಶುಗರ್ಸ್ ಅವರು ಕಾರ್ಖಾನೆಯಲ್ಲಿ ಕೆಟ್ಟು ನಿಂತಿರುವ ಯಂತ್ರೋಪಕರಣಗಳನ್ನು ಪರಿಶೀಲಿಸಿ ಕೆಲವನ್ನು ಬದಲಾಯಿಸಿ, ಮತ್ತೆ ಕೆಲವನ್ನು ದುರಸ್ತಿ ಪಡಿಸುವ ಕೆಲಸ ನಿರಂತರವಾಗಿ ಮಾಡುತ್ತಿದೆ.

ಕಾರ್ಖಾನೆ ಆರಂಭಕ್ಕೆ ಪ್ರಮುಖವಾಗಿ ಬೇಕಾಗಿರುವ ಟರ್ಬೈನ್‌ನಲ್ಲಿ ಕೆಲ ತಾಂತ್ರಿಕ ದೋಷವಿದ್ದು ಅದನ್ನು ದುರಸ್ತಿಗೆ ಹೈದರಾಬಾದ್‌ಗೆ ಕಳುಹಿಸಲಾಗಿದೆ. ಇದು ಇನ್ನು ಮೂರ್‍ನಾಲ್ಕು ದಿವಸದಲ್ಲಿ ಕಾರ್ಖಾನೆಗೆ ಬರಲಿದೆ. ಇದನ್ನು ಅಳವಡಿಸುವ ಕಾರ್ಯ ಪೂರ್ಣಗೊಂಡರೇ ಮತ್ತು ಬಾಯ್ಲರ್ ದುರಸ್ತಿ ಕಾರ್ಯ ಸಂಪೂರ್ಣವಾಗಿ ಮುಗಿದರೇ ಕಾರ್ಖಾನೆ ಕಬ್ಬು ಅರೆಯಲು ಸಿದ್ಧಗೊಳ್ಳಲಿದೆ.

ಕಾರ್ಖಾನೆಯ ಆವರಣದಲ್ಲಿ ಆಳೆತ್ತರ ಬೆಳೆದಿದ್ದ ಗಿಡಗಂಟಿಗಳನ್ನು ಜೆಸಿಬಿ ಮೂಲಕ ತೆರವುಗೊಳಿಸಲಾಗಿದೆ. ಕಾವೇರಿ ನದಿಯಿಂದ ಬರುವ ನೀರಿನ ಸಂಗ್ರಹ ಬಾವಿಯಲ್ಲಿದ್ದ ಕಸಕಡ್ಡಿ ಮಣ್ಣನ್ನು ಸ್ವಚ್ಛಗೊಳಿಸುವ ಕಾರ್ಯವನ್ನು ಈಗಾಗಲೇ ಮಾಡಿ ಮುಗಿಸಲಾಗಿದೆ.

ಕಾರ್ಖಾನೆ ಕಬ್ಬು ಅರೆಯುವ ಕಾರ್ಯ ಆರಂಭವಾದರೇ ಪ್ರತಿ ನಿತ್ಯ ಕಾರ್ಖಾನೆ ಆರಂಭದಿಂದ ಇದ್ದ ಕಬ್ಬು ಅರೆಯುವ ಕಾರ್ಯ ದಕ್ಷತೆಯನ್ನು ನಿರಾಣಿ ಶುಗರ್ಸ್‌ನವರು 2 ಸಾವಿರದಿಂದ 2500 ಟನ್ ಸಾಮರ್ಥ್ಯಕ್ಕೆ ಹೆಚ್ಚಿಸಲು ಮುಂದಾಗಿದ್ದಾರೆ.

ಈ ಹಿಂದೆ ಈ ಕಾರ್ಖಾನೆಯಲ್ಲಿದ್ದ ಕಾರ್ಮಿಕರು ನಿವೃತ್ತಿ ಹೊಂದಿರುವುದರಿಂದ ಹಲವು ವಿಭಾಗಗಳಿಗೆ ಹೊಸ ಯುವ ನೌಕರರನ್ನು ವಿದ್ಯಾಭ್ಯಾಸ ಮತ್ತು ಅರ್ಹತೆಗೆ ಅನುಗುಣವಾಗಿ ನೇಮಿಸಲಾಗುತ್ತಿದೆ ಎನ್ನಲಾಗಿದೆ.

ಇನ್ನು ಕಾರ್ಖಾನೆಯ ಆರಂಭಕ್ಕೆ ಬೇಕಾಗಿರುವ ಕಬ್ಬು ಕೆ.ಆರ್.ನಗರ, ಪಿರಿಯಾಪಟ್ಟಣ, ಹುಣಸೂರು, ಹೆಚ್.ಡಿ.ಕೋಟೆ ತಾಲೂಕು ವ್ಯಾಪ್ತಿಯ 4 ರಿಂದ 5 ಸಾವಿರ ಎಕರೆಯಲ್ಲಿದ್ದು ಇದನ್ನು 8 ಸಾವಿರದಿಂದ 10 ಸಾವಿರ ಎಕರೆ ಪ್ರದೇಶಕ್ಕೆ ವಿಸ್ತರಿಸಲು ನಿರಾಣಿ ಶುಗರ್ಸ್‌ನವರು ಪ್ರಯತ್ನ ಆರಂಭಿಸಿದ್ದಾರೆ. ಇದರಿಂದ 1.50ಲಕ್ಷದಿಂದ 2 ಲಕ್ಷದಷ್ಟು ಟನ್ ಕಬ್ಬು ದೊರೆಯುವ ಸಾಧ್ಯತೆಗಳಿವೆ.

ಸ್ವಾತಂತ್ರ್ಯೋತ್ಸವದ ಅಂಗವಾಗಿ ಬೈಕ್ ರ್‍ಯಾಲಿ



ನಂಜನಗೂಡು, ಆ. 22– ಇಲ್ಲಿನ ಭಾರತೀಯ ಜೀವ ವಿಮಾ ಪ್ರತಿನಿಧಿಗಳ ಒಕ್ಕೂಟದಿಂದ 75ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿತ್ತು.

ಬೈಕ್ ರ್‍ಯಾಲಿಗೆ ಎಲ್‌ಐಸಿ ಹಿರಿಯ ಶಾಖಾಧಿಕಾರಿ ಗುರುರಾಜರಾವ್ ಚಾಲನೆ ನೀಡಿ ಮಾತನಾಡಿ, ದೇಶದ ಸ್ವಾತಂತ್ರ್ಯಕ್ಕಾಗಿ ಸಾಕಷ್ಟು ಮಹನೀಯರು ತಮ್ಮ ಜೀವವನ್ನು ತ್ಯಾಗ ಮಾಡಿದ್ದಾರೆ. ಅವರನ್ನು ಈ ವೇಳೆ ಪ್ರತಿಯೊಬ್ಬರೂ ಸ್ಮರಿಸಬೇಕು ಎಂದ ಅವರು, ಸ್ವಾತಂತ್ರ್ಯದ ನಂತರ ಭಾರತ ಪಂಚವಾರ್ಷಿಕ ಯೋಜನೆಗಳ ಮೂಲಕ ಅಣೆಕಟ್ಟೆ, ರಸ್ತೆಗಳ ನಿರ್ಮಾಣ ಹಾಗೂ ಕೃಷಿಗೆ ಹೆಚ್ಚು ಒತ್ತು ನೀಡಿ ಅಭಿವೃದ್ಧಿಯತ್ತ ಸಾಗಿದೆ. 1956ರಲ್ಲಿ ಪ್ರಾರಂಭವಾದ ಎಲ್‌ಐಸಿಯು ಇಂದು ಬೃಹತ್ತಾಗಿ ಬೆಳೆದಿದೆ. ಅದಕ್ಕೆ ಎಲ್‌ಐಸಿಯ ಅಧಿಕಾರಿಗಳು, ಪ್ರತಿನಿಧಿಗಳೇ ಕಾರಣ ಎಂದರು.

ಈ ವೇಳೆ ಎಲ್‌ಐಸಿ ಅಧಿಕಾರಿಗಳಾದ ನರಸಿಂಹನ್, ಶಿವಕುಮಾರ್, ವೆಂಕಟೇಶ್, ನಿವೃತ್ತ ಅಧಿಕಾರಿ ಬಸವರಾಜ್, ಒಕ್ಕೂಟದ ಮಾಜಿ ಅಧ್ಯಕ್ಷ ಶಿವಕುಮಾರ್, ಒಕ್ಕೂಟದ ಅಧ್ಯಕ್ಷ ಕೆಂಪೇಗೌಡ, ಉಪಾಧ್ಯಕ್ಷ ಬಿ.ಆರ್.ಚಿಕ್ಕಣ್ಣ, ನಾಗೇಂದ್ರ ಪ್ರಸಾದ್, ಕಾರ್ಯದರ್ಶಿ ರಂಗಸ್ವಾಮಿ, ಸೋಮಸುಂದರ್, ಗುರುಸಿದ್ದಾಚಾರಿ, ಪ್ರಕಾಶ್, ಶಿವಣ್ಣ, ಕೃಷ್ಣಮೂರ್ತಿ, ಮಹದೇವಸ್ವಾಮಿ, ಮಹದೇವ್, ಶಶಿಕಲಾ, ಸೋಮಶೇಖರ್ ಸೇರಿದಂತೆ 30ಕ್ಕೂ ಹೆಚ್ಚು ಪ್ರತಿನಿಧಿಗಳು ರ್‍ಯಾಲಿಯಲ್ಲಿ ಭಾಗವಹಿಸಿದ್ದರು.

ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಭಾಗವಹಿಸುವುದು ಮುಖ್ಯ



ಸಾಲಿಗ್ರಾಮ, ಆ.22– ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಬಹುಮಾನ ಗಳಿಸುವುದಕ್ಕಿಂತ ಭಾಗವಹಿಸುವುದು ಮುಖ್ಯ ಎಂದು ತಾಲೂಕಿನ ದೇವಿತಂದ್ರೆ ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕ ಮಿರ್ಲೆ ದೇವರಾಜ್ ತಿಳಿಸಿದರು.

ತಾಲೂಕಿನ ಹೆಬ್ಸೂರು ಗ್ರಾಮದ ಕಿತ್ತೂರು ರಾಣಿ ಚೆನ್ನಮ್ಮ ಶಾಲೆಯಲ್ಲಿ ನಡೆದ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಶಾಲೆಯ ಮಕ್ಕಳು ಸಮಗ್ರ ಪ್ರಶಸ್ತಿ ಪಡೆದ ಮೇರೆಗೆ ಶಾಲೆಯಲ್ಲಿ ಗೌರವ ಸಲ್ಲಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿಗೆ ಹೆಚ್ಚು ಆಸಕ್ತಿ ತೋರುವಂತೆ ಕ್ರೀಡೆಗಳಲ್ಲೂ ಆಸಕ್ತಿ ತೋರಿಸುವಂತೆ ಪೋಷಕರು ಮಾಡಿದಾಗ ಮಾತ್ರ ಮಕ್ಕಳು ಉಲ್ಲಾಸದಿಂದ ಕಲಿಕೆಯಲ್ಲಿ ಭಾಗವಹಿಸಲು ಸಾಧ್ಯ ಎಂದರು.

ವಲಯ ಮಟ್ಟದ ಕ್ರೀಡಾಕೂಟದಲ್ಲಿ ಶಾಲೆಯ ವಿದ್ಯಾರ್ಥಿಗಳಾದ ಸುನೀಲ್ 300 ಹಾಗೂ 1500 ಮೀಟರ್ ಓಟದ ಸ್ಪರ್ಧೆಯಲ್ಲಿ ಪ್ರಥಮ, ತಿಮ್ಮಾಜಮ್ಮ 300 ಮೀ ಪ್ರಥಮ 800 ಮೀ ತೃತೀಯ, ದಿಲೀಪ್ 800 ಮೀ ಪ್ರಥಮ, ಪುಷ್ಪ 200 ಮೀ ಪ್ರಥಮ 100 ಮೀ ದ್ವಿತೀಯ, ಅಭಿಲಾಷ 400 ಮೀ ತೃತೀಯ, ಮಿಲನ 1500 ಮೀ ದ್ವಿತೀಯ, ಹರ್ಷಿತಾ 400 ಮೀ ತೃತೀಯ, ಬಾಲ್ ಬ್ಯಾಡ್ಮಿಂಟನ್ ವಿಭಾಗದಲ್ಲಿ ವಿದ್ಯಾರ್ಥಿಗಳು ಪ್ರಥಮ ಬಹುಮಾನ ಪಡೆದರೆ, ವಿದ್ಯಾರ್ಥಿನಿಯರು ದ್ವಿತೀಯ ಬಹುಮಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.

ಈ ವೇಳೆ ದೈಹಿಕ ಶಿಕ್ಷಣ ಶಿಕ್ಷಕ ಮಂಜುನಾಥ್, ಶಿಕ್ಷಕರಾದ ಎಂ.ಎಸ್.ಉಮೇಶ್, ಸತೀಶ್, ಖೈರುನ್ನೀಸಾ, ನಾಗವೇಣಿ, ಎಂ.ಎಸ್.ಲಕ್ಷ್ಮೀಗೌಡ, ವೆಂಕಟೇಶಾಚಾರಿ, ಮಂಜುಳಾ ಕಾರ್ಯಕ್ರಮದಲ್ಲಿದ್ದರು.

ಜನಪರ ಆಡಳಿತ ನೀಡುವಲ್ಲಿ ಬಿಜೆಪಿ ಸರ್ಕಾರಗಳು ವಿಫಲ

ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ಆರೋಪ



ಮಲ್ಕುಂಡಿ, ಆ.22– ಜನಪರ ಆಡಳಿತ ನೀಡುವಲ್ಲಿ ಕೇಂದ್ರ ಹಾಗೂ ರಾಜ್ಯ ಬಿಜೆಪಿ ಸರ್ಕಾರಗಳು ಸಂಪೂರ್ಣ ವಿಫಲವಾಗಿವೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ಆರೋಪಿಸಿದರು.

ನಂಜನಗೂಡು ತಾಲೂಕಿನ ದೇವರಾಯಶೆಟ್ಟಿಪುರ, ಹೆಡಿಯಾಲ, ಮಡುವಿನಹಳ್ಳಿ, ಹೊಸವೀಡು ಗ್ರಾಮಗಳಲ್ಲಿ 75ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಆಯೋಜಿಸಿದ್ದ ಸ್ವಾತಂತ್ರ್ಯ ನಡಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈ ಹಿಂದೆ ರಾಜ್ಯದಲ್ಲಿ ಅಧಿಕಾರದಲ್ಲಿದ್ದ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜನಪರ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ರಾಜ್ಯ ಅಭಿವೃದ್ಧಿಗೆ ಒತ್ತು ನೀಡಿತ್ತು. ಆದರೆ ಕೇಂದ್ರ ಹಾಗೂ ರಾಜ್ಯದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಸರ್ಕಾರಗಳು ಯಾವುದೇ ಅಭಿವೃದ್ಧಿ ಯೋಜನೆ ಜಾರಿಗೊಳಿಸದೇ ಜನರಿಗೆ ಸುಳ್ಳು ಆಶ್ವಾಸನೆ ನೀಡುತ್ತಿವೆ. ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನ ಬೇಸತ್ತಿದ್ದಾರೆ ಎಂದರು.

ದೇಶಕ್ಕೆ ಸ್ವಾತಂತ್ರ್ಯ ಬಂದ ನಂತರ ಆಹಾರ ಉತ್ಪಾದನೆ ಕಡಿಮೆ ಇತ್ತು. ಹೊರ ದೇಶದಿಂದ ಗೋಧಿ ನುಚ್ಚು ತಂದು ನೀಡಲಾಗುತ್ತಿತ್ತು. ಬಡವರು ಶ್ರೀಮಂತರ ಮನೆಯಲ್ಲಿ ಒಂದು ಹೊತ್ತಿನ ಊಟ ನೀಡಿದರೆ ಸಾಕು ಎನ್ನುವ ಪರಿಸ್ಥಿತಿ ಇತ್ತು. ಇಂತಹ ಪರಿಸ್ಥಿತಿಯಲ್ಲಿ ನೆಹರು ಅವರು ಪಂಚ ವಾರ್ಷಿಕ ಯೋಜನೆ ಜಾರಿಗೊಳಿಸಿ ಮರುಭೂಮಿಯಾಗಿದ್ದ ದೇಶವನ್ನು ಭವ್ಯ ಭಾರತ ಮಾಡಿದರು. ಅಲ್ಲದೇ ಪ್ರತಿಯೊಬ್ಬ ಭಾರತೀಯ ಸ್ವಾಭಿಮಾನದಿಂದ ಬದುಕುವ ವಾತಾವರಣ ನಿರ್ಮಿಸಿದರು. ಸಿದ್ದರಾಮಯ್ಯ ಸರ್ಕಾರ ಬಡವರ ಪರ ಕೆಲಸ ಮಾಡಿದ್ದರಿಂದಲೇ ಕಾಂಗ್ರೆಸ್ ಸರ್ಕಾರದ ಯೋಜನೆಗಳು ಇನ್ನೂ ಜನಮಾನಸದಲ್ಲಿವೆ. ಪಕ್ಷದ ಜನಪರ ಯೋಜನೆಗಳನ್ನು ಜನರಿಗೆ ತಲುಪಿಸುವ ಕೆಲಸ ನಮ್ಮದಾಗಿದೆ ಎಂದರು.

ಪಾದಯಾತ್ರೆಯಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಹಿಂದುಳಿದ ವರ್ಗದ ಜಿಲ್ಲಾಧ್ಯಕ್ಷ ಕೆ.ಮಾರುತಿ, ತಾಪಂ ಮಾಜಿ ಅಧ್ಯಕ್ಷ ನಾಗೇಶ್‌ರಾಜ್, ಜಿಪಂ ಮಾಜಿ ಸದಸ್ಯೆ ಪುಷ್ಪ, ಗ್ರಾಪಂ ಅಧ್ಯಕ್ಷ ಸಿದ್ದರಾಜು, ದೊರೆಸ್ವಾಮಿ ನಾಯಕ, ಬ್ಲಾಕ್ ಅಧ್ಯಕ್ಷ ಶ್ರೀಕಂಠನಾಯಕ, ಜಗದೀಶ್, ಎ.ಸಿ.ಬಸವರಾಜ್, ಶಿವಪ್ಪದೇವರು, ಉಸ್ತುವಾರಿ ಸೋಮೇಶ್, ಲತಾಸಿದ್ದಶೆಟ್ಟಿ ಸೇರಿದಂತೆ ಇತರರಿದ್ದರು.

ಶ್ರೀಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ 107ನೇ ವರ್ಧಂತಿ



ತಿ.ನರಸೀಪುರ, ಆ.22– ಮಾಡ್ರಹಳ್ಳಿ ಮಠದ ಶ್ರೀಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ಅವರು ಯಾವುದೇ ಅನುದಾನ ಅಪೇಕ್ಷಿಸದೆ ಗ್ರಾಮೀಣ ಭಾಗದಲ್ಲಿ ಶಿಕ್ಷಣ ಸಂಸ್ಥೆ ತೆರೆದು ಬಡ ಮಕ್ಕಳಿಗೆ ಶಿಕ್ಷಣದ ನೀಡುವ ಮೂಲಕ ನಿರಂತರ ಕಾಯಕದಲ್ಲಿ ತೊಡಗಿದ್ದಾರೆ ಎಂದು ತಾಪಂ ಮಾಜಿ ಸದಸ್ಯ, ವೀರಶೈವ ಹಿರಿಯ ಮುಖಂಡ ಸೀಹಳ್ಳಿ ಗುರುಮೂರ್ತಿ ತಿಳಿಸಿದರು.

ಪಟ್ಟಣದ ಶ್ರೀಗುರು ಚನ್ನಮಲ್ಲಿಕಾರ್ಜುನ ಸ್ವಾಮಿ ಎಜುಕೇಷನ್ ಟ್ರಸ್ಟ್‌ನಲ್ಲಿ ಆಯೋಜಿಸಿದ್ದ ಶ್ರೀಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ 107ನೇ ವರ್ಧಂತಿ ಹಾಗೂ ಮಾಡ್ರಹಳ್ಳಿ ಪಟ್ಟದ ಮಠದ ಅಧ್ಯಕ್ಷ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮಿಗಳ 70ನೇ ವರ್ಧಂತಿ ಮಹೋತ್ಸವದ ಅಭಿನಂದನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸ್ವಾಮೀಜಿಗಳು ತಮ್ಮ ಸರಳ ನಡವಳಿಕೆ ಮೂಲಕ ತಾಲೂಕಿನ ಇತರೆ ಸ್ವಾಮೀಜಿಗಳಿಗೆ ಮಾದರಿಯಾಗಿದ್ದಾರೆ. ಸರ್ಕಾರದಿಂದ ಯಾವುದೇ ಅನುದಾನ ಬಯಸದೇ ಬಡಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಿದ್ದಾರೆ. ತಾಲೂಕಿನ ವಿವಿಧ ಮಠಗಳ ಪೈಕಿ ಮಾಡ್ರಹಳ್ಳಿ ಮಠ ಮುಂಚೂಣಿಯಲ್ಲಿದೆ ಎಂದರು.

ನಿಕಟ ಪೂರ್ವ ಬಿಜೆಪಿ ಕ್ಷೇತ್ರಾಧ್ಯಕ್ಷ ಹೆಚ್.ಎಂ.ಪರಶಿವಮೂರ್ತಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಡಾ.ಎನ್.ಎಲ್.ಭಾರತೀಶಂಕರ್, ಪುರಸಭೆ ಅಧ್ಯಕ್ಷ ಎಸ್.ಮದನ್ ರಾಜ್, ನಿವೃತ್ತ ಶಿಕ್ಷಕ ವಿ.ಮಹದೇವಸ್ವಾಮಿ, ಕೆ.ಜಿ.ವೀರಣ್ಣ, ತುರುಗನೂರು ರಾಜಣ್ಣ, ಶಾಂತರಾಜು, ನಹೀಮುಲ್ಲಾ, ಶಿವಮೂರ್ತಿ, ಉಪನ್ಯಾಸಕ ಕುಮಾರಸ್ವಾಮಿ, ಮುಖ್ಯೋಪಾಧ್ಯಾಯ ಪುಟ್ಟಬುದ್ಧಿ, ಸಿದ್ದಲಿಂಗಮೂರ್ತಿ, ಹೋಟೆಲ್ ರಾಜಣ್ಣ, ಕೆ.ಜಿ.ಶಿವಪ್ರಸಾದ್, ನಿಂಗಪ್ಪ, ದಣಾಯಕನಪುರ ಮಲ್ಲಣ್ಣ ಮತ್ತಿತರರಿದ್ದರು.

ಮೈಸೂರು ಮಿತ್ರ ಮಂಗಳವಾರ 23 ಆಗಸ್ಟ್ 2022

ಡಿಸಿ ಅಧ್ಯಕ್ಷತೆಯಲ್ಲಿ ಜನರಲ್ ತಿಮ್ಮಯ್ಯ ಸ್ಮಾರಕ ಭವನ ನಿರ್ವಹಣಾ ಸಮಿತಿ ಸಭೆ



ಮಡಿಕೇರಿ, ಆ.22– ಜನರಲ್ ತಿಮ್ಮಯ್ಯ ಸ್ಮಾರಕ ಭವನ ಕಾರ್ಯ ಚಟುವಟಿಕೆ ಸಂಬಂಧ 'ಸ್ಮಾರಕ ಭವನ ನಿರ್ವಹಣಾ ಸಮಿತಿ' ಸಭೆ ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ನಡೆಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಚಿನ್ನಸ್ವಾಮಿ ಅವರು ಜನರಲ್ ತಿಮ್ಮಯ್ಯ ಸ್ಮಾರಕ ಭವನದ ಸುತ್ತುಗೋಡೆ ನಿರ್ಮಾಣಕ್ಕೆ ಸರ್ಕಾರದಿಂದ 25 ಲಕ್ಷ ರೂ. ಬಿಡುಗಡೆಯಾಗಿದೆ ಎಂದು ಜಿಲ್ಲಾಧಿಕಾರಿ ಅವರ ಗಮನಕ್ಕೆ ತಂದರು.

ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕ ಸಚಿನ್ ಅವರು, ಗೌರವಾನ್ವಿತ ರಾಷ್ಟ್ರಪತಿಗಳು ಆಗಮಿಸಿದ್ದ ಸಂದರ್ಭದಲ್ಲಿ ಜನರಲ್ ತಿಮ್ಮಯ್ಯ ಸ್ಮಾರಕ ಭವನದಲ್ಲಿ ಸುಮಾರು 34 ಲಕ್ಷ ರೂ. ವೆಚ್ಚದ ಸಿವಿಲ್ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಇದುವರೆಗೆ ಹಣ ಬಿಡುಗಡೆಯಾಗಿಲ್ಲ ಎಂದು ಸಭೆಯ ಗಮನಕ್ಕೆ ತಂದರು.

ಈ ಬಗ್ಗೆ ಮಾತನಾಡಿದ ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಅವರು ಜನರಲ್ ತಿಮ್ಮಯ್ಯ ಸ್ಮಾರಕ ಭವನದ ಸುತ್ತುಗೋಡೆ ನಿರ್ಮಾಣಕ್ಕೆ ಬಿಡುಗಡೆಯಾಗಿರುವ ಹಣಕ್ಕೆ ಸಂಬಂಧಿಸಿದಂತೆ ಸರ್ಕಾರದ ನಿಯಮದಂತೆ ಕ್ರಮ ವಹಿಸಬೇಕಿದೆ ಎಂದರು.

ಜನರಲ್ ತಿಮ್ಮಯ್ಯ ಸ್ಮಾರಕ ಭವನದ ಮುಖ್ಯ ರಸ್ತೆ ಬದಿ ವಾಹನ ನಿಲುಗಡೆ ಸಂಬಂಧ ನಗರಸಭೆ ವತಿಯಿಂದ ಟೆಂಡರ್ ಆಹ್ವಾನಿಸಿ, ವಾಹನ ನಿಲುಗಡೆ ಶುಲ್ಕದಲ್ಲಿ ಶೇ.25 ರಷ್ಟು ಹಣವನ್ನು ಜನರಲ್ ತಿಮ್ಮಯ್ಯ ಸ್ಮಾರಕ ಭವನ ಚಟುವಟಿಕೆಗೆ ಭರಿಸುವಂತೆ ನಗರಸಭೆ ಇಂಜಿನಿಯರ್‌ಗೆ ಜಿಲ್ಲಾಧಿಕಾರಿ ತಿಳಿಸಿದರು.

ಈ ಬಗ್ಗೆ ಮಾತನಾಡಿದ ನಿರ್ಮಿತಿ ಕೇಂದ್ರದ ಯೋಜನಾ ನಿರ್ದೇಶಕರು ಮುಖ್ಯರಸ್ತೆ ಬಳಿ ಜನರಲ್ ತಿಮ್ಮಯ್ಯ ಸ್ಮಾರಕ ಭವನಕ್ಕೆ ಸೇರಿದ 6 ಅಡಿ ಅಷ್ಟು ಜಾಗವನ್ನು ಕಾಯ್ದಿರಿಸಿ, ತಡೆಗೋಡೆ ನಿರ್ಮಾಣ ಮಾಡಲಾಗಿದೆ ಎಂದು ಸಭೆಯ ಗಮನಕ್ಕೆ ತಂದರು.

ಜನರಲ್ ತಿಮ್ಮಯ್ಯ ಸ್ಮಾರಕ ಭವನದಲ್ಲಿ ಈಗಾಗಲೇ ಎರಡು ಬೋರ್‌ವೆಲ್‌ಗಳಿದ್ದು, ಒಂದು ಕಾರ್ಯ ನಿರ್ವಹಿಸುತ್ತಿದೆ ಮತ್ತೊಂದು ದುರಸ್ತಿಯಾಗಿದೆ ಬೇಸಿಗೆ ಅವಧಿಯಲ್ಲಿ ಉದ್ಯಾನವನಕ್ಕೆ ನೀರು ಪೂರೈಸುವುದು ಕಷ್ಟಸಾಧ್ಯವಾಗಿದೆ ಎಂದು ಜನರಲ್ ತಿಮ್ಮಯ್ಯ ಸ್ಮಾರಕ ಭವನದಲ್ಲಿ ಗೈಡ್ ಆಗಿ ಕಾರ್ಯ ನಿರ್ವಹಿಸುತ್ತಿರುವ ತಿಮ್ಮಯ್ಯ ಸಭೆಯ ಗಮನಕ್ಕೆ ತಂದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಬಿ.ಸಿ.ಸತೀಶ ಅವರು ನಗರಸಭೆಯಿಂದ ನಲ್ಲಿ ನೀರು ಸಂಪರ್ಕ ಕಲ್ಪಿಸುವಂತೆ ಇಂಜಿನಿಯರ್‌ಗೆ ಸೂಚಿಸಿದರು.

ಜನರಲ್ ತಿಮ್ಮಯ್ಯ ಸ್ಮಾರಕ ಭವನಕ್ಕೆ ನಮೂನೆ–3 ನ್ನು ಕೂಡಲೇ ಒದಗಿಸುವಂತೆ ನಗರಸಭೆ ಇಂಜಿನಿಯರ್‌ಗೆ ಜಿಲ್ಲಾಧಿಕಾರಿ ಅವರು ನಿರ್ದೇಶನ ನೀಡಿದರು.

ಜನರಲ್ ತಿಮ್ಮಯ್ಯ ಸ್ಮಾರಕ ಭವನದಲ್ಲಿ ಧ್ವಜ ಸ್ತಂಭ ನಿರ್ಮಾಣ ಮಾಡುವಂತಾಗಬೇಕು ಎಂದು ಕಾರ್ಗಿಲ್ ವಿಜಯ್ ದಿವಸದಂದು ಮೇಜರ್ ಚಿಂಗಪ್ಪ ಅವರು ಮನವಿ ಮಾಡಿದ್ದು, ಈ ಬಗ್ಗೆ ಸೈನಿಕ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಮತ್ತು ನಿರ್ಮಿತಿ ಕೇಂದ್ರದ ಯೋಜನಾ ವ್ಯವಸ್ಥಾಪಕರು ಪರಿಶೀಲಿಸಿ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಸಲಹೆ ಮಾಡಿದರು.

ಜಿಪಂ ಮುಖ್ಯ ಯೋಜನಾಧಿಕಾರಿ ರಾಜ್ ಗೋಪಾಲ್, ಸೈನಿಕ ಕಲ್ಯಾಣ ಇಲಾಖೆಯ ಮೇಜರ್ ಬಾಲಸುಬ್ರಹ್ಮಣ್ಯಂ, ಲೋಕೋಪಯೋಗಿ ಇಲಾಖೆಯ ತಾಂತ್ರಿಕ ಸಹಾಯಕರಾದ ಹರ್ಷ, ತಹಸೀಲ್ದಾರ್ ಪಿ.ಎಸ್.ಮಹೇಶ್, ನಗರಸಭೆ ಎಇಇ ಎಂ.ಎಸ್.ರಾಜೇಂದ್ರಕುಮಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮಣಜೂರು ಮಂಜುನಾಥ್ ಹಲವು ಮಾಹಿತಿ ನೀಡಿದರು. ಜಿಲ್ಲಾ ಉದ್ಯೋಗ ವಿನಿಯಮಾಧಿಕಾರಿ ಉಮಾ, ವಿದ್ಯಾರ್ಥಿನಿ ಮೋನಿಷಾ.ಡಿ.ಆರ್ ಇತರರಿದ್ದರು.

ವಿ.ಪೇಟೆಯಲ್ಲಿ ನಾರಾಯಣ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ವೈದ್ಯಕೀಯ ಕೇಂದ್ರ ಉದ್ಘಾಟನೆ

ವಿರಾಜಪೇಟೆ, ಆ.22– ಕೊಡಗಿನಲ್ಲಿರುವ ಜನರಿಗೆ ಕೆಲವು ಗಂಭೀರ ಆರೋಗ್ಯ ಸಮಸ್ಯೆಗಳಿಗೆ ಇತರ ಜಿಲ್ಲೆಯನ್ನು ಅವಲಂಬಿಸಬೇಕಾಗಿರುವುದರಿಂದ ಇಲ್ಲಿನ ಜನರಿಗೆ ಅನುಕೂಲವಾಗಲೆಂದು ಕೊಡಗು ದಂತ ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಮೈಸೂರು ವಿಭಾಗದ ನಾರಾಯಣ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ವೈದ್ಯಕೀಯ ಕೇಂದ್ರವನ್ನು ಆರಂಭಿಸಲಾಗಿದೆ ಎಂದು ಮೈಸೂರು ಜಿಲ್ಲಾ ಆರೋಗ್ಯಾಧಿಕಾರಿ ಡಾ. ವೆಂಕಟೇಶ್ ಹೇಳಿದರು.

ವಿರಾಜಪೇಟೆ ಬಳಿಯ ಕೊಡಗು ದಂತ ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಮೈಸೂರು ವಿಭಾಗದ ನಾರಾಯಣ ಮಲ್ಟಿ ಸ್ಪೆಷಾಲಿಟಿ ವೈದ್ಯಕೀಯ ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಲ್ಲಿನ ಆರೋಗ್ಯ ಕೇಂದ್ರದಲ್ಲಿ ಹೃದಯ ಮೂತ್ರಪಿಂಡ, ಗ್ಯಾಸ್ಟ್ರಿಕ್ ಇತರ ಗಂಭೀರ ಸಮಸ್ಯೆಗಳಿಗೆ ಚಿಕಿತ್ಸೆ ದೊರೆಯಲಿದ್ದು, ಹೆಚ್ಚಿನ ಚಿಕಿತ್ಸೆಯನ್ನು ಮೈಸೂರು ವೈದ್ಯಕೀಯ ಕೇಂದ್ರದಲ್ಲಿ ಪಡೆಯಬಹುದು ಎಂದರು.

ನಾರಾಯಣ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಮೈಸೂರು ಕೇಂದ್ರದ ಮುಖ್ಯ ವೈದ್ಯಕೀಯ ನಿರ್ದೇಶಕ ಡಾ.ಉತ್ತಪ್ಪ ಮಾತನಾಡಿ, ವಿರಾಜಪೇಟೆಯಲ್ಲಿ ಈಗ ಸ್ಥಾಪಿತವಾಗಿರುವ ವೈದ್ಯಕೀಯ ಕೇಂದ್ರದಲ್ಲಿ ಆಗತ್ಯ ತುರ್ತು ಚಿಕಿತ್ಸೆ ಸೌಲಭ್ಯ ದೊರೆಯಲಿದೆ. ಸಾಕಷ್ಟು ಜನರು ಇಂದು ಹೃದಯದ ಸಮಸ್ಯೆ ಹೊಂದಿರುವುದರಿಂದ ಈಗ ವಿರಾಜಪೇಟೆ ಭಾಗದ ಜನರಿಗೆ ಉತ್ತಮ ಚಿಕಿತ್ಸೆ ಲಭಿಸಲಿದ್ದು. ಇನ್ನಿತರ ಗಂಭೀರ ಆರೋಗ್ಯ ಸಮಸ್ಯೆ ಇರುವವರಿಗೆ ಮೈಸೂರು ಸಂಸ್ಥೆಯಲ್ಲಿ ಉತ್ತಮ ಆರೋಗ್ಯ ಸೇವೆ ಲಭಿಸಲಿದೆ. ವಿರಾಜಪೇಟೆಯಲ್ಲಿ ಆರಂಭವಾಗಿರುವ ವೈದ್ಯಕೀಯ ಕೇಂದ್ರದಲ್ಲಿ ಅಪಘಾತ ಸೇರಿದಂತೆ ಎಲ್ಲಾ ಚಿಕಿತ್ಸೆಯೊಂದಿಗೆ ಖಾಯಂ ವೈದ್ಯರಿದ್ದು ವಾರದಲ್ಲಿ ನಿಗದಿತ ದಿನಗಳಂದು ತಜ್ಞ ವೈದ್ಯರು ಭೇಟಿ ನೀಡಿ, ಆರೋಗ್ಯ ಸಮಸ್ಯೆಗೆ ಸ್ಪಂದಿಸಲಿದ್ದಾರೆ ಹಾಗೂ ರೋಗಿಗಳಿಗೆ ತಕ್ಷಣ ಹೆಚ್ಚಿನ ಚಿಕಿತ್ಸೆ ಕೊಡಿಸಬೇಕಾದರೆ ತುರ್ತು ಚಿಕಿತ್ಸೆ ವಾಹನ 24 ಗಂಟೆ ಕೇಂದ್ರದಲ್ಲಿ ಲಭಿಸಲಿದೆ ಎಂದರು.



ವಿರಾಜಪೇಟೆ ಕೊಡಗು ದಂತ ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ನಡೆದ ಮೈಸೂರು ವಿಭಾಗದ ನಾರಾಯಣ ಮಲ್ಟಿ ಸ್ಪೆಷಾಲಿಟಿ ವೈದ್ಯಕೀಯ ಕೇಂದ್ರ ಉದ್ಘಾಟನಾ ಸಮಾರಂಭದಲ್ಲಿ ಮೈಸೂರು ಡಿಹೆಚ್‌ಓ ಡಾ. ವೆಂಕಟೇಶ್ ಅವರನ್ನು ಸನ್ಮಾನಿಸಲಾಯಿತು.

ಆರೋಗ್ಯ ಕೇಂದ್ರದ ಉದ್ಘಾಟನೆ ಸಮಾರಂಭದ ಅಧ್ಯಕ್ಷತೆಯನ್ನು ದಂತ ವೈದ್ಯಕೀಯ ಮಹಾ ವಿದ್ಯಾಲಯದ ಡೀನ್ ಡಾ.ಸುನೀಲ್ ಮುದ್ದಯ್ಯ ವಹಿಸಿ ಮಾತನಾಡಿ, ಕೊಡಗಿನಲ್ಲಿ 1999 ರಲ್ಲಿ ನಾವು ಈ ಕಾಲೇಜು ಆರಂಭವಾದಾಗ ಹೆಚ್ಚು ದಿನ ಉಳಿಯುವುದಿಲ್ಲ ಎಂದವರೆ ಹೆಚ್ಚು ಆದರೆ ಇಂದು ನಮ್ಮ ಕಾಲೇಜು ಅಂತರಾಷ್ಟ್ರೀಯ ಮಟ್ಟದಲ್ಲಿಯೂ ಪ್ರತಿಷ್ಠಿತ ಕಾಲೇಜಾಗಿ ಹೊರ ಹೊಮ್ಮಿದೆ. ಹಾಗೂ ಇಂದು ನಾರಾಯಣ ವೈದ್ಯಕೀಯ ಕೇಂದ್ರ ನಮ್ಮ ಸಹಯೋಗದೊಂದಿಗೆ ಉದ್ಘಾಟನೆಗೊಂಡಿರುವುದು ಉತ್ತಮ ಕಾರ್ಯ ಎಂದರು.

ವೇದಿಕೆಯಲ್ಲಿ ಮೈಸೂರು ನಾರಾಯಣ ಆರೋಗ್ಯ ಸಂಸ್ಥೆಯ ತಜ್ಞ ವೈದ್ಯರಾದ ಡಾ. ಕೇಶವಮೂರ್ತಿ, ಡಾ.ವಿಜಯಸಿಂಗ್, ಹಿರಿಯ ಹೃದಯ ತಜ್ಞ ವೈದ್ಯ ಡಾ.ಎಂ.ಎನ್. ರವಿ ಸಮಾರಂಭದಲ್ಲಿ ಮಾತನಾಡಿದರು. ಕೇಂದ್ರ ಸ್ಥಾಪನೆಯಾಗುವ ನಿಟ್ಟಿನಲ್ಲಿ ಶ್ರಮಿಸಿದ ಸಂಸ್ಥೆಯ ಡಾ.ವೆಂಕಟೇಶ್ ಅವರನ್ನು ಸನ್ಮಾನಿಸಲಾಯಿತು. ಡಾ.ರವಿ ಸ್ವಾಗತಿಸಿದರು. ಸಮಾರಂಭದಲ್ಲಿ ದಂತ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸಿದ್ದರಾಮಯ್ಯ ಕಾರಿಗೆ ಮೊಟ್ಟೆ ಎಸೆದ ಸಂಪತ್ ಸಹೋದರನ ಮದುವೆಯಲ್ಲಿ ಜೀವಿಜಯ ಫೋಟೋ ವೈರಲ್

ಮಡಿಕೇರಿ,ಆ.22– ಮಾಜಿ ಸಿಎಂ ಸಿದ್ದರಾಮಯ್ಯ ಕಾರಿಗೆ ಮೊಟ್ಟೆ ಎಸೆದು ವಿವಾದ ಸೃಷ್ಟಿಸಿರುವ ಸಂಪತ್ ಸಹೋದರನ ಮದುವೆ ಸಮಾರಂಭದಲ್ಲಿ ಮಾಜಿ ಸಚಿವ ಬಿ.ಎ. ಜೀವಿಜಯ ಪಾಲ್ಗೊಂಡಿರುವ ಫೋಟೋ ಇದೀಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ನಿನ್ನೆ ದಿನ ಸಂಪತ್ ನನಗೆ ಗೊತ್ತಿಲ್ಲ. ಆತ ಕಾಂಗ್ರೆಸ್ ಕಾರ್ಯಕರ್ತನೂ ಅಲ್ಲ ಎಂದು ಜೀವಿಜಯ ಹೇಳಿದ್ದರು.



ಈ ಫೋಟೋ ವೈರಲ್ ಕುರಿತು ಸೋಮವಾರಪೇಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಅಪ್ಪಚ್ಚು ರಂಜನ್, ಜೀವಿಜಯ ಅವರು ಸಂಪತ್ ಸಹೋದರನ ಮದುವೆಗೆ ಹೋಗಿರುವ ಫೋಟೋ ವೈರಲ್ ಆಗಿದೆ. ಹೀಗಿದ್ದರೂ ಜೀವಿಜಯ ಯಾಕೆ ಸುಳ್ಳು ಹೇಳುತ್ತಿದ್ದಾರೋ ಗೊತ್ತಿಲ್ಲ. ಮಾಧ್ಯಮಗಳಿಗೂ ಜೀವಿಜಯ ತಪ್ಪು ಮಾಹಿತಿ ನೀಡಿದ್ದಾರೆ ಎಂದರು.

ಶಾಸಕ ಅಪ್ಪಚ್ಚು ರಂಜನ್ ಹೇಳಿಕೆಗೆ ಪ್ರತಿಕ್ರಿಯಿಸಿರುವ ಮಾಜಿ ಸಚಿವ ಜೀವಿಜಯ, ಜೀವನದಲ್ಲಿ ನನ್ನದೇ ಆದ ಕೆಲವು ಸಾಮಾಜಿಕ ಮೌಲ್ಯಗಳನ್ನು ಅಳವಸಿಕೊಂಡಿರುವ ಕಾರಣ ನನ್ನ ಮನೆಗೆ ಸಹಕಾರ ಕೋರಿ ಬರುವವರಿಗೆ ಸಹಾಯ ಮಾಡುತ್ತೇನೆ. ಜೊತೆಗೆ ಅಂತಹವರ ಶುಭ ಸಮಾರಂಭ, ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುತ್ತಿದ್ದೇನೆ. ಮದುವೆ ಸಮಾರಂಭ ಒಂದರಲ್ಲಿ ಸಂಪತ್ ಜೊತೆ ಕಾಣಿಸಿಕೊಂಡಿರುವ ಬಗ್ಗೆ ನನಗೆ ಸರಿಯಾದ ಮಾಹಿತಿ ಇಲ್ಲ. ಇದು ಬಿಜೆಪಿಗರು ತಿರುಚಿದ ಫೋಟೋ ಕೂಡ ಆಗಿರಬಹುದು ಎಂದರು. ಉದ್ಯಮ ವಹಿವಾಟಿನಲ್ಲಿ ತೊಡಗಿಸಿಕೊಂಡಿರುವ ನನ್ನ ಪುತ್ರನ ಬಳಿ ಚಾಲಕನಾಗಿ ಕಾರ್ಯನಿರ್ವಹಿಸುತ್ತಿರುವ ರಾಜು ಎಂಬವರ ಸಂಬಂಧಿ ಈ ಸಂಪತ್ ಎಂಬುದು ಇತ್ತೀಚೆಗಷ್ಟೇ ತಿಳಿದು ಬಂದಿದೆ ಎಂದು ಜೀವಿಜಯ ಹೇಳಿದ್ದಾರೆ.

14 ಆನೆಗಳನ್ನು ಕಾಡಿಗಟ್ಟಿದ ಅರಣ್ಯ ಇಲಾಖೆ



ಸಿದ್ದಾಪುರ, ಆ.22– ಕಾಫಿ ತೋಟಗಳಲ್ಲಿ ಬೀಡು ಬಿಟ್ಟು ಅಪಾರ ಪ್ರಮಾಣದ ಕೃಷಿ ಫಸಲು ನಾಶ ಮಾಡುವ ಮೂಲಕ ಕಾರ್ಮಿಕರು, ಬೆಳೆಗಾರರಲ್ಲಿ ಆತಂಕ ಸೃಷ್ಟಿ ಮಾಡಿದ 14 ಕಾಡಾನೆಗಳನ್ನು ಕಾಡಿಗಟ್ಟುವಲ್ಲಿ ಅರಣ್ಯ ಸಿಬ್ಬಂದಿ ಯಶಸ್ವಿಯಾಗಿದ್ದಾರೆ.

ವಿರಾಜಪೇಟೆ ತಾಲೂಕಿನ ಮಾಲ್ದಾರೆ, ಹುಂಡಿ, ಬಾಡಗ ಬಾಣಂಗಾಲ, ಬಜಗೊಲ್ಲಿ, ಮಟ್ಟ, ಮೈಲಾಪುರ, ಘಟ್ಟದಳ ವ್ಯಾಪ್ತಿಯ ಕಾಫಿ ತೋಟಗಳಲ್ಲಿ ಬೀಡು ಬಿಟ್ಟು ಕಾರ್ಮಿಕರು ಬೆಳೆಗಾರರು ಶಾಲಾ ವಿದ್ಯಾರ್ಥಿಗಳಲ್ಲಿ ಆತಂಕ ಸೃಷ್ಟಿ ಮಾಡಿ ಹಾಡಹಗಲಿನಲ್ಲೇ ಗ್ರಾಮ ಸಮೀಪ ಕಾಣಿಸಿಕೊಳ್ಳುತ್ತಿದ್ದ ಕಾಡಾನೆ ಹಾವಳಿಯಿಂದ ಸಾರ್ವಜನಿಕರು ಮನೆಯಿಂದ ಹೊರಬರಲು ಸಾಧ್ಯವಾಗದಂತ ಪರಿಸ್ಥಿತಿ ನಿರ್ಮಾಣವಾಗಿತ್ತು ಕಾಡಾನೆ ಹಾವಳಿಯನ್ನು ತಡೆಗಟ್ಟಬೇಕೆಂದು ನಿವಾಸಿಗಳು ಒತ್ತಾಯಿಸಿದ ಹಿನ್ನೆಲೆ ವಲಯ ಅರಣ್ಯಾಧಿಕಾರಿ ಅಶೋಕ್ ಹನಗುಂದ್ ಅವರ ನೇತೃತ್ವದಲ್ಲಿ ಮೂವತ್ತಕ್ಕೂ ಹೆಚ್ಚು ಸಿಬ್ಬಂದಿ ಸುಮಾರು ಇಪ್ಪತ್ತೈದು ಕಿಲೋ ಮೀಟರ್ ನಷ್ಟು ಸುತ್ತಾಡಿ ಬೇರೆಬೇರೆ ಭಾಗದಲ್ಲಿದ್ದ ಕಾಡಾನೆಗಳನ್ನು ಒಂದುಗೂಡಿಸಿ ಸಂಜೆಯಾಗುತ್ತಲೇ ಮಾಲ್ದಾರೆ ಅರಣ್ಯಕ್ಕೆ ಅಟ್ಟುವಲ್ಲಿ ಯಶಸ್ವಿಯಾಗಿದ್ದಾರೆ. ಈ ಸಂದರ್ಭ ಉಪ ವಲಯ ಅರಣ್ಯಾಧಿಕಾರಿಗಳಾದ ಶ್ರೀನಿವಾಸ್, ಉಮಾ ಶಂಕರ್, ಅರಣ್ಯರಕ್ಷಕ ರೇವಪ್ಪ ಸೇರಿದಂತೆ ಆರ್‌ಆರ್‌ಟಿ ಸಿಬ್ಬಂದಿ ಹಾಗೂ ಮತ್ತಿತರರು ಭಾಗವಹಿಸಿದ್ದರು.

ಕುಶಾಲನಗರ ತಾಲೂಕಿನ ಕೂಡುಮಂಗಳೂರು(ಕೂಡ್ಲೂರು) ಗ್ರಾಮ ಪಂಚಾಯತಿ, ಬಸವೇಶ್ವರ ದೇವಾಲಯ ಸಮಿತಿಯ ಸಹಯೋಗದೊಂದಿಗೆ ಕೂಡ್ಲೂರು ಸರ್ಕಾರಿ ಪ್ರೌಢಶಾಲೆಯಿಂದ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಅಂಗವಾಗಿ ಏರ್ಪಡಿಸಿದ್ದ ಶಾಲಾ ವಿದ್ಯಾರ್ಥಿಗಳ ಪ್ರಥಮ ವರ್ಷದ ಕೆಸರುಗದ್ದೆ ಕ್ರೀಡಾಕೂಟ ಸಂಭ್ರಮ–ಸಡಗರದಿಂದ ನಡೆಯಿತು.



ಜಿಂಕೆ ಚರ್ಮ ಮಾರುತ್ತಿದ್ದವನ ಬಂಧನ



ಮಡಿಕೇರಿ,ಆ.22– ಅಕ್ರಮವಾಗಿ ಜಿಂಕೆ ಚರ್ಮಗಳನ್ನು ಮಾರಾಟ ಮಾಡಲು ಯತ್ನಿಸುತ್ತಿದ್ದ ಓರ್ವ ಆರೋಪಿಯನ್ನು ಮಡಿಕೇರಿ ಸಿ.ಐ.ಡಿ ಪೊಲೀಸ್ ಅರಣ್ಯ ಘಟಕ ಬಂಧಿಸಿದೆ. ಆರೋಪಿ ಬಳಿಯಿಂದ 3 ಜಿಂಕೆ ಚರ್ಮಗಳನ್ನು ವಶಕ್ಕೆ ಪಡೆಯಲಾಗಿದೆ.

ಗುಡ್ಡೆಹೊಸೂರು–ಸಿದ್ದಾಪುರ ಕಡೆಗೆ ತೆರಳುವ ಮಾರ್ಗದಲ್ಲಿ ಆ.21ರಂದು ಅಲೀಮ್ ಪಾಷಾ ಎಂಬಾತ ಜಿಂಕೆ ಚರ್ಮಗಳನ್ನು ಮಾರಾಟ ಮಾಡಲು ಯತ್ನಿಸುತ್ತಿರುವ ಮಾಹಿತಿ ಅರಿತು ದಾಳಿ ನಡೆಸಿ ಆರೋಪಿ ಸಹಿತ ಜಿಂಕೆ ಚರ್ಮಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಬಂಧಿತ ಆರೋಪಿ ವಿರುದ್ಧ ವನ್ಯಜೀವಿ ಸಂರಕ್ಷಣಾ ಕಾಯಿದೆ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಸಿಐಡಿ ಪೊಲೀಸ್ ಅರಣ್ಯ ಘಟಕದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಕೆ.ವಿ.ಶರತ್‌ಚಂದ್ರ ನಿರ್ದೇಶನದ ಮೇರೆಗೆ ಮಡಿಕೇರಿ ಸಿಐಡಿ ಪೊಲೀಸ್ ಅರಣ್ಯ ಘಟಕದ ಪ್ರಭಾರ ಪೊಲೀಸ್ ಅಧೀಕ್ಷಕ ಶ್ರೀನಿವಾಸ್ ರೆಡ್ಡಿ ಮಾರ್ಗದರ್ಶನದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಮಡಿಕೇರಿ ಅರಣ್ಯ ಸಂಚಾರಿ ದಳದ ಪಿ.ಎಸ್.ಐ ಸಿ.ಯು.ಸವಿ ಹೆಡ್‌ಕಾನ್ಸ್‌ಟೇಬಲ್‌ಗಳಾದ ಶೇಖರ್, ರಾಜೇಶ್, ರಾಘವೇಂದ್ರ ಯೋಗೇಶ್, ಮೋಹನ ಹಾಗೂ ಕಾನ್ಸ್‌ಟೇಬಲ್ ಮಂಜುನಾಥ ಪಾಲ್ಗೊಂಡಿದ್ದರು.

75ನೇ ಸ್ವಾತಂತ್ರ್ಯ ಮಹೋತ್ಸವ ಹಿನ್ನೆಲೆ ಚಾ.ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ

ಕಾಂಗ್ರೆಸ್‌ನಿಂದ ಬೃಹತ್ ಪಾದಯಾತ್ರೆ



ಚಾಮರಾಜನಗರ, ಆ. 22– ಸ್ವಾತಂತ್ರ್ಯ ಅಮೃತ ಮಹೋತ್ಸವ ಅಂಗವಾಗಿ ಚಾಮರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಾಂಗ್ರೆಸ್‌ನಿಂದ ಬೃಹತ್ ಪಾದಯಾತ್ರೆ ನಡೆಯಿತು.

ನಗರ ಹಾಗೂ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್‌ನಿಂದ ಆಯೋಜಿಸಿದ್ದ ಪಾದಯಾತ್ರೆಗೆ ತಾಲೂಕಿನ ವೀರನಪುರ ಕ್ರಾಸ್ ಬಳಿಯ ಬಣ್ಣಾರಿ ಅಮ್ಮನ್ ದೇವಸ್ಥಾನ ಮುಂಭಾಗ ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್. ಧ್ರುವನಾರಾಯಣ್ ನಗಾರಿ ಬಾರಿಸುವ ಮೂಲಕ ಚಾಲನೆ ನೀಡಿ, 75 ವರ್ಷದ ತುಂಬಿದ ಹಿರಿಯ ಕಾಂಗ್ರೆಸ್ ಕಾರ್ಯಕರ್ತರನ್ನು ಧ್ರುವನಾರಾಯಣ್ ಗಾಂಧೀಜಿ ಭಾವಚಿತ್ರವುಳ್ಳ ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿದರು. ಇದಕ್ಕೂ ಮುನ್ನ ಶಾಸಕ ಸಿ.ಪುಟ್ಟರಂಗಶೆಟ್ಟಿ ಬಣ್ಣಾರಿ ಅಮ್ಮನ್ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಕಾಂಗ್ರೆಸ್ ಹಾಲಿ ಮತ್ತು ಹಾಲಿ ಶಾಸಕರು–ಸಂಸದರು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಸೇರಿದಂತೆ ಸಾವಿರಾರು ಮಂದಿ ಪಾದಯಾತ್ರೆಯಲ್ಲಿ ಹೆಜ್ಜೆ ಹಾಕಿದರು.

ಪುಷ್ಪ ವೃಷ್ಟಿ: ಪಾದಯಾತ್ರೆಗೆ ಚಾಲನೆ ನೀಡುತ್ತಿದ್ದಂತೆ ಕಾಂಗ್ರೆಸ್ ಕಾರ್ಯಕರ್ತರು ಪಕ್ಷದ ನಾಯಕರಿಗೆ ಜೆಸಿಬಿ ಮುಲಕ ಪುಷ್ಪ ವೃಷ್ಟಿ ಮಾಡಿದರು. ಧ್ರುವನಾರಾಯಣ್, ಪುಟ್ಟರಂಗಶೆಟ್ಟಿ ಹಾಗೂ ಮುಖಂಡರಿಗೆ ಸೇರಿದಂತೆ ಭಾರೀ ಗಾತ್ರದ ಹಾರ ಹಾಕಿ ಜೈಕಾರ ಕೂಗಿದರು. ಅಲ್ಲಿಂದ ಪಾದಯಾತ್ರೆ ಆರಂಭಗೊಂಡು ವೀರಪುರ ಕ್ರಾಸ್ ತಲುಪುತ್ತಿದ್ದಂತೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ ಹಾಗೂ ಸ್ನೇಹಿತರ ಬಳಗ ಕಜ್ಜಾಯ, ಖಾರಾ ಬೊಂದಿ ನೀಡಿ ಸ್ವಾಗತಿಸಿದರು.

ಸ್ವಾತಂತ್ರ್ಯ ತಂದುಕೊಟ್ಟ ಪಕ್ಷ: ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಸ್ವಾತಂತ್ರ್ಯ ಹೋರಾಟದಲ್ಲಿ ಕಾಂಗ್ರೆಸ್ ಮುಂಚೂಣಿಯಲ್ಲಿದ್ದು ಸ್ವಾತಂತ್ರ್ಯ ತಂದುಕೊಟ್ಟಿದೆ. 50 ವರ್ಷಗಳ ಕಾಲ ದೇಶಕ್ಕೆ ಉತ್ತಮ ಆಡಳಿತ ನೀಡಿದೆ. ದೇಶದ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದೆ. ಈ ಹಿನ್ನೆಲೆಯಲ್ಲಿ ವರಿಷ್ಠರ ಸೂಚನೆ ಮೇರೆಗೆ ಚಾಮರಾಜನಗರ ಕ್ಷೇತ್ರದಲ್ಲಿ ಅಮೃತ ಸ್ವಾತಂತ್ರ್ಯ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದರು.

ಕಡುಕಟ್ಟೆ ಹುಂಡಿ, ಶಿವಪುರ, ಉತ್ತುವಳ್ಳಿ, ಮಲ್ಲಯ್ಯನಪುರ ಗ್ರಾಮದ ಮುಂಭಾಗದ ಪಾದಯಾತ್ರೆಯಲ್ಲಿ ಬರುತ್ತಿದ್ದ ಕಾಂಗ್ರೆಸ್ ಕಾರ್ಯಕರ್ತರಿಗೆ ಮಜ್ಜಿಗೆ, ಪಾನಕ, ನೀರು, ಬಾಳೆ ಹಣ್ಣು, ವಿವಿಧ ಬಗೆಯ ಹಣ್ಣುಗಳು, ರೈಸ್‌ಬಾತ್ ನೀಡಲಾಯಿತು. ಚಾ.ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಮಂಗಲ ಗ್ರಾಮಕ್ಕೆ ಮಧ್ಯಾಹ್ನ 3 ಗಂಟೆಗೆ ತಲುಪುತ್ತಿದ್ದಂತೆ ಕಾರ್ಯಕರ್ತರು ಹಾಗೂ ಮುಖಂಡರಿಗೆ ಊಟ ವ್ಯವಸ್ಥೆ ಮಾಡಲಾಗಿತ್ತು.

ಪಾದಯಾತ್ರೆಯಲ್ಲಿ ಜಿಲ್ಲಾ ವೀಕ್ಷಕ ಎಸ್.ಸಿ.ಬಸವರಾಜು, ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಪಿ.ಮರಿಸ್ವಾಮಿ, ಶಾಸಕ ಯತೀಂದ್ರ ಸಿದ್ದರಾಮಯ್ಯ, ಮಾಜಿ ಶಾಸಕರಾದ ಎ.ಆರ್.ಕೃಷ್ಣಮೂರ್ತಿ, ಜಯಣ್ಣ, ಎಸ್. ಬಾಲರಾಜು, ಮಾಜಿ ಸಂಸದ ಎಂ.ಶಿವಣ್ಣ, ಯುವ ಮುಖಂಡ ಗಣೇಶ್ ಪ್ರಸಾದ್, ನಂಜುಂಡಪ್ರಸಾದ್, ಕಾಂಗ್ರೆಸ್ ಜಿಲ್ಲಾ ವಕ್ತಾರ ಕೆರೆಹಳ್ಳಿ ನವೀನ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಹಮದ್ ಅಸ್ಗರ್, ಎ.ಎಸ್.ಗುರುಸ್ವಾಮಿ, ಎಸ್ಟಿ ಘಟಕದ ರಾಜ್ಯ ಕಾರ್ಯದರ್ಶಿ ಪು.ಶ್ರೀನಿವಾಸನಾಯಕ, ಸಿ.ಎ.ಮಹದೇವಶೆಟ್ಟಿ, ಜಿಲ್ಲಾ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಆರ್.ಮಹದೇವ್, ಚಿಕ್ಕಮಹದೇವ್, ಜಿಪಂ ಮಾಜಿ ಸದಸ್ಯರಾದ ರಮೇಶ್, ಕಬ್ಬಳ್ಳಿ ಮಹೇಶ್, ಎಸ್‌ಪಿಕೆ ಉಮೇಶ್, ಮಹೇಶ್ ಕುದರ್, ಜಿಲ್ಲಾ ಮಾಧ್ಯಮ ಕಾರ್ಯದರ್ಶಿ ಅರುಣ್ ಕುಮಾರ್ ಸೇರಿದಂತೆ ಸಾವಿರಾರು ಮಂದಿ ಭಾಗವಹಿಸಿದ್ದರು.

ಸಿದ್ದರಾಮಯ್ಯ ಜನಪ್ರಿಯತೆಗೆ ಅಸೂಯೆ

ಚಾಮರಾಜನಗರ: ವಿಪಕ್ಷದ ನಾಯಕ ಸಿದ್ದರಾಮಯ್ಯ ಅವರ ಜನಪ್ರಿಯತೆಗೆ ಅಸೂಯೆ ಪಟ್ಟು, ಅವರ ಮೇಲೆ ಬಿಜೆಪಿಯವರು ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ವಾಗ್ದಾಳಿ ನಡೆಸಿದರು.

ಚಾಮರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಾಂಗ್ರೆಸ್ ಪಾದಯಾತ್ರೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮಡಿಕೇರಿಯಲ್ಲಿ ಸಿದ್ದರಾಮಯ್ಯ ಅವರ ಕಾರಿಗೆ ಮೊಟ್ಟೆ ಎಸೆಯುವ ಮೂಲಕ ಬಿಜೆಪಿಯವರು ಅಪಮಾನ ಮಾಡಿದ್ದಾರೆ. ಇದರ ಬಗ್ಗೆ ಒಂದು ದೊಡ್ಡಮಟ್ಟದ ತನಿಖೆ ಆಗಬೇಕು ಎಂದು ಒತ್ತಾಯಿಸಿದರು.

ಸುಳ್ಳೇ ಬಿಜೆಪಿ ದೇವರು: ಬಿಜೆಪಿಯವರ ಯಾವಾಗಲೂ ಇಂತಹ ವಿಷಯದಲ್ಲಿ ಸುಳ್ಳು ಹೇಳುವುದರದಲ್ಲಿ ನಿಸ್ಸೀಮರು. ಬಿಜೆಪಿಯವರಿಗೆ ಅಭಿವೃದ್ಧಿಯಲ್ಲಿ ನಂಬಿಕೆ ಇಲ್ಲ. ರಾಜ್ಯದಲ್ಲಿ ಹಲವು ಜ್ವಲಂತ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ. ಪ್ರಸ್ತುತ ವ್ಯಾಪಕ ಪ್ರವಾಹದಿಂದ ಹಾನಿಯಾಗಿದ ಪ್ರದೇಶಕ್ಕೆ ಅನುದಾನ ಕೊಡುವ ಕೆಲಸ ಮಾಡಿಲ್ಲ. ಕ್ಷುಲ್ಲಕ ವಿಚಾರ ಮೂಲಕ ವೈಫಲ್ಯ ಮರೆಮಾಚಲು ಈ ರೀತಿಯ ತಂತ್ರಾಗಾರಿಕೆ ಮಾಡುತ್ತಿದ್ದಾರೆ. ಚುನಾವಣೆ ಬಂದಾಗ ಯಾವಾಗಲು ಇಂತಹ ವಿಷಯಗಳಿಂದ ಕೋಮುಭಾವನೆ ಮೂಡಿಸಿ, ಮತ ಸೆಳೆಯುವ ಸಂಚು ಮಾಡುತ್ತಿದ್ದಾರೆ .ಇದಕ್ಕೆ ಹೆಚ್ಚು ಪ್ರಚಾರ ಕೊಡುವುದು ಒಳ್ಳೆಯದಲ್ಲ ಎಂದರು.

ಆಹಾರ ಪದ್ಧತಿ ಕುರಿತ ಚರ್ಚೆ ಅನಗತ್ಯ

ಚಾಮರಾಜನಗರ: ಆಹಾರ ಸೇವನೆ ಅವರವರ ಇಚ್ಛೆ, ದೇವಸ್ಥಾನಕ್ಕೆ ಬರುವ ಪ್ರತಿಯೊಬ್ಬರನ್ನೂ ಏನು ತಿಂದಿದ್ದಾರೆ ಎಂದು ಪರಿಶೀಲಿಸಲು ಸಾಧ್ಯವೆ? ಈ ಬಗ್ಗೆ ಚರ್ಚೆ ಅನಗತ್ಯ ಎಂದು ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ವಿಪಕ್ಷ ನಾಯಕ ಸಿದ್ದರಾಮಯ್ಯ ಅವರು ಕೊಡಗಿನಲ್ಲಿ ಕೋಳಿ ತಿಂದು ದೇವಸ್ಥಾನಕ್ಕೆ ಭೇಟಿ ನೀಡಿದ್ದಾರೆ ಎಂಬ ಆರೋಪದ ಬಗ್ಗೆ ನಗರದಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಅವರು, ಬಿಜೆಪಿಯವರು ತಮ್ಮ ವೈಫಲ್ಯ ಮುಚ್ಚಿಕೊಳ್ಳಲು ಅನಗತ್ಯ ವಿವಾದ ಸೃಷ್ಟಿಸುತ್ತಿದ್ದಾರೆ. ಇದರಿಂದ ಜನರ ಸಮಸ್ಯೆ ಪರಿಹಾರವಾಗುತ್ತದೆಯೇ? ರಾಜ್ಯದಲ್ಲಿ ಭ್ರಷ್ಟಾಚಾರ, ಆಡಳಿತ, ಕಾನೂನು ವ್ಯವಸ್ಥೆ ಹದಗೆಟ್ಟಿದೆ. ಕೋಮು ಗಲಭೆ ಹೆಚ್ಚಾಗುತ್ತಿದೆ ಎಂದು ದೂರಿದರು.

ಜಮೀರ್ ಅಹಮದ್‌ಗೆ ಹಂದಿ ಮಾಂಸ ತಿನ್ನುವಂತೆ ಹೇಳಿ ಎಂಬ ಸಂಸದ ಪ್ರತಾಪ್ ಸಿಂಹ ಹೇಳಿಕೆಗೆ ಪ್ರತಿಕ್ರಿಯಿಸಿದ ಯತೀಂದ್ರ, ನಮ್ಮ ತಂದೆ ಹಂದಿ, ದನದ ಮಾಂಸ ಎರಡನ್ನೂ ತಿನ್ನುವುದಿಲ್ಲ. ಅವರವರ ನಂಬಿಕೆ ಪ್ರಕಾರ ಅವರು ಆಹಾರ ಸೇವಿಸುತ್ತಾರೆ. ಬಲವಂತವಾಗಿ ಪ್ರತಾಪ್ ಸಿಂಹ ಬಂದು ತಿನ್ನಿಸಲು ಆಗುತ್ತದೆಯೇ? ಎಂದು ಖಾರವಾಗಿ ಕುಟುಕಿದರು.

ಕೊಡಗಿನ ಜನ ಟಿಪ್ಪು ಸುಲ್ತಾನ್‌ಗೆ ಹೆದರಲಿಲ್ಲ, ಸಿದ್ದು ಸುಲ್ತಾನ್‌ಗೆ ಹೆದರುತ್ತಾರಾ ಎಂಬ ಪ್ರತಾಪ್‌ಸಿಂಹ ಹೇಳಿಕೆಗೆ, ಪ್ರಚೋದನಾಕಾರಿ ಹೇಳಿಕೆ ಕೊಟ್ಟು ವಿವಾದ ಸೃಷ್ಟಿಸುವುದೇ ಪ್ರತಾಪ್ ಸಿಂಹ ಅವರ ಕೆಲಸವಾಗಿದೆ. ಕೊಡಗಿನ ಜನ ಧೈರ್ಯವಂತರು, ವೀರರು ಹಾಗೂ ಒಳ್ಳೆಯ ಜನ. ಅಂತಹವರನ್ನು ಮೊಟ್ಟೆ ಎಸೆಯುವ ಮಟ್ಟಕ್ಕೆ ಬಿಜೆಪಿಯವರು ತಂದಿದ್ದಾರೆ ಎಂದು ಯತೀಂದ್ರ ಆರೋಪಿಸಿದರು.

ಸಿದ್ದರಾಮಯ್ಯ ಹತ್ಯೆಗೆ ಸಂಚು ನಡೆಸಲಾಗುತ್ತಿದೆ ಎಂಬ ಕೆಪಿಸಿಸಿ ವಕ್ತಾರ ಲಕ್ಷ್ಮಣ್ ಆತಂಕಕ್ಕೆ ಪ್ರತಿಕ್ರಿಯಿಸಿದ ಯತೀಂದ್ರ ಸಿದ್ದರಾಮಯ್ಯ, ಆ ಬಗ್ಗೆ ನನಗೆ ಗೊತ್ತಿಲ್ಲ. ಆದರೆ ಬಿಜೆಪಿಯವರು ಹಾಗೂ ಹಿಂದುತ್ವವಾದಿ ಸಂಘಟನೆಗಳ ಇತಿಹಾಸ ಗಮನಿಸಿದಾಗ ಹಿಂಸಾಚಾರದಲ್ಲಿ ತೊಡಗಿರುವುದು ಕಂಡು ಬಂದಿದೆ. ಅವರು ಏನೂ ಮಾಡಲು ಹೇಸುವವರಲ್ಲ. ನಾವು ಯಾವುದಕ್ಕೂ ಹೆದರುವುದಿಲ್ಲ ಎಂದರು.

ಕಲ್ಯಾಣಮಂಟಪದಲ್ಲಿ ಸಿಕ್ಕಿದ್ದ 42 ಗ್ರಾಂ ಚಿನ್ನದ ಸರ ಹಿಂದಿರುಗಿಸಿದ ಮಹಿಳೆ

ಚಾಮರಾಜನಗರ, ಆ.22–ಕಲ್ಯಾಣಮಂಟಪದಲ್ಲಿ ಸಿಕ್ಕಿದ್ದ 42 ಗ್ರಾಂ ಚಿನ್ನದ ಸರವನ್ನು ಕಳೆದುಕೊಂಡಿದ್ದವರಿಗೆ ಹಿಂದಿರುಗಿಸಿ ಮಹಿಳೆ ಮಾನವೀಯತೆ ಮೆರೆದಿದ್ದಾರೆ.



ನಿರ್ಮಲಾ

ನಗರದ ನಂದಿ ಭವನದಲ್ಲಿ ಭಾನುವಾರ ಅನ್ನಪೂರ್ಣ ಹಾಗೂ ಗುರುಪ್ರಸಾದ್ ಎಂಬುವವರ ವಿವಾಹ ಜರುಗಿತ್ತು. ವಿವಾಹಕ್ಕೆ ರಾಮಸಮುದ್ರದ ಬ್ರಿಜೇಶ್‌ಕುಮಾರ್ (ಬಾಂಬೆ) ಅವರ ಪತ್ನಿ ಭಾನುಮತಿ ಆಗಮಿಸಿದ್ದರು. ಈ ವೇಳೆ ಅವರು ಧರಿಸಿದ್ದ 42 ಗ್ರಾಂ. ತೂಕದ ಲಾಂಗ್‌ಚೈನ್(ಸರ) ಕಳೆದುಕೊಂಡಿದ್ದರು. ಸ್ವಲ್ಪ ಸಮಯದ ನಂತರ ಇದು ಅವರ ಗಮನಕ್ಕೆ ಬಂದಿದೆ. ನಂತರ ಕಲ್ಯಾಣ ಮಂಟಪದ ಎಲ್ಲೆಡೆ ಸರಕ್ಕಾಗಿ ಹುಡುಕಾಟ ನಡೆಸುತ್ತಿದ್ದರು. ಈ ವೇಳೆ ಕಲ್ಯಾಣ ಮಂಟಪದಲ್ಲಿ ಕುಳಿತಿದ್ದ ರಾಮಸಮುದ್ರ ನಾಗರಾಜು ಅವರ ಪತ್ನಿ ನಿರ್ಮಲಾ ಅವರು ಸರ ತನಗೆ ಸಿಕ್ಕಿರುವುದಾಗಿ ಸ್ವಯಂ ಪ್ರೇರಿತವಾಗಿ ತಿಳಿಸಿ, ಸರವನ್ನು ಭಾನುಮತಿ ಅವರಿಗೆ ಒಪ್ಪಿಸಿದರು. ಸುಮಾರು 2 ಲಕ್ಷ 30 ಸಾವಿರ ರೂ. ಮೌಲ್ಯದ ಚಿನ್ನದ ಸರವನ್ನು ಹಿಂದಿರುಗಿಸಿದ ನಿರ್ಮಾಲ ಅವರ ಮಾನವೀಯ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಯಿತು.

ಉದ್ಯಮಿಗಳು, ವ್ಯಾಪಾರಿಗಳ ಬಗ್ಗೆ ಮತದಾರರು ಎಚ್ಚರ

ಶಾಸಕ ಆರ್.ನರೇಂದ್ರ



ಹನೂರು, ಆ.22–ಮುಂಬರುವ ವಿಧಾನಸಭಾ ಚುನಾವಣೆಯ ಅಭ್ಯರ್ಥಿಗಳೆಂದು ಹೇಳಿಕೊಂಡು ಹನೂರಿಗೆ ಬೆಂಗಳೂರು ಮೂಲದ ಉದ್ಯಮಿಗಳು, ವ್ಯಾಪಾರಸ್ಥರು ಬಂದಿದ್ದು, ಮತದಾರರು ಎಚ್ಚರದಿಂದಿರಬೇಕು ಎಂದು ಶಾಸಕ ಆರ್.ನರೇಂದ್ರ ಮಾರ್ಮಿಕವಾಗಿ ನುಡಿದರು.

ತಾಲೂಕಿನ ಶೆಟ್ಟಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಹನೂರು ವಿಧಾನಸಭಾ ಕ್ಷೇತ್ರದ ಅಭ್ಯರ್ಥಿಗಳು ಎಂದು ಹೇಳಿಕೊಂಡು ಇತ್ತೀಚೆಗೆ ಆಗಮಿಸಿರುವ ವ್ಯಕ್ತಿಗಳು ತಮ್ಮನ್ನು ಗೆಲ್ಲಿಸಿದರೆ, ದುಡ್ಡು ಕೊಡುವುದಾಗಿ ಆಸೆ, ಆಮಿಷಗಳನ್ನು ಒಡ್ಡುತ್ತಿದ್ದಾರೆ. ಅವರು ಬಂಡವಾಳ ಹೂಡಲು ಬಂದವರು. ವ್ಯಾಪಾರ ಮನೋಭಾವದವರು. ಅವರ ಬಗ್ಗೆ ಎಚ್ಚರದಿಂದಿರಬೇಕು. ನಾನು, ನಮ್ಮ ಕುಟುಂಬ ಬಹಳ ವರ್ಷಗಳಿಂದ ಹನೂರಿನ ಜನತೆಯ ಸೇವೆ ಮಾಡಿಕೊಂಡೇ ಬಂದಿದ್ದೇವೆ. ಈಗಲೂ ಸಹ ನಾನು ನಿಮ್ಮ ಸೇವೆಗಾಗಿ ಮಾತ್ರ ಮತ ಕೇಳುತ್ತೇನೆ ಎಂದರು.

ಕರ್ನಾಟಕದಲ್ಲಿ ಮೊದಲ ಬಾರಿಗೆ ಕಾಡಂಚಿನ ಗ್ರಾಮಗಳಿಗೆ ಅಡುಗೆ ಅನಿಲ ವಿತರಣೆ ಮಾಡಿದ್ದು ನಮ್ಮ ಕಾಂಗ್ರೆಸ್ ಸರ್ಕಾರ. ಆದರೆ ಈಗ ಅಲ್ಲಿನ ಜನರು ಗ್ಯಾಸ್ ಬೆಲೆ ಏರಿಕೆಯಿಂದ ತೊಂದರೆ ಅನುಭವಿಸುವುದನ್ನು ನೋಡುತ್ತಿದ್ದೇವೆ. ಕಪ್ಪು ಹಣ ತಂದು ಇಡೀ ದೇಶಕ್ಕೆ ಹಂಚುತ್ತೇವೆ, ವರ್ಷಕ್ಕೆ 2 ಕೋಟಿ ಯುವಕರಿಗೆ ಉದ್ಯೋಗ ನೀಡುತ್ತೇವೆ ಎಂದು ಸುಳ್ಳು ಭರವಸೆಗಳನ್ನು ನೀಡಿ ಅಧಿಕಾರ ಹಿಡಿದ ಬಿಜೆಪಿ ಇಂದು ಮಾಡಿರುವುದಾದರೂ ಏನು ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಸರ್ಕಾರವಿದ್ದಾಗ ಸಿದ್ದರಾಮಯ್ಯ ಅವರು ಕ್ಷೇತ್ರಕ್ಕೆ 35,000 ಕೋಟಿ ಅನುದಾನ ನೀಡಿದ್ದರು. ಆದರೆ ಬಿಜೆಪಿ ಸರ್ಕಾರದ ಅನುದಾನ ಶೂನ್ಯ ಎಂದು ಆರೋಪಿಸಿದರು.

ಕಾಂಗ್ರೆಸ್ ಮುಖಂಡ ವಿ.ರಂಗಸ್ವಾಮಿ ಮಾತನಾಡಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ದೇವರಾಜು, ಈಶ್ವರ್, ಜಿಪಂ ಮಾಜಿ ಉಪಾಧ್ಯಕ್ಷ ಬಸವರಾಜು, ಗ್ರಾಪಂ ಅಧ್ಯಕ್ಷ ನಾಗರಾಜು, ಮುಖಂಡರಾದ ಚಾಂದ್‌ಪಾಷ, ಮೆಹಬೂಬ್ ಶರೀಫ್, ಲಕ್ಷ್ಮಯ್ಯನ, ದೊಡ್ಡಿಯ ಬಣ್ಣಾರಿ, ದೊಡ್ಡಲತ್ತೂರು ಗ್ರಾಪಂ ಸದಸ್ಯರಾದ ರವಿ, ರಂಗಸ್ವಾಮಿ ಹಾಗೂ ಕಾಂಗ್ರೆಸ್ ಮುಖಂಡರು ಈ ಸಂದರ್ಭದಲ್ಲಿದ್ದರು.

ಆಯುಷ್ ಆಡಳಿತ ಮಂಡಳಿ ಸದಸ್ಯ ಡಾ.ಬಾಬುಗೆ ಅಭಿನಂದನೆ



ಯಳಂದೂರು,ಆ.22–ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ(ಆಯುಷ್)ಯ ಆಡಳಿತ ಮಂಡಳಿ ನೂತನ ಸದಸ್ಯರಾಗಿ ಆಯ್ಕೆಯಾಗಿರುವ ತಾಲೂಕಿನ ಅಂಬಳೆ ಗ್ರಾಮದ ಡಾ.ಎ.ಆರ್.ಬಾಬು ಅವರನ್ನು ತಾಲೂಕಿನ ಡಾ.ಬಾಬು ಅಭಿಮಾನಿ ಬಳಗ ಹಾಗೂ ಬಿಜೆಪಿ ಘಟಕದಿಂದ ಅಭಿನಂದಿಸಲಾಯಿತು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಡಾ.ಎ.ಆರ್.ಬಾಬು ಮಾತನಾಡಿ, ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಇಲಾಖೆಯ ಸಚಿವಾಲಯ ಭಾರತದ ಪ್ರತಿಷ್ಠಿತ ಸಂಸ್ಥೆಯಾದ ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ಆಡಳಿತ ಮಂಡಳಿ ತಮ್ಮನ್ನು ನಾಮ ನಿರ್ದೇಶನ ಮಾಡಿದ್ದು, ನನ್ನ ಅವಧಿಯಲ್ಲಿ ಪ್ರಮಾಣಿಕವಾಗಿ ಜನರ ಸೇವೆಯನ್ನು ಸಲ್ಲಿಸುವುದಾಗಿ ತಿಳಿಸಿದರು.

ಚಾಮುಲ್ ಅಧ್ಯಕ್ಷ ನಾಗೇಂದ್ರ ಮಾತನಾಡಿದರು. ಈ ಸಂದರ್ಭದಲ್ಲಿ ಬಿಜೆಪಿ ಎಸ್‌ಸಿ ಘಟಕದ ಜಿಲ್ಲಾಧ್ಯಕ್ಷ ಕಿನಕಹಳ್ಳಿ ರಾಚಯ್ಯ, ಬಿಜೆಪಿ ಪಕ್ಷದ ಜಿಲ್ಲಾ ಕಾರ್ಯದರ್ಶಿ ಹೊನ್ನೂರು ಸತೀಶ್, ಅಂಬಳೆ ಮನು, ಮಹೇಶ್, ಶ್ರೀಕಂಠ್, ಚಂದ್ರಶೇಖರ್, ರಾಚಪ್ಪ, ಶಾಂತರಾಜು, ರಾಜು, ಮಹದೇವಪ್ಪ, ಭೀಮಪ್ಪ, ಮಾದ, ಗಿರೀಶ್, ವಿರೂಪಾಕ್ಷ, ದೇವರಾಜು, ಶೇಖರ್ ಅಂಬಳೆ ಗ್ರಾಮದ ಗ್ರಾಮಸ್ಥರು ಹಾಗೂ ಇತರರು ಹಾಜರಿದ್ದರು.

ಕಬಿನಿ ನಾಲೆಗೆ ಹಾರಿ ಗೃಹಿಣಿ ಆತ್ಮಹತ್ಯೆ



ಚಾಮರಾಜನಗರ, ಆ.22–ಕಬಿನಿ ನಾಲೆಗೆ ಹಾರಿ ಗೃಹಿಣಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಸೋಮವಾರ ಸಂತೇಮರಹಳ್ಳಿ ಸಮೀಪ ನಡೆದಿದೆ.

ತಾಲೂಕಿನ ದೇಶವಳ್ಳಿ ಗ್ರಾಮದ ಮೂರ್ತಿ ಅವರ ಪತ್ನಿ ಸುನಂದ(35) ಆತ್ಮಹತ್ಯೆ ಮಾಡಿಕೊಂಡವರು.

ದಂಪತಿ ನಡುವೆ ಆಗಾಗ ಜಗಳ ನಡೆಯುತ್ತಿತ್ತು ಎನ್ನಲಾಗಿದೆ. ಇದರಿಂದ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿದು ಬಂದಿದ್ದು, ಸೋಮವಾರ ಮುಂಜಾನೆ ಮನೆಯಿಂದ ಹೊರಹೋದ ಸುನಂದ ನಾಲೆಗೆ ಹಾರಿದ್ದಾರೆ. ಸಂಜೆ ಮೃತದೇಹ ಪತ್ತೆಯಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ಸಂತೇಮರಹಳ್ಳಿ ಠಾಣೆ ಪೊಲೀಸರು, ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಮಾಂಸ ತಿಂದು ದೇವಸ್ಥಾನಕ್ಕೆ ಹೋಗ್ತೀನಿ ಅನ್ನೋದು ಭಂಡತನ: ಬಿವೈ. ವಿಜಯೇಂದ್ರ

ಶಿವಮೊಗ್ಗ: ವಿಪಕ್ಷ ನಾಯಕ ಸಿದ್ದರಾಮಯ್ಯ ಮಾಂಸ ಸೇವಿಸಿ ದೇವಸ್ಥಾನಕ್ಕೆ ಭೇಟಿ ನೀಡಿದ್ದ ವಿಚಾರ ಸಾಕಷ್ಟು ಚರ್ಚೆಗೆ ಗ್ರಾಸವಾಗಿದ್ದು ಈ ಕುರಿತು ರಾಜ್ಯ ಬಿಜೆಪಿ ಉಪಾಧ್ಯಕ್ಷ ಬಿವೈ ವಿಜಯೇಂದ್ರ ಪ್ರತಿಕ್ರಿಯಿಸಿದ್ದಾರೆ. ಮಾಂಸ ತಿಂದು ದೇವಸ್ಥಾನಕ್ಕೆ ಹೋಗ್ತೀನಿ ಅನ್ನೋದು ಭಂಡತನ. ಯಾರು ಏನು ಬೇಕಾದರೂ ತಿನ್ನಬಹುದು. ಯಾರು ಏನು ಬೇಕಾದರೂ ತಿನ್ನಲು ಸ್ವಾತಂತ್ರ್ಯ ಇದೆ. ದೇವರನ್ನು ನಂಬಿ ಜೀವನ ನಡೆಸುವ ಜನರು ಇದ್ದಾರೆ ಎಂದರು.

ಒಂದನೇ ಪುಟದಿಂದ

ಡಿಜಿಟಲ್ ನೋಂದಣಿ, ಪಾವತಿ ವ್ಯವಸ್ಥೆ

ನೀಡಲಾಗಿದೆ. ಪ್ರತಿ ವಿಭಾಗಗಳ ಮುಖ್ಯಸ್ಥರಿಗೆ ನಿಗದಿತ ಗುರಿ ನೀಡಲಾಗಿದೆ. ಜನರು ಖಾಸಗಿ ಆಸ್ಪತ್ರೆಗೆ ಹೋಗದೆ ಇಲ್ಲಿಯೇ ಬರುವಂತೆ ಕ್ರಮ ವಹಿಸಬೇಕು ಎಂದು ಸೂಚಿಸಲಾಗಿದೆ ಎಂದರು. ಈ ಹಿಂದೆ ಲಂಚ ಪಡೆದ ಹೊರಗುತ್ತಿಗೆ ವೈದ್ಯರೊಬ್ಬರ ವಿರುದ್ಧ ತನಿಖೆ ನಡೆಯುತ್ತಿದೆ. ಈಗ ತಕ್ಷಣ ಕೆಲಸದಿಂದ ತೆಗೆದುಹಾಕಬೇಕು ಎಂದು ಸೂಚಿಸಲಾಗಿದೆ. ತನಿಖಾ ವರದಿ ಬರುವ ಮುನ್ನವೇ ಅವರನ್ನು ಕೆಲಸದಿಂದ ತೆಗೆದುಹಾಕಲು ತಿಳಿಸಲಾಗಿದೆ. ರಾಜ್ಯದ ಬೇರೆ ಬೇರೆ ಆಸ್ಪತ್ರೆಗಳಿಗೂ ಭೇಟಿ ನೀಡಲಾಗುವುದು. ನಮ್ಮ ಸರ್ಕಾರ ಮಾತೃ ಹೃದಯ ಹೊಂದಿದ್ದು, ಅದಕ್ಕೆ ಪೂರಕವಾಗಿ ಕಾರ್ಯ ನಿರ್ವಹಿಸಲಾಗುವುದು ಎಂದರು. ಕೋವಿಡ್ ರೋಗಿಗಳಿಂದ ಹಣ ಪಡೆದ ಬಳಿಕ ಸರ್ಕಾರದಿಂದ ಹಣ ಪಡೆದ ಖಾಸಗಿ ಆಸ್ಪತ್ರೆಗಳಿಗೆ ನೋಟಿಸ್ ನೀಡಿ, ಹಣವನ್ನು ರೋಗಿಗಳಿಗೆ ಹಿಂದಿರುಗಿಸಲಾಗಿದೆ. ಇತಿಹಾಸದಲ್ಲಿ ಮೊದಲ ಬಾರಿಗೆ ಸರ್ಕಾರ ಈ ರೀತಿಯ ಕ್ರಮ ವಹಿಸಿ, 1.58 ಕೋಟಿ ರೂ. ಹಣವನ್ನು ರೋಗಿಗಳ ಕುಟುಂಬಕ್ಕೆ ವಾಪಸ್ ಮಾಡಲಾಗಿದೆ. ಇನ್ನು ಉಳಿದ ಮೊತ್ತವನ್ನು ಕೂಡ ವಾಪಸ್ ಕೊಡಿಸಲಾಗುವುದು. ಮೊತ್ತವನ್ನು ವಾಪಸ್ ಕೊಡಿಸುವವರೆಗೂ ಸರ್ಕಾರ ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಉನ್ನತ ಮಟ್ಟದ ತನಿಖೆ ಆರಂಭ

ಸಂಪತ್ ತಮ್ಮ ಬೆಂಬಲಿಗ ಎಂಬ ಆರೋಪವನ್ನು ಹಿರಿಯ ಕಾಂಗ್ರೆಸ್ ನಾಯಕ ಬಿಎ ಜೀವಿಜಯ ಅವರು ಸ್ಪಷ್ಟವಾಗಿ ನಿರಾಕರಿಸಿದ್ದಾರೆ. ಅಲ್ಲದೆ ಗುತ್ತಿಗೆದಾರರಾಗಿರುವ ಸಂಪತ್ ಅವರು ಬಿಜೆಪಿ ಶಾಸಕ ಅಪ್ಪಚ್ಚು ರಂಜನ್ ಅವರಿಂದ ಗುತ್ತಿಗೆ ಪಡೆಯಲು ಸಹಾಯ ಪಡೆದಿದ್ದಾರೆ ಎಂದು ಜೀವಿಜಯ ಆರೋಪಿಸಿದ್ದಾರೆ. ಸಂಪತ್ ಅವರ ಸಾಮಾಜಿಕ ಮಾಧ್ಯಮ ಪುಟವು ಎಲ್ಲಾ ರಾಜಕೀಯ ಪಕ್ಷಗಳ ಛಾಯಾಚಿತ್ರಗಳ ಸಂಯೋಜನೆಯಾಗಿದ್ದು, ಬಿಜೆಪಿ, ಕಾಂಗ್ರೆಸ್ ಮತ್ತು ಜೆಡಿ(ಎಸ್) ಪಕ್ಷದ ಕಾರ್ಯಗಳಲ್ಲಿ ಅವರ ಪಾಲ್ಗೊಳ್ಳುವಿಕೆಯನ್ನು ಪ್ರದರ್ಶಿಸುತ್ತದೆ. ಎಲ್ಲಾ ರಾಜಕೀಯ ಪಕ್ಷಗಳು ಅವರನ್ನು ಪಕ್ಷದ ಕಾರ್ಯಕರ್ತ ಎಂದು ನಿರಾಕರಿಸಿದ್ದರೂ ಸಹ ಸಂಪತ್ ಆರ್‌ಎಸ್‌ಎಸ್, ವಿಎಚ್‌ಪಿ ಮತ್ತು ಇತರ ಹಿಂದೂ ಸಂಘಟನೆಗಳು ಆಯೋಜಿಸುವ ಹಲವಾರು ಹಿಂದುತ್ವ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದಾರೆ. ಸೋಮವಾರಪೇಟೆಯಲ್ಲಿರುವ ಸಂಪತ್ ಅವರ ನಿವಾಸಕ್ಕೆ ಪೊಲೀಸರಿಂದ ಭದ್ರತೆಯನ್ನು ನೀಡಲಾಗಿದ್ದು, ಸಂಪತ್ ಕೊಡಗಿನಲ್ಲಿಲ್ಲ ಎಂದು ಅವರ ಕುಟುಂಬ ಖಚಿತಪಡಿಸಿದ ನಂತರ ಭದ್ರತೆ ಹಿಂಪಡೆಯಲಾಗಿದೆ.

ಆ.27ರವರೆಗೆ ನಿಷೇಧಾಜ್ಞೆ

ಸೇರಿ ಲಕ್ಷ ಮಂದಿ ಭಾಗವಹಿಸುವ ನಿರೀಕ್ಷೆ ಇದೆ. ಈ ಸಂದರ್ಭದಲ್ಲಿ ಕೋಮು ಸೌಹಾರ್ದತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ನಿಷೇಧಾಜ್ಞೆ ವಿಧಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ನಿಷೇಧಾಜ್ಞೆ ವೇಳೆ ಪೂರ್ವ ನಿಯೋಜಿತ ಮದುವೆ, ನಾಮಕರಣ, ಗೃಹಪ್ರವೇಶ ಹಾಗೂ ಸರ್ಕಾರಿ ಕಾರ್ಯಕ್ರಮಗಳನ್ನು ಹೊರತುಪಡಿಸಿ ಯಾವುದೇ ಸಭೆ–ಸಮಾರಂಭ, ಮೆರವಣಿಗೆ ವಿಜಯೋತ್ಸವ ಪ್ರತಿಭಟನೆ ನಡೆಸುವಂತಿಲ್ಲ. ಪಟಾಕಿ ಸಿಡಿಸುವುದು, ಕಪ್ಪು ಬಟ್ಟೆ ಧರಿಸುವುದು, ಕಪ್ಪು ಬಾವುಟ ಪ್ರದರ್ಶನ, ಪ್ರಚೋದಾನಾತ್ಮಕ ಘೋಷಣೆ ಕೂಗುವುದು ಹಾಗೂ ಭಾಷಣ ಮಾಡುವುದನ್ನು ನಿಷೇಧಿಸಲಾಗಿದೆ. ಅಲ್ಲದೆ ಜಿಲ್ಲೆಯಾದ್ಯಂತ ಸಂತೆ–ಜಾತ್ರೆಗಳನ್ನು ಕೂಡ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

ಮದ್ಯ ಮಾರಾಟ ನಿಷೇಧ: ಆ.24ರ ಮಧ್ಯರಾತ್ರಿ 12 ಗಂಟೆಯಿಂದ 26ರ ಮಧ್ಯರಾತ್ರಿ 12 ಗಂಟೆವರೆಗೆ ಜಿಲ್ಲೆಯಾದ್ಯಂತ ಮದ್ಯ ಮಾರಾಟಕ್ಕೆ ನಿಷೇಧ ವಿಧಿಸಲಾಗಿದೆ.

ಆ.30ರವರೆಗೆ ಸಾವರ್ಕರ್ ರಥಯಾತ್ರೆ

ಮಾತೃ ಮಂಡಳಿ ವೃತ್ತ, ಟೆಂಟ್ ವೃತ್ತ, ವಿವೇಕಾನಂದನಗರ, ಚಾಮುಂಡಿಪುರಂ ವೃತ್ತ ಸೇರಿದಂತೆ ಇನ್ನಿತರೆ ಕಡೆಗಳಲ್ಲಿ ಸಂಚರಿಸಲಿದೆ. ಆ.24ರಂದು ಮೈಸೂರು ಗ್ರಾಮಾಂತರ ಪ್ರದೇಶದಲ್ಲಿ ರಥಯಾತ್ರೆ ನಡೆಯಲಿದ್ದು, ಜಯಪುರ, ಹಂಪಾಪುರ, ಹೆಚ್‌ಡಿ ಕೋಟೆ, ಸರ ಗೂರು ಭಾಗಗಳಲ್ಲಿಯೂ ಸಂಚರಿಸಲಿದೆ ಎಂದು ತಿಳಿಸಿದರು.

ಆ.25ರಂದು ನಂಜನಗೂಡು, ಚಾಮರಾಜನಗರ ಜಿಲ್ಲೆಯ ಬೇಗೂರು, ಗುಂಡ್ಲುಪೇಟೆ, ತೆರಕಣಾಂಬಿ, ಆ.26 ರಂದು ಚಾಮರಾಜನಗರ ಜಿಲ್ಲೆಯ ಸಂತೆ ಮರಹಳ್ಳಿ, ಯಳಂದೂರು, ಕೊಳ್ಳೇಗಾಲ, ಹನೂರು, ಕೌದಳ್ಳಿ, ಆ.27ರಂದು ಮೈಸೂರು ಜಿಲ್ಲೆಯ ಟಿ.ನರಸೀಪುರ, ಬನ್ನೂರು, ಮಂಡ್ಯ ಜಿಲ್ಲೆಯ ಕಿರಗಾ ವಲು, ಮಳವಳ್ಳಿ, ಹಲಗೂರು, ಕೆಎಂ ದೊಡ್ಡಿ, ಮದ್ದೂರು, ಬೇಸಗರಹಳ್ಳಿ, ಆ.28ರಂದು ಕೊಪ್ಪ, ಮಂಡ್ಯ ನಗರ, ಶ್ರೀರಂಗಪಟ್ಟಣ, ಪಾಂಡವಪುರ, ಆ.29ರಂದು ಕಿಕ್ಕೇರಿ, ಕೆಆರ್ ಪೇಟೆ, ಮೈಸೂರು ಜಿಲ್ಲೆಯ ಸಾಲಿಗ್ರಾಮ, ಪಿರಿಯಾ ಪಟ್ಟಣದಲ್ಲಿ ರಥಯಾತ್ರೆ ಸಾಗಲಿದೆ. ಆ.30ರಂದು ಹುಣಸೂರು ಮಾರ್ಗವಾಗಿ ಮೈಸೂರಿಗೆ ಹಿಂತಿರುಗಲಿದ್ದು, ಬಳಿಕ ಮೈಸೂರು ಅರಮನೆ ಕೋಟೆ ಆಂಜ ನೇಯಸ್ವಾಮಿ ದೇವಸ್ಥಾನದ ಎದುರು ಸಮಾರೋಪ ಸಮಾರಂಭ ನಡೆಯಲಿದೆ ಎಂದು ವಿವರಿಸಿದರು. ರಥಯಾತ್ರೆ ಸಂಯೋ ಜಕ ರಜತ್, ಪ್ರತಿಷ್ಠಾನದ ಕಾರ್ಯಕರ್ತ ರಾದ ರಾಕೇಶ್‌ಭಟ್, ಶಿವಕುಮಾರ್, ನಿಶಾಂತ್ ಗೋಷ್ಠಿಯಲ್ಲಿದ್ದರು.

ಹಂತಕರಿಗೆ ಸಿಕ್ಕಿದ್ದು, ಕೇವಲ 10 ರೂ.

ದೊರೆಯದ ಕಾರಣ, ಈಕೆ ಯಾರು? ಎಂಬುದು ಪತ್ತೆಯಾಗಿರಲಿಲ್ಲ. ಆದರೆ, ಹಲಗೂರು ಠಾಣೆಯ ಪೊಲೀಸರು ಈ ಪ್ರಕರಣದಲ್ಲಿ ನ್ಯಾಯಾಲಯಕ್ಕೆ 'ಸಿ' ರಿಪೋರ್ಟ್ (ಪತ್ತೆಯಾಗದ ಪ್ರಕರಣ) ಸಲ್ಲಿಸದೆ ತನಿಖೆಯನ್ನು ಮುಂದುವರಿಸುತ್ತಲೇ ಇದ್ದರೂ, ರಾಜ್ಯ ಮಟ್ಟದಲ್ಲಿ ಪತ್ತೆಯಾಗದ ಹಳೇ ಪ್ರಕರಣಗಳ ಬಗ್ಗೆ ಆಗಿಂದಾಗೇ ಪೊಲೀಸರ ತಂಡವೊಂದು ಪರಿಶೀಲನೆ ನಡೆಸುತ್ತಲೇ ಇತ್ತು. ಹೀಗೆ ಪರಿಶೀಲನೆ ನಡೆಸುತ್ತಿದ್ದ ವೇಳೆ 2021ರ ಜುಲೈನಲ್ಲಿ 42 ವರ್ಷ ವಯೋಮಾನದ ಚಂದ್ರಕಲಾ ಎಂಬಾಕೆ ನಾಪತ್ತೆಯಾಗಿರುವ ಪ್ರಕರಣದ ಬಗ್ಗೆ ರಾಜ್ಯದ ಎಲ್ಲಾ ಎಸ್‌ಪಿ ಕಚೇರಿ ಹಾಗೂ ಪೊಲೀಸ್ ಠಾಣೆಗಳಿಗೂ ಮಾಹಿತಿ ರವಾನಿಸಲಾಗಿತ್ತು.

ಈ ಪ್ರಕರಣದಲ್ಲಿ ನಾಪತ್ತೆಯಾಗಿದ್ದ ಮಹಿಳೆ ಹಾಗೂ 2021ರಲ್ಲಿ ಹಲಗೂರು ಠಾಣಾ ವ್ಯಾಪ್ತಿಯಲ್ಲಿ ಹತ್ಯೆಗೀಡಾಗಿದ್ದ ಮಹಿಳೆಯ ಚಹರೆಗಳಲ್ಲಿ ಹೊಂದಾಣಿಕೆ ಇದ್ದ ಕಾರಣ ಮಂಡ್ಯ ಜಿಲ್ಲಾ ಎಸ್‌ಪಿ ಯತೀಶ್ ಅವರ ಸೂಚನೆ ಮೇರೆಗೆ ಮಳವಳ್ಳಿ ಉಪವಿಭಾಗದ ಡಿವೈಎಸ್‌ಪಿ ನವೀನ್‌ಕುಮಾರ್ ನೇತೃತ್ವದಲ್ಲಿ ಹಲಗೂರು ಠಾಣೆ ಸರ್ಕಲ್ ಇನ್‌ಸ್ಪೆಕ್ಟರ್ ಶ್ರೀಧರ್ ಹಾಗೂ ತಾಂತ್ರಿಕ ತಂಡದವರು ಪತ್ತೆಯಾಗದಿದ್ದ ಮಹಿಳೆ ಕೊಲೆ ಪ್ರಕರಣದ ತನಿಖೆಯನ್ನು ಚುರುಕುಗೊಳಿಸಿದರು.

ಚಾಮರಾಜಪೇಟೆ ಠಾಣೆ ವ್ಯಾಪ್ತಿಯಲ್ಲಿ ನಾಪತ್ತೆಯಾಗಿದ್ದ ಚಂದ್ರಕಲಾ ಅಲಿಯಾಸ್ ಶೋಭಾ ಮೊಬೈಲ್‌ನ ಕಾಲ್ ಡಿಟೇಲ್ಸ್ ಬಗ್ಗೆ ತಾಂತ್ರಿಕ ತಂಡ ಪರಿಶೀಲನೆ ನಡೆಸಿದಾಗ ಆಕೆಯ ಸಿಮ್ 2021ರ ಜುಲೈ 28ರಂದು ಹಲಗೂರು ಪೊಲೀಸ್ ಠಾಣೆ ವ್ಯಾಪ್ತಿಯ ಟವರ್‌ಗಳಲ್ಲಿ ಕಾರ್ಯನಿರ್ವಹಿಸಿರುವುದು ಗೊತ್ತಾಗಿದೆ. ಅದೇ ವೇಳೆ ಆಕೆಯ ಕಾಲ್ ಡಿಟೇಲ್ಸ್‌ನಲ್ಲಿದ್ದ ಲಕ್ಷ್ಮೀ ಎಂಬಾಕೆಯ ಸಿಮ್ ಕೂಡ ಅದೇ ಟವರ್‌ಗಳಲ್ಲಿ ಕಾರ್ಯನಿರ್ವಹಿಸಿರುವುದನ್ನು ಪತ್ತೆ ಮಾಡಿದ ಪೊಲೀಸರು, ಲಕ್ಷ್ಮೀಯನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದಾಗ ಹಲಗೂರು ಠಾಣಾ ವ್ಯಾಪ್ತಿಯಲ್ಲಿ ವರ್ಷದ ಹಿಂದೆ ನಡೆದಿದ್ದ ಮಹಿಳೆಯ ಕೊಲೆ ಪ್ರಕರಣ ಬೆಳಕಿಗೆ ಬಂದಿದೆ.

ಆರೋಪಿ ಲಕ್ಷ್ಮೀ ಮತ್ತು ಹತ್ಯೆಗೀಡಾದ ಚಂದ್ರಕಲಾ ಬೆಂಗಳೂರಿನ ಗೋಣಿಚೀಲ ಹೊಲಿಯುವ ಕಾರ್ಖಾನೆಯೊಂದರಲ್ಲಿ ಕೆಲಸ ಮಾಡುತ್ತಿದ್ದರು. ಚಂದ್ರಕಲಾ ಚಿನ್ನದ ಒಡವೆಗಳನ್ನು ಧರಿಸಿ ಬರುತ್ತಿದ್ದಳು. ಆಕೆ ಒಡವೆಯನ್ನು ಪರ್ಸ್‌ನಲ್ಲಿ ಇಟ್ಟುಕೊಂಡು ಸುರಕ್ಷಿತ ಸ್ಥಳಕ್ಕೆ ಬಂದ ನಂತರ ಅದನ್ನು ಧರಿಸಿಕೊಳ್ಳುತ್ತಿದ್ದಳು ಎಂಬುದನ್ನು ಸಹದ್ಯೋಗಿ ಲಕ್ಷ್ಮೀ ಗಮನಿಸಿದ್ದಳು. ಈಕೆಯನ್ನು ಹತ್ಯೆ ಮಾಡಿದರೆ ಚಿನ್ನಾಭರಣ ದೊರೆಯುತ್ತದೆ ಎಂಬ ಉದ್ದೇಶದಿಂದ ಆಟೋ ಚಾಲಕನಾಗಿರುವ ಪ್ರಿಯತಮ ನಾಣಿಯೊಡಗೂಡಿ, ಯಾವುದೋ ಕಾರಣ ಹೇಳಿ ಚಂದ್ರಕಲಾಳನ್ನು ಆತ ಆಟೋದಲ್ಲೇ 2021ರ ಜುಲೈ 28ರಂದು ಹಲಗೂರು ಠಾಣೆ ವ್ಯಾಪ್ತಿಯ ಮುಳ್ಳಯ್ಯನಕಟ್ಟೆ ಗುಡ್ಡದ ಬಳಿ ಕರೆತಂದು ಆಕೆ ತಲೆಯನ್ನು ಕಲ್ಲಿನಿಂದ ಜಜ್ಜಿ ಹತ್ಯೆ ಮಾಡಿ ಬೆಂಗಳೂರಿಗೆ ವಾಪಾಸ್ ಆಗಿದ್ದಾರೆ ಎಂಬುದು ವಿಚಾರಣೆ ವೇಳೆ ತಿಳಿದು ಬಂದಿದೆ. ಪ್ರಕರಣ ಬಯಲಾಗುತ್ತಿದ್ದಂತೆಯೇ ಆಗಸ್ಟ್ 19ರಂದು ಇಬ್ಬರನ್ನೂ ಹಲಗೂರು ಪೊಲೀಸರು ಬಂಧಿಸಿದ್ದಾರೆ.

ಈ ಕಾರ್ಯಾಚರಣೆಯಲ್ಲಿ ಮಳವಳ್ಳಿ ಉಪವಿಭಾಗದ ಡಿವೈಎಸ್‌ಪಿ ನವೀನ್‌ಕುಮಾರ್ ನೇತೃತ್ವದಲ್ಲಿ ಹಲಗೂರು ಠಾಣೆ ಸರ್ಕಲ್ ಇನ್‌ಸ್ಪೆಕ್ಟರ್ ಬಿ.ಎಸ್.ಶ್ರೀಧರ್, ಸಬ್‌ಇನ್‌ಸ್ಪೆಕ್ಟರ್ ಡಿ.ರವಿಕುಮಾರ್, ಸಿಬ್ಬಂದಿಗಳಾದ ಅನ್ನಪೂರ್ಣ, ರಂಗಪ್ಪ ಸಾಲಾಪೂರ್, ರಿಯಾಜ್‌ಪಾಷಾ, ಸಿದ್ದರಾಜು, ರಫೀಕ್, ನದಾಫ್, ಚಿದಂಬರ್, ಮೊಹಮದ್ ಫಾರೂಖ್, ಮಲ್ಲಿಕಾರ್ಜುನ್ ಚುಳಕಿ, ಜಯಕುಮಾರ್, ಸಿದ್ದೇಗೌಡ ಭಾಗವಹಿಸಿದ್ದು, ಈ ತಂಡವನ್ನು ಜಿಲ್ಲಾ ಎಸ್‌ಪಿ ಯತೀಶ್ ಶ್ಲಾಘಿಸಿದ್ದಾರೆ.

ಹಂತಕರಿಗೆ ಸಿಕ್ಕಿದ್ದು ಬರೀ 10 ರೂಪಾಯಿ: ಚಂದ್ರಕಲಾಳನ್ನು ಹತ್ಯೆ ಮಾಡಿದರೆ ಚಿನ್ನಾಭರಣ ದೊರೆಯುತ್ತದೆ ಎಂಬ ಉದ್ದೇಶದಿಂದ ಆಕೆಯ ಸಹದ್ಯೋಗಿ ಲಕ್ಷ್ಮೀ ಮತ್ತು ನಾಣಿ ಚಂದ್ರಕಲಾಳನ್ನು ಹಲಗೂರಿನವರೆಗೂ ಆಟೋದಲ್ಲಿ ಕರೆತಂದು ಹತ್ಯೆ ಮಾಡಿದರು. ನಂತರ ಚಿನ್ನಾಭರಣ ಸಿಕ್ಕೇಬಿಟ್ಟಿತು ಎಂಬ ಸಂತಸದಿಂದ ಚಂದ್ರಕಲಾಳ ಪರ್ಸ್ ತೆಗೆದು ನೋಡಿದರೆ ಅಲ್ಲಿ ಇದ್ದದ್ದು, ಕೇವಲ 10 ರೂ. ಮಾತ್ರ. ಯಾವಾಗಲೂ ಪರ್ಸ್‌ನಲ್ಲೇ ಚಿನ್ನದ ಒಡವೆ ಇಟ್ಟುಕೊಂಡು ಸುರಕ್ಷಿತ ಸ್ಥಳಕ್ಕೆ ತೆರಳಿದ ನಂತರ ಅದನ್ನು ಧರಿಸುತ್ತಿದ್ದ ಚಂದ್ರಕಲಾ ಅಂದು ಮಾತ್ರ ಒಡವೆಯನ್ನು ಮನೆಯಲ್ಲೇ ಇಟ್ಟು ಬಂದಿದ್ದಳು. ಚಿನ್ನಾಭರಣ ಸಿಗುತ್ತದೆ ಎಂಬ ಆಸೆಯಿಂದ ಲಕ್ಷ್ಮೀ ಮತ್ತು ನಾಣಿ ಆಟೋದಲ್ಲಿ ಚಂದ್ರಕಲಾಳನ್ನು ಕರೆತರುವಾಗ ಉಪಹಾರ, ಊಟ ಸಹ ಕೊಡಿಸಿದ್ದರು. ಆದರೆ, ಸಿಕ್ಕಿದ್ದು ಮಾತ್ರ ಕೇವಲ 10 ರೂ.

ಬುದ್ಧಿಗೇಡಿಗಳಿಂದ ಮೈಸೂರು ಕಸಮಯವಾಗುತ್ತಿದೆ!

● ಕವರ್, ಚೀಲಗಳಲ್ಲಿ ಕಸ ತುಂಬಿ ಕಂಡ ಕಂಡಲ್ಲಿ ಬಿಸಾಡುವ ಹೇಸಿಗೆ ಜನ
● ಕಠಿಣ ಕ್ರಮದ ಎಚ್ಚರಿಕೆ ಸಂದೇಶ ಹೋಗದೆ ಇದ್ದರೆ 'ಸ್ವಚ್ಛತೆ' ಬರಿ ಜಪ ಅಷ್ಟೇ

●ಮೋಹನ್ ಕಾಯಕ

ಮೈಸೂರು, ಆ.22– ಮೈಸೂರೆಂಬ ಸಾಂಸ್ಕೃತಿಕ, ಸ್ವಚ್ಛ ನಗರಿಯಲ್ಲಿ 'ಕಸ' ಎಂಬ ಮಹಾಮಾರಿ ಶಾಶ್ವತವಾಗಿ ಮನೆ ಮಾಡಿಕೊಂಡಿದೆ... ಸಾಂಕ್ರಾಮಿಕ ರೋಗಗಳಂತೂ ಪ್ರತಿಯೊಬ್ಬರನ್ನು ಕಿಡಿಗೇಡಿಗಳಂತೆ ಬೆಂಬಿಡದೆ ಕಾಡುತ್ತಿದೆ...!

ಹೌದು! 2 ಬಾರಿ ದೇಶದಲ್ಲಿಯೇ ಸ್ವಚ್ಛ ನಗರ ಖ್ಯಾತಿ ಪಡೆದ ಮೈಸೂರಿನಲ್ಲಿ 'ಕಸ' ವಿಲೇವಾರಿ ಬಿಡಿಸಲಾಗದ ಕಗ್ಗಂಟಾಗಿ ಪರಿಣಮಿಸಿದೆ. ಒಂದೆಡೆ ಪೌರಕಾರ್ಮಿಕರು ಮನೆ ಮನೆಗೆ ಅಲೆದು ಕಸ ಸಂಗ್ರಹಿಸಿದರೆ, ಮತ್ತೊಂದೆಡೆ ಬುದ್ಧಿಜೀವಿಗಳು ಎನಿಸಿ ಕೊಂಡವರೇ ಕಂಡ ಕಂಡಲ್ಲಿ 'ಕಸ' ಬಿಸಾಡಿ ಸ್ವಚ್ಛತೆಗೆ ಮಾರಕವಾಗಿದ್ದಾರೆ.


ಗೋಕುಲಂ ಡಾಕ್ಟರ್ಸ್ ಕಾರ್ನರ್ ಬಳಿಯ ವಾಟರ್ ಟ್ಯಾಂಕ್ ಹಿಂಭಾಗದಲ್ಲಿ ಬಿದ್ದಿರುವ ಕಸದ ರಾಶಿ

> ಕಂಡ ಕಂಡಲ್ಲಿ ಕಸ ಸುರಿಯುತ್ತಿರುವುದು, ಪ್ಲಾಸ್ಟಿಕ್ ಕವರ್ ಹಾಗೂ ಚೀಲಗಳಲ್ಲಿ ಕಸ ತುಂಬಿಕೊಂಡು ತೂರಿ ಎಸೆಯುತ್ತಿರುವವರ ಸಂಖ್ಯೆ ದಿನೇ ದಿನೆ ಹೆಚ್ಚಾಗುತ್ತಲೇ ಇದೆ. ಐಟಿ–ಬಿಟಿ ಕಂಪನಿಗಳಲ್ಲಿ ಕೆಲಸಕ್ಕೆಂದು ಮೈಸೂರಿಗೆ ಬಂದಿರುವ ಬೇರೆ ಬೇರೆ ರಾಜ್ಯದವರು ಬೆಳಗ್ಗೆ ಸಂಜೆ ಹಾಗೂ ರಾತ್ರಿಹೊತ್ತು ಸಿಕ್ಕ–ಸಿಕ್ಕ ಸ್ಥಳಗಳಲ್ಲಿ ಕಸ ಬಿಸಾಡುತ್ತಿದ್ದಾರೆ. ಇದೊಂದು ಚಾಳಿಯಾಗಿಬಿಟ್ಟಿದೆ. ಪರಿಣಾಮ ಸಾಂಕ್ರಾಮಿಕ ರೋಗಗಳು ವಿಪರೀತವಾಗಿ ಹರಡುತ್ತಿದ್ದು, ಭಯದ ವಾತಾವರಣ ಸೃಷ್ಟಿಯಾಗುತ್ತಿದೆ. - ಮೈಸೂರಿಗರು

ರಸ್ತೆ ಇಕ್ಕೆಲಗಳಲ್ಲಿ, ಉದ್ಯಾನವನಗಳಲ್ಲಿ, ಖಾಲಿ ಬಿದ್ದ ಜಾಗಗಳಲ್ಲಿ, ಪಾಳು ಬಿದ್ದಿರುವ ಕಟ್ಟಡಗಳಲ್ಲಿ 'ಕಸ'ದ ರಾಶಿ ರಾಶಿ ತಾಂಡವವಾಡುತ್ತಿದೆ. ಅದರಲ್ಲೂ ಹೆಚ್ಚಿನ ಪ್ರಮಾಣದ(ಹಸಿ ಕಸ) ಆಹಾರ ಪದಾರ್ಥದ ಮಿಶ್ರಣವಿರುವ ರಾಶಿ ರಾಶಿ ತ್ಯಾಜ್ಯವೇ ಹೆಚ್ಚು. ಈ ತ್ಯಾಜ್ಯ ತಿಂಗಳುಗಳವರೆಗೆ ಕೊಳೆತರೆ ಏನಾಗಬಹುದು? ಅದರಲ್ಲೂ ಈಗ ಮಳೆಗಾಲ. ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆಗಳು ಬಹಳಷ್ಟಿವೆ.

ಮೈಸೂರಿನ ಮಹದೇವಪುರ ಮುಖ್ಯರಸ್ತೆ, ಕೆಆರ್‌ಎಸ್ ಮುಖ್ಯರಸ್ತೆ, ಬನ್ನಿಮಂಟಪದ ಹೈವೆ ವೃತ್ತದಿಂದ ಕೆಆರ್‌ಎಸ್ ರಸ್ತೆವರೆಗಿನ ಎರಡು ಬದಿಯಲ್ಲಿ, ಟಿ.ನರಸೀಪುರ (ಸಿದ್ದಾರ್ಥ ಬಡಾವಣೆ, ಆಲನಹಳ್ಳಿ ಸಮೀಪ), ಬನ್ನೂರು ಮುಖ್ಯರಸ್ತೆ, ಊಟಿ ರಸ್ತೆ ಬದಿಗಳಲ್ಲಷ್ಟೇ ಅಲ್ಲದೆ ನಗರದ ಒಳಗಿನ ಹಲವಾರು ಬಡಾವಣೆಗಳಲ್ಲಿ ಖಾಲಿ ಜಾಗ, ಪಾರ್ಕ್, ಸಣ್ಣ ಸಣ್ಣ ಬೀದಿಗಳಲ್ಲಿ ಎಲ್ಲಿ ನೋಡಿದರೂ ಕಸವೇ ಕಾಣುತ್ತದೆ.

ತ್ಯಾಜ್ಯ ವಿಲೇವಾರಿ ಅಪೂರ್ಣ: ನಗರ ಪಾಲಿಕೆಯ ಪೌರಕಾರ್ಮಿಕರು ಬೆಳಗ್ಗೆಯಿಂದ ಸಂಜೆಯವರೆಗೂ ಶ್ರಮ ವಹಿಸಿ ಕಸ ಹೆಕ್ಕಿದರೂ ಪೂರ್ಣ ಪ್ರಮಾಣದಲ್ಲಿ ಕಸದಿಂದ ಮುಕ್ತಿಗೊಳಿಸಲು ಸಾಧ್ಯವಾಗುತ್ತಿಲ್ಲ. ಪಾಲಿಕೆಯಲ್ಲಿ ನೇರ ಪಾವತಿ (ಸರ್ಕಾರದ ಅನುದಾನ)ಯಲ್ಲಿ 838 ಮಂದಿ ಪೌರಕಾರ್ಮಿಕರು, ಪಾಲಿಕೆ ಅನುದಾನದಲ್ಲಿ 724, ಖಾಯಂ ನೌಕರರಾಗಿ 530 ಮಂದಿ ಪೌರಕಾರ್ಮಿಕರು ಹಾಗೂ 231 ಒಳಚರಂಡಿ ಪೌರಕಾರ್ಮಿಕರಿದ್ದಾರೆ. 170ಕ್ಕೂ ಹೆಚ್ಚು ಕಸ ವಿಲೇವಾರಿ ವಾಹನ ಚಾಲಕರಿದ್ದಾರೆ. ಇಷ್ಟೆಲ್ಲಾ ಮಾನವ ಸಂಪನ್ಮೂಲವಿದ್ದರೂ ಕಂಡ ಕಂಡಲ್ಲೆಲ್ಲಾ ಕಸ ಮಾತ್ರ ಬಿದ್ದಿದೆ.

20 ಲಕ್ಷಕ್ಕೂ ಹೆಚ್ಚು ಜನಸಂಖ್ಯೆ ಹೊಂದಿರುವ ನಗರದ ಸ್ಥಿತಿ ಈಗಲೇ ಹೀಗಾದರೆ ಮುಂದೇನು ಎಂಬ ಆತಂಕ ಕಾಡುತ್ತಿದೆ. ಈಗಾಗಲೇ ಸ್ವಚ್ಛ ನಗರಿ ಪಟ್ಟ ಕಳೆದುಕೊಂಡು ಅವಮಾನಕ್ಕಿಡಾಗಿರುವ ಪಾಲಿಕೆ ಮುಂದೇನಾದರೂ ಮಾಡುತ್ತಾ ಎಂಬ ಭರವಸೆಯೂ ದಿನದಿಂದ ದಿನಕ್ಕೆ ಮಾಸಿಹೋಗುತ್ತಿದೆ.

ಪಾಲಿಕೆಯಲ್ಲಿ ಟ್ರ್ಯಾಕ್ಟರ್ 37, ಮಿನಿ ಟಿಪ್ಪರ್ 18, ಹೆವಿ ಟಿಪ್ಪರ್ 10, ಕಂಪಾಕ್ಟರ್ 21, ಅನಿಮಲ್ ವೇಸ್ಟ್ ಕ್ಯಾರಿ ವಾಹನಗಳು 7, ಟ್ರಾಕ್ಟರ್ ಡೋಜರ್ 3, ಎಕ್ಸಿವೇಟರ್ (ಅಗೆಯುವ ಯಂತ್ರ) 10, ಹಿಟಾಚಿ 4, ಗೂಡ್ಸ್ ಆಟೋ 90 ಹಾಗೂ 220 ಟಾಟಾ ಎಸ್ ಟಿಪ್ಪರ್‌ಗಳು ಸೇರಿದಂತೆ ನೂರಾರು ವಾಹನಗಳ ಕಸ ವಿಲೇವಾರಿಗಾಗಿಯೇ ಮೀಸಲಿಡಲಾಗಿದೆ ನಿತ್ಯ ಹತ್ತಾರು ಲೋಡ್‌ಗಳ ಕಸವನ್ನು ಎಸೆಯಲಾಗುತ್ತಿದೆ. ಸ್ವಚ್ಛತೆಗಾಗಿಯೇ ಕೆಲ ಸಂಸ್ಥೆಗಳು ಸಿಎಸ್‌ಆರ್ ಯೋಜನೆಯಡಿ ವಾಹನಗಳನ್ನು ನೀಡಿವೆ. ಇಷ್ಟಾದರೂ ಕಸ ಮಾತ್ರ ಹಾಗೆಯೇ ಇದೆ ಎಂಬ ಯಕ್ಷ ಪ್ರಶ್ನೆ ಮೈಸೂರಿಗರನ್ನು ಬೆಂಬಿಡದೆ ಕಾಡುತ್ತಿದೆ.

ನಾನಾ ರೋಗಗಳ ಭೀತಿ: ನಗರದಲ್ಲಿ ಎಲ್ಲೆಂದರಲ್ಲಿ ಕಸ ಹಾಕುವುದರಿಂದ ಸೊಳ್ಳೆಗಳ ಉತ್ಪತ್ತಿ ತಾಣವಾಗಿ ಪರಿಣಮಿಸಿದ್ದು, ಸೊಳ್ಳೆಗಳ ಕಡಿತದಿಂದ ನಾನಾ ರೋಗಗಳು ಹರಡುತ್ತಿವೆ. ಇದರಿಂದ ನಗರವಾಸಿಗಳು ಭಯದಲ್ಲಿ ಜೀವನ ನಡೆಸುತ್ತಿದ್ದಾರೆ. ಪ್ರತಿಯೊಂದು ಮನೆಯಲ್ಲೂ ಕನಿಷ್ಠ ಒಬ್ಬರು ಅಥವಾ ಇಬ್ಬರು ಶೀತ, ಕೆಮ್ಮು, ಜ್ವರದಿಂದ ಬಳಲುತ್ತಿದ್ದಾರೆ. ಕಳೆದ 7 ತಿಂಗಳಲ್ಲಿ ಮಕ್ಕಳು ಸೇರಿದಂತೆ 300ಕ್ಕೂ ಹೆಚ್ಚು ಮಂದಿ ಡೆಂಗ್ಯೂ ಜ್ವರದಿಂದ ನರಳಿದ್ದಾರೆ. ಹಲವರಿಗೆ ಚಿಕುನ್‌ಗುನ್ಯಾ ಬಾಧಿಸಿದೆ.

ಕೋಟಿ ರೂ. ಖರ್ಚು: ಕಸ ವಿಲೇವಾರಿಗೆಂದೇ ಪ್ರತಿ ತಿಂಗಳು ಸುಮಾರು 2.50 ಕೋಟಿ ರೂ. ಗೂ ಹೆಚ್ಚು ಹಣ ಖರ್ಚು ಮಾಡುತ್ತಿದ್ದರೂ ಕಸ ಮಾತ್ರ ಪೂರ್ಣ ಪ್ರಮಾಣದಲ್ಲಿ ನಗರದಿಂದ ಹೊರಹೋಗುತ್ತಿಲ್ಲ. ಪಾಲಿಕೆ ನಿರ್ಲಕ್ಷ್ಯತೆ, ಅವ್ಯವಸ್ಥಿತ ಯೋಜನೆಯಿಂದಾಗಿ ಮೈಸೂರಿಗರು ದುರ್ನಾತದ ಮಧ್ಯೆಯೇ ಬದುಕುವಂತಾಗಿದೆ.

ತೃಪ್ತಿದಾಯಕವಾಗಿಲ್ಲ: ಮೈಸೂರಿನಲ್ಲಿ ಕಸ ವಿಲೇವಾರಿ ಹಾಗೂ ಸ್ವಚ್ಛತೆ ಕಾಪಾಡುವ ಕಾರ್ಯದಲ್ಲಿ ನಮಗೆ ತೃಪ್ತಿಯಿಲ್ಲ. ರಸ್ತೆಗಳು ಗುಂಡಿ ಬಿದ್ದಿವೆ. ಎಲ್ಲೆಂದರಲ್ಲಿ ಕಸ ಬಿಸಾಡುವವರ ಸಂಖ್ಯೆ ಹೆಚ್ಚಾಗುತ್ತಲೇ ಇದೆ. ಈ ಕಾರಣಗಳಿಂದಾಗಿಯೇ ಮೈಸೂರು ಮತ್ತೆ ಸ್ವಚ್ಛ ನಗರ ಪಟ್ಟಕ್ಕೇರಲು ಸಾಧ್ಯವಾಗುತ್ತಿಲ್ಲ ಎಂದು ಪಾಲಿಕೆ ಹಿರಿಯ ಅಧಿಕಾರಿಯೊಬ್ಬರು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಕಸದ ಚೀಲ ಬಿಸಾಡುತ್ತಿರುವ ಪ್ರಜ್ಞಾಹೀನರು...

ಮೈಸೂರಿನಲ್ಲಿ ಕಸ ವಿಲೇವಾರಿ ಪರಿಣಾಮಕಾರಿಯಾಗದಿರುವುದಕ್ಕೆ ಪ್ರಜ್ಞಾಹೀನರು ಅಡ್ಡಗಾಲಿಡುತ್ತಿದ್ದಾರೆ. ಬೆಳಗ್ಗೆ ಕೆಲಸಕ್ಕೆ, ಸಂಜೆ ವಾಕಿಂಗ್‌ಗೆ ಹೋಗುವ ನೆಪದಲ್ಲಿ ಹಾಗೂ ರಾತ್ರಿ ಹೊತ್ತು ಪ್ಲಾಸ್ಟಿಕ್ ಕವರ್, ಪ್ಲಾಸ್ಟಿಕ್ ಚೀಲಗಳಲ್ಲಿ ತಮ್ಮ ಮನೆಯ ಕಸವನ್ನು ತುಂಬಿಗೊಂಡು ಮನಸೋಇಚ್ಛೆ ಕಂಡ ಕಂಡಲ್ಲಿ ತೂರಿ ಬಿಸಾಡುತ್ತಿದ್ದಾರೆ.

ದುಬಾರಿ ಕಾರಿನಲ್ಲಿ ಬಂದು ಹೇಸಿಗೆ ಕೆಲಸ ಮಾಡುವುದು. ಉನ್ನತ ಹುದ್ದೆಗಳಲ್ಲಿದ್ದರೂ ಬೇಜವಾಬ್ದಾರಿಯಿಂದ ವರ್ತಿಸುವುದು. ಮತ್ತೊಬ್ಬರಿಗೆ ಬುದ್ಧಿ ಹೇಳುವಂತಿದ್ದರೂ ತಾವೆ ಬುದ್ಧಿಹೀನರಂತೆ ವರ್ತಿಸುತ್ತಿರುವುದು ನಗರದ ಸ್ವಚ್ಛತೆಗೆ ಮಾರಕವಾಗಿದೆ. ಅಲ್ಲದೆ ಹೆಬ್ಬಾಳ, ಮೇಟಗಳ್ಳಿ, ಬಿಎಂಶ್ರೀ ನಗರ, ವಿಜಯನಗರ ರೈಲ್ವೆ ಬಡಾವಣೆ, ಮಂಚೇಗೌಡನ ಕೊಪ್ಪಲು, ಬೃಂದಾವನ, ಗೋಕುಲಂ ಸೇರಿದಂತೆ ನಗರದ ಹಲವೆಡೆ ವಾಸಿಸುತ್ತಿರುವ ಬೇರೆ ರಾಜ್ಯದ ಜನರಿಂದ ಕಸದ ರಾಶಿ ಹೆಚ್ಚಾಗುತ್ತಿದೆ. ಸ್ವಚ್ಛತೆಯ ಕನಿಷ್ಠ ಪರಿಜ್ಞಾನವಿಲ್ಲದಂತೆ ಕಸ ಬಿಸಾಡುತ್ತಿದ್ದಾರೆ ಎಂದು ಮೈಸೂರಿನ ಕೆಲ ಪ್ರಜ್ಞಾವಂತ ನಾಗರಿಕರು ದೂರಿದ್ದಾರೆ.

ಕಣ್ಣ ಮುಂದೆಯೇ ನಗರವನ್ನು ಹಾಳುಮಾಡುವ ಹೇಸಿಗೆ ಕೃತ್ಯಗಳು ನಡೆಸುತ್ತಿರುವವರ ವಿರುದ್ಧ ಯಾವುದೇ ಕ್ರಮಕೈಗೊಳ್ಳದ ಮೈಸೂರು ನಗರಪಾಲಿಕೆ ಇದ್ದು ಇಲ್ಲದಂತೆ ವರ್ತಿಸುತ್ತಿದೆ. ಪಾಲಿಕೆ ಅಧಿಕಾರಿ, ಸಿಬ್ಬಂದಿ, ಚುನಾಯಿತ ಸದಸ್ಯರು ಎಲ್ಲಿ ತಮಗೆ ಆದಾಯ ಬರುತ್ತದೋ ಅಲ್ಲಿಗಷ್ಟೇ ಸೀಮಿತವಾಗಿದ್ದಾರೆ. ಸಾರ್ವಜನಿಕರ ಕಷ್ಟ ನೋವು ಕೇಳುವ ಕಿವಿ ಅವರಲ್ಲಿಲ್ಲ. ಕಂಡರೂ ಕುರುಡರಂತೆ ಹಾಗೂ ಮಾತನಾಡದ ಮೂಗರಂತೆ ಕಾಲ ಕಳೆಯುತ್ತಿರುವುದು ಮೈಸೂರಿಗರ ದೌರ್ಭಾಗ್ಯವಾಗಿದೆ.

ಮೈಸೂರು ಮೃಗಾಲಯದಲ್ಲಿ 'ರೆಡ್ ನೆಕ್ಡ್ ವಲ್ಲಬಿ' ಆಕರ್ಷಣೆ

ವಿಶೇಷ ಪ್ರಾಣಿಗಳ ಪ್ರದರ್ಶನಕ್ಕೆ ಚಾಲನೆ ನೀಡಿದ ಉಸ್ತುವಾರಿ ಸಚಿವ ಸೋಮಶೇಖರ್





ಮೈಸೂರು,ಆ.22(ಎಂಟಿವೈ)– ಮೈಸೂರು ಮೃಗಾಲಯಕ್ಕೆ ಒಂದೂವರೆ ತಿಂಗಳ ಹಿಂದೆ ಯೂರೋಪ್‌ನಿಂದ ತರಲಾಗಿರುವ ಮೂರು ರೆಡ್ ನೆಕ್ಡ್ 'ವಲ್ಲಭಿ'ಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್, ಸೋಮವಾರ ಪ್ರವಾಸಿಗರ ವೀಕ್ಷಣೆಗೆ ಅನಾವರಣಗೊಳಿಸಿದರು.

ಪ್ರಾಣಿಗಳ ವಿನಿಮಯ ಯೋಜನೆಯಡಿ ಯೂರೋಪ್‌ನ ಜೆಕ್ ರಿಪಬ್ಲಿಕ್‌ನ ಜ್ಹೂ ಪಾರ್ಕ್ ಮೃಗಾಲಯದಿಂದ ಜೂ.4ರಂದು ಮೈಸೂರು ಮೃಗಾಲಯಕ್ಕೆ 2 ಹೆಣ್ಣು, 1 ಗಂಡು ವಲ್ಲಭಿಗಳನ್ನು ತರಲಾಗಿತ್ತು. ಅವುಗಳಿಗಾಗಿ ಸೂಕ್ತ ರೀತಿಯ ನೂತನ ಮನೆ ನಿರ್ಮಿಸಿ ಕ್ವಾರಂಟೇನ್‌ನಲ್ಲಿಡಲಾಗಿತ್ತು. ಇಂದು ಮಧ್ಯಾಹ್ನ ಅವುಗಳನ್ನು ಪ್ರವಾಸಿಗರ ವೀಕ್ಷಣೆಗೆ ಬಿಡಲಾಯಿತು. ಮೃಗಾಲಯದ ಆವರಣದಲ್ಲಿ ಸಾರಂಗದ ಆವರಣದ ಮುಂದೆ ವಲ್ಲಭಿಗಳಿಗಾಗಿ ಮನೆ ನಿರ್ಮಿಸಲಾಗಿದ್ದು, ಅದನ್ನು ಸಚಿವರು ಉದ್ಘಾಟಿಸಿ, ನೂತನ ಪ್ರಾಣಿಗಳ ಪ್ರದರ್ಶನಕ್ಕೆ ಅವಕಾಶ ಮಾಡಿಕೊಟ್ಟರು.

ಇದೇ ವೇಳೆ ಮಾತನಾಡಿದ ಸಚಿವ ಎಸ್.ಟಿ.ಸೋಮಶೇಖರ್, ಯೂರೋಪ್‌ನಿಂದ ಕಳೆದ ಒಂದೂವರೆ ತಿಂಗಳ ಹಿಂದೆಯೇ 1 ಗಂಡು, 2ಹೆಣ್ಣು ವಲ್ಲಭಿಗಳನ್ನು ತರಲಾಗಿತ್ತು. ಇಲ್ಲಿನ ವಾತಾವರಣಕ್ಕೆ ಒಗ್ಗಿಕೊಳ್ಳಲೆಂದು ಅವುಗಳನ್ನು ಸುರಕ್ಷಾ ಕೊಠಡಿಯಲ್ಲಿ ಇರಿಸಿ ಆರೈಕೆ ಮಾಡಲಾಗುತ್ತಿತ್ತು. ಇದೀಗ ಮೈಸೂರಿನ ಮೃಗಾಲಯದ ವಾತಾವರಣಕ್ಕೆ ಅವು ಹೊಂದಿಕೊಂಡಿವೆ. ಹಾಗಾಗಿ ಅವುಗಳನ್ನು ಪ್ರವಾಸಿಗರು ವೀಕ್ಷಿಸಲು ಇಂದಿನಿಂದ ಅವಕಾಶ ಮಾಡಿಕೊಡಲಾಗಿದೆ ಎಂದರು.

ಕೋವಿಡ್ ಸಂದರ್ಭದಲ್ಲಿ ಮೃಗಾಲಯಕ್ಕೆ ಆರ್ಥಿಕ ಮುಗ್ಗಟ್ಟು ಎದುರಾಗಿತ್ತು. ಆ ವೇಳೆ ದಾನಿಗಳಿಂದ ದೊರೆತ ಸಹಕಾರ ಮೃಗಾಲಯಕ್ಕೆ ಚೈತನ್ಯ ತುಂಬಿತ್ತು. ಈಗ ಪರಿಸ್ಥಿತಿ ಸುಧಾರಿಸಿದ್ದು, ಮೃಗಾಲಯಕ್ಕೆ ಬರುವ ಪ್ರವಾಸಿಗರ ಸಂಖ್ಯೆಯೂ ಹೆಚ್ಚಾಗುತ್ತಿದೆ. ದಸರಾ ಹಿನ್ನೆಲೆಯಲ್ಲಿ ಇನ್ನು 2–3 ತಿಂಗಳವರೆಗೂ ಹೆಚ್ಚಿನ ಸಂಖ್ಯೆ ಪ್ರವಾಸಿಗರು ಮೃಗಾಲಯಕ್ಕೆ ಬರುತ್ತಾರೆ. ಹಾಗಾಗಿ ಮುಂದಿನ ದಿನಗಳಲ್ಲಿ ಆರ್ಥಿಕ ಸಮಸ್ಯೆ ಎದುರಾಗುವುದಿಲ್ಲ. ಒಂದು ವೇಳೆ ಸಮಸ್ಯೆ ಕಂಡು ಬಂದರೆ ಸರ್ಕಾರ ತುರ್ತಾಗಿ ಸ್ಪಂದಿಸುತ್ತದೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಎಂ.ಶಿವಕುಮಾರ್, ಮೃಗಾಲಯದ ಕಾರ್ಯನಿರ್ವಾಹಕ ನಿರ್ದೇಶಕ ಅಜಿತ್ ಎಂ.ಕುಲಕರ್ಣಿ, ಪಾಲಿಕೆ ಸದಸ್ಯ ರಮೇಶ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಇಂದು ಮೈಸೂರಿಗೆ ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ



ಮೈಸೂರು, ಆ.22(ಆರ್‌ಕೆ)– ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ನಾಳೆ (ಆ.23) ಮೈಸೂರಿಗೆ ಆಗಮಿಸುವರು. ಮಂಗಳವಾರ ಬೆಳಗ್ಗೆ 10.30 ಗಂಟೆಗೆ ರಸ್ತೆ ಮೂಲಕ ಆಗಮಿಸುವ ಅವರು, ಬೆಳಗ್ಗೆ 11 ಗಂಟೆಗೆ ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ವೀರಸಾವರ್ಕರ್ ಪ್ರತಿಷ್ಠಾನದ ವತಿಯಿಂದ ಆಯೋಜಿಸಿರುವ ಸಾವರ್ಕರ್ ರಥಯಾತ್ರೆಗೆ ಚಾಲನೆ ನೀಡುವರು. ನಂತರ ಯಡಿಯೂರಪ್ಪ ಅವರು ಮಧ್ಯಾಹ್ನ 1.30 ಗಂಟೆಗೆ ಬೆಂಗಳೂರಿಗೆ ಹಿಂದಿರುಗುವರು ಎಂದು ಆಪ್ತ ಕಾರ್ಯದರ್ಶಿಗಳ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಯಡಿಯೂರಪ್ಪ ಅವರ ಆಗಮನದ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಮೈಸೂರಿನಲ್ಲಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ.

ಸಿದ್ದರಾಮಯ್ಯ ಕಾರಿನ ಮೇಲೆ ಮೊಟ್ಟೆ ಎಸೆತ ಖಂಡಿಸಿ ಪ್ರತಿಭಟನೆ



ಮೈಸೂರು, ಆ.22(ಎಂಕೆ)– ಕೊಡಗಿನಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾರಿನ ಮೇಲೆ ಮೊಟ್ಟೆ ಎಸೆದ ಪ್ರಕರಣ ಖಂಡಿಸಿ ಮಾಜಿ ಮೇಯರ್ ಅಯೂಬ್ ಖಾನ್ ನೇತೃತ್ವದಲ್ಲಿ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಸೆಂಟ್ ಫಿಲೋಮಿನಾ ಚರ್ಚ್ ವೃತ್ತದಲ್ಲಿ ಜಮಾವಣೆಗೊಂಡ ಕಾಂಗ್ರೆಸ್ ಕಾರ್ಯಕರ್ತರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಾರಿನ ಮೇಲೆ ಮೊಟ್ಟೆ ಎಸೆದವರ ವಿರುದ್ಧ ಧಿಕ್ಕಾರ ಕೂಗಿ, ಆಕ್ರೋಶ ವ್ಯಕ್ತಪಡಿಸಿದರು.

ಬಳಿಕ ಮಾಜಿ ಮೇಯರ್ ಅಯೂಬ್ ಖಾನ್ ಮಾತನಾಡಿ, ವಿಪಕ್ಷ ನಾಯಕ ಸಿದ್ದರಾಮಯ್ಯ ಅವರಿಗೆ ಸೂಕ್ತ ಭದ್ರತೆ ಇಲ್ಲ. ವಿಪಕ್ಷ ನಾಯಕರಿಗೆ ಭದ್ರತೆ ಇಲ್ಲವಾದ ಮೇಲೆ ಸಾಮಾನ್ಯರಿಗೆ ಯಾವ ರೀತಿ ಭದ್ರತೆ ಇದೆ. ರಾಜ್ಯದ ಜನ ಮನೆಯಿಂದ ಹೊರಬರಲು ಸಾಧ್ಯವಾಗದಂತಹ ಭಯದ ವಾತಾವರಣವನ್ನು ಸೃಷ್ಟಿಸಲಾಗುತ್ತಿದೆ ಎಂದು ದೂರಿದರು.

ಬಿಜೆಪಿಯವರು ಏನೇ ಹುನ್ನಾರ ಮಾಡಿದರೂ ಸಿದ್ದರಾಮಯ್ಯ ಬರೀ ವ್ಯಕ್ತಿಯಲ್ಲ, ಶಕ್ತಿಯಾಗಿದ್ದಾರೆ. ಅಲ್ಪಸಂಖ್ಯಾತರು, ಹಿಂದುಳಿದವರು, ಧನಿ ಇಲ್ಲದವರ ಧನಿಯಾಗಿ ಸಿದ್ದರಾಮಯ್ಯ ಅವರಿದ್ದಾರೆ. ಕೊಡಗಿನಲ್ಲಿ ಬಿಜೆಪಿಯವರು ಮಾಡಿರುವ ಕಳಪೆ ಕಾಮಗಾರಿಗಳು ಎಲ್ಲಿ ಬಯಲಾಗುತ್ತದೋ ಎಂಬ ಕಾರಣಕ್ಕೆ ಈ ರೀತಿ ಮೊಟ್ಟೆ ಎಸೆಯುವ ಕೃತ್ಯ ನಡೆಸಿದ್ದಾರೆ ಎಂದು ಕಿಡಿಕಾರಿದರು.

ರಾಜ್ಯದಲ್ಲಿ ಕಾನೂನು–ಸುವ್ಯವಸ್ಥೆ ಸಂಪೂರ್ಣವಾಗಿ ಹಾಳಾಗಿದ್ದು, ಗೃಹಮಂತ್ರಿಗಳು ತಮ್ಮ ಕಾರ್ಯನಿರ್ವಹಿಸುವಲ್ಲಿ ಅಸಮರ್ಥರಾಗಿದ್ದಾರೆ. ವಿಪಕ್ಷ ನಾಯಕರಿಗೆ ಸೂಕ್ತ ಭದ್ರತೆ ನೀಡಲಾಗದವರು ರಾಜ್ಯದ ಜನತೆಗೆ ಭದ್ರತೆ ನೀಡಲು ಸಾಧ್ಯವೆ? ಈ ಕೂಡಲೇ ಗೃಹಮಂತ್ರಿಗಳು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರಲ್ಲದೆ, ಮುಂದಿನ ದಿನಗಳಲ್ಲಿ ಇದೇ ರೀತಿ ಸಿದ್ದರಾಮಯ್ಯ ಅವರ ಮೇಲೆ ಏನಾದರೂ ಪಿತೂರಿಗಳನ್ನು ನಡೆಸಿದ್ದಲ್ಲಿ ನಾವು ಭಾರೀ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಮಾಜಿ ಮೇಯರ್ ಪುಷ್ಪಲತಾ ಜಗನ್ನಾಥ್, ನಗರ ಪಾಲಿಕೆ ಮಾಜಿ ಸದಸ್ಯ ಸುಹೇಲ್ ಬೇಗ್, ವಕ್ಫ್ ಬೋರ್ಡ್ ಸಲಹಾ ಸಮಿತಿಯ ಅಕ್ರಂ, ಟಿಪ್ಪು, ದೇವರಾಜ ಬ್ಲಾಕ್‌ನ ಸುಂದರ್‌ಕುಮಾರ್, ಜಗನ್ನಾಥ್ ಮತ್ತಿತರರು ಉಪಸ್ಥಿತರಿದ್ದರು.

ಗುಣಮಟ್ಟದ ಹಾಲು ಉತ್ಪಾದನೆಗೆ ಪೂರಕವಾಗಿ ಪಿರಿಯಾಪಟ್ಟಣದಲ್ಲಿ

ಪಶು ಆಹಾರ ತಯಾರಿಕಾ ಕಾರ್ಖಾನೆ ಸ್ಥಾಪನೆ

ಜಿಲ್ಲಾ ಹೈನುಗಾರರ ಸಮ್ಮೇಳನ ಉದ್ಘಾಟಿಸಿ ಸಚಿವ ಎಸ್.ಟಿ.ಸೋಮಶೇಖರ್ ಮಾಹಿತಿ


ಮೈಸೂರು,ಆ.22(ಪಿಎಂ)– ಗುಣಮಟ್ಟದ ಹಾಲು ಉತ್ಪಾದನೆಗೆ ಪೂರಕವಾಗುವಂತೆ ಪಿರಿಯಾಪಟ್ಟಣದಲ್ಲಿ ಪಶು ಆಹಾರ ತಯಾರಿಕಾ ಕಾರ್ಖಾನೆ ಸ್ಥಾಪಿಸಲಾಗುವುದು ಎಂದು ಸಹಕಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ತಿಳಿಸಿದರು.

ಮೈಸೂರಿನ ಕಲಾಮಂದಿರದಲ್ಲಿ ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ (ಮೈಮುಲ್), ಕರ್ನಾಟಕ ಹಾಲು ಒಕ್ಕೂಟ ಹಾಗೂ ವಿಜಯಕರ್ನಾಟಕ ಸಂಯುಕ್ತಾಶ್ರಯದಲ್ಲಿ 'ಕರುನಾಡ ಹೈನು–ಹೊನ್ನು' ಶೀರ್ಷಿಕೆಯಡಿ ಸೋಮವಾರ ಹಮ್ಮಿಕೊಂಡಿದ್ದ ಜಿಲ್ಲಾ ಹೈನುಗಾರರ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ಕೇವಲ ಹೆಚ್ಚು ಪ್ರಮಾಣದಲ್ಲಿ ಹಾಲು ಉತ್ಪಾದಿಸುವುದು ಮಾತ್ರವೇ ಕರ್ನಾಟಕ ಹಾಲು ಒಕ್ಕೂಟದ ಗುರಿಯಲ್ಲ. ಅದರೊಂದಿಗೆ ಗುಣಮಟ್ಟದ ಹಾಲು ಉತ್ಪಾದಿಸಿ ರೈತರಿಗೆ ಹೆಚ್ಚು ಲಾಭ ದೊರಕುವಂತೆ ಮಾಡುವುದೂ ಸೇರಿದೆ. ಹಸುಗಳು ಗುಣಮಟ್ಟದ ಹಾಲು ನೀಡಬೇಕಾದರೆ ಅವುಗಳಿಗೆ ಪೋಷಕಾಂಶಯುಕ್ತ ಆಹಾರ ನೀಡುವುದು ಮುಖ್ಯ. ಅದಕ್ಕಾಗಿ ಪಿರಿಯಾಪಟ್ಟಣದಲ್ಲಿ ಪಶು ಆಹಾರ ತಯಾರಿಕೆ ಕಾರ್ಖಾನೆ ನಿರ್ಮಿಸಲು ತೀರ್ಮಾನಿಸಲಾಗಿದೆ ಈ ನಿಟ್ಟಿನಲ್ಲಿ ಕೆಲಸ ನಡೆಯುತ್ತಿದೆ. ಇದರಿಂದ ತಾಲೂಕಿನಲ್ಲಿ ಮೆಕ್ಕೆ ಜೋಳ ಬೆಳೆಯುವ ರೈತರಿಗೂ ಸಹಾಯವಾಗುತ್ತದೆ. ಸಾಕಷ್ಟು ಮಂದಿಗೆ ಉದ್ಯೋಗಾವಕಾಶವೂ ದೊರೆಯುತ್ತದೆ ಎಂದರು.

9 ಲಕ್ಷ ಮಹಿಳೆಯರೂ ಸೇರಿದಂತೆ ರಾಜ್ಯದಲ್ಲಿ 26 ಲಕ್ಷ ಮಂದಿ ಹಾಲು ಉತ್ಪಾದನೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಹಾಲು ಉತ್ಪಾದಕ ಸಂಘಗಳು ಇವರಿಗೆ ಆಸರೆಯಾಗಿವೆ. ಹೀಗಾಗಿ ಈ ಸಂಘಗಳಿಗೆ ಕಚೇರಿ ಸೇರಿದಂತೆ ಒಟ್ಟು ನಿರ್ವಹಣೆಗೆ ಕಟ್ಟಡ ನಿರ್ಮಿಸಿಕೊಳ್ಳಲು ಉತ್ತೇಜನ ನೀಡಲಾಗುವುದು. ರಾಜ್ಯದ 3 ಲಕ್ಷ ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ 24 ಸಾವಿರ ಕೋಟಿ ರೂ. ಸಾಲ ಸೌಲಭ್ಯ ನೀಡುವುದಾಗಿ ಸರ್ಕಾರ ಘೋಷಣೆ ಮಾಡಿದೆ. ಅದರಂತೆ ಮೈಸೂರು ಜಿಲ್ಲೆಯಲ್ಲಿ 7,500 ರೈತರಿಗೆ ಸಾಲ ಸೌಲಭ್ಯ ದೊರೆಯಲಿದೆ ಎಂದು ತಿಳಿಸಿದರು.

ಅಪೆಕ್ಸ್ ಬ್ಯಾಂಕ್ ಉಪಾಧ್ಯಕ್ಷರೂ ಆದ ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಜಿ.ಡಿ.ಹರೀಶ್ ಗೌಡ ಮಾತನಾಡಿ, ಲಕ್ಷಾಂತರ ಜನರ ಜೀವನಾಧಾರವಾಗಿರುವ ಹೈನುಗಾರಿಕೆ ಕೇವಲ ಆರ್ಥಿಕ ಬುನಾದಿಯಾಗಿರದೇ ಉದ್ಯಮವಾಗಿ ಬೆಳೆಯುವ ದೊಡ್ಡ ಅವಕಾಶಗಳ ಕಣಜವಾಗಿದೆ. ಸೂಕ್ತ ಮಾರ್ಗ ಅನುಸರಿಸಿ ಹೈನುಗಾರಿಕೆ ಮಾಡಿದರೆ ನೂರಾರು ಜನರಿಗೆ ಉದ್ಯೋಗ ನೀಡಬಹುದು. ಹಾಲು ಉತ್ಪಾದನೆಯಲ್ಲಿ ಯಶಸ್ವಿಯಾಗಲು ಸಾಧ್ಯವಿದ್ದು, ಇದರಿಂದ ಮನ್ನಣೆ, ಪ್ರೋತ್ಸಾಹ ದೊರೆಯುತ್ತದೆ. ಕೋವಿಡ್ ಸಂದರ್ಭದಲ್ಲಿ ಹಾಲು ಉತ್ಪಾದನೆಗೆ ಉತ್ತೇಜನ ನೀಡಲು ನಬಾರ್ಡ್ ಹಾಗೂ ಹಾಲು ಒಕ್ಕೂಟಗಳ ಸಹಯೋಗದಲ್ಲಿ ಎಂಸಿಡಿಸಿಸಿ ಬ್ಯಾಂಕ್ ವತಿಯಿಂದ 20 ಕೋಟಿ ರೂ. ಸಾಲ ಸೌಲಭ್ಯ ನೀಡಲಾಯಿತು ಎಂದು ಹೇಳಿದರು.



ಇದೇ ಸಂದರ್ಭದಲ್ಲಿ ಮೈಸೂರು ಜಿಲ್ಲೆಯ 7 ಮಾದರಿ ಹಾಲು ಉತ್ಪಾದಕರ ಸಹಕಾರ ಸಂಘಗಳ ಪದಾಧಿಕಾರಿಗಳು ಹಾಗೂ ಐವರು ಸಾಧಕ ಹಾಲು ಉತ್ಪಾದಕರನ್ನು ಸನ್ಮಾನಿಸಲಾಯಿತು. ಜಿಲ್ಲಾಧಿಕಾರಿ ಡಾ. ಬಗಾದಿ ಗೌತಮ್, ಮೈಮುಲ್ ಅಧ್ಯಕ್ಷ ಪಿ.ಎಂ. ಪ್ರಸನ್ನ, ವ್ಯವಸ್ಥಾಪಕ ನಿರ್ದೇಶಕ ಬಿ.ಎನ್. ವಿಜಯಕುಮಾರ್, ವಿಜಯ ಕರ್ನಾಟಕ ಸಂಪಾದಕ ಸುದರ್ಶನ ಚನ್ನಂಗಿಹಳ್ಳಿ, ಸ್ಥಾನಿಕ ಸಂಪಾದಕ ರಮೇಶ್ ಉತ್ತಪ್ಪ ಮತ್ತಿತರರು ಹಾಜರಿದ್ದರು.

ಅಭಿವೃದ್ಧಿ ಬಿಟ್ಟು ಬಿಜೆಪಿಯಿಂದ ಆಹಾರ ಸೇವನೆ ಚರ್ಚೆ

ಮಾಜಿ ಸಚಿವ ಹೆಚ್.ಸಿ.ಮಹದೇವಪ್ಪ ಕಿಡಿ

● 6 ವರ್ಷದ ಹಿಂದೆ ಸಿದ್ದರಾಮಯ್ಯ ಏನು ಊಟ ಮಾಡಿದ್ದಾರೆ ಎಂಬುದು ನೆನಪಿಲ್ಲ ● ಸಂಸದ ಪ್ರತಾಪ್ ಸಿಂಹ ಹೇಳಿಕೆಗೆ ತಿರುಗೇಟು



ತಿ.ನರಸೀಪುರ, ಆ.22– ಆಹಾರ ಪದ್ಧತಿ ಜನರ ಮೂಲಭೂತ ಹಕ್ಕು ಇದಕ್ಕೆ ಡಾ.ಬಿ.ಆರ್. ಅಂಬೇಡ್ಕರ್ ಸಂವಿಧಾನದಲ್ಲಿ ಮುಕ್ತ ಅವಕಾಶವಿದೆ. ಆದರೂ ಬಿಜೆಪಿಯವರು ಅಭಿವೃದ್ಧಿ ವಿಚಾರ ಬಿಟ್ಟು, ಆಹಾರ ಸೇವನೆ ಬಗ್ಗೆ ಚರ್ಚಿಸುತ್ತಿದ್ದಾರೆ ಎಂದು ಮಾಜಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಕಿಡಿಕಾರಿದರು.

ತಾಲೂಕಿನ ಸೋಮನಾಥಪುರ ಗ್ರಾಮದಲ್ಲಿ 75ನೇ ಅಮೃತ ಮಹೋತ್ಸವದ ಸ್ವಾತಂತ್ರ್ಯ ನಡಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

2017ರಲ್ಲಿ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯ ಅವರು ಮೈಸೂರಿನ ಲಲಿತಮಹಲ್ ಹೋಟೆಲ್‌ನಲ್ಲಿ ನಾಟಿ ಕೋಳಿ ಊಟ ಮಾಡಿ ದಸರಾ ಮಹೋತ್ಸವದಲ್ಲಿ ಚಾಮುಂಡೇಶ್ವರಿ ದೇವಿಗೆ ಪುಷ್ಪಾರ್ಚನೆ ಮಾಡಿದ್ದರು ಎಂದು ಸಂಸದ ಪ್ರತಾಪ್ ಸಿಂಹ ಅವರ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಧಾರ್ಮಿಕವಾಗಿ ಯಾವ ರೀತಿ ನಡೆದುಕೊಳ್ಳಬೇಕೆಂಬ ಸೂಚನೆ, ಕಾನೂನುಗಳೇನು ಪ್ರತ್ಯೇಕವಾಗಿಲ್ಲ. ಸಿದ್ದರಾಮಯ್ಯ ಅಂದು ಏನು ಊಟ ಮಾಡಿದ್ದಾರೆ ಎಂಬುದು ನೆನಪಿನಲ್ಲಿಲ್ಲ. ಆರೋಪದ ಹಿನ್ನೆಲೆ 6 ವರ್ಷದ್ದಾಗಿದೆ. ಅಷ್ಟಾಗಿ ಅದು ನೆನಪಿಟ್ಟುಕೊಳ್ಳುವ ವಿಷಯವೂ ಅಲ್ಲ. ನಮಗೆ ಆಗ ಮುಖ್ಯವಾಗಿದ್ದ ವಿಷಯ ಅಭಿವೃದ್ಧಿ ಮಾತ್ರ. ಮೈಸೂರು ದಸರಾ ಮೂಲಕ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರು ಹೇಗೆ ನೊಂದ ಜನರಿಗೆ, ಮೀಸಲಾತಿಗೆ, ರಾಜ್ಯದ ಅಭಿವೃದ್ಧಿಗೆ ತನ್ನ ಇಡೀ ಸಂಪತ್ತನ್ನೇ ಕೊಟ್ಟು ಅಭಿವೃದ್ಧಿ ಮಾಡುತ್ತಿದ್ದರೋ ಹಾಗೂ ಸಾಮಾಜಿಕ ನ್ಯಾಯದ ಪರವಾಗಿದ್ದರೋ ಅದನ್ನು ನಾವು ಇಡೀ ಪ್ರಪಂಚಕ್ಕೆ ಹೇಳಬೇಕಿತ್ತು. ಆ ಕಡೆಗೆ ಮಾತ್ರವೇ ನಮ್ಮ ಗಮನ ಇತ್ತು. ಯಾರು ಏನು ಊಟ ಮಾಡಿದ್ರು ಎಂಬ ಕಡೆಗಲ್ಲ. ಅಷ್ಟಾಗಿ ಅದು ಮಹತ್ವದ ವಿಷಯವೇ ಆಗಿರಲಿಲ್ಲ. ಅವರೇನು ಊಟ ಮಾಡಿದ್ದರೆಂಬುದು ಗೊತ್ತಿಲ್ಲ ಎಂದರು. ದೇಶದಲ್ಲಿ ಜನರು ಹೊಟ್ಟೆಗೆ ಆಹಾರ ಸಿಗದೆ ಪರದಾಡುವ ಸ್ಥಿತಿ ಇದೆ. ಆಹಾರ ಪದಾರ್ಥಗಳ ಬೆಲೆ ಗಗನಕ್ಕೇರಿದೆ. ರಸಗೊಬ್ಬರದ ಬೆಲೆ ಹೆಚ್ಚಿದೆ.

ಊಟ ಮಾಡಿದ್ದು ಚರ್ಚೆ ವಿಷಯವೇ ಅಲ್ಲ!

ರಾಜಕಾರಣದಲ್ಲಿ ಊಟ ಮಾಡಿದ್ದು ವಿಷಯವೇ ಅಲ್ಲ. ಧರ್ಮ, ಆಹಾರ, ಬಟ್ಟೆ, ಆಚಾರ–ವಿಚಾರಗಳು ಸಂವಿಧಾನದಲ್ಲಿ ಮುಕ್ತವಾಗಿ ಜನರಿಗೆ ಕೊಟ್ಟಿರುವ ಹಕ್ಕು. ಈ ವಿಷಯಗಳಿಗೆ ರಾಜಕಾರಣದಲ್ಲಿ ಮಾನ್ಯತೆಯೇ ಇಲ್ಲ ಎಂದ ಮಹದೇವಪ್ಪ, ರಾಜಕಾರಣ ಮತ್ತು ಸಮಾಜ ಸೇವೆ ಎರಡೂ ಚಳುವಳಿಯ ವೇದಿಕೆಯಾಗಬೇಕು. ಅದನ್ನು ಬಿಟ್ಟು ಕೆಲಸಕ್ಕೆ ಬಾರದ ವಿಷಯದ ಬಗ್ಗೆ ಚರ್ಚೆ ಅನಗತ್ಯ ಎಂದರು.

ರೈತರ ಆದಾಯ ದ್ವಿಗುಣ ಮಾಡುತ್ತೇವೆಂದು ಹೇಳಿದ ಮಾತಿಗೆ ದೇಶದ ಪ್ರಧಾನಿಗಳು ಗಮನ ಹರಿಸುತ್ತಿಲ್ಲ. ಸಿಲಿಂಡರ್, ಪೆಟ್ರೋಲ್ ಬೆಲೆ ಇತಿಹಾಸದಲ್ಲೇ ಕಂಡು ಕೇಳರಿಯದಷ್ಟು ಹೆಚ್ಚಳವಾಗಿದೆ. ಪ್ರತಿ ಪ್ರಜೆಗಳ ಖಾತೆಗೆ 15 ಲಕ್ಷ ರೂ. ಜಮಾ ಮಾಡುತ್ತೇವೆಂದು ನೀಡಿದ ಭರವಸೆ ಬಗ್ಗೆ ಯಾರೂ ಮಾತನಾಡುತ್ತಿಲ್ಲ. ಇವರಿಗೆ ಸೂಕ್ಷ್ಮವಾದ ವಿಚಾರಗಳು ಮಾತ್ರವೇ ಮುಖ್ಯವಾಗಿವೆ. ಜನರ ಕಷ್ಟನಷ್ಟ, ದುಃಖ–ದುಮ್ಮಾನಗಳ ಬಗ್ಗೆ ತಲೆಕೆಡಿಸಿಕೊಳ್ಳುತ್ತಿಲ್ಲ ಎಂದು ಬಿಜೆಪಿ ನಾಯಕರ ಬಗ್ಗೆ ಕಿಡಿಕಾರಿದರು.

ಸಮಾವೇಶದಿಂದ ಬಿಜೆಪಿಯವರಿಗೆ ಉರಿ: ಇತ್ತೀಚೆಗೆ ದಾವಣಗೆರೆಯಲ್ಲಿ ನಡೆದ ಸಿದ್ದರಾಮೋತ್ಸವದಲ್ಲಿ ಸ್ವಯಂ ಪ್ರೇರಿತರಾಗಿ ಸೇರಿದ ಜನರನ್ನು ನೋಡಿ ಬಿಜೆಪಿಯವರಿಗೆ ಉರಿ ಶುರುವಾಗಿದೆ. ಅದಕ್ಕೆ ಇಲ್ಲಸಲ್ಲದ ವಿಷಯದ ಬಗ್ಗೆ ಪ್ರಸ್ತಾಪ ಮಾಡಿ ಧರ್ಮ ಮತ್ತು ದೇವರ ಹೆಸರಲ್ಲಿ ರಾಜಕೀಯ ಬೇಳೆ ಬೇಯಿಸಿಕೊಳ್ಳಲು ನಿರಂತರ ಪ್ರಯತ್ನ ಮಾಡುತ್ತಿದ್ದಾರೆ. ಕಾನೂನು ಸಂವಿಧಾನ, ಜನರ ಹಿತ ಮತ್ತು ಅಭಿವೃದ್ಧಿಯಲ್ಲಿ ಜನರ ಕಷ್ಟನಷ್ಟಗಳಲ್ಲಿ ಭಾಗಿಯಾಗುವ ಯಾವ ಗುಣ ಲಕ್ಷಣಗಳು ಬಿಜೆಪಿಯವರಿಗೆ ಇಲ್ಲ ಎಂದು ಆರೋಪಿಸಿದರು.

ಸೋಮನಾಥಪುರದಲ್ಲಿ ಆರಂಭಗೊಂಡ ಪಾದಯಾತ್ರೆ ಅತ್ತಹಳ್ಳಿ, ಬೇವಿನಹಳ್ಳಿ ಮೂಲಕ ಬನ್ನೂರಲ್ಲಿ ಅಂತ್ಯಗೊಂಡಿತು. ಪಾದಯಾತ್ರೆಯಲ್ಲಿ ಶಾಸಕ ಯತೀಂದ್ರ ಸಿದ್ದರಾಮಯ್ಯ, ವಸತಿ ಯೋಜನೆ ಜಾಗೃತಿ ಸಮಿತಿ ಮಾಜಿ ಅಧ್ಯಕ್ಷ ಸುನೀಲ್ ಬೋಸ್, ಮೈಸೂರು ಜಿಲ್ಲಾ ಕಾಂಗ್ರೆಸ್ ಗ್ರಾಮಾಂತರ ಅಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್, ಪುರಸಭಾಧ್ಯಕ್ಷ ಮದನ್‌ರಾಜ್, ಸದಸ್ಯ ಬಾದಾಮಿ ಮಂಜು, ಎಪಿಎಂಸಿ ಮಾಜಿ ನಿರ್ದೇಶಕ ಉಕ್ಕಲಗೆರೆ ಬಸವಣ್ಣ, ಯುವ ಕಾಂಗ್ರೆಸ್ ಅಧ್ಯಕ್ಷ ಟಿ.ಎಸ್.ಲೋಕೇಶ್, ಮೈಮುಲ್ ನಿರ್ದೇಶಕ ಆರ್.ಚೆಲುವರಾಜು, ಪಿಕಾರ್ಡ್ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ, ಹಿಂದುಳಿದ ವರ್ಗಗಳ ಜಿಲ್ಲಾ ಉಪಾಧ್ಯಕ್ಷ ಎ.ಎನ್.ಸ್ವಾಮಿ, ಜಿಪಂ ಮಾಜಿ ಸದಸ್ಯೆ ಸುಧಾ, ಸೋಮನಾಥಪುರ ಗ್ರಾಪಂ ಅಧ್ಯಕ್ಷೆ ಅರ್ಚನ, ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ವಕ್ತಾರ ಬಸವಣ್ಣ ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು ಹಾಜರಿದ್ದರು.

ದೇಪೂರಲ್ಲಿ ಪಡಿತರ ಉಪಕೇಂದ್ರ ಉದ್ಘಾಟನೆ



ಬೆಟ್ಟದಪುರ, ಆ.22– ಪಿರಿಯಾಪಟ್ಟಣ ತಾಲೂಕಿನ ದೇಪೂರು ಗ್ರಾಮದಲ್ಲಿ ನಾಗರಿಕ ಮತ್ತು ಆಹಾರ ಸರಬರಾಜು ಇಲಾಖೆ ವತಿಯಿಂದ ತೆರೆದಿರುವ ಪಡಿತರ ಉಪಕೇಂದ್ರವನ್ನು ಶಾಸಕ ಕೆ.ಮಹದೇವ್ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಗ್ರಾಮದ ರೈತರು, ಸಾರ್ವಜನಿಕರು ಹಾಗೂ ಮಹಿಳೆಯರು ಗ್ರಾಮದಿಂದ 3 ಕಿಮೀ ದೂರದಲ್ಲಿರುವ ಚಿಕ್ಕನೆರಳೆ ಗ್ರಾಮಕ್ಕೆ ನಡೆದುಕೊಂಡು ಹೋಗಿ ಅಲ್ಲಿನ ಪಡಿತರ ಕೇಂದ್ರದಿಂದ ಆಹಾರ ಧಾನ್ಯಗಳನ್ನು ತರುತ್ತಿದ್ದರು. ಇದನ್ನು ಮನಗಂಡು ಗ್ರಾಮದಲ್ಲಿ ಆಹಾರ ಪಡಿತರ ಉಪಕೇಂದ್ರ ತೆರೆಯಲಾಗಿದೆ ಎಂದರು.

ಈಗಾಗಲೇ ತಾಲೂಕಿನಲ್ಲಿ 43 ಪಡಿತರ ಉಪಕೇಂದ್ರಗಳನ್ನು ತೆರೆದು ಸ್ಥಳದಲ್ಲೇ ಪಡಿತರ ಸಿಗುವಂತೆ ಮಾಡಲಾಗಿದ್ದು, ತಾಲೂಕಿನ ಜನತೆ ಇದರ ಸದುಪಯೋಗಪಡಿಸಿಕೊಳ್ಳಬೇಕು ಎಂದ ಅವರು, ಗ್ರಾಮಕ್ಕೆ ಸಮುದಾಯ ಭವನ, ಸಿಸಿ ರಸ್ತೆ ಹಾಗೂ ಡೈರಿಯನ್ನು ಶೀಘ್ರವಾಗಿ ಮಂಜೂರು ಮಾಡಿಸಿಕೊಡುವುದಾಗಿ ಅವರು ತಿಳಿಸಿದರು.

ಈ ವೇಳೆ ತಹಸೀಲ್ದಾರ್ ಚಂದ್ರಮೌಳಿ, ತಾಲೂಕು ಜೆಡಿಎಸ್ ಅಧ್ಯಕ್ಷ ಅಣ್ಣಯ್ಯಶೆಟ್ಟಿ, ಗ್ರಾಪಂ ಮಾಜಿ ಅಧ್ಯಕ್ಷ ಮೈಲಾರಪ್ಪ, ತಾಪಂ ಮಾಜಿ ಸದಸ್ಯ ಮಲ್ಲಿಕಾರ್ಜುನ್, ಶಾಲೆಕೊಪ್ಪಲು ಗ್ರಾಪಂ ಮಾಜಿ ಸದಸ್ಯ ಕಾಂತೇಗೌಡ, ದೇಪೂರು ಗ್ರಾಮದ ಶಿವಕುಮಾರ್, ಕರಿಗೌಡ, ಚಲುವನಾಯಕ, ಚಂದ್ರೇಗೌಡ, ಆಹಾರ ಇಲಾಖೆಯ ಸಣ್ಣಸ್ವಾಮಿಗೌಡ, ಮಂಜುನಾಥ್, ಕಂದಾಯ ಇಲಾಖೆಯ ಶಶಿಧರ್, ಗಿರೀಶ್ ಇನ್ನಿತರರಿದ್ದರು.

ಪ್ರತಿ ಗ್ರಾಮಕ್ಕೂ ಗ್ರಂಥಾಲಯ ಅವಶ್ಯಕ

ಮಲ್ಕುಂಡಿ, ಆ.22– ಪ್ರತಿ ಗ್ರಾಮಗಳಿಗೂ ಗ್ರಂಥಾಲಯ ಅವಶ್ಯಕ ಎಂದು ಶಾಸಕ ಬಿ.ಹರ್ಷವರ್ಧನ್ ತಿಳಿಸಿದರು.



ಇಲ್ಲಿಗೆ ಸಮೀಪದ ಹಾಡ್ಯದಲ್ಲಿ 15 ಲಕ್ಷ ರೂ. ವೆಚ್ಚದ ಗ್ರಂಥಾಲಯ, ಹುರದಲ್ಲಿ 52 ಲಕ್ಷ ರೂ. ವೆಚ್ಚದ ಶಾಲಾ ಕಟ್ಟಡ, ಬೀರದೇವನಪುರ ಹಾಗೂ ಹೊಸವೀಡುಹುಂಡಿ ಗ್ರಾಮದಲ್ಲಿ ತಲಾ 11 ಲಕ್ಷ ರೂ. ವೆಚ್ಚದ ಶಾಲೆ ಕಟ್ಟಡ, ಹೆಡಿಯಾಲದಲ್ಲಿ 15 ಲಕ್ಷ ರೂ. ವೆಚ್ಚದ ಬಸವ ಭವನ ಉದ್ಘಾಟಿಸಿ ಮಾತನಾಡಿದ ಅವರು, ನನ್ನ 4 ವರ್ಷದ ಅವಧಿಯಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ. ಶಿಕ್ಷಣ ಕ್ಷೇತ್ರಕ್ಕೆ ಆದ್ಯತೆ ನೀಡಿ ಗ್ರಾಮೀಣ ಭಾಗದಲ್ಲಿ ಶಾಲಾ ಕೊಠಡಿಗಳನ್ನು ನಿರ್ಮಿಸಿದ್ದೇನೆ. ದೇಶದ ಉತ್ತಮ ಪ್ರಜೆಯಾಗಲು ಶಿಕ್ಷಣ ಅವಶ್ಯಕ. ಹೀಗಾಗಿ ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಬೇಕು ಎಂದು ಕರೆ ನೀಡಿದರು. ಅಲ್ಲದೇ ಮಕ್ಕಳು ಪ್ರತಿದಿನ ಗ್ರಂಥಾಲಯಕ್ಕೆ ತೆರಳಿ ಪುಸ್ತಕಗಳನ್ನು ಓದುವಂತೆ ಸಲಹೆ ನೀಡಿದರು.

ಈ ವೇಳೆ ತಾಪಂ ಮಾಜಿ ಅಧ್ಯಕ್ಷ ಬಿ.ಎಸ್.ಮಹದೇವಪ್ಪ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಹೆಚ್.ಎಂ.ಕೆಂಡಗಣ್ಣಪ್ಪ, ರಾಜ್ಯ ಕಾರ್ಯಕಾರಿಣಿ ಸದಸ್ಯ ಕುಂಬ್ರಳ್ಳಿ ಸುಬ್ಬಣ್ಣ, ಜಿಪಂ ಮಾಜಿ ಸದಸ್ಯ ಕೆಂಪಣ್ಣ, ಗ್ರಾಪಂ ಅಧ್ಯಕ್ಷ ಹುರ ಚಂದ್ರು, ತಾಪಂ ಮಾಜಿ ಸದಸ್ಯರಾದ ಎಸ್ ಬಸವರಾಜ್, ಶಿವಣ್ಣನಾಯ್ಕ, ಮುಖಂಡರಾದ ಶಿವರುದ್ರ, ಸಿದ್ದರಾಜೇಗೌಡ, ಹಾಡ್ಯ ಶಂಕರ, ಎಂ.ಜಿ.ಮಹದೇವಸ್ವಾಮಿ, ನಾಗೇಶ್, ಬಳ್ಳೂರುಂಡಿ ಶಿವನಾಗಪ್ಪ, ಶಕ್ತಿ ಕೇಂದ್ರದ ಅಧ್ಯಕ್ಷ ಮಹೇಶ್, ರಂಗಸ್ವಾಮಿ, ಗ್ರಾಪಂ ಅಧ್ಯಕ್ಷೆ ಮಂಜುಳಾ, ಬಿಇಓ ರಾಜು ಸೇರಿದಂತೆ ಇತರರಿದ್ದರು.

ಆ. 27, ತಾಲೂಕು ಎಡತೊರೆ ಬಲಿಜ ಸಂಘದ ಉದ್ಘಾಟನೆ

ಭೇರ್ಯ, ಆ.22– ತಾಲೂಕು ಎಡತೊರೆ ಬಲಿಜ (ಬಣಜಿಗ) ಸಂಘದ ಉದ್ಘಾಟನೆ ಸಮಾರಂಭ ಆ.27 ರಂದು ಕೆ.ಆರ್.ನಗರದ ಪಿಎಲ್‌ಡಿ ಬ್ಯಾಂಕ್ ರೈತ ಸಮುದಾಯ ಭವನದಲ್ಲಿ ನಡೆಯಲಿದೆ ಎಂದು ಸಂಘದ ಪ್ರಧಾನ ಕಾರ್ಯದರ್ಶಿ ರಾಘು ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಅಧ್ಯಕ್ಷ ಟಿ.ಎನ್.ದಯಾನಂದ್ ಅಧ್ಯಕ್ಷತೆ ವಹಿಸಲಿದ್ದಾರೆ. ಸಮಾಜದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪಾಸಾದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದ್ದು, ಅಂಕಪಟ್ಟಿ ಜೆರಾಕ್ಸ್ ಪ್ರತಿಯನ್ನು ತಲುಪಿಸುವಂತೆ ಕೋರಲಾಗಿದೆ. ಸಮಾಜದ ಮಕ್ಕಳು ನೃತ್ಯ, ಭರತನಾಟ್ಯ ಭಾವಗೀತೆ, ಭಕ್ತಿಗೀತೆ, ಚಲನಚಿತ್ರ ಗೀತೆ ಹಾಗೂ ಇನ್ನಿತರ ಮನರಂಜನಾ ಕಾರ್ಯಕ್ರಮವನ್ನು ನೀಡಬಯಸುವ ಮಕ್ಕಳು ತಮ್ಮ ಹೆಸರನ್ನು ಮೊ. 9886614308, 9972830745, 9845872447 ಮೂಲಕ ನೋಂದಾಯಿಸಿಕೊಳ್ಳಲು ಕೋರಲಾಗಿದೆ.

ಆ.25, ಕೋಟೆಯಿಂದ ಸರಗೂರುವರೆಗೆ ಪಾದಯಾತ್ರೆ



ಸರಗೂರು, ಆ.22– 75ನೇ ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವದ ಅಂಗವಾಗಿ ಆ.25 ರಂದು ಹೆಚ್.ಡಿ.ಕೋಟೆಯಿಂದ ಸರಗೂರಿನವರೆಗೆ ಸ್ವಾತಂತ್ರ್ಯ ನಡಿಗೆ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮನುಗನಹಳ್ಳಿ ಮಾದಪ್ಪ ತಿಳಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಕೆಪಿಸಿಸಿ ಆದೇಶದ ಮೇರೆಗೆ 75ನೇ ಸ್ವಾತಂತ್ರ್ಯೋತ್ಸವ ಅಂಗವಾಗಿ ತಾಲೂಕಿನಲ್ಲಿ 75 ಕಿಮೀ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. ಅಂದು ಹೆಚ್.ಡಿ.ಕೋಟೆ ಅಂಬೇಡ್ಕರ್ ಭವನದ ಆವರಣದಲ್ಲಿ ಪಾದಯಾತ್ರೆಗೆ ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ಚಾಲನೆ ನೀಡಲಿದ್ದಾರೆ. ಶಾಸಕ ಅನಿಲ್ ಚಿಕ್ಕಮಾದು ಅಧ್ಯಕ್ಷತೆ ವಹಿಸಲಿದ್ದು, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್, ಶಾಸಕ ಯತೀಂದ್ರ, ಕೆಪಿಸಿಸಿ ಉಸ್ತುವಾರಿ ಕಾವೇರಪ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿರಲಿದ್ದಾರೆ. ಪಾದಯಾತ್ರೆ ಬಳಿಕ ಸರಗೂರಲ್ಲಿ ಸಮಾವೇಶ ಹಮ್ಮಿಕೊಳ್ಳಲಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಸಭೆಯಲ್ಲಿ ಸರಗೂರು ಟೌನ್ ಅಧ್ಯಕ್ಷ ಮಂಜುನಾಥ್, ಜಿಪಂ ಮಾಜಿ ಸದಸ್ಯ ಪಿ.ರವಿ, ಶಂಭುಲಿಂಗನಾಯಕ, ಎಂ.ಕೆಂಡಗಣ್ಣಸ್ವಾಮಿ, ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ದರಾಜು, ಪಪಂ ಸದಸ್ಯ ಶ್ರೀನಿವಾಸ್, ಮಾಜಿ ಸದಸ್ಯ ರಮೇಶ್, ಕಾಂಗ್ರೆಸ್ ಕಾರ್ಯಕರ್ತರಾದ ಮುಜೀಬ್, ರಂಗನಾಥ್, ಸೊಹೇಲ್, ಎಸ್.ಎನ್.ನಾಗರಾಜು, ಶಿವಶಂಕರನ್, ಭೀಮಯ್ಯ, ಹನುಮಂತಯ್ಯ, ಮಂಜುನಾಥ್, ಮಹದೇವ್, ಗೋಪಾಲ್, ಶಿವಲಿಂಗಯ್ಯ, ಮೋಹನ್, ದೇವದಾಸ್, ರಮೇಶ್ ಇನ್ನಿತರರಿದ್ದರು.

ಶಿಕ್ಷಣದಿಂದ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ



ಹೆಚ್.ಡಿ.ಕೋಟೆ, ಆ.22– ಸರ್ಕಾರಗಳು ಜನರಿಗೆ ಮೂಲ ಸೌಕರ್ಯ ಒದಗಿಸುವ ಜೊತೆಗೆ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿದಾಗ ಮಾತ್ರ ದೇಶ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಶಾಸಕ ಅನಿಲ್ ಚಿಕ್ಕಮಾದು ಅಭಿಪ್ರಾಯಪಟ್ಟರು.

ಪಟ್ಟಣದ ಪ್ರಥಮ ದರ್ಜೆ ಕಾಲೇಜಿನಲ್ಲಿ ಸೋಮವಾರ ಹೆಚ್‌ಪಿ ಕಂಪನಿ ವತಿಯಿಂದ 20 ಲಕ್ಷ ರೂ. ವೆಚ್ಚದಲ್ಲಿ ಉಚಿತವಾಗಿ ನೀಡಲಾದ ಡಿಜಿಟಲ್ ಲ್ಯಾಪ್‌ಟಾಪ್ ಹಾಗೂ ಪೀಠೋಪಕರಣಗಳನ್ನು ಕಾಲೇಜಿಗೆ ವಿತರಿಸಿ ಹಾಗೂ 15 ಲಕ್ಷ ರೂ. ವೆಚ್ಚದ ಲ್ಯಾಬ್ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಯಾವ ದೇಶ ಉನ್ನತ ಶಿಕ್ಷಣದಲ್ಲಿ ಮುಂದಿದೆಯೋ, ಆ ದೇಶ ಆರ್ಥಿಕವಾಗಿ ಬಲಿಷ್ಠವಾಗಲಿದೆ. ಹಾಗಾಗಿ ಸರ್ಕಾರಗಳು ಉನ್ನತ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು ಎಂದರು.

ನಾನು ಶಾಸಕನಾದ ಬಳಿಕ ತಾಲೂಕಿನಲ್ಲಿ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡುತ್ತಾ ಬಂದಿದ್ದೇನೆ. ಸರಗೂರು ತಾಲೂಕಿನಲ್ಲಿ ಪದವಿ ಕಾಲೇಜಿಗೆ ಸ್ವಂತ ಕಟ್ಟಡ ಇರಲಿಲ್ಲ. ನಾನು ಸರ್ಕಾರದ ಗಮನ ಸೆಳೆದ ನಂತರ ಕಾಲೇಜು ಕಟ್ಟಡಕ್ಕೆ 4.5 ಕೋಟಿ ರೂ. ಅನುದಾನ ಬಿಡುಗಡೆ ಮಾಡಿದ್ದು, ಸುಸಜ್ಜಿತ ಕಟ್ಟಡ ನಿರ್ಮಾಣವಾಗಿದೆ ಎಂದರು.

ವಿದ್ಯಾರ್ಥಿಗಳು ಹೆಚ್‌ಪಿ ಕಂಪನಿಯವರು ನೀಡಿರುವ ಡಿಜಿಟಲ್ ಲ್ಯಾಪ್‌ಟಾಪ್ ಲ್ಯಾಬ್ ಅನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಹೆಚ್‌ಪಿ ಕಂಪನಿ ನಿರ್ದೇಶಕ ಪ್ರಸನ್ನ ಕುಮಾರ್ ಮಾತನಾಡಿ, ಕಂಪನಿಯಿಂದ ಕಾಲೇಜಿಗೆ ಸಣ್ಣ ಉಡುಗೊರೆ ನೀಡಿದ್ದೇವೆ. ಕಳೆದ ಒಂದೂವರೆ ವರ್ಷಗಳ ಹಿಂದೆ ಡಿಜಿಟಲ್ ಲ್ಯಾಪ್‌ಟಾಪ್ ನೀಡಬೇಕಿತ್ತು. ಕಾರಣಾಂತರಗಳಿಂದ ನೀಡಲು ಸಾಧ್ಯವಾಗಲಿಲ್ಲ. ಈಗ ನೀಡುತ್ತಿದ್ದು ವಿದ್ಯಾರ್ಥಿಗಳು ಇದರ ಅನುಕೂಲ ಪಡೆಯಿರಿ. ಇದರಿಂದ ಮುಂದೆ ನೀವು ಕಂಪನಿಗಳಿಗೆ ಸೇರಲು ಅನುಕೂಲವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡ ಕಾವೇರಪ್ಪ, ಕಾಲೇಜಿನ ಪ್ರಾಂಶುಪಾಲ ಕೆ.ಪಿ.ಪ್ರಸನ್ನ, ಹೆಚ್‌ಪಿ ಕಂಪನಿ ವಿಜಯ ಕುಮಾರ್, ಸುರೇಶ್ ಬಾಬು, ನಾಗರಾಜನ್, ರೇಣುಕಾ ಪ್ರಸಾದ್, ಜಿಪಂ ಮಾಜಿ ಸದಸ್ಯ ಹೆಚ್.ಸಿ.ಮಂಜು ನಾಥ್, ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಎಂ.ಸಿ.ದೊಡ್ಡನಾಯಕ, ಸದಸ್ಯರಾದ ರಾಜು ವಿಶ್ವಕರ್ಮ, ಪ್ರದೀಪ್, ಅಶೋಕ್, ದಿನೇಶ್, ಪ್ರಕಾಶ್, ರಾಜೇಗೌಡ, ಜಸ್ಸೀಲಾ, ಸೌಮ್ಯ ಮಂಜುನಾಥ್, ಜಿಲ್ಲಾ ಕುರುಬ ಸಮಾಜದ ಅಧ್ಯಕ್ಷ ಶಿವಪ್ಪ ಕೋಟಿ, ಉಪನ್ಯಾಸಕರಾದ ಪುಟ್ಟರಾಜು, ಸವಿತಾ, ಪೂರ್ಣಿಮಾ, ಬೋರಮ್ಮ, ಶಿವಕುಮಾರ್, ಬಾಲಾಜಿ ಇದ್ದರು.



ಸಾಲಿಗ್ರಾಮದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವತಿಯಿಂದ ಕಾಲೇಜಿನ ರವೀಂದ್ರನಾಥ ಠಾಗೋರ್ ಸಭಾಂಗಣದಲ್ಲಿ ಸ್ವಾತಂತ್ರ್ಯ ಅಮೃತ ಮಹೋತ್ಸವದಲ್ಲಿ ನಿವೃತ್ತ ಯೋಧರಾದ ಚಿಕ್ಕನಾಯಕನಹಳ್ಳಿ ಪಾಪೇಗೌಡ, ಅಂಕನಹಳ್ಳಿ ಹರೀಶ್ ಸೇರಿದಂತೆ ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಲಾಯಿತು. ಶಿಕ್ಷಣ ತಜ್ಞ ಎಸ್.ಆರ್.ರಾಮೇಗೌಡ ಸೇರಿದಂತೆ ಕಾಲೇಜಿನ ಬೋಧಕ ಮತ್ತು ಬೋಧಕೇತರ ವರ್ಗ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ನಿಂಗಮ್ಮ ನಿಧನ



ಹನಗೋಡು, ಆ.22– ಹುಣಸೂರು ತಾಲೂಕಿನ ಧರ್ಮಾಪುರ ಗ್ರಾಮದ ನಿವಾಸಿ ಲೇ.ಸಿದ್ದನಾಯಕ ಅವರ ಪತ್ನಿ ನಿಂಗಮ್ಮ(85) ಸೋಮವಾರ ಸಂಜೆ ನಿಧನರಾದರು.

ಮೃತರು ಧರ್ಮಾಪುರ ಪ್ರಾಥಮಿಕ ಕೃಷಿ ಪತ್ತಿನ ಪ್ರಾಥಮಿಕ ಸಹಕಾರ ಸಂಘದ ನಿರ್ದೇಶಕ ನಿಂಗರಾಜು ಸೇರಿದಂತೆ ಐವರು ಪುತ್ರರು, ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ ಸ್ವಗ್ರಾಮದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೃತರ ನಿಧನಕ್ಕೆ ಶಾಸಕ ಜಿ.ಟಿ.ದೇವೇಗೌಡ, ಹೆಚ್.ಪಿ.ಮಂಜುನಾಥ್, ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷ ಜಿ.ಡಿ.ಹರೀಶ್‌ಗೌಡ ಮತ್ತು ಪ್ರಾ.ಕೃ.ಪ. ಸಹಕಾರ ಸಂಘದ ಅಧ್ಯಕ್ಷ ನಾರಾಯಣ್, ಜಿಪಂ ಮಾಜಿ ಸದಸ್ಯ ಎಂ.ಬಿ.ಸುರೇಂದ್ರ ಟಿಎಪಿಸಿಎಂಎಸ್ ಅಧ್ಯಕ್ಷ ಅಸ್ವಾಳ್ ಕೆಂಪೇಗೌಡ ಸೇರಿದಂತೆ ಅನೇಕರು ಸಂತಾಪ ಸೂಚಿಸಿದ್ದಾರೆ.

ಸಿದ್ದರಾಮಯ್ಯ ಕಾರಿನ ಮೇಲೆ ಮೊಟ್ಟೆ ಎಸೆತ ಖಂಡಿಸಿ

ಇಂದಿನಿಂದ 'ಸಾಮರಸ್ಯಕ್ಕಾಗಿ ಸೌಹಾರ್ದ ನಡಿಗೆ' ಪಾದಯಾತ್ರೆ

ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕಾರ್ಯಕರ್ತರಿಗೆ ಶಾಸಕ ಹೆಚ್‌ಪಿಎಂ ಕರೆ



ಹುಣಸೂರು, ಆ.22– ಕೊಡಗಿನಲ್ಲಿ ವಿಪಕ್ಷ ನಾಯಕ ಸಿದ್ದರಾಮಯ್ಯ ಕಾರಿನ ಮೇಲೆ ಮೊಟ್ಟೆ ಎಸೆತ ಖಂಡಿಸಿ ತಾಲೂಕಿನ ಅರಸು ಕಲ್ಲಹಳ್ಳಿಯಿಂದ ಮಡಿಕೇರಿವರೆಗೆ ಹಮ್ಮಿಕೊಂಡಿರುವ 'ಸಾಮರಸ್ಯಕ್ಕಾಗಿ ಸೌಹಾರ್ದ ನಡಿಗೆ' ಪಾದಯಾತ್ರೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕಾರ್ಯಕರ್ತರಿಗೆ ಶಾಸಕ ಹೆಚ್.ಪಿ. ಮಂಜುನಾಥ್ ಕರೆ ನೀಡಿದರು.

ನಗರದ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ನೇತೃತ್ವದಲ್ಲಿ ವಿವಿಧ ಪ್ರಗತಿಪರ ಸಂಘಟನೆಗಳು ಹಮ್ಮಿಕೊಂಡಿರುವ ಸೌಹಾರ್ದ ನಡಿಗೆ ಪಾದಯಾತ್ರೆ ಆ.23ರಂದು ಬೆಳಗ್ಗೆ 9 ಗಂಟೆಗೆ ಕಲ್ಲಹಳ್ಳಿಯಲ್ಲಿರುವ ಮಾಜಿ ಸಿಎಂ ಡಿ.ದೇವರಾಜ ಅರಸು ಸಮಾಧಿ ಸ್ಥಳದಿಂದ ಆರಂಭಗೊಂಡು ಆ.26ರಂದು ಮಡಿಕೇರಿಯಲ್ಲಿ ಮುಕ್ತಾಯಗೊಳ್ಳಲಿದೆ ಎಂದರು.

ಕೇಂದ್ರ ಹಾಗೂ ರಾಜ್ಯ ಬಿಜೆಪಿ ಸರ್ಕಾರಗಳು ಕೋಮುವಾದಿಗಳಿಗೆ ಕುಮ್ಮಕ್ಕು ನೀಡುತ್ತಿದೆ. ಇದರಿಂದ ರಾಜ್ಯದಲ್ಲಿ ಕೋಮು ಸಾಮರಸ್ಯಕ್ಕೆ ಧಕ್ಕೆ ಉಂಟಾಗುತ್ತಿದೆ. ಧರ್ಮ–ಧರ್ಮಗಳ ನಡುವೆ, ಜಾತಿ–ಜಾತಿಗಳ ನಡುವೆ ಕಂದಕ ಸೃಷ್ಟಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕೋಮುವಾದ ಅಳಿಯಲಿ, ಕರ್ನಾಟಕ ಬೆಳಗಲಿ ಎಂಬ ಆಶಯದೊಂದಿಗೆ ಸೌಹಾರ್ದತೆಯ ಸಂದೇಶ ಸಾರಲು ಈ ನಡಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಪಾದಯಾತ್ರೆಯಲ್ಲಿ ಮಾಜಿ ಸಚಿವ ಹೆಚ್.ಸಿ.ಮಹದೇವಪ್ಪ, ಸಮಾಜವಾದಿ ಪ.ಮಲ್ಲೇಶ್, ಪ್ರಗತಿಪರ ಚಿಂತಕ ಜಯಪ್ರಕಾಶ್, ಪ್ರೊ.ಮಹೇಶ್ ಚಂದ್ರಗುರು, ಪ್ರೊ.ಕೆ.ಎಸ್.ಭಗವಾನ್, ಶಾಸಕರಾದ ಹೆಚ್.ಪಿ.ಮಂಜುನಾಥ್, ಡಾ.ಯತೀಂದ್ರ ಸಿದ್ದರಾಮಯ್ಯ, ವಿಧಾನಪರಿಷತ್ ಸದಸ್ಯ ಡಿ.ತಿಮ್ಮಯ್ಯ, ರಾಜ್ಯ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಡಾ.ಪುಷ್ಪ ಅಮರ್‌ನಾಥ್ ಸೇರಿದಂತೆ ಇತರರು ಭಾಗವಹಿಸಲಿದ್ದು, ತಾಲೂಕಿನ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಸಿದ್ದರಾಮಯ್ಯ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪಾದಯಾತ್ರೆ ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಬ್ಲಾಕ್ ಅಧ್ಯಕ್ಷರಾದ ನಾರಾಯಣ್, ಕಲ್ಕುಣಿಕೆ ರಮೇಶ್, ಜಿಪಂ ಮಾಜಿ ಸದಸ್ಯ ಕಟ್ಟನಾಯಕ, ತಾಪಂ ಮಾಜಿ ಸದಸ್ಯರಾದ ಗದ್ದಿಗೆ ದೇವರಾಜ್, ಗಣಪತಿ ಇಂದೂರ್ಕರ್, ಪ್ರೇಮೆಗೌಡ, ಯೂತ್ ಕಾಂಗ್ರೆಸ್ ಅಧ್ಯಕ್ಷ ಸ್ವರೂಪ್, ಕುಮಾರಸ್ವಾಮಿ, ಮಹಿಳಾ ಕಾಂಗ್ರೆಸ್‌ನ ಗೀತಾ, ರೇಣುಕಾ, ಮುಖಂಡರಾದ ರಾಜು, ಶಿವರಾಜೇಗೌಡ, ಹೊನ್ನಪ್ಪ , ಹೆಚ್.ವಿ.ಗಣೇಶ್ ಸೇರಿದಂತೆ 200ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು.



ನಂಜನಗೂಡು ತಾಲೂಕಿನ ವಿವಿಧೆಡೆ ಕಾರ್ಯಕ್ರಮಗಳ ಉದ್ಘಾಟನೆಗೆ ಕಾರಿನಲ್ಲಿ ತೆರಳುತ್ತಿದ್ದ ಶಾಸಕ ಬಿ.ಹರ್ಷವರ್ಧನ್ ಅವರು ಹೊಸವೀಡು ಬಳಿ ಎದುರಾದ, ಪಾದಯಾತ್ರೆ ಕೈಗೊಂಡಿದ್ದ ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ಕಂಡು ಕಾರಿನಿಂದ ಇಳಿದು ಕುಶಲೋಪರಿ ವಿಚಾರಿಸಿದರು. ಈ ವೇಳೆ ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಸೇರಿದಂತೆ ಇನ್ನಿತರರಿದ್ದರು.



ಪಿರಿಯಾಪಟ್ಟಣ ತಾಲೂಕು ರಾವಂದೂರಿನಲ್ಲಿ ನಡೆದ ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ ಕಂಪಲಾಪುರ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದರು. ಶಿಕ್ಷಕರಾದ ಜಗದೀಶ್, ಶಿವರಾಜ್, ಸುಜಾತಾ, ಲಕ್ಷ್ಮಿ, ಪೂರ್ಣಿಮಾ ಹಾಜರಿದ್ದರು.



ತಿ.ನರಸೀಪುರದ ಸೆಂಟ್ ಮೇರಿಸ್ ಕಾನ್ವೆಂಟ್‌ನಲ್ಲಿ 75ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಚಾಮರಾಜನಗರ ಜೆಎಸ್‌ಎಸ್ ಆಸ್ಪತ್ರೆ ಹಿರಿಯ ವೈದ್ಯ ಡಾ.ಗೋವಿಂದಶೆಟ್ಟಿ ಅವರನ್ನು ಸನ್ಮಾನಿಸಲಾಯಿತು. ಶಾಲೆ ಚೇರ್ಮನ್ ಪೌಲ್‌ಬೆನ್, ಪ್ರಿನ್ಸಿಪಾಲ್ ಕ್ಸೇವಿಯರ್ ಆಂಥೋನಿ, ವೈಸ್ ಪ್ರಿನ್ಸಿಪಾಲ್ ಗೋವಿಂದ್, ಪುರಸಭಾಧ್ಯಕ್ಷ ಮದನ್ ರಾಜ್, ಸದಸ್ಯೆ ರೂಪ ಮತ್ತಿತರಿದ್ದರು.


ಮೊಟ್ಟೆ, ಕೋಳಿ, ಮಾಂಸ, ದೇವರ ಹೇಳಿಕೆ ಸಂಘರ್ಷಕ್ಕೆ ಇತಿಶ್ರೀ ಹಾಡಿ

- ವಿಧಾನಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ಮನವಿ
- ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು ಕೃಷ್ಣ, ಬಿಎಸ್‌ವೈ ಮಧ್ಯ ಪ್ರವೇಶಕ್ಕೂ ಆಗ್ರಹ

ಮೈಸೂರು,ಆ.22(ಎಂಟಿವೈ)– ರಾಜ್ಯ ಕಂಡ ರಾಜಕೀಯ ಮುತ್ಸದ್ದಿಗಳಲ್ಲಿ ಒಬ್ಬರಾಗಿರುವ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೇಲೆ ಮೊಟ್ಟೆ ಎಸೆತ ಪ್ರಕರಣ ಖಂಡನೀಯ. ರಾಜ್ಯದ ಶಾಂತಿ ಸುವ್ಯವಸ್ಥೆಯ ಹಿತದೃಷ್ಟಿಯಿಂದ ಹಿರಿಯ ಮುತ್ಸದ್ದಿಗಳಾದ ಎಸ್.ಎಂ.ಕೃಷ್ಣ, ಬಿ.ಎಸ್.ಯಡಿಯೂರಪ್ಪ ಅವರು ಮಧ್ಯಸ್ಥಿಕೆ ವಹಿಸಿ, ಪರಿಸ್ಥಿತಿ ತಿಳಿಗೊಳಿಸಬೇಕು ಎಂದು ವಿಧಾನಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ಮನವಿ ಮಾಡಿದ್ದಾರೆ.

ಮೈಸೂರಿನ ಕಾಡಾ ಕಚೇರಿ ಆವರಣದಲ್ಲಿನ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ 5 ವರ್ಷ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿರುವ ಸಿದ್ದರಾಮಯ್ಯ ಅವರ ಮೇಲೆ ಮೊಟ್ಟೆ ಎಸೆತ ಪ್ರಕರಣವನ್ನು ಯಾರೂ ಸಮರ್ಥಿಸಿಲ್ಲ. ರಾಜ್ಯದ ಜನತೆಯೊಂದಿಗೆ ಪಕ್ಷಾತೀತವಾಗಿ ರಾಜಕೀಯ ಮುಖಂಡರು ಖಂಡಿಸಿದ್ದಾರೆ. ಇಂತಹ ಘಟನೆಯನ್ನು ಸಮರ್ಥಿಸಿಕೊಳ್ಳುವುದು ಸರಿಯಲ್ಲ. ರಾಜ್ಯದಲ್ಲಿ ಶಾಂತಿ ನೆಲಸಬೇಕಾಗಿದೆ. ಸಂಘರ್ಷ ತಪ್ಪಿಸಲು ಹಾಗೂ ಕಾನೂನು ಸುವ್ಯವಸ್ಥೆ ಹದಗೆಡದಂತೆ ಕಟ್ಟೆಚ್ಚರವಹಿಸುವ ನಿಟ್ಟಿನಲ್ಲಿ ಮೊಟ್ಟೆ, ಮಾಂಸ, ಕೋಳಿ ಹಾಗೂ ದೇವರ ಬಗ್ಗೆ ನಡೆಯುತ್ತಿರುವ ಸಂಘರ್ಷಕ್ಕೆ ಇತಿಶ್ರೀ ಹಾಡಬೇಕು. ಅದರಲ್ಲೂ ಮೊಟ್ಟೆ ಎಸೆತ ಪ್ರಕರಣ ಮುಂದುವರೆಯದಂತೆ ನೋಡಿಕೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಮೊದಲಿನಿಂದಲೂ ರಾಜಕೀಯ ನಾಯಕರ ಮೇಲೆ ಮೊಟ್ಟೆ, ಕಲ್ಲು, ಟೊಮಾಟೋ, ಸಗಣಿ ಎಸೆದು ಆಕ್ರೋಶ ವ್ಯಕ್ತಪಡಿಸಿರುವ ನಿದರ್ಶನಗಳಿವೆ. ಇಂತಹ ಕೃತ್ಯ ಸಾರ್ವನಿಕವಾಗಿ ಕೆಲವೊಮ್ಮೆ ಸಹಜ ಎನಿಸಿಬಿಟ್ಟಿದೆ. ಸಮಾಜ ಹಾಗೂ ರಾಜಕೀಯ ಪಕ್ಷಗಳಲ್ಲಿ ಒಳ್ಳೆಯವರೊಂದಿಗೆ ಪುಂಡ ಪೋಕರಿಗಳು ಇರುತ್ತಾರೆ. ಆದ್ದರಿಂದ ಮೊಟ್ಟೆ ಎಸೆತ ಪ್ರಕರಣವನ್ನು ಸಿದ್ದರಾಮಯ್ಯ ಅವರು ಮನಸ್ಸಿಗೆ ತೆಗೆದುಕೊಳ್ಳಬಾರದು ಎಂದು ಮನವಿ ಮಾಡಿದರು.



ಈ ಹಿಂದೆಯೂ ನಾಯಕರ ಮೇಲೆ ಹಲ್ಲೆ ನಡೆದಿದೆ: ಈ ಹಿಂದೆ ಪ್ರಧಾನಿಯಾಗಿದ್ದ ಮೊರಾರ್ಜಿ ದೇಸಾಯಿ ಅವರು ನಾಗ್ಪುರಕ್ಕೆ ಹೋಗಿದ್ದಾಗ ಯುವಕನೊಬ್ಬ ಚಪ್ಪಲಿ ಎಸೆದಿದ್ದ. ಆ ಘಟನೆಯನ್ನು ಮೊರಾರ್ಜಿ ಅವರು ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಪ್ರಧಾನಿಗೂ ಸಾಮಾನ್ಯ ಯುವಕನೊಬ್ಬ ಚಪ್ಪಲಿ ಎಸೆಯಬಹುದು ಎಂದು ಸಮರ್ಥಿಸಿಕೊಂಡಿದ್ದರು. ಇಂದಿರಾಗಾಂಧಿ ಅವರ ಮೇಲೆ ಸಾಕಷ್ಟು ಹಲ್ಲೆ ಪ್ರಯತ್ನಗಳು ನಡೆದವು. ಅವರ ಮೇಲೆ ಕಲ್ಲು ತೂರಿ, ಮೂಗು ಒಡೆದಿದ್ದರು. ಹಾಸನದಲ್ಲಿ ನಡೆದ ಬಹಿರಂಗ ಸಭೆಯಲ್ಲಿ ಹಾವುಗಳನ್ನು ಬಿಟ್ಟು, ದೊಡ್ಡ ಗೊಂದಲ ಸೃಷ್ಟಿಸಿದರು. ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಮೇಲೆ ಎಷ್ಟೋ ಬಾರಿ ಅಟ್ಯಾಕ್ ಆಯಿತು. ಕೇಂದ್ರದ ಮಾಜಿ ಸಚಿವ ಪಿ.ಚಿದಂಬರಂ ಅವರಿಗೆ ಸುದ್ದಿಗೋಷ್ಠಿಯಲ್ಲೇ ಯುವಕನೊಬ್ಬ ಶೂ ತೋರಿಸಿದ್ದ. ಜಯಲಲಿತಾ ಅವರು ಚುನಾವಣೆಯಲ್ಲಿ ಸೋತಾಗ ಸದನದಲ್ಲೇ ಅವಮಾನ ಮಾಡಲಾಯಿತು. ಹೀಗೆ ರಾಜಕೀಯ ನಾಯಕರ ಅಪಮಾನ ಮಾಡುವ, ಹಲ್ಲೆ ನಡೆಸುವ ಪ್ರಯತ್ನಗಳೂ ನಡೆದಿವೆ. ಹಾಗಾಗಿ ಸಿದ್ದರಾಮಯ್ಯ ಅವರು ಈ ಘಟನೆಯಿಂದ ನೊಂದುಕೊಳ್ಳಬಾರದು ಎಂದು ಸಲಹೆ ನೀಡಿದರು.

ಅನಾಹುತಕ್ಕೆ ಹೊಣೆಯಾಗಬೇಡಿ: ಮಡಿಕೇರಿಗೆ ಪಾದಯಾತ್ರೆ ಹೋಗುವ ನಿರ್ಧಾರ ಕೈ ಬಿಡಬೇಕು. ಕಾರ್ಯಕರ್ತರಲ್ಲಿ ಒಳ್ಳೆಯವರೂ ಹಾಗೂ ಪುಂಡರೂ ಇರುವುದರಿಂದ ಏನಾದರೂ ಅನಾಹುತ ಸಂಭವಿಸಲೂ ಬಹುದು. ಆ ಅನಾಹುತಕ್ಕೆ ನೀವು ಕಾರಣರಾಗಬೇಡಿ ಎಂದು ಇಡೀ ನಾಡಿನ ಜನತೆ ಭಾವನೆಯಾಗಿದೆ. ನಾಡಿನಹಿತದ ಪರ, ರಾಜಕಾರಣದ ಗೌರವ ಪರವಾಗಿ ನಾನು ಸಿದ್ದರಾಮಯ್ಯ ಅವರಲ್ಲಿ ವಿನಂತಿ ಮಾಡಿ ಪಾದಯಾತ್ರೆ ಕೈ ಬಿಡಬೇಕೆಂದು ಕೋರುತ್ತೇನೆ ಎಂದರು.

ಆತಂಕವಾಗುತ್ತಿದೆ: ಇತ್ತೀಚಿನ ದಿನಗಳಲ್ಲಿ ವೈಯಕ್ತಿಕ ಟೀಕೆ, ಆರೋಪ–ಪ್ರತ್ಯಾರೋಪ ಎಲ್ಲೆ ಮೀರುತ್ತಿದೆ. ಚುನಾವಣಾ ವರ್ಷ ಬರುತ್ತಿದೆ. ಮುಂದೆ ಇನ್ನು ಏನೇನು ಅನಾಹುತವಾಗುತ್ತದೋ ಎಂಬ ಆತಂಕವಾಗುತ್ತಿದೆ. ಶಾಂತಿ ಸುವ್ಯವಸ್ಥೆ ಕಾಪಾಡಲು ರಾಜಕೀಯ ಹೊರತುಪಡಿಸಿ ಎಲ್ಲಾ ರಾಜಕೀಯ ಮುಖಂಡರು ಸಹಕರಿಸಬೇಕು ಎಂದು ಮನವಿ ಮಾಡಿದರು.

ಜ್ವಲಂತ ಸಮಸ್ಯೆ ಇದೆ: ರಾಜ್ಯದಲ್ಲಿ ಹಲವು ಸಮಸ್ಯೆಗಳಿವೆ. ಪ್ರವಾಹ ಪರಿಸ್ಥಿತಿಯಿಂದ ಅನೇಕರ ಬದುಕು ಕೊಚ್ಚಿ ಹೋಗಿದೆ. ಮಕ್ಕಳು, ಜಾನುವಾರುಗಳು ಪ್ರವಾಹದಲ್ಲಿ ಜೀವ ಕಳೆದುಕೊಂಡಿವೆ. ಮನೆಗಳು ಕುಸಿದಿವೆ. ಫಸಲು ನಷ್ಟವಾಗಿದೆ. ಇಷ್ಟೆಲ್ಲಾ ಜ್ವಲಂತ ಸಮಸ್ಯೆ ಇರುವಾಗ ಮೊಟ್ಟೆ ವಿವಾದವನ್ನು ರಾಷ್ಟ್ರೀಯ ವಿವಾದವಾಗಿಸಲಾಗಿದೆ ಎಂದು ಕಿಡಿಕಾರಿದರು.

ಸದನದಲ್ಲಿ ಹಕ್ಕುಚ್ಯುತಿ ಮಂಡಿಸಿ: ಮಡಿಕೇರಿಯಲ್ಲಿ ಮೊಟ್ಟೆ ಎಸೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಸದನದಲ್ಲಿ ಹಕ್ಕುಚ್ಯುತಿ ಮಂಡಿಸಲು ನಿಮಗೆ ಅಧಿಕಾರವಿದೆ. ಈ ವಿವಾದ ಬೀದಿ ರಂಪ ಆಗುವುದು ಬೇಡ. ಎಲ್ಲರ ಕೈಯಲ್ಲಿ ಈ ವಿವಾದ ಕೊಡಬಾರದು ಎಂದರು.

ಸಾವರ್ಕರ್ ಮುನ್ನೆಲೆಗೆ ತರಲು ನೆಹರು ಕಡೆಗಣನೆ: ದೇಶದಾದ್ಯಂತ ಸಂಭ್ರಮದಿಂದ ಸ್ವಾತಂತ್ರ್ಯೋತ್ಸವ ಆಚರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಸಾವರ್ಕರ್ ಅವರ ಹೆಸರನ್ನು ಮುನ್ನೆಲೆಗೆ ತರುವ ಏಕೈಕ ಉದ್ದೇಶದಿಂದ ದೇಶಕ್ಕೆ ಸ್ವಾತಂತ್ರ್ಯ ಲಭಿಸಿದ ಸಂದರ್ಭದಲ್ಲಿ ದೇಶದ ಪ್ರಧಾನಿಯಾಗಿದ್ದ ನೆಹರು ಅವರನ್ನು ಕಡೆಗಣಿಸಲಾಗಿದೆ ಎಂದು ಕಿಡಿಕಾರಿದರು.

ಕೊಡಗಿಗೆ ಪ್ರತ್ಯೇಕ ಲೋಕಸಭಾ ಕ್ಷೇತ್ರ ಕಲ್ಪಿಸಲಿ

ಮೈಸೂರು,ಆ.22(ಎಂಟಿವೈ)– ಕೊಡಗು ಜಿಲ್ಲೆಗೆ ಮೊದಲಿನಿಂದಲೂ ರಾಜಕೀಯ ಪ್ರಾತಿನಿಧ್ಯತೆ ಕೊರತೆ ಉಂಟಾಗಿದೆ. ಹೀಗಾಗಿ ಮೂರೂ ರಾಜಕೀಯ ಪಕ್ಷಗಳು ಕೊಡಗು ಜಿಲ್ಲೆಗೆ ಪ್ರತ್ಯೇಕ ಲೋಕಸಭಾ ಕ್ಷೇತ್ರ ಒದಗಿಸಿಕೊಡಲು ಸಹಕರಿಸಬೇಕು ಎಂದು ವಿಧಾನಪರಿಷತ್ ಸದಸ್ಯ ಅಡಗೂರು ಹೆಚ್.ವಿಶ್ವನಾಥ್ ಒತ್ತಾಯಿಸಿದ್ದಾರೆ.

ಮೈಸೂರಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಕಳೆದ ಮೂರ್ನಾಲ್ಕು ವರ್ಷದಿಂದ ಕೊಡಗು ಜಿಲ್ಲೆ ಪ್ರವಾಹ ಹಾಗೂ ಭೂ ಕುಸಿತದಿಂದ ತತ್ತರಿಸಿ ಹೋಗಿದೆ. ಅಲ್ಲಿನ ಜನರು ಸಂಕಷ್ಟಕ್ಕೆ ತುತ್ತಾಗಿದ್ದಾರೆ. ಹಲವು ಸಮಸ್ಯೆಗಳು ಬಗೆಹರಿಯದೇ ಹಾಗೆಯೇ ಉಳಿದಿವೆ. ಹಾಗಾಗಿ ಕೊಡಗಿನ ಜನರ ಸಂಕಷ್ಟ ನಿವಾರಿಸುವುದು ಅತ್ಯಗತ್ಯ. ಅದನ್ನು ಬಿಟ್ಟು ಮೊಟ್ಟೆ, ನಾಟಿ ಕೋಳಿ, ಮಾಂಸ, ದೇವರು–ದಿಂಡರ ಬಗ್ಗೆ ಚರ್ಚೆ ಬಿಟ್ಟು, ಕೊಡಗಿನ ಜನರ ನೋವಿಗೆ ಸ್ಪಂದಿಸಬೇಕು ಎಂದು ಆಗ್ರಹಿಸಿದರು. ಕೊಡಗು ಜಿಲ್ಲೆಯ ಜನರ ಬಹುದಿನದ ಬೇಡಿಕೆಯಂತೆ ಪ್ರತ್ಯೇಕ ಲೋಕಸಭಾ ಕ್ಷೇತ್ರ ರಚಿಸಬೇಕು. ಈ ಹಿಂದೆ ಕೊಡಗು ಜಿಲ್ಲೆಯನ್ನು ಮಂಗಳೂರು ಲೋಕಸಭಾ ಕ್ಷೇತ್ರದೊಂದಿಗೆ ಸೇರಿಸಲಾಗಿತ್ತು. ಈಗ ಮೈಸೂರು ಕ್ಷೇತ್ರದೊಂದಿಗೆ ಸೇರಿಸಲಾಗಿದೆ. ಹಾಗಾಗಿ ಪ್ರತ್ಯೇಕ ಲೋಕಸಭಾ ಕ್ಷೇತ್ರ ಸ್ಥಾಪಿಸಿದರೆ, ಅಲ್ಲಿ ಸಮಸ್ಯೆ ಬಗ್ಗೆ ಬೆಳಕು ಚೆಲ್ಲಲು ಸ್ಥಳೀಯರಿಗೆ ರಾಜಕೀಯ ಪ್ರಾತಿನಿಧ್ಯ ದೊರಕಿದಂತಾಗುತ್ತದೆ. ಈ ಹಿನ್ನೆಲೆಯಲ್ಲಿ ಎಲ್ಲಾ ರಾಜಕೀಯ ಪಕ್ಷಗಳು ಕೈಜೋಡಿಸಬೇಕು ಎಂದರು. ಕೊಡಗು ಜನರಿಗೆ ಕಾಂಗ್ರೆಸ್– ಬಿಜೆಪಿ ಎರಡೂ ಪಕ್ಷಗಳ ಮೇಲೆ ಆಕ್ರೋಶ ಇದೆ. ಎರಡೂ ಪಕ್ಷಗಳು ಪ್ರಾತಿನಿಧ್ಯ ಕೊಟ್ಟಿಲ್ಲ. ಈಶಾನ್ಯ ರಾಜ್ಯಗಳಲ್ಲಿ 3–4 ಲಕ್ಷ ಜನಸಂಖ್ಯೆಗೆ ಪ್ರತ್ಯೇಕ ಲೋಕಸಭಾ ಕ್ಷೇತ್ರಗಳನ್ನು ರಚಿಸಲಾಗಿದೆ. ಹೀಗಿರುವಾಗ ಪ್ರತ್ಯೇಕ ಲೋಕಸಭಾ ಕ್ಷೇತ್ರ ಯಾಕಾಗಬಾರದು ಎಂದು ಪ್ರಶ್ನಿಸಿದರು.

ಪ್ರವಾಸಿ ತಾಣ: ಮೈಸೂರು, ಕೊಡಗು ಜಿಲ್ಲೆ ಪ್ರವಾಸೋದ್ಯಮವನ್ನೇ ಅವಲಂಬಿಸಿವೆ. ಕಳೆದ ಎರಡು ವರ್ಷಗಳಿಂದ ಪ್ರವಾಸಿಗರಿಲ್ಲದೆ ಎರಡು ಜಿಲ್ಲೆಗಳ ಜನರು ತತ್ತರಿಸಿದ್ದಾರೆ. ನಾನು ಸಂಸದನಾಗಿದ್ದ ವೇಳೆ ಒಬ್ಬರು 'ಕೂರ್ಗ್ ಅಂಡ್ ಮೈಸೂರು ಈಸ್ ಎ ಬೆಸ್ಟ್ ಪೀಸ್ ಆಫ್ ಲ್ಯಾಂಡ್ ಇನ್ ಅರ್ಥ್' ಎಂದು ಬರೆದಿದ್ದನ್ನು ಗಮನಿಸಿದ್ದೆ. ಎರಡು ಜಿಲ್ಲೆಗಳೂ ಶಾಂತಿಯ ತೋಟವಾಗಿವೆ. ಆದ್ದರಿಂದ ಯಾರೂ ಕೂಡ ಶಾಂತಿ ಕದಡಬಾರದು ಎಂದು ಮನವಿ ಮಾಡಿದರು. ಕೊಡಗು ಅತ್ಯುತ್ತಮ ಪ್ರವಾಸಿ ತಾಣ. ಪ್ರವಾಸೋದ್ಯಮದ ಕೇಂದ್ರವಾಗಿದೆ. ಹಲವಾರು ಪ್ರವಾಸಿತಾಣಗಳನ್ನು ಅಭಿವೃದ್ಧಿಪಡಿಸಲು ಮುಂದಾಗಬೇಕಿದೆ ಎಂದರು.

ಜಿಲ್ಲಾ ಪಂಚಾಯತ್ ಕಾರ್ಯಾಲಯ

ಜಿಲ್ಲಾ ಆಡಳಿತ ಭವನ, ನೆಲ ಮಹಡಿ, ಚಾಮರಾಜನಗರ ಜಿಲ್ಲೆ – 571313
ಇ–ಮೇಲ್: ceochanagar@gmail.com ದೂರವಾಣಿ ಸಂಖ್ಯೆ : 08226–224013 ಫ್ಯಾಕ್ಸ್ ಸಂಖ್ಯೆ 08226–224014

ಸಂಖ್ಯೆ:ಜಿ.ಪಂ.ಚಾ/ಅದಾ/E-ಟೆಂಡರ್/02/2022–23 ದಿನಾಂಕ: 19–08–2022

Providing Services of Data Entry Operators E-Procurement ಮೂಲಕ ಪಡೆಯುವ ಬಗ್ಗೆ

E-PROCUREMENT TENDER NOTIFICATION

(Website: www.eproc.karnataka.gov.in)

2022–23ನೇ ಸಾಲಿಗೆ ಅಕ್ಷರ ದಾಸೋಹ ಕಾರ್ಯಕ್ರಮ ಜಿಲ್ಲಾ ಪಂಚಾಯತ್ ಚಾಮರಾಜನಗರ ಜಿಲ್ಲೆಗೆ ಒಬ್ಬರು ಕಂಪ್ಯೂಟರ್ ಆಪರೇಟರ್ ಹಾಗೂ ತಾಲ್ಲೂಕುಗಳಿಗೆ ಅಗತ್ಯವಿರುವ ನಾಲ್ಕು ಕಂಪ್ಯೂಟರ್ ಆಪರೇಟರ್‌ಗಳು ಮತ್ತು ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಗಳ ಕಛೇರಿಗೆ ಒಬ್ಬರು ಕಂಪ್ಯೂಟರ್ ಆಪರೇಟರ್ ಮತ್ತು ಒಬ್ಬರು ಡಿ ಗ್ರೂಪ್ ನೌಕರರ ಸೇವೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಸೆಪ್ಟಂಬರ್–2022 ರ ಮಾಹೆಯಿಂದ ಮಾರ್ಚ್–2023 ರವರೆಗೆ ಪಡೆಯುವ ಸಲುವಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ (ಕೆ.ಟಿ.ಪಿ.ಪಿ.) ಅಧಿನಿಯಮ 1999, ನಿಯಮಗಳು ಪ್ರಕಾರ ನೊಂದಾಯಿತ ಮತ್ತು ಪರವಾನಗಿಯುಳ್ಳ ಅರ್ಹ ಏಜೆನ್ಸಿದಾರರು / ಸಂಸ್ಥೆಗಳಿಂದ ಮಾನವ ಸಂಪನ್ಮೂಲ ಸೇವೆಯನ್ನು ಪಡೆಯಲು ನಿರ್ಧರಿಸಲಾಗಿದೆ.

1)	ಟೆಂಡರ್ ಪ್ರಕಟಣೆ ದಿನಾಂಕ	ಸಂಖ್ಯೆ: ಜಿಪಂಚಾ/ಅದಾ/02/2022–23 ದಿನಾಂಕ: 19–08–2022
2)	ಟೆಂಡರ್ ಫಾರಂ ಅಪ್‌ಲೋಡ್ ಮಾಡಲು ಪ್ರಾರಂಭಿಸುವ ದಿನಾಂಕ	ದಿನಾಂಕ: 20–08–2022
3)	ಟೆಂಡರ್ ಫಾರಂ ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ	ದಿನಾಂಕ: 26–08–2022 ಸಂಜೆ 4.00 ಗಂಟೆಗೆ
4)	ತಾಂತ್ರಿಕ ಲಕೋಟೆ ತೆರೆಯುವ ಸ್ಥಳ, ವೇಳೆ ಮತ್ತು ದಿನಾಂಕ	ಕೊಠಡಿ ಸಂಖ್ಯೆ: 3, ಜಿಲ್ಲಾ ಪಂಚಾಯತ್, ಚಾಮರಾಜನಗರ ದಿನಾಂಕ: 29–08–2022 ಬೆಳಿಗ್ಗೆ 11–00 ಗಂಟೆಗೆ
5)	ಹಣಕಾಸಿನ ಲಕೋಟೆ ತೆರೆಯುವ ಸ್ಥಳ, ವೇಳೆ ಮತ್ತು ದಿನಾಂಕ	ಕೊಠಡಿ ಸಂಖ್ಯೆ: 3, ಜಿಲ್ಲಾ ಪಂಚಾಯತ್, ಚಾಮರಾಜನಗರ ದಿನಾಂಕ: 01–09–2022 ಮಧ್ಯಾಹ್ನ 3.00 ಗಂಟೆಗೆ
6)	ಟೆಂಡರ್‌ನೊಂದಿಗೆ ಪಾವತಿಸಬೇಕಾದ ಇಎಂಡಿ ಮೊತ್ತ	ರೂ. 50,000/–
7)	ಸಂಪರ್ಕಿಸಬೇಕಾದ ಅಧಿಕಾರಿ ಹಾಗೂ ವಿಳಾಸ, ದೂರವಾಣಿ ಸಂಖ್ಯೆ	ಶಿಕ್ಷಣಾಧಿಕಾರಿಗಳು, ಅಕ್ಷರ ದಾಸೋಹ ಕಾರ್ಯಕ್ರಮ, ಜಿಲ್ಲಾ ಪಂಚಾಯತ್, ಚಾಮರಾಜನಗರ ಮೊಬೈಲ್ ನಂಬರ್: 9739383162

ವಾಸಾಸಂಇ:ಚಾನಗರ:262:2022–23